ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ | ಜೂನ್ 19 ಬುಧವಾರ 2024

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

45

ಸಂಪುಟ: 45 | ಸಂಚಿಕೆ: 64 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ರೇಣುಕಾಸ್ವಾಮಿ ಹತ್ಯೆ ಪ್ರಕರಣ: ದರ್ಶನ್ ಸಹಚರರ ಕರೆತಂದು ಮೈಸೂರಲ್ಲಿ ಸ್ಥಳ ಮಹಜರು

ಎರಡೂವರೆ ಗಂಟೆ ಮಾಹಿತಿ ಸಂಗ್ರಹಿಸಿ ಮಧ್ಯಾಹ್ನ ಬೆಂಗಳೂರಿಗೆ ವಾಪಸ್ಸಾದ ಪೊಲೀಸರು

ಮೈಸೂರು, ಜೂ. 18(ಆರ್‌ಕೆ)– ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಇಬ್ಬರು ದರ್ಶನ್ ಸಹಚರರನ್ನು ಬೆಂಗಳೂರು ಪೊಲೀಸರು ಇಂದು ಮೈಸೂರಿಗೆ ಕರೆತಂದು ಮಹಾತ್ಮ ಗಾಂಧಿ ರಸ್ತೆಯಲ್ಲಿರುವ ರ‍್ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ನಲ್ಲಿ ಸ್ಥಳ ಮಹಜರು ನಡೆಸಿದರು.



ಕೊಲೆ ಪ್ರಕರಣದ 11ನೇ ಆರೋಪಿ ಮೈಸೂರಿನ ನಾಗರಾಜ ಅಲಿಯಾಸ್ ನಾಗ ಮತ್ತು 12ನೇ ಆರೋಪಿ ಬೆಂಗಳೂರಿನ ಲಕ್ಷ್ಮಣ್‌ನನ್ನು ಬೆಂಗಳೂರಿನ ಕಾಮಾಕ್ಷಿಪಾಳ್ಯ ಠಾಣೆ ಪೊಲೀಸರು ಮಧ್ಯಾಹ್ನ 12 ಗಂಟೆಗೆ ಕರೆತಂದು ರ‍್ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ನಲ್ಲಿ ಸ್ಥಳ ಮಹಜರು ನಡೆಸಿದ ಬಳಿಕ ಮಧ್ಯಾಹ್ನ 2.30 ಗಂಟೆ ವೇಳೆಗೆ ಬೆಂಗಳೂರಿಗೆ ಕರೆದೊಯ್ದರು. ಆ ಇಬ್ಬರ ಪೈಕಿ ಲಕ್ಷ್ಮಣ್ ಎಂಬಾತ ನಟ ದರ್ಶನ್ ಕಾರು ಚಾಲಕನಾಗಿದ್ದು, ನಾಗರಾಜ, ದರ್ಶನ್ ಆಪ್ತನಾಗಿದ್ದಾನೆ. ರೇಣುಕಾಸ್ವಾಮಿಯನ್ನು ಹತ್ಯೆಗೈದ ಮರುದಿನ ದರ್ಶನ್ ಮೈಸೂರಿಗೆ ಬಂದು ರ‍್ಯಾಡಿಸನ್ ಬ್ಲ್ಯೂ ಪ್ಲಾಜಾ ಹೋಟೆಲ್‌ನಲ್ಲಿ ವಾಸ್ತವ್ಯ ಹೂಡಿದ್ದ ವೇಳೆ ಕಾರು ಚಾಲಕ ಲಕ್ಷ್ಮಣ್ ಹಾಗೂ ನಾಗರಾಜ ಜೊತೆಯಲ್ಲಿದ್ದರು ಎಂಬುದು ವಿಚಾರಣೆ ವೇಳೆ ತಿಳಿದುಬಂದಿತ್ತು. ಕೊಲೆ ಪ್ರಕರಣದ 2ನೇ ಆರೋಪಿಯಾಗಿರುವ ನಟ ದರ್ಶನ್ ಉಳಿದುಕೊಂಡಿದ್ದ ಕೊಠಡಿ, ಕಸರತ್ತು ನಡೆಸಿದ ಜಿಮ್‌ನಲ್ಲಿ ಈ ಇಬ್ಬರ ಸಮಕ್ಷಮ ಸ್ಥಳ ಮಹಜರು ನಡೆಸಿದ ಪೊಲೀಸರು, ಪ್ರಕರಣಕ್ಕೆ ಸಂಬಂಧಿಸಿದಂತೆ ಅಗತ್ಯ ಮಾಹಿತಿ ಮತ್ತು ಸಾಕ್ಷ್ಯಗಳನ್ನು ಕಲೆ ಹಾಕಿದರು.

ಈ ವೇಳೆ ಹೋಟೆಲ್‌ನ ರೂಂ ಬಾಯ್, ಉಪಾಹಾರ ಪೂರೈಸಿದ ಸಿಬ್ಬಂದಿ, ಮ್ಯಾನೇಜರ್‌ಗಳನ್ನು ವಿಚಾರಣೆ ನಡೆಸಿ ಅಗತ್ಯ ಮಾಹಿತಿ ಸಂಗ್ರಹಿಸಿದ ಪೊಲೀಸರು, ದರ್ಶನ್ ಉಳಿದುಕೊಂಡಿದ್ದ ಅವಧಿಯಲ್ಲಿ ಯಾರ‍್ಯಾರು ಬಂದು ಆತನನ್ನು ಭೇಟಿ ಮಾಡಿದ್ದರು ಎಂಬುದರ ಬಗ್ಗೆಯೂ ಸಿಸಿ ಕ್ಯಾಮರಾ ಫುಟೇಜ್‌ಗಳನ್ನು ಪಡೆದುಕೊಂಡಿದ್ದಾರೆ.

ದರ್ಶನ್ ಕಾರು ನಿಲ್ಲಿಸಿದ್ದ ಹೋಟೆಲ್‌ನ ಪೋರ್ಟಿಕೋ ಬಳಿಯೂ ಸೆಕ್ಯೂರಿಟಿ ಸಿಬ್ಬಂದಿಯಿಂದಲೂ ಆರೋಪಿ ಬಂದು ಹೋಗಿದ್ದ ಸಮಯ, ಆತನೊಂದಿಗೆ ಯಾರ‍್ಯಾರು ಬಂದಿದ್ದರು ಎಂಬುದರ ಬಗ್ಗೆ ವಿವರವಾದ ಮಾಹಿತಿಯನ್ನೂ ಸಂಗ್ರಹಿಸಲಾಯಿತು. ಇಂದು ಮಹಜರ್‌ಗೆ ನಟ ದರ್ಶನನ್ನೂ ಕರೆತರಬಹುದು ಎಂಬ ಹಿನ್ನೆಲೆಯಲ್ಲಿ ಹೋಟೆಲ್ ಬಳಿ ನೂರಾರು ಮಂದಿ ಜಮಾಯಿಸಿದ್ದರು. ಮಧ್ಯಾಹ್ನ 12 ಗಂಟೆಗೆ ದರ್ಶನ್ ಹೊರತುಪಡಿಸಿ ಇಬ್ಬರು ಆರೋಪಿಗಳನ್ನು ಮಾತ್ರ ಕರೆತಂದು ತರಾತುರಿಯಲ್ಲಿ ಮಹಜರು ಪ್ರಕ್ರಿಯೆ ಮುಗಿಸಿದರು. ಅಷ್ಟರಲ್ಲಿ ನೆರೆದವರೂ ಅಲ್ಲಿಂದ ಕಾಲ್ಕಿತ್ತರು. ನಜರ್‌ಬಾದ್ ಠಾಣೆ ಇನ್ಸ್‌ಪೆಕ್ಟರ್ ಮಹದೇವಸ್ವಾಮಿ ನೇತೃತ್ವದಲ್ಲಿ ಬೆಂಗಳೂರು ●9ನೇ ಪುಟಕ್ಕೆ

ಸ್ವಲ್ಪ ನಿರ್ಲಕ್ಷ್ಯ ಮಾಡಿದ್ದರೂ ಪ್ರಕರಣ ಬೇರೆ ದಾರಿ ಹಿಡಿಯುತ್ತಿತ್ತು

● ಬೆಂಗಳೂರು ನಗರ ಪೊಲೀಸ್ ಆಯುಕ್ತ ದಯಾನಂದ ಮಾಹಿತಿ ● ರೇಣುಕಾಸ್ವಾಮಿ ಹತ್ಯೆ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುವುದಾಗಿ ವಿಶ್ವಾಸ

ಬೆಂಗಳೂರು, ಜೂ. 18 (ಕೆಎಂಶಿ)– ರೇಣುಕಾಸ್ವಾಮಿ ಬರ್ಬರ ಹತ್ಯೆ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ದು ಅವರ ಕುಟುಂಬಕ್ಕೆ ನ್ಯಾಯ ಕೊಡಿಸುವುದಾಗಿ ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ತಿಳಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರನಟ ದರ್ಶನ್ ಮತ್ತು ಸಹಚರರಿಂದ ನಡೆದಿದೆ ಎಂದು ಹೇಳಲಾಗುತ್ತಿರುವ ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಪ್ರಕರಣದಲ್ಲಿ ಸೆಲೆಬ್ರೆಟಿಗಳು ಸೇರಿದಂತೆ ಈವರೆಗೆ 19 ಮಂದಿಯನ್ನು ಬಂಧಿಸಲಾಗಿದೆ ಎಂದರು. ಈ ಪ್ರಕರಣ ಅತ್ಯಂತ ಹೇಯ ಕೃತ್ಯ ಎಂದು ಬಣ್ಣಿಸಿದ ಆಯುಕ್ತರು, ರೇಣುಕಾಸ್ವಾಮಿ ಮರಣೋತ್ತರ ಪರೀಕ್ಷಾ ವರದಿ ಪೊಲೀಸರ ಕೈಸೇರಿದ್ದು ಅದನ್ನು ಬಹಿರಂಗಪಡಿಸಲು ಸಾಧ್ಯವಿಲ್ಲ. ನಮ್ಮ ಪೊಲೀಸರ ಸಮಯಪ್ರಜ್ಞೆಯಿಂದ ಪ್ರಕರಣ ಬಯಲಾಗಿ ಹತ್ಯೆಗೈದ ಆರೋಪಿಗಳನ್ನು ಬಂಧಿಸಿ, ತನಿಖೆಯನ್ನು ಒಂದು ಹಂತಕ್ಕೆ ಮುಟ್ಟಿಸಲಾಗಿದೆ. ತನಿಖೆ ವಿವರಗಳನ್ನು ನಾವು ಈಗಲೇ ಹೇಳಲು ಆಗುವುದಿಲ್ಲ. ಸ್ವಲ್ಪ ನಿರ್ಲಕ್ಷ್ಯ ವಹಿಸಿದ್ದರೂ ಪ್ರಕರಣ ಬೇರೆ ದಾರಿ ಹಿಡಿಯುತ್ತಿತ್ತು. ಪ್ರಕರಣವನ್ನು ಎಲ್ಲಾ ಆಯಾಮಗಳಿಂದ ಕೂಲಂಕಷವಾಗಿ ತನಿಖೆ ಮಾಡಲಾಗುತ್ತಿದ್ದು ಸರಿಯಾದ ದಿಕ್ಕಿನಲ್ಲಿ ಸಾಗಿದೆ. ಪ್ರಕರಣದಲ್ಲಿ ಸೆಲೆಬ್ರೆಟಿಗಳು ಇರುವುದರಿಂದ ಬಹಳ ಜಾಗರೂಕತೆಯಿಂದ ಹಲವು ಸಾಕ್ಷ್ಯಾಧಾರಗಳನ್ನು ಕಲೆ ಹಾಕಲಾಗುತ್ತಿದೆ. ಇದು ಗಂಭೀರ ಪ್ರಕರಣವಾಗಿರುವುದರಿಂದ ಎಲ್ಲಾ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸುತ್ತೇವೆ. ಪ್ರಕರಣ ಗಂಭೀರವಾಗಿರುವುದರಿಂದ ಎಸಿಪಿಗೆ ತನಿಖೆಯ ಹೊಣೆ ನೀಡಿ ಅಗತ್ಯ ಸಿಬ್ಬಂದಿ ಒದಗಿಸಲಾಗಿದೆ.

ಬೆಂಗಳೂರು, ಮೈಸೂರು, ಚಿತ್ರದುರ್ಗ ಸೇರಿದಂತೆ ಹಲವು ಕಡೆಗೆ ತೆರಳಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ನಾವು ಎಲ್ಲಾ ಹಂತಗಳಲ್ಲೂ ಸಮರ್ಪಕ ಹಾಗೂ ವಿಧಿ ವಿಜ್ಞಾನ, ತಾಂತ್ರಿಕ, ಕಾನೂನು ಸಲಹೆ ಪಡೆದುಕೊಂಡು ತನಿಖೆ ಕೈಗೊಂಡಿದ್ದೇವೆ ಎಂದರು. ಸಾರ್ವಜನಿಕರು ಊಹಾ–ಪೋಹಾಗಳಿಗೆ ಕಿವಿಗೊಡದೆ, ತಾಳ್ಮೆ, ಸಹನೆಯಿಂದ ಸಹಕರಿಸಿದರೆ ಈ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ತೆಗೆದುಕೊಂಡು ಹೋಗಲು ಸಹಕಾರಿಯಾಗುತ್ತದೆ, ಎಲ್ಲರೂ ಸೇರಿ ಜವಾಬ್ದಾರಿಯಿಂದ ಪ್ರಕರಣವನ್ನು ಬಗೆಹರಿಸಬೇಕಿದೆ ಎಂದರು.

ಜು.15ರಿಂದ ವಿಧಾನಮಂಡಲ ಮಳೆಗಾಲದ ಅಧಿವೇಶನ

ಬೆಂಗಳೂರು, ಜೂ.18(ಕೆಎಂಶಿ)– ವಿಧಾನಮಂಡಲದ ಮಳೆಗಾಲದ ಅಧಿವೇಶನವನ್ನು ಜುಲೈ 15ರಿಂದ ನಡೆಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ಹದಿನೈದು ದಿನಗಳ ಕಾಲ ಅಂದರೆ ಜುಲೈ 31ರವರೆಗೆ ಸದನ ನಡೆಯಲಿದ್ದು, ರಜೆ ಕಾಲ ಹೊರತುಪಡಿಸಿ ಒಟ್ಟು 10 ದಿನ ಕಲಾಪ ನಡೆಯಲಿದೆ.

ಲೋಕಸಭಾ ಚುನಾವಣೆಗೂ ಮುನ್ನ ಅಂದರೆ, ಫೆಬ್ರವರಿಯಲ್ಲಿ ಹಣಕಾಸು ಇಲಾಖೆ ಹೊಣೆ ಹೊತ್ತಿರುವ ಸಿದ್ದರಾಮಯ್ಯ ಬಜೆಟ್ ಮಂಡನೆ ಮಾಡಿ 15 ದಿನಗಳ ಕಾಲ ಸದನ ನಡೆದಿತ್ತು.

ಅಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೂರ್ಣ ಬಜೆಟ್‌ಗೆ ಅನುಮೋದನೆ ಪಡೆದುಕೊಂಡಿದ್ದರು. ಲೋಕಸಭಾ ಚುನಾವಣೆಗೆ ಯಾವುದೇ ಕ್ಷಣದಲ್ಲಿ ವೇಳಾಪಟ್ಟಿ ಪ್ರಕಟಗೊಳ್ಳಬಹುದೆಂಬ ಹಿನ್ನೆಲೆಯಲ್ಲಿ ಸದನ ಕಡಿಮೆ ಅವಧಿಯದ್ದಾಗಿತ್ತು. ಮುಂದಿನ ಸಂಪುಟ ಸಭೆ ಸದನ ನಡೆಸುವ ದಿನಾಂಕವನ್ನು ಅಂತಿಮಗೊಳಿಸಲಿದೆ.

ನೀವು ನಾಲಾಯಕ್

ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಅಧಿಕಾರಿಗಳಿಗೆ ಸಿಎಂ ಸಿದ್ದರಾಮಯ್ಯ ತರಾಟೆ

● ಭರಪೂರ ಹಣ ನೀಡಿದರೂ ದಲಿತ, ಬುಡಕಟ್ಟು, ಬಡವರ ಮಕ್ಕಳ ಸ್ಥಿತಿ ಚಿಂತಾಜನಕ ● ಹಣ ಇದೆ ಎಂದು ಹಾಸಿಗೆ, ಬೆಡ್‌ಶೀಟ್ ತಂದು ರಾಶಿ ಹಾಕಬೇಡಿ ● ಹಾಸ್ಟೆಲ್, ಆಶ್ರಮ ಶಾಲೆಗಳಲ್ಲಿ ಶೈಕ್ಷಣಿಕ ಸ್ಥಿತಿ ಸ್ವಲ್ಪವೂ ಸುಧಾರಿಸಿಲ್ಲ: ಸಿಡಿಮಿಡಿ

ಬೆಂಗಳೂರು, ಜೂ. 18(ಕೆಎಂಶಿ)–ದಲಿತ, ಬುಡಕಟ್ಟು, ಬಡವರ ಮಕ್ಕಳ ಶಿಕ್ಷಣಕ್ಕೆ ಹಾಸ್ಟೆಲ್‌ಗಳಿಗೆ ಸರ್ಕಾರ ಭರಪೂರ ಹಣ ನೀಡಿದರೂ ಅವುಗಳ ಸ್ಥಿತಿ ಚಿಂತಾಜನಕವಾಗಿಯೇ ಇದೆ ಎಂದು ಅಧಿಕಾರಿಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ತರಾಟೆಗೆ ತೆಗೆದುಕೊಂಡರು.

ನಿಮಗೆ ಬಡವರು, ದಲಿತರು, ಆದಿವಾಸಿ, ಬುಡಕಟ್ಟು ಮಕ್ಕಳನ್ನು ಸರಿಯಾಗಿ ನೋಡಿಕೊಳ್ಳಲು ಆಗದಿದ್ದರೆ ಸೇವೆಯಲ್ಲಿರಲು ನಾಲಾಯಕ್ ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳ ನಿರ್ಲಕ್ಷ್ಯವನ್ನು ಎಳೆ ಎಳೆಯಾಗಿ ಬಿಡಿಸಿಟ್ಟಿದ್ದಲ್ಲದೆ, ಇನ್ನು ಮುಂದೆ ರಾತ್ರಿಯಲ್ಲಿ ಪರಿಶೀಲಿಸಿ ವ್ಯವಸ್ಥೆ ಗಮನಿಸುವುದು ಕಡ್ಡಾಯ ಎಂದರು.

ಅನುದಾನ ಲಭ್ಯವಿದೆ ಎಂಬ ಕಾರಣಕ್ಕೆ ಬೇಡಿಕೆ ಇಲ್ಲದಿದ್ದರೂ, ಹಾಸಿಗೆ, ಬೆಡ್‌ಶೀಟ್ ಮತ್ತಿತರ ವಸ್ತುಗಳನ್ನು ಅನಗತ್ಯವಾಗಿ ಖರೀದಿಸಿ ಗುಡ್ಡೆಹಾಕಿಕೊಳ್ಳುವುದನ್ನು ಸಹಿಸಲಾಗದು, ಅನಗತ್ಯವಾಗಿ 4ಜಿ ವಿನಾಯಿತಿ ಪಡೆಯುವ ಬದಲು ನೇರವಾಗಿ ಟೆಂಡರ್ ಕರೆದು ಖರೀದಿಸಿ, ಸೇವೆಗಳನ್ನು ಪಡೆಯಬೇಕೆಂದು ಮುಖ್ಯಮಂತ್ರಿ ಸೂಚನೆ ನೀಡಿದರು. ಬಡವರ ಮಕ್ಕಳು ಎಂದರೆ ನಿಮಗೆ ನಿರ್ಲಕ್ಷ್ಯ, ಅವರ ಬಗ್ಗೆ ಕಾಳಜಿ ತೋರುವುದಿಲ್ಲ, ಸರ್ಕಾರ ನೀಡಿದ ಹಣವನ್ನು ಬಳಕೆ ಮಾಡಿ ಅವರಿಗೆ ಬದುಕು ಕಟ್ಟಿಕೊಳ್ಳಲು ಒಂದು ವ್ಯವಸ್ಥೆ ಮಾಡಲು ನಿಮಗೇನು ಬಂದಿದೆ ಎಂದರು.



ದಲಿತ, ಬುಡಕಟ್ಟು, ಬಡವರ ಮಕ್ಕಳ ಶಿಕ್ಷಣಕ್ಕೆ, ಹಾಸ್ಟೆಲ್‌ಗಳಿಗೆ ಸಾಕಷ್ಟು ಹಣ, ಸವಲತ್ತು ಕೊಡುತ್ತಿದ್ದರೂ ಮಕ್ಕಳ ಶೈಕ್ಷಣಿಕ ಮಟ್ಟ ಏಕೆ ಏರಿಕೆ ಆಗುತ್ತಿಲ್ಲ, ಈ ಬಗ್ಗೆ ನಿರಂತರ ನಿಗಾ ಏಕೆ ವಹಿಸುತ್ತಿಲ್ಲ, ಫಲಿತಾಂಶದಲ್ಲಿ ಏರಿಕೆ ಏಕೆ ಆಗುತ್ತಿಲ್ಲ ಎಂದು ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು. ನಿಯಮಿತವಾಗಿ ಹಾಸ್ಟೆಲ್‌ಗಳಿಗೆ, ಆಶ್ರಮ ಶಾಲೆಗಳಿಗೆ ಭೇಟಿ ನೀಡಬೇಕು, ನಿರಂತರವಾಗಿ ಗುಣಮಟ್ಟ ಹೆಚ್ಚಿಸಲು ಶ್ರಮಿಸಬೇಕು ಎಂದು ಖಡಕ್ ಸೂಚನೆ ನೀಡಿದರು. ಇಲಾಖೆಯ ಒಟ್ಟಾರೆ ಆಯವ್ಯಯದಲ್ಲಿ ಬಿಡುಗಡೆಯಾದ ಮೊತ್ತ 1884.01 ಕೋಟಿ ರೂ.ನಲ್ಲಿ 1879.35 ಕೋಟಿ ವೆಚ್ಚವಾಗಿದ್ದು, 99.75% ಸಾಧನೆಯಾಗಿದೆ. ಆದರೆ ಹಣ ಖರ್ಚಾದರೂ ಹಾಸ್ಟೆಲ್ ಹಾಗೂ ಶಿಕ್ಷಣದ ಗುಣಮಟ್ಟ ಏಕೆ ಏರಿಕೆ ಯಾಗಿಲ್ಲ ಎಂದು ಪ್ರಶ್ನಿಸಿದರು. ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಡಿ 389 ವಿದ್ಯಾರ್ಥಿನಿಲಯಗಳು, ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳಲ್ಲಿ 39,541 ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ಒದಗಿಸಿದ್ದು, 194.71 ಕೋಟಿ ರೂ. ಒದಗಿಸಲಾಗಿದೆ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು.

ಎಸ್‌ಎಸ್‌ಎಲ್‌ಸಿಯಲ್ಲಿ ಶೇ.77ರಷ್ಟು ಫಲಿತಾಂಶ ಬಂದಿದ್ದು, ಫಲಿತಾಂಶ ಉತ್ತಮ ಪಡಿಸಲು ಮುಖ್ಯಮಂತ್ರಿ ಸೂಚನೆ ನೀಡಿದರು. 2,90,546 ವಿದ್ಯಾರ್ಥಿಗಳಿಗೆ 50.47 ಕೋಟಿ ರೂ. ●9ನೇ ಪುಟಕ್ಕೆ

ಚಾ.ನಗರ ಬಳಿ ಶ್ರೀಲಂಕಾ ಕ್ರಿಕೆಟರ್ ಮುತ್ತಯ್ಯ ಬೃಹತ್ ಉದ್ಯಮ ಸ್ಥಾಪನೆ

1,400 ಕೋಟಿ ಹೂಡಿಕೆ; ಭಾರಿ ಕೈಗಾರಿಕಾ ಸಚಿವರೊಂದಿಗೆ ಚರ್ಚೆ



ಬೆಂಗಳೂರು, ಜೂ.18– ಚಾಮರಾಜನಗರ ಜಿಲ್ಲೆಯ ಬದನಕುಪ್ಪೆಯಲ್ಲಿ ಶ್ರೀಲಂಕಾದ ಖ್ಯಾತ ಕ್ರಿಕೆಟ್ ಆಟಗಾರ ಮುತ್ತಯ್ಯ ಮುರಳೀಧರನ್ ತಂಪು ಪಾನೀಯ ಮತ್ತು ಚಾಕೊಲೇಟ್ ಉದ್ಯಮ ಆರಂಭಿಸುತ್ತಿದ್ದು, ಹಂತಹಂತವಾಗಿ ಒಟ್ಟು 1,400 ಕೋಟಿ ರೂ. ಹೂಡಿಕೆ ಮಾಡಲಿದ್ದಾರೆಂದು ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ಸಚಿವರೊಂದಿಗೆ ಮಂಗಳವಾರ ಉದ್ಯಮ ಆರಂಭಿಸುವ ಬಗ್ಗೆ ಚರ್ಚೆ ಮಾಡಿದ್ದಾರೆ. ಮಾತುಕತೆ ನಂತರ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವರು, ಬದನಕುಪ್ಪೆಯಲ್ಲಿ ಮುರಳೀಧರನ್ ಅವರು 'ಮುತ್ತಯ್ಯ ಬ್ರಿವರೇಜಸ್ ಮತ್ತು ಕನ್ಫೆಕ್ಷನರೀಸ್' ಎನ್ನುವ ಬ್ರ್ಯಾಂಡ್‌ನಲ್ಲಿ ತಮ್ಮ ಉದ್ದಿಮೆ ಆರಂಭಿಸುತ್ತಿದ್ದಾರೆ. ಆರಂಭದಲ್ಲಿ 230 ಕೋಟಿ ರೂಪಾಯಿ ಹೂಡಿಕೆಗೆ ಯೋಜನೆ ರೂಪಿಸಲಾಗಿತ್ತು. ನಂತರ, ಅದು ಈಗ 1,000 ಕೋಟಿ ರೂ. ಮುಟ್ಟುತ್ತಿದೆ. ಮುಂದಿನ ದಿನಗಳಲ್ಲಿ 1,400 ಕೋಟಿ ಆಗಲಿದೆ ಎಂದು ಮುತ್ತಯ್ಯ ತಮಗೆ ತಿಳಿಸಿದ್ದಾರೆ ಎಂದರು. ಉದ್ಯಮ ಆರಂಭಕ್ಕಾಗಿ ಈಗಾಗಲೇ ಅವರಿಗೆ 46 ಎಕರೆ ಭೂಮಿ ಕೊಡಲಾಗಿದೆ. ಇದಕ್ಕೆ ಸಂಬಂಧಿಸಿದಂತೆ ಕೆಲ ಸಣ್ಣಪುಟ್ಟ ತೊಡಕುಗಳಿದ್ದವು. ಅವುಗಳನ್ನು ಕೂಡಲೆ ಸರಿಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬದನಕುಪ್ಪೆಯಲ್ಲಿ ಮುಂಬರುವ ಜನವರಿಯಲ್ಲಿ ಉತ್ಪಾದನೆ ಆರಂಭವಾಗಲಿದೆ. ಮುಂಬರುವ ದಿನಗಳಲ್ಲಿ ಮುತ್ತಯ್ಯ ಧಾರವಾಡದಲ್ಲಿ ಕೂಡ ತಮ್ಮ ಉದ್ಯಮದ ಒಂದು ಘಟಕ ಸ್ಥಾಪಿಸಲಿದ್ದಾರೆ ಎಂದು ಸಚಿವರು ಹೇಳಿದರು. ಕೈಗಾರಿಕಾ ಇಲಾಖೆ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತರಾದ ಗುಂಜನ್ ಕೃಷ್ಣ, ಕೆಐಎಡಿಬಿ ಸಿಇಒ ಡಾ.ಮಹೇಶ, ಉದ್ಯೋಗ ಮಿತ್ರ ವ್ಯವಸ್ಥಾಪಕ ನಿರ್ದೇಶಕ ದೊಡ್ಡ ಬಸವರಾಜು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮೈಸೂರಿನ ಕೆರೆಗಳಿಗೆ ಕಲುಷಿತ ನೀರು ಸೇರದಂತೆ ಮುಡಾ ಯೋಜನೆ

- ಮುಡಾ ಅಧ್ಯಕ್ಷ ಮರೀಗೌಡ, ಆಯುಕ್ತ ದಿನೇಶ್ ಕುಮಾರ್ ಸ್ಥಳ ಪರಿಶೀಲನೆ
- ಜೂನ್ 26ರ ಕೆಡಿಪಿ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯರಿಗೆ ಮಾಹಿತಿ ನೀಡಲು ತಯಾರಿ
- ಮುಡಾ ವ್ಯಾಪ್ತಿ ಬಡಾವಣೆ, ಕೆರೆಗಳಿಗೆ ಭೇಟಿ; ಒಳಚರಂಡಿ ನೀರು ಸೇರ್ಪಡೆ ಪರಿಶೀಲನೆ
- ಮಲಿನ ಮುಕ್ತ ಮಾಡುವಂತೆ ಸ್ಥಳೀಯರ ಮನವಿ; ಕೆರೆಗಳಿಗೆ ಕಾಯಕಲ್ಪ ನೀಡಲು ದಿಟ್ಟ ಕ್ರಮ



ಮೈಸೂರಿನ ರಿಂಗ್ ರಸ್ತೆಯ ಪೊಲೀಸ್ ಬಡಾವಣೆಯಲ್ಲಿರುವ ತಿಪ್ಪಯ್ಯನ ಕೆರೆಗೆ ಕಲುಷಿತ ನೀರು ಸೇರುತ್ತಿರುವುದನ್ನು ತಡೆಗಟ್ಟಿ ಕೆರೆಗೆ ಕಾಯಕಲ್ಪ ನೀಡುವ ಕುರಿತಂತೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಮರೀಗೌಡ ಹಾಗೂ ಆಯುಕ್ತ ಜಿ.ಟಿ.ದಿನೇಶ್ ಕುಮಾರ್ ಮಂಗಳವಾರ ಸ್ಥಳ ಪರಿಶೀಲನೆ ನಡೆಸಿದರು.

ಮೈಸೂರು, ಜೂ.18(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಜೂನ್ 26ರಂದು ಮೈಸೂರಲ್ಲಿ ನಡೆಯುವ ಕೆಡಿಪಿ (ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳು) ಸಭೆಯ ಹಿನ್ನೆಲೆಯಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಮರೀಗೌಡ, ಆಯುಕ್ತ ಜಿ.ಟಿ.ದಿನೇಶ್‌ಕುಮಾರ್ ಮುಡಾ ಬಡಾವಣೆ ಹಾಗೂ ಕೆರೆಗಳಿಗೆ ಖುದ್ದು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಮೈಸೂರಿನಲ್ಲಿ ಜೂನ್ 26 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕೆಡಿಪಿ ಸಭೆ ಹಮ್ಮಿಕೊಂಡಿದ್ದಾರೆ. ಮೈಸೂರು ಜಿಲ್ಲೆಯ ಎಲ್ಲಾ ಶಾಸಕರು, ಹಿರಿಯ ಅಧಿಕಾರಿಗಳು ಅಂದಿನ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಅಂದು ನಡೆಯುವ ಹೈವೋಲ್ಟೇಜ್ ಸಭೆಯಲ್ಲಿ ಮೈಸೂರಿನ ಅಭಿವೃದ್ಧಿ ಕಾರ್ಯಗಳ ಪ್ರಗತಿ ಪರಿಶೀಲನೆ, ಯೋಜನೆಗಳ ಪ್ರಸ್ತಾವನೆ ಸೇರಿದಂತೆ ಬಹಳಷ್ಟು ವಿಚಾರಗಳ ಬಗ್ಗೆ ಗಹನ ಚರ್ಚೆ ನಡೆಯಲಿದೆ. ●9ನೇ ಪುಟಕ್ಕೆ



ವರುಣ ಕೆರೆ ಶುದ್ಧವಾಗಿ ಕಂಡರೂ ಒಡಲಲ್ಲಿ ಕಲುಷಿತ

ಮೈಸೂರಿನ ಹೊರ ವಲಯ, ತಿ.ನರಸೀಪುರ ರಸ್ತೆಯಲ್ಲಿರುವ ವರುಣ ಕೆರೆ ನೋಡಲು ತಿಳಿಯಾಗಿ ಕಾಣುತ್ತದೆ. ಆದರೆ ಒಡಲಲ್ಲಿ ಕಲುಷಿತ ಬೆರೆತಿದೆ. ವರುಣ ಕೆರೆ ಸಮೀಪವಿರುವ ಖಾಸಗಿ ಬಡಾವಣೆಗಳ ಒಳಚರಂಡಿ ನೀರನ್ನು ನೇರವಾಗಿ ವರುಣ ಕೆರೆಗೆ ಹರಿಸಲಾಗುತ್ತಿದೆ. ಈ ಮೊದಲು ವರುಣ ಕೆರೆ ನೀರನ್ನು ಗ್ರಾಮಸ್ಥರು ಕುಡಿಯಲು ಬಳಸುತ್ತಿದ್ದರು. ಆದರೆ ಈಗ ನೀರಾವರಿಗೂ ಕೂಡ ಯೋಗ್ಯವಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ.

ಈ ಹಿನ್ನೆಲೆಯಲ್ಲಿ ಮುಡಾ ಅಧ್ಯಕ್ಷ ಮರೀಗೌಡ ಹಾಗೂ ಆಯುಕ್ತ ದಿನೇಶ್‌ಕುಮಾರ್ ಇಂದು ವರುಣ ಕೆರೆಗೂ ಭೇಟಿ ನೀಡಿ ಅಲ್ಲಿಗೂ ಒಳಚರಂಡಿ ನೀರು ಹರಿಯದಂತೆ ಯಾವ ಕ್ರಮ ಕೈಗೊಳ್ಳಲಾಗಿದೆ ಎಂಬ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ತರುವಾಯ ಈ ಬಗ್ಗೆ ವಿವರ ನೀಡಿದ ಮರೀಗೌಡ, ವರುಣ ಕೆರೆ ಬಳಿ ಕಲುಷಿತ ನೀರು ಸಂಸ್ಕರಣ ಘಟಕ ನಿರ್ಮಾಣ ಮಾಡಲಾಗುವುದು. ಇದಕ್ಕಾಗಿ 30 ಕೋಟಿ ರೂಪಾಯಿ ವೆಚ್ಚದ ಯೋಜನೆ ರೂಪಿಸಲಾಗಿದೆ. ಸಂಸ್ಕರಣಗೊಂಡ ನೀರನ್ನು ಪರಿಸರ ನಿಯಂತ್ರಣ ಮಂಡಳಿಯ ನಿಯಮಾನುಸಾರ ಕೆರೆಗೆ ಬಿಡಲಾಗುವುದು ಎಂದು ಹೇಳಿದರು. ಈ ಯೋಜನೆಯ ಪ್ರಸ್ತಾವನೆಯನ್ನು ಸದ್ಯ ಸರ್ಕಾರಕ್ಕೆ ಕಳುಹಿಸಲಾಗಿದೆ. ಆದರೆ ಸರ್ಕಾರದಿಂದ ಅನುಮೋದನೆ ದೊರೆತಿಲ್ಲ. ಜೂನ್ 26 ರಂದು ನಡೆಯುವ ಕೆಡಿಪಿ ಸಭೆಯಲ್ಲಿ ಈ ವಿಚಾರವನ್ನು ಪ್ರಸ್ತಾಪಿಸಲಾಗುವುದು. ವರುಣ ಕೆರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರತಿನಿಧಿಸುತ್ತಿರುವ ವರುಣ ಕ್ಷೇತ್ರದ ವ್ಯಾಪ್ತಿಯಲ್ಲೇ ಬರುವ ಕಾರಣ ಅಂದು ಈ ಯೋಜನೆಗೆ ಅನುಮೋದನೆ ನೀಡುವ ವಿಶ್ವಾಸವಿದೆ ಎಂದರು.

ಮುಡಾ ವ್ಯಾಪ್ತಿಯಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು, ಯಾವ ರೀತಿ ಕಲುಷಿತ ನೀರು ಸೇರುತ್ತಿದೆ, ಒಳಚರಂಡಿ ನೀರು ತಡೆಯಲು ರೂಪಿಸಿರುವ ಯೋಜನೆಗಳೇನು, ಅವು ಯಾವ ಹಂತದಲ್ಲಿದೆ, ಯೋಜನಾ ವೆಚ್ಚವೆಷ್ಟು ಎಂಬಿವೆ ಹಲವು ಮಾಹಿತಿಗಳನ್ನು ಅಂದಿನ ಕೆಡಿಪಿ ಸಭೆಯಲ್ಲಿ ಸಿದ್ದರಾಮಯ್ಯಗೆ ವಿವರಿಸಲಾಗುವುದು. ಸಾಲುಂಡಿಯಲ್ಲಿ ಕಲುಷಿತ ನೀರು ಸೇವಿಸಿ ವ್ಯಕ್ತಿಯೊಬ್ಬ ಮೃತಪಟ್ಟ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಸಿದ್ದರಾಮಯ್ಯ, ಮೈಸೂರಿನ ಎಲ್ಲಾ ಕೆರೆಗಳಿಗೆ ಒಳಚರಂಡಿ ನೀರು ತಡೆಗಟ್ಟಲು ರೂಪಿಸಿರುವ ಯೋಜನೆಗಳಿಗೆ ಅನುಮೋದನೆ ನೀಡುವ ಸಾಧ್ಯತೆ ಇದೆ ಎಂದು ಮರೀಗೌಡ ವಿಶ್ವಾಸ ವ್ಯಕ್ತಪಡಿಸಿದರು.

ಸೋತಿದ್ದೇನೆ, ಮನೆಯಲ್ಲಿ ಕೂರದೇ ಕಾರ್ಯಕರ್ತರ ಜೊತೆ ಇರುವೆ

ಕೃತಜ್ಞತಾ ಸಭೆಯಲ್ಲಿ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಭರವಸೆ



ಮೈಸೂರಿನ ಇಂದಿರಾಗಾಂಧಿ ಕಾಂಗ್ರೆಸ್ ಭವನದಲ್ಲಿ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರು, ಮುಖಂಡರು ಮತ್ತು ಮತದಾರರಿಗೆ ಏರ್ಪಡಿಸಿದ್ದ ಕೃತಜ್ಞತಾ ಸಭೆಯಲ್ಲಿ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿದರು.

ಮೈಸೂರು,ಜೂ.18(ಜಿಎ)–ರಾಜಕಾರಣದಲ್ಲಿ ಸೋಲು ಗೆಲುವು ಸಹಜ. ನಾನು ಸೋತಿದ್ದೇನೆ ಎಂದು ಮನೆಯಲ್ಲಿ ಕೂರುವುದಿಲ್ಲ.ಸದಾ ಜನರ ಮಧ್ಯೆ ಇದ್ದು ಮತದಾರರ ಕಷ್ಟ ಸುಖಗಳಲ್ಲಿ ಭಾಗಿಯಾಗುತ್ತೇನೆ ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ತಿಳಿಸಿದ್ದಾರೆ.

ಮೈಸೂರಿನ ಇಂದಿರಾಗಾಂಧಿ ಕಾಂಗ್ರೆಸ್ ಭವನದಲ್ಲಿ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಕಾರ್ಯಕರ್ತರು, ಮುಖಂಡರು ಮತ್ತು ಮತದಾರರಿಗೆ ಏರ್ಪಡಿಸಿದ್ದ ಕೃತಜ್ಞತಾ ಸಭೆಯಲ್ಲಿ ಮಾತನಾಡಿದ ಅವರು, ಜನರ ಸೇವೆಗೆ ನನ್ನ ಕಚೇರಿ ಸದಾ ತೆರೆದಿರುತ್ತದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರು ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ರೂಪಿಸಿ ಇತಿಹಾಸ ಸೃಷ್ಟಿಸಿದ್ದಾರೆ. ಐದು ಗ್ಯಾರಂಟಿ ಯೋಜನೆಗಳನ್ನು ನೀಡಿ ಎಲ್ಲಾ ವರ್ಗದ ಜನರಿಗೆ ಒಂದಲ್ಲ ಒಂದು ರೀತಿ ಅನುಕೂಲ ಮಾಡಿಕೊಟ್ಟಿದ್ದರು. ಆದರೂ ಸಹ ಜನ ಮತ ನೀಡಲಿಲ್ಲ. ನನ್ನ ಸೋಲಿನಿಂದ ಯಾರನ್ನು ನಾನು ದೂಷಿಸುವುದಿಲ್ಲ. ನನ್ನ ಸೋಲಿಗೆ ನಾನೇ ಕಾರಣ ಎಂದರು.

ಮತ್ತೊಮ್ಮೆ ಪಕ್ಷವನ್ನು ಸಂಘಟಿಸೋಣ. ನನ್ನಂತಹ ಒಬ್ಬ ಸಾಮಾನ್ಯ ಕಾರ್ಯಕರ್ತನನ್ನು ಗುರುತಿಸಿ ಕಾಂಗ್ರೆಸ್ ಪಕ್ಷ ಟಿಕೆಟ್ ನೀಡಿತ್ತು. ಹಾಗಾಗಿ ಕಾಂಗ್ರೆಸ್ ಪಕ್ಷ ಕಾರ್ಯಕರ್ತರನ್ನು ಎಂದಿಗೂ ಕೈಬಿಡುವುದಿಲ್ಲ. ಪಕ್ಷಕ್ಕಾಗಿ ಪ್ರಾಮಾಣಿಕವಾಗಿ ದುಡಿಯುತ್ತಿರುವಂತಹ ಕಾರ್ಯಕರ್ತರಿಗೆ ಸರ್ಕಾರದ ವಿವಿಧ ನಿಗಮ ಮಂಡಳಿಗಳಲ್ಲಿ ಅವಕಾಶ ಕಲ್ಪಿಸಲು ಎಲ್ಲರೂ ಸೇರಿ ಪ್ರಯತ್ನಿಸೋಣ ಎಂದು ತಿಳಿಸಿದರು.

ನಂತರ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಮಾತನಾಡಿ, ಎಂ.ಲಕ್ಷ್ಮಣ್ ಅವರ ಸೋಲು ತುಂಬಾ ನೋವನ್ನುಂಟು ಮಾಡಿದೆ. ಬಿಜೆಪಿ, ಜೆಡಿಎಸ್ ಜನ ವಿರೋಧಿ ನೀತಿಗಳನ್ನು ಪ್ರತಿನಿತ್ಯವೂ ಜನರಿಗೆ ತಿಳಿಸುವ ಕೆಲಸವನ್ನು ಲಕ್ಷ್ಮಣ್ ಪ್ರಾಮಾಣಿಕವಾಗಿ ಮಾಡಿದ್ದರು. ಆದರೆ ಚುನಾವಣಾ ಫಲಿತಾಂಶಗಳು ಈ ರೀತಿ ಬದಲಾಗುತ್ತಿರುತ್ತದೆ ಕೆಲವೊಮ್ಮೆ ಅಚ್ಚರಿ ಫಲಿತಾಂಶಗಳನ್ನು ನೀಡುವುದು ಸಹಜ ಎಂದರು.

ಕಾಂಗ್ರೆಸ್ ಮುಖಂಡ, ಮುಡಾ ಮಾಜಿ ಅಧ್ಯಕ್ಷರೂ ಆದ ಹೆಚ್.ವಿ. ರಾಜೀವ್ ಮಾತನಾಡಿ, ಚುನಾವಣಾ ಪೂರ್ವದಲ್ಲಿ ನಾವು ಜನರ ಬಳಿಗೆ ಹೋದಾಗ ಒಳ್ಳೆಯ ಪ್ರತಿಕ್ರಿಯೆ ದೊರೆತಿತ್ತು. ನಾನು ಬಿಜೆಪಿಯಲ್ಲಿ ಇದ್ದಾಗ ಜನರ ಬಳಿ ಹೋದಾಗ ಒಂದು ವರ್ಗದ ಜನ ನೀವು ಮತ ಕೇಳ ಬೇಕಿಲ್ಲ ಖಂಡಿತಾ ಹಾಕ್ತೀವಿ ಎನ್ನುತ್ತಿದ್ದರು. ಇನ್ನೂ ಕೆಲವರು ಪ್ರತಿಕ್ರಿಯೆ ನೀಡುತ್ತಲೇ ಇರಲಿಲ್ಲ. ಆದರೆ ಈ ಬಾರಿ ಒಳ್ಳೆಯ ಅಭಿಪ್ರಾಯ, ಕೃತಜ್ಞತಾ ಭಾವ ನಿರೀಕ್ಷೆ ಮಾಡಿದ್ದೆವು.ಆದರೆ ಮತದಾನದ ನಂತರ ನಮ್ಮ ನಿರೀಕ್ಷೆ ಹುಸಿಯಾಗಿದೆ. ದಳ ಮತ್ತು ಬಿಜೆಪಿಯ ಮೈತ್ರಿ ಒಗ್ಗಟ್ಟಾಗಿ ಫಲಿತಾಂಶ ಫಲಿಸಿದೆ. ರಾಜಕೀಯ ಹೋರಾಟದಲ್ಲಿ ಧೃತಿಗೆಡುವ ಅಗತ್ಯವಿಲ್ಲ. ನಮ್ಮ ಪಕ್ಷದಿಂದ ದೂರ ಉಳಿದಿರುವವರನ್ನು ಒಟ್ಟಿಗೆ ಸೇರಿಸಲು ಪ್ರಯತ್ನಿಸೋಣ. ಮತ್ತೊಮ್ಮೆ ಪಕ್ಷವನ್ನು ಸಂಘಟಿಸೋಣ ಎಂದು ಕರೆ ನೀಡಿದರು.

ಸಭೆಯಲ್ಲಿ ನಗರಾಧ್ಯಕ್ಷರಾದ ಆರ್. ಮೂರ್ತಿ, ಮಾಜಿ ಮೇಯರ್ ಪುಷ್ಪಲತಾ ಚಿಕ್ಕಣ್ಣ, ಟಿ.ಬಿ.ಚಿಕ್ಕಣ್ಣ, ಮೋದಾಮಣಿ, ಭೈರಪ್ಪ ಪಾಲಿಕೆ ಮಾಜಿ ಸದಸ್ಯ ಜೆ.ಗೋಪಿ, ಶೋಭಾ ಮೋಹನ್, ಪಲ್ಲವಿ ಬೇಗಂ, ಎಂ.ಸಿ.ಚಿಕ್ಕಣ್ಣ, ಕೆ.ವಿ.ಮಲ್ಲೇಶ್, ಪ್ರದೀಪ್ ಕುಮಾರ್, ವಿ.ರಾಮಸ್ವಾಮಿ, ಈಶ್ವರ್ ಚಕ್ಕಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಜಿ.ಸೋಮಶೇಖರ್, ಶ್ರೀಧರ್ ಭವ್ಯ, ಇಂದಿರಾ, ನಾಗರತ್ನ ಮಂಜುನಾಥ್, ರವಿಶಂಕರ್, ಡೈರಿ ವೆಂಕಟೇಶ್, ನಾಗೇಶ್, ಯೋಗೇಶ್ ಉಪ್ಪಾರ, ಅಸಂಘಟಿತ ಕಾರ್ಮಿಕರ ಘಟಕದ ಅಧ್ಯಕ್ಷ ವಿನಯ್ ಕುಮಾರ್,ಮೊಗಣ್ಣಾಚಾರ್, ಸೇವಾದಳ ಮೋಹನ್, ಯುವ ಕಾಂಗ್ರೆಸ್ ರಾಕೇಶ್, ಎನ್‌ಎಸ್‌ಯುಐ ರವೀಶ್, ಸಾಮಾಜಿಕ ಜಾಲತಾಣ ವಿಭಾಗದ ಅರುಣ್ ಗಂಗಾಧರ್, ವಿಜಯ್‌ಕುಮಾರ್, ವಕ್ತಾರ ಮಹೇಶ್ ಇನ್ನಿತರರು ಉಪಸ್ಥಿತರಿದ್ದರು.

> “ನಿರೀಕ್ಷೆಗಳು ಒಮ್ಮೊಮ್ಮೆ ಈಡೇರುವುದಿಲ್ಲ. ಕಾಂಗ್ರೆಸ್ ಪಕ್ಷ ಜನರಿಗೆ ಕೊಟ್ಟ ಭರವಸೆಗಳನ್ನು ಈಡೇರಿಸಿದೆ. ಗ್ಯಾರಂಟಿಗಳ ಮೂಲಕ ಜನರ ಆರ್ಥಿಕ ಮಟ್ಟವನ್ನು ಸುಧಾರಿಸಿದೆ. ಮತ ನೀಡಿರುವವರು, ನೀಡದೇ ಇರುವವರು ಎಲ್ಲರನ್ನೂ ಕಾಂಗ್ರೆಸ್ ಒಂದೇ ರೀತಿ ನೋಡುತ್ತದೆ. ಮತದಾರರ ಆಶೋತ್ತರಗಳನ್ನು ಈಡೇರಿಸುವುದೇ ನಮ್ಮ ಪಕ್ಷದ ಮೊದಲ ಆದ್ಯತೆ. ಫಲಿತಾಂಶ ಏನೇ ಇರಲಿ ಕಾರ್ಯಕರ್ತರು, ಮುಖಂಡರು ನಿರಂತರವಾಗಿ ಹಗಲಿರುಳು ಶ್ರಮಿಸಿದ್ದಾರೆ. ಎಲ್ಲರಿಗೂ ಮನಃಪೂರ್ವಕವಾಗಿ ಧನ್ಯವಾದ ಸಮರ್ಪಿಸುತ್ತೇನೆ. ಮುಂದೆಯೂ ಆಶಾವಾದಿಗಳಾಗಿ ಒಗ್ಗಟ್ಟಾಗಿ ದುಡಿಯೋಣ. **–ಎಂ.ಕೆ.ಸೋಮಶೇಖರ್**

‘ಪ್ರಸಾದ’ ಲೇಖನ ಸ್ಪರ್ಧೆ



ಮೈಸೂರು, ಜೂ. 18– ಪರಮ ಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರ ಜಯಂತಿ ಪ್ರಯುಕ್ತ ಕಳೆದ 13 ವರ್ಷಗಳಿಂದ ಕಾಲೇಜು ವಿದ್ಯಾರ್ಥಿಗಳಿಗಾಗಿ ಪ್ರಸಾದ ಲೇಖನ ಸ್ಪರ್ಧೆಯನ್ನು ಏರ್ಪಡಿಸಲಾಗುತ್ತಿದೆ. 2023–24ನೇ ಸಾಲಿನಲ್ಲಿ ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ ಹಾಗೂ ಮಡಿಕೇರಿ ಜಿಲ್ಲೆಗಳ (ಪದವಿಪೂರ್ವ, ಪದವಿ, ಸ್ನಾತಕೋತ್ತರ ಕೇಂದ್ರಗಳು) ಕಾಲೇಜುಗಳ ವಿದ್ಯಾರ್ಥಿಗಳಿಗಾಗಿ ‘ಸಾಂಸ್ಕೃತಿಕ ನಾಯಕ ಬಸವಣ್ಣ’ ವಿಷಯ ಕುರಿತು ಲೇಖನ ಸ್ಪರ್ಧೆ ಏರ್ಪಡಿಸಿದೆ. ಈ ಸಾಲಿನಿಂದ ಪ್ರಶಸ್ತಿ ನೀಡಿಕೆಯನ್ನು ಪದವಿಪೂರ್ವ, ಪದವಿ, ಸ್ನಾತಕೋತ್ತರ ವಿಭಾಗಗಳಲ್ಲಿ ಪ್ರತ್ಯೇಕವಾಗಿ ನೀಡಲಾಗುತ್ತದೆ. ಲೇಖನ ಸ್ವಂತದ್ದಾಗಿದ್ದು, 6ರಿಂದ 8 ಪುಟಗಳಷ್ಟು ವಿಸ್ತಾರವಾಗಿರಬೇಕು. ಲೇಖನ ಕಳುಹಿಸುವ ವಿದ್ಯಾರ್ಥಿಗಳು ತಮ್ಮ ಕಾಲೇಜಿನ ಮುಖ್ಯಸ್ಥರಿಂದ ಫೋಟೋ ಸಮೇತ ತಮ್ಮ ಹೆಸರನ್ನು ದೃಢೀಕರಿಸಿರಬೇಕು. ಪ್ರತಿ ಕಾಲೇಜಿನಿಂದ ಗರಿಷ್ಠ 3 ಲೇಖನಗಳನ್ನು ಮಾತ್ರ ಜು.13ರೊಳಗೆ ನಿರ್ದೇಶಕರು, ಪ್ರಕಟಣ ವಿಭಾಗ, ಜೆಎಸ್‌ಎಸ್ ಮಹಾವಿದ್ಯಾಪೀಠ, ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ವೃತ್ತ, ಮೈಸೂರು 570 004 ಇಲ್ಲಿಗೆ ಕಳುಹಿಸಬೇಕಾಗಿ ಕೋರಲಾಗಿದೆ. ಹೆಚ್ಚಿನ ಮಾಹಿತಿಗಾಗಿ (0821–2548211/223, 2548212/224) ಸಂಪರ್ಕಿಸಬಹುದಾಗಿದೆ.

ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ಸಾಧನೆ



ಮೈಸೂರು, ಜೂ.18– ಮೈಸೂರಿನ ವಿಜಯನಗರ 3ನೇ ಹಂತದಲ್ಲಿರುವ ಜೆಎಸ್‌ಎಸ್ ಪಬ್ಲಿಕ್ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ಇವಾಂಕ ಶ್ರೀರೈ ಇತ್ತೀಚೆಗೆ ಮೈಸೂರಿನ ಸ್ಪೋರ್ಟ್ಸ್ ಪೆವಿಲಿಯನ್‌ನ ಜಿಮ್ನಾಷಿಯಂ ಹಾಲ್‌ನಲ್ಲಿ ನಡೆದ ಗೋಜು ವಾರಿಯರ್ಸ್ ಕಪ್–2024 ಮುಕ್ತ ರಾಷ್ಟ್ರೀಯ ಕರಾಟೆ ಚಾಂಪಿಯನ್ ಶಿಪ್‌ನಲ್ಲಿ 11 ವರ್ಷ ವಯೋಮಾನ ವಿಭಾಗದ ಕತಾದಲ್ಲಿ ತೃತೀಯ ಸ್ಥಾನ ಗಳಿಸಿದ್ದಾಳೆ. ಈಕೆ ಹಿನಕಲ್‌ನ ಅಕ್ಷರೈ ಹಾಗೂ ಸತೀಶ್ ರೈ ದಂಪತಿ ಪುತ್ರಿ. ಈಕೆ ಶೋರಿನ್ ರಿಯೋ ಕರಾಟೆ ಡುನ ವಿ.ಎಸ್. ರವೀಂದ್ರ ಅವರಲ್ಲಿ ತರಬೇತಿ ಪಡೆಯುತ್ತಿದ್ದಾಳೆ.

ಗಿರಿಜಾ ಕಲ್ಯಾಣ ಮಹೋತ್ಸವಕ್ಕೆ ಸಿದ್ಧತೆ



ಮೈಸೂರಿನ ಶ್ರೀಕಾಳಿಕಾಂಬ ಕಮಠೇಶ್ವರಸ್ವಾಮಿ ದೇವಸ್ಥಾನದಲ್ಲಿ ಜೂ.27ರಿಂದ ಆರಂಭವಾಗುವ ಗಿರಿಜಾಕಲ್ಯಾಣ ಮಹೋತ್ಸವದ ಪ್ರಯುಕ್ತ ಲಗ್ನ ಪತ್ರಿಕೆ ಕಟ್ಟಿಸುವ ಪೂಜಾ ಮಹೋತ್ಸವ ಕಾರ್ಯಕ್ರಮವನ್ನು ದೇವಸ್ಥಾನದ ಆಡಳಿತ ಮಂಡಳಿ ಅಧ್ಯಕ್ಷ ಎಂ.ಆರ್. ರಾಜಾರಾಂ ನೇತೃತ್ವದಲ್ಲಿ ನಡೆಸಲಾಯಿತು. ಈ ಸಂದರ್ಭದಲ್ಲಿ ವಿಶ್ವಕರ್ಮ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ನಂದಕುಮಾರ್, ಹುಚ್ಚಪ್ಪಚಾರ್, ಸಿ.ವಿ.ಆರ್.ಜಯಕುಮಾರ್, ದೇವಸ್ಥಾನದ ಆಡಳಿತ ಮಂಡಳಿ ಪದಾಧಿಕಾರಿಗಳು, ಭಕ್ತರು ಉಪಸ್ಥಿತರಿದ್ದರು.

ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಹುಟ್ಟುಹಬ್ಬ ಆಚರಣೆ



ಮಾಜಿ ಸಚಿವ ಬಂಡೆಪ್ಪ ಕಾಶೆಂಪುರ ಅವರ 60ನೇ ಹುಟ್ಟುಹಬ್ಬವನ್ನು ಜ್ಯೋತಿರ್ಗಮಯ ಸೇವಾ ಟ್ರಸ್ಟ್‌ನ ವಿದ್ಯಾರ್ಥಿನಿಲಯದ ಮಕ್ಕಳಿಗೆ ಹಣ್ಣು, ಪುಸ್ತಕ, ಪೆನ್ನುಗಳನ್ನು ವಿತರಿಸುವ ಮೂಲಕ ಆಚರಿಸಲಾಯಿತು. ಈ ವೇಳೆ ಮೈಸೂರು ನಗರ ಜೆಡಿಎಸ್ ಕಾರ್ಯಾಧ್ಯಕ್ಷ ಎಸ್.ಪ್ರಕಾಶ್ ಪ್ರಿಯದರ್ಶನ್, ಪತ್ರಿಕಾ ವಿತರಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಹೋಮದೇವ್, ರಂಗನಾಥ್, ಸುಬ್ರಮಣಿ, ಚಂದ್ರಶೇಖರ್, ಯಶ್ವಂತ್‌ಕುಮಾರ್, ಛಾಯ, ಮಹದೇವ್, ಮಹೇಶ್, ಎಸ್.ಪಿ.ಅಕ್ಷಯ್ ಪ್ರಿಯದರ್ಶನ, ಹರ್ಷಿತ್ ಇನ್ನಿತರರು ಇದ್ದರು.

ದಕ್ಷಿಣ ಭಾರತದಲ್ಲೇ ಪೆಟ್ರೋಲ್, ಡೀಸೆಲ್ ದರ ರಾಜ್ಯದಲ್ಲಿ ಅತೀ ಕಡಿಮೆ



ಎಂ.ಜಿ.ಕೊಪ್ಪಲು ರವಿ

ಮೈಸೂರು, ಜೂ. 18–ದಕ್ಷಿಣ ಭಾರತದಲ್ಲೇ ಅತ್ಯಂತ ಕಡಿಮೆ ಬೆಲೆಗೆ ಪೆಟ್ರೋಲ್, ಡೀಸೆಲ್ ಲಭ್ಯರುವ ಏಕೈಕ ರಾಜ್ಯ ಕರ್ನಾಟಕ ಎಂಬುದನ್ನು ಬಿಜೆಪಿಯವರು ಅರ್ಥ ಮಾಡಿಕೊಳ್ಳಬೇಕೆಂದು ಇಂದಿರಾ ಗಾಂಧಿ ಬ್ಲಾಕ್ ಅಧ್ಯಕ್ಷ ಮಂಚೇಗೌಡನ ಕೊಪ್ಪಲು ರವಿ ಸಮರ್ಥಿಸಿದ್ದಾರೆ.

ಈ ಕುರಿತು ಪತ್ರಿಕೆ ಹೇಳಿಕೆ ನೀಡಿರುವ ಅವರು, ರಾಜ್ಯ ಸರಕಾರ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಏರಿಕೆ ಮಾಡಿದೆ ಎಂದು ಹೋರಾಟ ನಡೆಸಿದ ಬಿಜೆಪಿಯವರು ಬಿಜೆಪಿ ಆಡಳಿತವಿರುವ ರಾಜ್ಯಗಳಲ್ಲಿಯೇ ಪೆಟ್ರೋಲ್, ಡೀಸೆಲ್ ಬೆಲೆ ಕರ್ನಾಟಕಕ್ಕಿಂತಲೂ ಹೆಚ್ಚಿಗೆ ಇದೆ ಎಂಬ ಅರಿವು ಹೊಂದಿಲ್ಲ ಎಂಬುದು ವಿಪರ್ಯಾಸ.

ಈ ಹಿಂದೆ ಕೇಂದ್ರ ಬಿಜೆಪಿ ಸರಕಾರವು ಒಂದು ಹಂತದಲ್ಲಿ ಪೆಟ್ರೋಲ್ ಮೇಲಿನ ಅಬಕಾರಿ ಸುಂಕವನ್ನು 9.21 ರೂ.ದಿಂದ 32.98 ರೂ.ಗೆ ಹಾಗೂ ಡೀಸೆಲ್ ಮೇಲೆ 3.45 ರೂ.ದಿಂದ 31.84 ರೂ.ಗೆ ಹೆಚ್ಚಳ ಮಾಡಿತ್ತು ಎಂದು ಟೀಕಿಸಿದ್ದಾರೆ.

ಭಾನುಪ್ರಕಾಶ್ ನಿಧನಕ್ಕೆ ಶಾಸಕ ಶ್ರೀವತ್ಸ ಸಂತಾಪ



ಭಾನುಪ್ರಕಾಶ್

ಮೈಸೂರು, ಜೂ.18(ಎಸ್‌ಪಿಎನ್)– ಬಿಜೆಪಿಯ ಹಿರಿಯ ನಾಯಕ ಶಿವಮೊಗ್ಗದ ಭಾನುಜಿ ಎಂದೇ ಹೆಸರಾಗಿದ್ದ ಮಾಜಿ ಶಾಸಕ ಭಾನುಪ್ರಕಾಶ್ ನಮ್ಮನ್ನು ಅಗಲಿರುವುದು ತೀವ್ರ ನೋವುಂಟು ಮಾಡಿದೆ ಎಂದು ಕೆ.ಆರ್. ಕ್ಷೇತ್ರದ ಶಾಸಕ ಟಿ.ಎಸ್. ಶ್ರೀವತ್ಸ ಸಂತಾಪ ಸೂಚಿಸಿದ್ದಾರೆ.

ಇತ್ತೀಚೆಗೆ ಮೈಸೂರಿನಲ್ಲಿ ನಡೆದ ಸಂಕೇತಿ ಸಾಹಿತಿಗಳ ಸಮ್ಮೇಳನವನ್ನು ಆಯೋಜಿಸಿ, ಈ ಸಮ್ಮೇಳನಕ್ಕೆ ನನ್ನನ್ನು ಗೌರವಾಧ್ಯಕ್ಷರನ್ನಾಗಿ ನೇಮಿಸಿ, ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಿದ್ದು ಮರೆಯಲಾಗದ ಕ್ಷಣ. ಅಲ್ಲದೆ, ನಾನು ವಿಧಾನಸಭಾ ಸದಸ್ಯನಾಗಲು ಪ್ರಮುಖ ಮುಖಂಡರಲ್ಲಿ ಭಾನುಪ್ರಕಾಶ್ ಕೂಡ ಒಬ್ಬರು. ನನ್ನ ರಾಜಕೀಯ ಬೆಳವಣಿಗೆಯಲ್ಲಿ ಇವರ ಪಾತ್ರ ಮಹತ್ವದ್ದಾಗಿದೆ. ಇಂತಹ ಚೇತನ ಅಗಲಿರುವುದು ತುಂಬಾ ನಷ್ಟವನ್ನುಂಟು ಮಾಡಿದೆ. ಇವರ ಅಗಲಿಕೆಯ ನೋವು ಭರಿಸುವ ಶಕ್ತಿಯನ್ನು ಕುಟುಂಬಕ್ಕೆ ಕರುಣಿಸಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ ಎಂದು ಸಂತಾಪ ಸೂಚಿಸಿದ್ದಾರೆ.

ಮಹಿಳೆ ನಾಪತ್ತೆ



ಸಾಯಿರಾಭಾನು

ಮೈಸೂರು,ಜೂ.18–ಮಹಿಳೆಯೋರ್ವರು ಕಾಣೆಯಾಗಿರುವ ಬಗ್ಗೆ ಉದಯಗಿರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಸಾಯಿರಾಭಾನು (44) ಕಾಣೆಯಾದವರು. ಈ ಹಿಂದೆಯೂ ಮನೆ ಬಿಟ್ಟು ಹೋಗಿದ್ದು ವಾಪಸ್ ಬಂದಿರುತ್ತಾರೆ. ಜೂ.10ರಂದು ಬೆಳಗ್ಗೆ 9 ಗಂಟೆ ವೇಳೆ ಮತ್ತೆ ಮನೆಯಿಂದ ಹೊರ ಹೋಗಿದ್ದು, ಇದುವರೆಗೂ ವಾಪಸ್ ಬಂದಿಲ್ಲ ಎಂದು ಆಕೆ ಪತಿ ದೂರು ದಾಖಲಿಸಿದ್ದಾರೆ. ಇವರ ಬಗ್ಗೆ ಮಾಹಿತಿ ತಿಳಿದಲ್ಲಿ ಉದಯಗಿರಿ ಪೊಲೀಸ್ ಠಾಣೆಗೆ ತಿಳಿಸುವಂತೆ ಕೋರಲಾಗಿದೆ.

ಮರ್ಯಾದೆಗೆ ಅಂಜಿ ಆತ್ಮಹತ್ಯೆ ಮಾಡಿಕೊಂಡ ಸಂತ್ರಸ್ತರ ಮನೆಗೆ ನಾಯಕ ಸಮುದಾಯದ ಮುಖಂಡರ ಭೇಟಿ; ಕುಟುಂಬಕ್ಕೆ ಸಾಂತ್ವನ



ಮೈಸೂರು, ಜೂ.18–ಕೆ.ಆರ್.ನಗರ ತಾಲೂಕು, ಚಂದಗಾಲು ಗ್ರಾಮದಲ್ಲಿ, ಅನ್ಯ ಕೋಮಿನ ಯುವಕನ ದೌರ್ಜನ್ಯಕ್ಕೆ ಬೇಸತ್ತು ಒಂದೇ ಕುಟುಂಬದ ನಾಲ್ವರು ವಿಷ ಸೇವಿಸಿ, ಇಬ್ಬರು ಮೃತಪಟ್ಟಿದ್ದರು. ಹೀಗೆ ಮೃತಪಟ್ಟ ಮಹದೇವ ನಾಯಕನ ಕುಟುಂಬಕ್ಕೆ ಮೈಸೂರು ಜಿಲ್ಲೆಯ ನಾಯಕ ಸಮುದಾಯದ ಮುಖಂಡರು ಸಂತ್ರಸ್ತ ಕುಟುಂಬ ಭೇಟಿ ಮಾಡಿ ಸಾಂತ್ವನ ಹೇಳಿದರು.

ಚಂದಗಾಲು ಗ್ರಾಮದ ನಾಯಕ ಸಮುದಾಯದವರನ್ನು ಭೇಟಿ ಮಾಡಿದ ನಿಯೋಗ ಇಂತಹ ಸಂದರ್ಭದಲ್ಲಿ ಕಾನೂನಿನ ರಕ್ಷಣೆ ಪಡೆದು ಆರೋಪಿಗೆ ಶಿಕ್ಷೆ ಕೊಡಿಸಲು ಸಮುದಾಯ ಸದಾ ಸಿದ್ಧವಿದ್ದು, ತಾವುಗಳು ಯಾವುದೇ ರೀತಿಯ ಕಾನೂನನ್ನು ಕೈಗೆತ್ತಿಕೊಳ್ಳದೆ ಶಾಂತ ರೀತಿಯಿಂದ ಇರುವುದು, ಜೊತೆಗೆ ನೊಂದ ಕುಟುಂಬಕ್ಕೆ ಆಸರೆಯಾಗಬೇಕೆಂದು ತಿಳಿಸಲಾಯಿತು. ಯಾವುದೇ ಸಮಾಜದ ವ್ಯಕ್ತಿ ತಪ್ಪು ಮಾಡಿದರೆ ಆತನನ್ನು ದೂಷಿಸಬೇಕೇ ವಿನಃ ಇಡೀ ಸಮುದಾಯವನ್ನು ದೂಷಿಸುವ ಕಾರ್ಯ ಮಾಡಬಾರದೆಂದು ತಿಳಿ ಹೇಳಲಾಯಿತು.

ಮೈಸೂರು ಭಾಗದ ಯಾವುದೇ ಗ್ರಾಮದಲ್ಲೂ ಈ ರೀತಿಯ ಅಹಿತಕರ ಘಟನೆಗಳ ಬಗ್ಗೆ ಸಮುದಾಯದ ಮುಖಂಡರ ಗಮನಕ್ಕೆ ತರಲು ತಿಳಿಸಲಾಯಿತು. ಸಮಾಜದ ಸಂಘಟನೆಗೆ ಒತ್ತುಕೊಟ್ಟು ಸಮುದಾಯದ ಕಟ್ಟಕಡೆಯ ವ್ಯಕ್ತಿಯೂ ಧೈರ್ಯದಿಂದ ಬದುಕಬೇಕು. ನ್ಯಾಯೋಚಿತವಾದ ಯಾವುದೇ ಸಂದರ್ಭದಲ್ಲಿ ಸಮುದಾಯದ ವ್ಯಕ್ತಿಯ ಪರವಾಗಿ ನಾವಿದ್ದೇವೆ. ಎಲ್ಲದಕ್ಕೂ ಆತ್ಮಹತ್ಯೆಯೇ ಪರಿಹಾರವಲ್ಲವೆಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಮೈಸೂರು ತಾಲೂಕು ನಾಯಕ ಸಂಘದ ಅಧ್ಯಕ್ಷ ಉದ್ಬೂರು ಮಹದೇವ ಸ್ವಾಮಿ, ಪ್ರಧಾನ ಕಾರ್ಯದರ್ಶಿ ಕಡಕೊಳ ಕುಮಾರಸ್ವಾಮಿ, ಮೈಸೂರು ಜಿಲ್ಲಾ SC/ST ಉದ್ದಿಮೆದಾರರ ಸಂಘದ ಅಧ್ಯಕ್ಷ ಮಂಜುನಾಥ್, ಇಂಜಿನಿಯರ್ ಜಗದೀಶ್, ಪ್ರಾಧ್ಯಾಪಕರಾದ ಹರದನಹಳ್ಳಿ ನಂಜುಂಡಸ್ವಾಮಿ, ಮೈಸೂರು ನಗರಪಾಲಿಕೆ ಮಾಜಿ ಸದಸ್ಯರಾದ ಶೋಭಾ ಮೋಹನ್, ಜಯಪುರ ಜವರನಾಯಕ, ಟಿ.ಕಾಟೂರು ಸಿದ್ದರಾಜು. ಸಾಹುಕಾರ ಹುಂಡಿ ಮಹದೇವ. ಸಿದ್ದಲಿಂಗಪುರ ಗಗನ್ ಈರಣ್ಣ, ಟೆನ್ನಿಸ್ ಗೋಪಿ, ಪ್ರಥಮ ದರ್ಜೆ ಗುತ್ತಿಗೆದಾರರಾದ ನಿಂಗರಾಜು, ರಮ್ಮನಹಳ್ಳಿ ಸೋಮಣ್ಣ, ಫೋಟೊ ರಮೇಶ್, ಮಾಚಬಾಯನಹಳ್ಳಿ ಮಹೇಶ್ ಕಮರಹಳ್ಳಿ ರಾಜಣ್ಣ, ಹಿನಕಲ್ ಶಿವಲಿಂಗ ನಾಯಕ ಇತರರು ಉಪಸ್ಥಿತರಿದ್ದರು.

ಶಿವಾರ್ಚಕ ಸಮುದಾಯದ ವಿದ್ಯಾರ್ಥಿಗಳಿಂದ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ

ಮೈಸೂರು,ಜೂ.18(ಜಿಎ)–ಕಳೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.90 ಹಾಗೂ ಪಿಯುಸಿಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕ ಗಳಿಸಿದ ಶಿವಾರ್ಚಕ ಸಮುದಾಯದ ಪ್ರತಿಭಾವಂತ ಮಕ್ಕಳನ್ನು ರಾಜ್ಯ ಶಿವಾರ್ಚಕ ಕ್ಷೇಮಾಭಿವೃದ್ಧಿ ಟ್ರಸ್ಟ್ ವತಿಯಿಂದ ಪುರಸ್ಕರಿಸಲಾಗುತ್ತಿದೆ. ಹೀಗಾಗಿ ಅರ್ಹರು ಅರ್ಜಿ ಸಲ್ಲಿಸಬೇಕೆಂದು ಸಹ ಕಾರ್ಯದರ್ಶಿ ತಗಡೂರು ಗಣೇಶ್ ಮನವಿ ಮಾಡಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಸಮುದಾಯದವರು ಮೈಸೂರು, ಚಾಮರಾಜನಗರ, ಮಂಡ್ಯ, ಹಾಸನ, ಬೆಂಗಳೂರು ಮೊದಲಾದ ಕಡೆಗಳಲ್ಲಿ ಶಿವ ದೇವಾಲಯಗಳಲ್ಲಿ ಅರ್ಚಕರಾಗಿದ್ದು, ಆರ್ಥಿಕ, ಶೈಕ್ಷಣಿಕ, ರಾಜಕೀಯವಾಗಿ ತೀರಾ ಹಿಂದುಳಿದಿದ್ದಾರೆ. ವಿದ್ಯಾವಂತರ ಸಂಖ್ಯೆ ಸಹಾ ಬೆರಳೆಣಿಕೆಯಷ್ಟಿದೆ. ಹೀಗಾಗಿ ಸಮುದಾಯದವರ ಶಿಕ್ಷಣ ಉತ್ತೇಜಿಸಲು ಪ್ರತಿಭಾ ಪುರಸ್ಕಾರ ಹಾಗೂ ದಾನಿಗಳ ಸಮಾವೇಶ ಬರುವ ಜುಲೈ 28ರಂದು ನಗರದ ಅಗ್ರಹಾರದ ನಟರಾಜ ಕಲ್ಯಾಣ ಮಂಟಪದಲ್ಲಿ ಆಯೋಜಿಸಲಾಗಿದೆ. ಆದ್ದರಿಂದ ಜು.10ರೊಳಗೆ ಪ್ರತಿಭಾವಂತ ವಿದ್ಯಾರ್ಥಿಗಳು ನಗರದ ವಿದ್ಯಾರಣ್ಯಪುರಂ ಸಿವೇಜ್ ಫಾರಂ ರಸ್ತೆಯ ಕನಕಗಿರಿ ಶಾಲೆ ಎದುರಿನ ಎಂ.ಮನೋಹರ್, ಸಂಖ್ಯೆ 36ಕ್ಕೆ ಅರ್ಜಿ ಕಳುಹಿಸಬೇಕು. ಹೆಚ್ಚಿನ ಮಾಹಿತಿಗೆ ದೂ. 99001 75664 ಸಂಪರ್ಕಿಸಿ ಎಂದರು. ಸುದ್ದಿಗೋಷ್ಠಿಯಲ್ಲಿ ಗೌರವಾಧ್ಯಕ್ಷ ಎಂ.ಮಲ್ಲಣ್ಣ, ಇ.ವಾಮದೇವ್, ಕೆ.ಎ. ಪಂಚಲಿಂಗಯ್ಯ, ದೀಕ್ಷಿತ್ ಜಗದೀಶ್ ಉಪಸ್ಥಿತರಿದ್ದರು.

ಜೂ.21ರಂದು ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಬೆಳದಿಂಗಳ ಸಂಗೀತ



ಬಾಂಬೆ ವಿ.ಆನಂದ್



ವೇದಜ್ಞ ನರಸಿಂಹ



ವಿನೋದ್ ಶ್ಯಾಮ್



ಸುನಾದ ಆನೂರ್

ಮೈಸೂರು, ಜೂ. 18–ಮೈಸೂರಿನ ಶ್ರೀ ಸುತ್ತೂರು ಮಠದಲ್ಲಿ ಜೂನ್ 21ರಂದು ಶುಕ್ರವಾರ ಸಂಜೆ 6 ಗಂಟೆಗೆ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಬೆಳದಿಂಗಳ ಸಂಗೀತ–268ರ ಅಂಗವಾಗಿ ವಿದ್ವಾನ್ ಬಾಂಬೆ ವಿ. ಆನಂದ್ ಹಾಗೂ ವಿದ್ವಾನ್ ವೇದಜ್ಞ ನರಸಿಂಹ ಅವರಿಂದ ದ್ವಂದ್ವ ವಯೋಲಿನ್ ವಾದನ ಏರ್ಪಡಿಸಲಾಗಿದೆ.

ವಿದ್ವಾನ್ ಬಾಂಬೆ ವಿ.ಆನಂದ್ ಅವರು ಪ್ರಾರಂಭಿಕ ಶಿಕ್ಷಣವನ್ನು ಬೋರಿವಿಲಿ ಕಣ್ಣನ್ ಬಳಿ ಪಡೆದರು. ಅನಂತರ ಮುಂಬಯಿಯ ಚೆಂಬೂರಿನಲ್ಲಿರುವ ದ ಫೈನ್ ಆರ್ಟ್ಸ್ ಮ್ಯೂಸಿಕ್ ಸ್ಕೂಲ್‌ನಲ್ಲಿ ವಿದುಷಿ ಗೋಮತಿಯವರ ಬಳಿ ಹಾಗೂ ಶ್ರೀಮತಿ ಟಿ.ಆರ್.ಬಾಲಾಮಣಿಯವರ ಬಳಿ ಶಿಷ್ಯವೃತ್ತಿ ಮಾಡಿದರು. ಪ್ರಸ್ತುತ ಪದ್ಮಶ್ರೀ ಪುರಸ್ಕೃತರಾದ ಸಂಗೀತ ಕಲಾನಿಧಿ ವಿದುಷಿ ಎ. ಕನ್ಯಾಕುಮಾರಿಯವರ ಬಳಿ ವಾದನ ನೈಪುಣ್ಯದ ಸೂಕ್ಷ್ಮತೆಗಳನ್ನು ಅಭ್ಯಸಿಸುತ್ತಿದ್ದಾರೆ.

ವಿದ್ವಾನ್ ವೇದಜ್ಞ ನರಸಿಂಹ ಅವರು ಸಂಗೀತದ ಪ್ರಾಥಮಿಕ ಶಿಕ್ಷಣವನ್ನು ಏಳನೆಯ ವರ್ಷದಲ್ಲಿ ವಿದುಷಿ ವೈಷ್ಣವಿ ಆನಂದ್ ಅವರಿಂದ ಪಡೆದು, ಅನಂತರ ಪದ್ಮಶ್ರೀ ಪುರಸ್ಕೃತೆ ಸಂಗೀತಕಲಾನಿಧಿ ವಿದುಷಿ ಎ. ಕನ್ಯಾಕುಮಾರಿಯವರ ಬಳಿ ಉನ್ನತ ಶಿಕ್ಷಣ ಪಡೆದಿದ್ದಾರೆ. ಸಿಂಗಪೂರದ ಪ್ರತಿಷ್ಠಿತ ಸ್ಕೂಲ್ ಆಫ್ ಆರ್ಟ್ಸ್ ಸಂಸ್ಥೆಯಲ್ಲಿ ವಾದನ ತರಬೇತಿಯನ್ನು ಮುಂದುವರಿಸಿರುವರು. ವಯೊಲಿನ್ ವಾದನದಲ್ಲಿ ಎಬಿಆರ್‌ಎಸ್‌ಎಂ ನಾಲ್ಕನೇ ದರ್ಜೆ ಪರೀಕ್ಷೆಯಲ್ಲಿ ಪಾಸಾಗಿರುವರು. ಸಿಂಗಪೂರ್ ನ್ಯಾಷನಲ್ ಆರ್ಟ್ಸ್ ಕೌನ್ಸಿಲ್ 2017ರಲ್ಲಿ ನಡೆಸಿದ ವಯೊಲಿನ್ (ಜ್ಯೂನಿಯರ್) ವಾದನದಲ್ಲಿ ಬಹುಮಾನ ಗಳಿಸಿದ್ದಾರೆ. 11ನೆಯ ವಯಸ್ಸಿನಿಂದಲೇ 2019ರಿಂದ ಪಕ್ಕವಾದ್ಯ ಸಹಕಾರದ ಕಾರ್ಯಕ್ರಮಗಳನ್ನು ನೀಡತೊಡಗಿದರು.

ಮೃದಂಗ ಸಹಕಾರ ನೀಡಲಿರುವ ವಿದ್ವಾನ್ ಆನೂರು ವಿನೋದ್ ಶ್ಯಾಮ್ ಪ್ರತಿಷ್ಠಿತ ಆನೂರು ಕುಟುಂಬದ ಹಿನ್ನೆಲೆಯಿಂದ ಬಂದವರು. 10ನೆಯ ವಯಸ್ಸಿನಲ್ಲಿ ವಿದ್ವಾನ್ ಆರ್. ಸತ್ಯಕುಮಾರ್‌ರವರ ಬಳಿ ಪ್ರಾರಂಭಿಕ ಶಿಕ್ಷಣ. ಪ್ರಸ್ತುತ ತಂದೆಯವರೂ, ಗುರುಗಳೂ ಆದ ವಿದ್ವಾನ್ ಆನೂರು ಅನಂತಕೃಷ್ಣ ಶರ್ಮರಲ್ಲಿ ಉನ್ನತ ಕಲಿಕೆ. ಬಾಲ್ಯದಿಂದಲೇ ಹಲವಾರು ಪ್ರಶಸ್ತಿ ಗಳಿಸಿದ್ದಾರೆ. 2012ರಲ್ಲಿ ಆಕಾಶವಾಣಿಯ ರಾಷ್ಟ್ರಮಟ್ಟದ ಸಂಗೀತ ಸ್ಪರ್ಧೆಯಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಹತ್ತಾರು ಪ್ರತಿಷ್ಠಿತ ಪ್ರಶಸ್ತಿಗಳಿಗೆ ಭಾಜನರಾಗಿದ್ದಾರೆ.

ಖಂಜರ ಸಹಕಾರ ನೀಡಲಿರುವ ವಿದ್ವಾನ್ ಸುನಾದ ಆನೂರ್ ಅವರು ತಂದೆ ವಿದ್ವಾನ್ ಆನೂರು ದತ್ತಾತ್ರೇಯ ಶರ್ಮ ಮತ್ತು ಚಿಕ್ಕಪ್ಪ ವಿದ್ವಾನ್ ಆನೂರು ಅನಂತಕೃಷ್ಣಶರ್ಮ ಅವರಲ್ಲಿ ವಾದನದ ತರಬೇತಿ ಪಡೆದಿದ್ದಾರೆ. ಆಕಾಶವಾಣಿಯ ರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ 2012ರಲ್ಲಿ ಖಂಜಿರ ವಾದನದಲ್ಲಿ ಪ್ರಥಮ ಬಹುಮಾನ. ಐಟಿಸಿ ಸಂಗೀತ ಸಂಶೋಧನಾ ಅಕಾಡೆಮಿ ಪ್ರಶಸ್ತಿ, ಕಲಾವಂತ ಪ್ರಶಸ್ತಿ, ಕೃಷ್ಣ ಗಾನಸಭೆಯ ಟಿ.ಎ.ಹರಿಹರ ಶರ್ಮ ಪ್ರಶಸ್ತಿ, ರಾಮಲಲಿತ ಕಲಾ ಮಂದಿರದ “ರಾಗಲಯ ಪ್ರಭ” ಪ್ರಶಸ್ತಿಗಳು ದೊರೆತಿವೆ. ಆಕಾಶವಾಣಿಯ “ಎ” ಶ್ರೇಣಿ ಕಲಾವಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.06.2024 ಬುಧವಾರ, ಮಳೆ ನಕ್ಷತ್ರ: ಮೃಗಶಿರ, 08.06.2024ರಿಂದ 21.06.2024
ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಶುಕ್ಲ ಪಕ್ಷ,
ತಿಥಿ: ತ್ರಯೋದಶಿ, ನಕ್ಷತ್ರ: ವಿಶಾಖ, ರಾಹುಕಾಲ: ಮಧ್ಯಾಹ್ನ 12ರಿಂದ 1.30ರವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ರೀಜುವೆನೇಷನ್ ಕುರಿತು ವೈದ್ಯಕೀಯ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.
- **ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕ್:** ಶ್ರೀ ಕೃಷ್ಣರಾಜೇಂದ್ರ ಸಹಕಾರ ಬ್ಯಾಂಕಿನ ಸ್ಥಾಪನಾ ದಿನಾಚರಣೆ, ಬ್ಯಾಂಕಿನ ಸಂಸ್ಥಾಪಕ ಶೆಟ್ಟಪ್ಪ ಸಿದ್ದಪ್ಪನವರ ಪ್ರತಿಮೆಗೆ ಮಾಲಾರ್ಪಣೆ, ಉಪಸ್ಥಿತರು: ಶಾಸಕ ಗಣೇಶ್‌ಪ್ರಸಾದ್, ಮುಡಾ ಅಧ್ಯಕ್ಷ ಕೆ.ಮರೀಗೌಡ, ಸ್ಥಳ: ಬ್ಯಾಂಕಿನ ಆವರಣ, ಅಗ್ರಹಾರ, ಬೆಳಗ್ಗೆ 10ಕ್ಕೆ.
- **ಮೈಸೂರು ವಿಶ್ವವಿದ್ಯಾನಿಲಯ, ಗಾಂಧಿ ಅಧ್ಯಯನ ಕೇಂದ್ರ, ಗಾಂಧಿ ಭವನ :** ಗಾಂಧಿ ಮಾರ್ಗಿಗಳು ಹಾಗೂ ಹಿರಿಯ ಸ್ವಾತಂತ್ರ್ಯ ಹೋರಾಟಗಾರರಾದ ತಗಡೂರು ಸತ್ಯನಾರಾಯಣ ಅವರೊಂದಿಗೆ ಮುಕ್ತ ಸಂವಾದ, ಅಧ್ಯಕ್ಷತೆ : ಗಾಂಧಿ ಅಧ್ಯಯನ ಕೇಂದ್ರ, ಗಾಂಧಿ ಭವನ ನಿರ್ದೇಶಕ ಪ್ರೊ. ಎಸ್. ನರೇಂದ್ರಕುಮಾರ್, ಸ್ಥಳ: ತರಗತಿ ಸಭಾಂಗಣ, ಗಾಂಧಿ ಭವನ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.
- **ಶಬರಿ ಮಲೆ ಶ್ರೀ ಅಯ್ಯಪ್ಪ ಪೂಜಾ ಸಮಿತಿ:** ಪ್ರತಿಷ್ಠಾಪನಾ ವಾರ್ಷಿಕ ಮಹೋತ್ಸವ, ಶ್ರೀ ಅಯ್ಯಪ್ಪ ಸ್ವಾಮಿಯ 41ನೇ ಪ್ರತಿಷ್ಠಾಪನಾ ವಾರ್ಷಿಕ ಮಹೋತ್ಸವ, ಬೆಳಗ್ಗೆ 5.30ರಿಂದ ಗಣಪತಿ ಹೋಮಂ, ಚತುಶುದ್ಧಿ, ಶ್ರೀ ಅಯ್ಯಪ್ಪಸ್ವಾಮಿಗೆ ಉದಯಾಸ್ಥಮಾನ ಪೂಜೆ, ನವಗಂ, ಪಂಚಗವ್ಯಂ, ಉಚ್ಛ ಪೂಜೆ, ಮಧ್ಯಾಹ್ನ 12ಕ್ಕೆ ಅನ್ನದಾನ. ಸ್ಥಳ: ದೇವಸ್ಥಾನದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಮೈಸೂರು.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ‘ಬದುಕು ಬದಲಿಸಿದ ಶೋಧ’ ಬಾನುಲಿ ಸರಣಿ, ಪ್ರಸ್ತುತಿ– ಎನ್. ಎನ್. ಸುರೇಂದ್ರನಾಥ್ ಸಾತ್ವಿಕ್, 6.40‘ನಾನು ನ.ರತ್ನ’ ಬಾನುಲಿ ಸರಣಿ. ಖ್ಯಾತ ನಾಟಕಕಾರ ಹಾಗೂ ವಾಕ್ ಶ್ರವಣ ತಜ್ಞ ಡಾ.ನ.ರತ್ನ ಅವರ ಜೀವನಗಾಥೆ ಅವರದೇ ಧ್ವನಿಯಲ್ಲಿ, 6.50 ರೈತರಿಗೆ ಸಲಹೆ, 7.15 ಯೋಗೋತ್ಸವ : ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಪ್ರಾಯೋಜಿತ ಕಾರ್ಯಕ್ರಮ. ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 9.00 ವೃತ್ತಿ ಮಾರ್ಗದರ್ಶನ– ‘ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವಿಜ್ಞಾನ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು’ ಕುರಿತು ಮೈಸೂರಿನ ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಂಶುಪಾಲರು ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಡಾ. ಗಜಾನನ ಹೆಗಡೆ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ, ಅಲೀ ಅಹ್ಮದ್ ಹುಸೇನ್–ಶಹನಾಯ್ ವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30ದೇವರನಾಮ, 12.45ಜನಪದ ಸಂಗೀತ, 1.20 ಭಾವಗೀತೆಗಳು: ಎಂ. ಆರ್.ಶ್ರೀ ಹರ್ಷ, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಆನಯಂ ಪಟ್ಟಿ ಎಸ್.ಗಣೇಶನ್–ಜಲತರಂಗ, 4.00 ಮಹಿಳಾರಂಗ–ಹೀಗಿದೆ ನೋಡಿ ನಮ್ ಜೋಡಿ ರಂಗಭೂಮಿ ಕಲಾವಿದ ದಂಪತಿ ಚಿತ್ರಾ ವೆಂಕಟೇಶ್ ಹಾಗೂ ವಿವೇಕ್ ಪ್ರಕಾಶ್ ಅವರೊಂದಿಗೆ ಮಾತುಕತೆ. ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಡಾ.ಮಾಧವಿ ಭಂಡಾರಿ, 5.45 “ನಾನು ನ.ರತ್ನ” ಬಾನುಲಿ ಸರಣಿ. ಖ್ಯಾತ ನಾಟಕಕಾರ ಹಾಗೂ ವಾಕ್ ಶ್ರವಣ ತಜ್ಞ ಡಾ.ನ.ರತ್ನ ಅವರ ಜೀವನಗಾಥೆ ಅವರದೇ ಧ್ವನಿಯಲ್ಲಿ, 6.50 ಕೃಷಿರಂಗ–ಸಾವಯವ ಸಂಪದ, ಸಾವಯವ ಕೃಷಿ ಬದುಕಿನ ಸಮಗ್ರ ಚಿತ್ರಣ ಕುರಿತ ಬಾನುಲಿ ಸರಣಿ, ಸಾವಯವ ಕೃಷಿಯ ಪ್ರಾಮುಖ್ಯತೆ ಈ ಕುರಿತು ಚಾಮರಾಜನಗರ ತಾಲೂಕು ಸಂತೇಮರಳ್ಳಿ ಅಂಚೆ ಹೆಗ್ಗವಾಡಿಪುರದ ಪಿ.ಶಿವಕುಮಾರಸ್ವಾಮಿ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್.ಕೇಶವಮೂರ್ತಿ, 8.00 ಕ್ಷಿತಿಜ Literary ಗುರು–ಸಾಹಿತ್ಯ ಸಾಧಕರೊಂದಿಗೆ ಸಂವಾದ. 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ : ಪಂಡಿತ್. ಬಸವರಾಜ ರಾಜಗುರು–ಗಾಯನ, 10.00 ಜನಪದ ಸಂಗೀತ, 10.30 ಸವಿನೆನಪು.

ಶತಕ ಭಾರಿಸಿದ ಟೊಮೆಟೊ ಬೆಲೆ!



ಮೈಸೂರಿನ ಎಂಜಿ ರಸ್ತೆ ಮಾರುಕಟ್ಟೆಯಲ್ಲಿ ಟೊಮೆಟೊ ಮಾರಾಟ ಮಾಡುತ್ತಿರುವುದು.

ಮೈಸೂರು,ಜೂ.18(ಪಿಎಂ)– ಟೊಮೆಟೊ ಬೆಲೆ ಗಗನಕ್ಕೇರಿದ್ದು, ಕೆಜಿ ಟೊಮೆಟೊ 100 ರೂ. ಗಡಿ ಮುಟ್ಟಿದೆ. 40ರಿಂದ 60 ರೂ.ವರೆಗೆ ಇದ್ದ ಕೆಜಿ ಟೊಮೆಟೊ ಬೆಲೆ, ಕಳೆದ ಮೂರು ದಿನಗಳಿಂದ ಶತಕ ಭಾರಿಸಿದೆ! ಮೈಸೂರು ಮಾತ್ರವಲ್ಲದೆ ರಾಜ್ಯದೆಲ್ಲೆಡೆ ಟೊಮೆಟೋ ಈ ದುಬಾರಿ ಬೆಲೆ ಕಾಯ್ದುಕೊಂಡಿದೆ.

ಕಳೆದ ಕೆಲ ದಿನಗಳ ಹಿಂದೆ ಇದ್ದ ಅಧಿಕ ತಾಪಮಾನದ ಹಿನ್ನೆಲೆಯಲ್ಲಿ ನಾಟಿ ಮಾಡಿದ್ದ ಟೊಮೆಟೊ ಪೈರಿನ ಪೈಕಿ ಒಣಗಿದ್ದೇ ಹೆಚ್ಚು. ಈ ಕಾರಣಕ್ಕೆ ಇಳುವರಿ ಕಡಿಮೆಯಾಗಿದೆ. ಹಾಗಾಗಿ ಟೊಮೆಟೊ ಈಗ ದುಬಾರಿಯಾಗಿದೆ ಎನ್ನುತ್ತಾರೆ ರೈತರು. ಹೆಚ್ಚಿನ ಪ್ರಮಾಣದಲ್ಲಿ ಟೊಮೆಟೊ ಮಾರುಕಟ್ಟೆಗೆ ಪೂರೈಕೆ ಆಗುತ್ತಿಲ್ಲ. ಹಾಗಾಗಿ ಬೆಲೆ ಹೆಚ್ಚಳವಾಗಿದೆ. 40ರಿಂದ 60 ರೂ. ಇದ್ದ ಕೆಜಿ ಟೊಮೆಟೊ ಬೆಲೆ ಈಗ 100 ರೂ. ಆಗಿದೆ ಎನ್ನುತ್ತಾರೆ ಮೈಸೂರಿನ ಎಂಜಿ ರಸ್ತೆ ಮಾರುಕಟ್ಟೆಯ ತರಕಾರಿ ವ್ಯಾಪಾರಿಗಳು.

ಬಿಸಿಲಿನ ತಾಪ ಹೆಚ್ಚಿದ್ದ ಹಿನ್ನೆಲೆಯಲ್ಲಿ ಸಸಿಗಳು ಒಣಗಿ ಟೊಮೆಟೊ ಹಣ್ಣುಗಳು ನಿರೀಕ್ಷಿತ ಪ್ರಮಾಣದಲ್ಲಿ ಕೈಗೆ ಬರಲಿಲ್ಲ ಎಂದು ಇದೇ ಮಾರುಕಟ್ಟೆಯಲ್ಲಿ ಸಗಟು ವ್ಯಾಪಾರ ಮಾಡಲು ಟೊಮೆಟೊ ತಂದಿದ್ದ ಹುಣಸೂರು ತಾಲೂಕು ಬಿಳಿಕೆರೆ ಹೋಬಳಿ ಆಯರಹಳ್ಳಿ ಗ್ರಾಮದ ರೈತ ಮುದ್ದೇಗೌಡ 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಟ್ರೆಯ್ ಲೆಕ್ಕದಲ್ಲಿ ಟೊಮೆಟೊ ಮಾರಾಟ ಮಾಡುತ್ತಿದ್ದು, ಒಂದು ಟ್ರೆಯ್‌ನಲ್ಲಿ 23 ಕೆಜಿ ಟೊಮೆಟೊ ಇರಲಿದೆ. ಒಂದು ಟ್ರೆಯ್ ಟೊಮೆಟೊ ಅನ್ನು 1,300 ರೂ.ಗೆ ಮಾರಾಟ ಮಾಡುತ್ತಿದ್ದೇನೆ ಎಂದು ಅವರು ಹೇಳಿದರು. ನಾಗನಹಳ್ಳಿ ಗ್ರಾಮದ ರೈತ ಚಂದ್ರಶೇಖರ್ 'ಮಿತ್ರ'ನೊಂದಿಗೆ ಮಾತನಾಡಿ, ತಾಪಮಾನ ಹೆಚ್ಚಳವಾಗಿದ್ದ ಕಾರಣ ಟೊಮೆಟೊ ಗಿಡಗಳ ಪೈಕಿ ಸಾಕಷ್ಟು ಸಂಖ್ಯೆಯ ಗಿಡಗಳು ಒಣಗಿ ಹೋದವು. ಉದಾಹರಣೆಗೆ ಐದು ಸಾವಿರ ಪೈರು ನೆಟ್ಟಿದ್ದರೆ, ಅದರಲ್ಲಿ ಬೆಳೆಯುವುದು 1 ಸಾವಿರ ಪೈರು. ಬಾಕಿ ಸಸಿಗಳು ಒಣಗಿ ಸತ್ತು ಹೋಗುತ್ತವೆ. ಜೊತೆಗೆ ಇಳುವರಿಯೂ ಕಡಿಮೆಯಾಗಿದೆ. ಕೋಲಾರ ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಟೊಮೆಟೊ ಬೆಳೆಯಲಾಗುತ್ತದೆ. ಅಲ್ಲಿಂದ ಎಲ್ಲೆಡೆಗೆ ಹೆಚ್ಚಿನ ಪ್ರಮಾಣದಲ್ಲಿ ಪೂರೈಕೆಯಾಗುತ್ತದೆ. ಆದರೆ ಈ ಬಾರಿ ಕೋಲಾರದಲ್ಲಿ ಟೊಮೆಟೊ ಬೆಳೆಗೆ ವೈರಾಣು ತಗುಲಿದ ಕಾರಣ ಇಳುವರಿ ಕಡಿಮೆಯಾಗಿದೆ. ಈ ಪ್ರಮಾಣದಲ್ಲಿ ಬೆಲೆ ಹೆಚ್ಚಳಗೊಳ್ಳಲು ಇದೂ ಒಂದು ಕಾರಣ ಎಂದು ತಿಳಿಸಿದರು.

ಮೈಸೂರಿನ ದೇವರಾಜ ಮಾರುಕಟ್ಟೆ ತರಕಾರಿ ವ್ಯಾಪಾರಿ ಫಕ್ರುದೀನ್ ಅಲಿ ಮಾತನಾಡಿ, ಕಳೆದ ಮೂರು ದಿನಗಳಿಂದ ಟೊಮೆಟೊ ಬೆಲೆ ಕೆಜಿಗೆ 100 ರೂ. ಆಗಿದೆ. ಸಣ್ಣ ಗಾತ್ರದ ಟೊಮೆಟೊ ಕೆಜಿಗೆ 80 ರೂ. ಇದೆ. ಟೊಮೆಟೊ ಪೂರೈಕೆ ಕಡಿಮೆಯಾಗಿರುವ ಕಾರಣ ಬೆಲೆ ಹೆಚ್ಚಳಗೊಂಡಿದೆ ಎಂದು ಹೇಳಿದರು.

ಬೆಂಗಳೂರು ಸೇರಿದಂತೆ ರಾಜ್ಯದ ಬಹುತೇಕ ಕಡೆಗಳಲ್ಲಿ ಟೊಮೆಟೊ ಕೆಜಿಗೆ 100 ರೂ. ಇದ್ದು, ಬಹುತೇಕ ಆಹಾರ ತಯಾರಿಕೆಯಲ್ಲಿ ಟೊಮೆಟೊ ಬಳಕೆ ಮಾಡುವ ಕಾರಣ ಗ್ರಾಹಕರಿಗೆ ತಲೆ ಬಿಸಿ ಶುರುವಾಗಿದೆ. ಇದೀಗ ಪೆಟ್ರೋಲ್– ಡೀಸೆಲ್ ಬೆಲೆ ಹೆಚ್ಚಳದ ಹಿನ್ನೆಲೆಯಲ್ಲಿ ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ಹೆಚ್ಚಳದ ಆತಂಕವೂ ಕಾಡುವಂತಾಗಿದೆ.



ಮೈಸೂರಿನ ಎಂಜಿ ರಸ್ತೆ ಮಾರುಕಟ್ಟೆಯಲ್ಲಿ ಟೊಮೆಟೊ ಅನ್ನು ಟ್ರೆಯ್ ಲೆಕ್ಕದಲ್ಲಿ ಸಗಟು ವ್ಯಾಪಾರ ಮಾಡುತ್ತಿರುವುದು.

ಸಂತ್ರಸ್ತೆ ಅಪಹರಣ ಪ್ರಕರಣ: ಭವಾನಿ ರೇವಣ್ಣಗೆ ನಿರೀಕ್ಷಣಾ ಜಾಮೀನು ಮಂಜೂರು

ಮೈಸೂರು, ಹಾಸನ ಪ್ರವೇಶಿಸದಂತೆ ತಾಕೀತು!



ಬೆಂಗಳೂರು, ಜೂ.18– ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅತ್ಯಾಚಾರ ಪ್ರಕರಣದ ಸಂತ್ರಸ್ತೆಯನ್ನು ಅಪಹರಿಸಿದ ಆರೋಪ ಸಂಬಂಧ ಭವಾನಿ ರೇವಣ್ಣ ಅವರಿಗೆ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದ್ದು, ಈ ಮೂಲಕ ಭವಾನಿ ರೇವಣ್ಣ ಅವರಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

ಶಾಸಕ ಎಚ್.ಡಿ.ರೇವಣ್ಣ ಅವರ ಪತ್ನಿ ಭವಾನಿ ರೇವಣ್ಣ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ನ್ಯಾಯಮೂರ್ತಿ ಕೃಷ್ಣ ಎಸ್.ದೀಕ್ಷಿತ್ ಅವರ ಏಕಸದಸ್ಯ ಪೀಠ ಶುಕ್ರವಾರ ಪೂರ್ಣಗೊಳಿಸಿ, ಆದೇಶ ಕಾಯ್ದಿರಿಸಿತ್ತು. ಇದೀಗ ನ್ಯಾಯಪೀಠ ಜಾಮೀನು ಮಂಜೂರು ಮಾಡಿದೆ.

ಭವಾನಿ ರೇವಣ್ಣ ಅವರು ಮೈಸೂರು, ಹಾಸನ ಜಿಲ್ಲೆ ಪ್ರವೇಶಿಸದಂತೆ ಷರತ್ತು ವಿಧಿಸಿ ಏಕಸದಸ್ಯ ಪೀಠ ಆದೇಶ ಹೊರಡಿಸಿದೆ. ಆದರೆ, ವಿಶೇಷ ತನಿಖಾ ತಂಡ (ಎಸ್‌ಐಟಿ) ತನಿಖೆಗಾಗಿ ಅವರನ್ನು ಈ ಜಿಲ್ಲೆಗಳಿಗೆ ಕರೆದೊಯ್ಯಬಹುದು ಎಂದೂ ಹೇಳಿದೆ. ಎರಡೂ ಕಡೆಯ ಹಿರಿಯ ವಕೀಲರಾದ ಪ್ರೊ. ರವಿವರ್ಮ ಕುಮಾರ್ ಮತ್ತು ಸಿ.ವಿ.ನಾಗೇಶ್ ಅವರಿಂದ ಸಾಕಷ್ಟು ಕಾನೂನು ಜ್ಞಾನವನ್ನು ಪಡೆದುಕೊಂಡಿದ್ದೇನೆ. ಈ ತೀರ್ಪಿನ ಮೂಲಕ ನಾನು ತಪ್ಪನ್ನೂ ಎಸಗಿರಬಹುದು. ಆದರೆ, ಒಮ್ಮತದ ತೀರ್ಪು ನೀಡಿದ್ದೇನೆ. ಮೇಲಿನ ಎಲ್ಲಾ ಕಾರಣಗಳ ಹಿನ್ನೆಲೆಯಲ್ಲಿ ಅರ್ಜಿಯು ಊರ್ಜಿತವಾಗಿದ್ದು, ಭವಾನಿಗೆ ನಿರೀಕ್ಷಣಾ ಜಾಮೀನು ಮಂಜೂರು ಮಾಡಲಾಗಿದೆ ಎಂದು ಪೀಠ ಆದೇಶಿಸಿದೆ.

ಪೊಲೀಸರು ಆರೋಪಿಯನ್ನು ಕಸ್ಟಡಿಗೆ ಕೇಳಿದರೆ, ಕಣ್ಣು ಮುಚ್ಚಿಕೊಂಡು ನ್ಯಾಯಾಲಯವು ನೀಡಬೇಕು ಎಂದು ಪ್ರೊ. ರವಿವರ್ಮ ಕುಮಾರ್ ಹೇಳಿದ್ದರು. ಇದು ಸುಪ್ರೀಂಕೋರ್ಟ್ ತೀರ್ಪಿಗೆ ವಿರುದ್ಧವಾಗಿದೆ. ಬ್ಯಾಂಕಾಕ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಸಭೆಯಲ್ಲೂ ಮಹಿಳೆಯನ್ನು ಬಂಧಿಸುವಂತಿಲ್ಲ ಎಂದು ಹೇಳಲಾಗಿದೆ ಎಂದು ನ್ಯಾ. ದೀಕ್ಷಿತ್ ಹೇಳಿದರು.

ಎಸ್‌ಐಟಿ ವಿಚಾರಣೆಗೆ ಭವಾನಿ ಸಹಕರಿಸಿಲ್ಲ ಎಂದು ಪ್ರೊ.ಕುಮಾರ್ ವಾದಿಸಿದ್ದರು. ಮೂರು ದಿನಗಳಲ್ಲಿ ಒಟ್ಟು 85 ಪ್ರಶ್ನೆಗಳನ್ನು ಕೇಳಲಾಗಿದ್ದು, ಎಲ್ಲದಕ್ಕೂ ಆಕೆ ಉತ್ತರಿಸಿದ್ದಾರೆ. ತಾವು ಬಯಸಿದಂತೆ ಆರೋಪಿ ಉತ್ತರಿಸಬೇಕು ಎಂದು ಪೊಲೀಸರು ನಿರೀಕ್ಷಿಸಲಾಗದು. ಸಂತ್ರಸ್ತೆಗೆ ಆಹಾರ ನೀಡಿಲ್ಲ ಮತ್ತು ಉಡುಪು ಬದಲಿಸಲು ಭವಾನಿ ಅವರಿಗೆ ಅವಕಾಶ ನೀಡಿಲ್ಲ ಎಂದು ಪ್ರಾಸಿಕ್ಯೂಷನ್ ವಾದಿಸಿತ್ತು. ಸಂತ್ರಸ್ತೆಯ ಸಿಆರ್‌ಪಿಸಿ ಸೆಕ್ಷನ್ 164 ಹೇಳಿಕೆ ಓದಿದಾಗ ಬಟ್ಟೆ ಮತ್ತು ಊಟವನ್ನು ಭವಾನಿ ಕಳುಹಿಸಿದ್ದರು ಎಂದು ಹೇಳಿದ್ದಾರೆ. ಹೀಗಾಗಿ, ಸಂತ್ರಸ್ತೆಯನ್ನು ಒತ್ತೆಯಲ್ಲಿ ಇಡಲಾಗಿತ್ತು ಎನ್ನಲಾಗದು ಎಂದು ಸಮಜಾಯಿಷಿ ನೀಡಿದರು.

ಮಹಿಳೆಯನ್ನು ಅನಗತ್ಯವಾಗಿ ಬಂಧಿಸುವ ವಿಚಾರವನ್ನೂ ಆದೇಶದಲ್ಲಿ ಪ್ರಸ್ತಾಪಿಸಲಾಗಿದೆ. ಮಹಿಳೆಯರನ್ನು ಕಸ್ಟಡಿಗೆ ನೀಡುವುದರ ವಿರುದ್ಧ ನಾನಿದ್ದೇನೆ. ನಮ್ಮ ಸಾಮಾಜಿಕ ವ್ಯವಸ್ಥೆಯಲ್ಲಿ ಮಹಿಳೆ ಕುಟುಂಬದ ಆಧಾರ. ಆಕೆಯನ್ನು ಪೊಲೀಸರು ಬಂಧಿಸಿದರೆ ಇಡೀ ಕುಟುಂಬ ವ್ಯವಸ್ಥೆಗೆ ಹಾನಿಯಾಗುತ್ತದೆ. ಬಂಧನ ವಾರೆಂಟ್ ಜಾರಿ ಮಾಡಿದ ಮೇಲೆ ಜಾಮೀನು ಕೇಳುವ ಹಾಗೆ ಇಲ್ಲ ಎಂಬುದಕ್ಕೂ ಆದೇಶದಲ್ಲಿ ಉತ್ತರಿಸಿದ್ದೇನೆ. ಜಾಮೀನು ನೀಡುವಂತಿಲ್ಲ ಎಂಬುದು ಸ್ಥಾಪಿತ ನಿಯಮವಲ್ಲ. ಅದು ಸಂದರ್ಭ ಮತ್ತು ಪ್ರಕರಣದ ವಾಸ್ತವಿಕ ಅಂಶಗಳನ್ನು ಆಧರಿಸಿರುತ್ತದೆ ಎಂದು ಸುಪ್ರೀಂಕೋರ್ಟ್ ಹೇಳಿದೆ ಎಂದು ವಿವರಿಸಿದರು.

ಎಸ್‌ಐಟಿ ಅಧಿಕಾರಿಗಳು ಸೂಚಿಸಿದಾಗ ಭವಾನಿ ವಿಚಾರಣೆಗೆ ಹಾಜರಾಗಿದ್ದಾರೆ. ಮತ್ತೆ ಕರೆದಾಗಲೂ ವಿಚಾರಣೆಗೆ ಹಾಜರಾಗಲಾಗುವುದು ಎಂದು ಹೇಳಿದ್ದಾರೆ. ಹೀಗಾಗಿ, ನಿರೀಕ್ಷಣಾ ಜಾಮೀನನ್ನು ಕಾಯಂಗೊಳಿಸಲಾಗಿದೆ. ಅಗತ್ಯ ಬಿದ್ದರೆ ಆರೋಪಿ ಭವಾನಿ ಅವರನ್ನು ಕೆ.ಆರ್. ನಗರಕ್ಕೆ ವಿಚಾರಣೆಗೆ ಕರೆದೊಯ್ಯಲು ಎಸ್‌ಐಟಿಗೆ ಅನುಮತಿಸಲಾಗಿದೆ ಎಂದರು.

ಮಾಧ್ಯಮ ವಿಚಾರಣೆ ಇರಬಾರದು ಎಂದು ಸುಪ್ರೀಂಕೋರ್ಟ್ ಹೇಳಿದೆ ಹೀಗಾಗಿ, ಮಾಧ್ಯಮ ವಿಚಾರಣೆ ನಡೆಯಬಾರದು. ಸಾಮಾನ್ಯ ಜನರು ಪತ್ರಿಕೆಗಳನ್ನು ಓದಿ ಅವರು ಅದನ್ನು ನಂಬುತ್ತಾರೆ. ಆದರೆ, ಯಾರೂ ಪ್ರಕರಣದ ದಾಖಲೆಗಳನ್ನು ಓದಿರುವುದಿಲ್ಲ. ಮಾಧ್ಯಮ ವರದಿಗಳನ್ನು ಆಧರಿಸಿ ಮನೆ, ವಾಯುವಿಹಾರಕ್ಕೆ ಓದಾಗ ಮಾತನಾಡುತ್ತಾರೆ. ಪತ್ರಿಕೆಗಳ ವರದಿ ಆಧರಿಸಿ ನಾವು ಪ್ರಕರಣ ನಿರ್ಧರಿಸಲಾಗದು. ಪ್ರಕರಣದ ದಾಖಲೆಗಳ ಆಧಾರದಲ್ಲಿ ಆದೇಶ ಮಾಡಲಾಗುತ್ತದೆ.

ಪ್ರೇಕ್ಷಕರ ಮನಸೂರೆಗೊಂಡ ಭಾವಸ್ಪಂದನ ಭಾವಗೀತೆ ಗಾಯನ



'ಭಾವಸ್ಪಂದನ' ಖ್ಯಾತ ಕವಿಗಳ ಭಾವಗೀತೆಗಳ ಗಾಯನ ಪ್ರೇಕ್ಷಕರ ಮನಸೆಳೆಯಿತು.

ಮೈಸೂರು, ಜೂ. 18(ಎಸ್‌ಪಿಎನ್)– ಮೈಸೂರು ಜೆಎಲ್‌ಬಿ ರಸ್ತೆಯ ನಾದಬ್ರಹ್ಮ ಸಭಾಂಗಣದಲ್ಲಿ ಭೂಮಿಕಾ ಅಸೋಸಿಯೇಟ್ಸ್ ಮತ್ತು ದಿ. ಮೈಕ್ ಚಂದ್ರು ಗೆಳೆಯರ ಬಳಗ ಸಹಯೋಗದೊಂದಿಗೆ 'ಭಾವಸ್ಪಂದನ' ಖ್ಯಾತ ಕವಿಗಳ ಭಾವಗೀತೆಗಳ ಗಾಯನ ಕಾರ್ಯಕ್ರಮ ಪ್ರೇಕ್ಷಕರ ಮನಸೆಳೆಯಿತು.

ಕನ್ನಡದ ಖ್ಯಾತ ಕವಿಗಳಾದ ಕುವೆಂಪು, ದ.ರಾ.ಬೇಂದ್ರ, ಎಂ.ಎನ್.ವ್ಯಾಸರಾವ್, ಜಿ.ಪಿ.ರಾಜರತ್ನಂ, ಸಂತ ಶಿಶುನಾಳ ಷರೀಫ, ಜಿ.ಎಸ್.ಶಿವರುದ್ರಪ್ಪ, ಪ್ರೊ. ನಿಸಾರ್ ಅಹಮದ್ ಸೇರಿದಂತೆ ಇತರೆ ಖ್ಯಾತ ನಾಮ ಕವಿಗಳ ಕವಿತೆಗಳನ್ನು ಹಾಡಿ ಪ್ರೇಕ್ಷಕರ ಮನಗೆದ್ದರು.

'ಜೋಗದ ಸಿರಿ', 'ದಾರಿ ಯಾವುದಯ್ಯಾ, 'ರಾಯರು ಬಂದರು', 'ನಾ ನಿನ್ನ ಪ್ರೀತಿಸುವೆ', 'ಯಾವ ಮೋಹನ', 'ನೂರು ದೇವರನೆಲ್ಲಾ', 'ಕೊಡಗನ ಕೋಳಿ', 'ಎಲ್ಲಿ ಜಾರಿತೋ', 'ಬದುಕು ಜಟಕಾ ಬಂಡಿ', 'ಅತ್ತಿತ್ತ ನೋಡದಿರು', 'ಕಾಣದ ಕಡಲಿಗೆ', 'ಕುರಿಗಳು ಸಾರ್ ಕುರಿಗಳು', 'ನೀ ನಿಲ್ಲದೆ ನನಗೇನಿದೆ', 'ಯಂಡ ಯೆಡ್ತಿ', 'ನೀ ಸಿಗದೇ', 'ಶ್ರಾವಣ ಬಂತು', ' ಒಳಿತು ಮಾಡು', ' ಅಮ್ಮ ನಿನ್ನ ಎದೆಯಾಳದಲ್ಲಿ', 'ಬಯಸಿದೇ ನಿನ್ನನು', ' ಕುರುಡು ಕಾಂಚಾಣ', ' ಲೋಕದ ಕಣ್ಣಿಗೆ', 'ಕುರುಬರೋ ನಾವು', 'ಇರಬೇಕು ಇರುವಂತೆ', 'ತರವಲ್ಲ', 'ಎದೆ ತುಂಬಿ ಹಾಡಿದೆನು' ಸೇರಿದಂತೆ ಹಲವು ಹಾಡುಗಳನ್ನು ಗಾಯಕರಾದ ದಿವ್ಯ, ನಿತಿನ್ ರಾಜಾರಾಮ್ ಶಾಸ್ತ್ರಿ, ಹಂಸಿನಿ, ರಾಜೇಶ್ ಪಡಿಯಾರ್ ಸುಶ್ರಾವ್ಯವಾಗಿ ಹಾಡಿ, ಪ್ರೇಕ್ಷಕರ ಮನಸೆಳೆದರು. ಈ ಕಾರ್ಯಕ್ರಮದಲ್ಲಿ ಶಾಸಕ ಟಿ.ಎಸ್.ಶ್ರೀವತ್ಸ ಸೇರಿದಂತೆ ಇತರರು ಭಾಗವಹಿಸಿದ್ದರು.

ಪಾರ್ಟ್ ಟೈಂ ಜಾಬ್ ಹೆಸರಲ್ಲಿ ವಂಚನೆ

ಮೈಸೂರು, ಜೂ. 18(ಎಸ್‌ಪಿಎನ್)– ಪಾರ್ಟ್ ಟೈಂ ಜಾಬ್ ಸಂಬಂಧ ವಾಟ್ಸಾಪ್‌ಗೆ ಬಂದಿದ್ದ ಮೆಸೇಜ್ ನಂಬಿ ವ್ಯಕ್ತಿಯೊಬ್ಬರು 10,51,000 ರೂ., ಹಣ ಹೂಡಿಕೆ ಮಾಡಿ ಮೋಸ ಹೋಗಿದ್ದಾರೆ. ಕೊನೆಗೆ ಮೈಸೂರಿನ ಸೆನ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಮೈಸೂರು ಬನ್ನಿಮಂಟಪದ ನಿವಾಸಿ ಬಾಲಸುಬ್ರಹ್ಮಣ್ಯಂ ಮೋಸ ಹೋದವರು. ಜೂ.3ರಂದು ಪಾರ್ಟ್ ಟೈಂ ಜಾಬ್ ಸಂಬಂಧ ವಾಟ್ಸಾಪ್ ಮೆಸೇಜ್ ಬಾಲಸುಬ್ರಹ್ಮಣ್ಯಂ ಅವರ ಮೊಬೈಲ್‌ಗೆ ಬಂದಿದೆ. ಇದನ್ನು ನಂಬಿದ ಬಾಲಸುಬ್ರಹ್ಮಣ್ಯಂ, 150 ರೂ ಹಣ ಪಾವತಿಸಿ, ವಾಟ್ಸಾಪ್ ಮತ್ತು ಟೆಲಿಗ್ರಾಂ ಗ್ರೂಪ್‌ಗೆ ಸೇರ್ಪಡೆ ಆಗಿದ್ದಾರೆ. ಗ್ರೂಪ್ ಅಡ್ಮಿನ್ ಅವರ ಮಾತಿಗೆ ಮರುಳಾಗಿ ಪ್ರಾರಂಭಿಕ ಹಂತದಲ್ಲಿ 9 ಸಾವಿರ ರೂ., 2 ನೇ ಹಂತದಲ್ಲಿ 28 ಸಾವಿರ, ಮೂರನೇ ಹಂತದಲ್ಲಿ 88 ಸಾವಿರ ಸೇರಿದಂತೆ ಹೀಗೆ ಹಂತ ಹಂತವಾಗಿ ಒಟ್ಟು 10,51 000 ಹಣ ಪಾವತಿಸಿದ್ದಾರೆ. ಸ್ವಲ್ಪ ದಿನದ ನಂತರ ತಾವು ಕಟ್ಟಿದ್ದ ಹಣಕ್ಕೆ ಲಾಭಾಂಶದ ಬಗ್ಗೆ ವಿಚಾರಿಸಿದಾಗ ಸಬೂಬು ಹೇಳಿ ಇವರಿಗೆ(ಬಾಲಸುಬ್ರಹ್ಮಣ್ಯಂ) ಬರಬೇಕಿದ್ದ ಶೇ.40ರಷ್ಟು ಪ್ರಾಫಿಟ್ ಹಣ ನೀಡಲು ಸತಾಯಿಸಿದ ಹಿನ್ನೆಲೆಯಲ್ಲಿ ತಾವು ಮೋಸ ಹೋಗಿರುವುದನ್ನು ಅರಿತ ಬಾಲಸುಬ್ರಹ್ಮಣ್ಯಂ, ಮೈಸೂರಿನ ಸೆನ್ ಠಾಣೆಯಲ್ಲಿ ವಂಚನೆ ಪ್ರಕರಣ ದಾಖಲಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಕೈಬಿಟ್ಟು ಹೋದ ಬೆನ್ನಲ್ಲೇ

ಬೊಂಬೆ ನಗರಿ ಚನ್ನಪಟ್ಟಣ ಗೆಲ್ಲಲು ಡಿಸಿಎಂ ಡಿ.ಕೆ.ಶಿವಕುಮಾರ್ ರಣತಂತ್ರ

- ಕೇಂದ್ರ ಸಚಿವ ಕುಮಾರಸ್ವಾಮಿ ರಾಜೀನಾಮೆಯಿಂದ ಉಪ ಚುನಾವಣೆ ಅನಿವಾರ್ಯತೆ ಹಿನ್ನೆಲೆ
- ಲೋಕ ಸಮರದಲ್ಲಿ ಸೋತ ತಮ್ಮನ ಗದ್ದುಗೆಗೇರಿಸಲು ಮಹಾತಂತ್ರ
- ಇಂದು ಇಡೀ ದಿನ ಚನ್ನಪಟ್ಟಣ ಕ್ಷೇತ್ರದಲ್ಲಿ ಯಾತ್ರೆ; ಮತದಾರರ ಅರಿಯುವ ಯತ್ನ



ಬೆಂಗಳೂರು, ಜೂ.18(ಕೆಎಂಶಿ)–ಬೆಂಗಳೂರು ಗ್ರಾಮಾಂತರ ಲೋಕಸಭಾ ಚುನಾವಣಾ ಸೋಲಿನ ಸೇಡು ತೀರಿಸಿಕೊಳ್ಳಲು ಕೆಪಿಸಿಸಿ ಅಧ್ಯಕ್ಷರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರ ಕರ್ಮಭೂಮಿ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರಕ್ಕೆ ರಂಗ ಪ್ರವೇಶ ಮಾಡಿದ್ದಾರೆ.

ಗ್ರಾಮಾಂತರ ಕ್ಷೇತ್ರದಿಂದ ಸಹೋದರ ಡಿ.ಕೆ. ಸುರೇಶ್ ಭಾರಿ ಅಂತರದಿಂದ ಸೋಲುಂಡ ನಂತರ ತಮ್ಮ ರಾಜಕೀಯ ಸೇಡು ತೀರಿಸಿಕೊಳ್ಳಲು ಜೊತೆಗೆ ಚನ್ನಪಟ್ಟಣದಲ್ಲಿ ತಮ್ಮ ಸಹೋದರನನ್ನು ಕಣಕ್ಕಿಳಿಸುವ ಉದ್ದೇಶದಿಂದ ಮತದಾರರ ನಾಡಿ ಮಿಡಿತ ಅರಿಯಲು ಈ ಪ್ರವಾಸ ಕೈಗೊಂಡಿದ್ದಾರೆ ಎನ್ನಲಾಗಿದೆ. ಮಂಡ್ಯ ಲೋಕಸಭಾ ಕ್ಷೇತ್ರದಿಂದ ಕುಮಾರಸ್ವಾಮಿ ಆಯ್ಕೆಗೊಂಡ ನಂತರ ಅವರಿಂದ ತೆರವಾಗಿರುವ ಚನ್ನಪಟ್ಟಣ ವಿಧಾನಸಭಾ ಕ್ಷೇತ್ರವನ್ನು ತಮ್ಮ ಹಿಡಿತಕ್ಕೆ ಪಡೆಯಲು ಶಿವಕುಮಾರ್ ನಾಳೆ ಇಡೀ ದಿನ ಬೊಂಬೆ ನಾಡಿನಲ್ಲಿ ಪ್ರವಾಸ ಹಮ್ಮಿಕೊಂಡಿದ್ದಾರೆ. ಕುಮಾರಸ್ವಾಮಿ ಇರುವವರೆಗೂ ಕ್ಷೇತ್ರದಲ್ಲಿ ಅಪರೂಪಕ್ಕೆ ಒಮ್ಮೆ ಕಾರ್ಯಕ್ರಮಗಳಿಗೆ ಭೇಟಿ ನೀಡುವುದನ್ನು ಬಿಟ್ಟರೆ, ಎಂದೂ ಇಡೀ ದಿನ ತಮ್ಮ ಪಕ್ಕದ ಕ್ಷೇತ್ರದಲ್ಲಿ ಶಿವಕುಮಾರ್ ಪ್ರವಾಸ ಕೈಗೊಂಡಿರಲಿಲ್ಲ.

ನಾಳೆ ಬೆಳಗ್ಗೆಯಿಂದ ರಾತ್ರಿ 8 ಗಂಟೆವರೆಗೂ ಚನ್ನಪಟ್ಟಣ ಕ್ಷೇತ್ರದ ವ್ಯಾಪ್ತಿಯಲ್ಲಿನ ಎಲ್ಲಾ ದೇವಾಲಯಗಳಿಗೆ ತೆರಳಿ ಪೂಜೆ ಸಲ್ಲಿಸುವ ಮೂಲಕ ಹೊಸ ರಾಜಕೀಯ ತಂತ್ರ ರೂಪಿಸುತ್ತಿದ್ದಾರೆ.

ಪ್ರವಾಸ ಸಂದರ್ಭದಲ್ಲಿ ಒಂದು ಗಂಟೆ ಸಮಯ ಸ್ಥಳೀಯ ಅಧಿಕಾರಿಗಳ ಜೊತೆ ಪರಿಶೀಲನಾ ಸಭೆ ಹೊರತುಪಡಿಸಿ ಉಳಿದೆಲ್ಲಾ ಸಮಯ ಕ್ಷೇತ್ರದ 14 ದೇವಾಲಯಗಳಿಗೆ ಭೇಟಿ ನೀಡಲಿದ್ದಾರೆ.

ಈ ದೇವಸ್ಥಾನಗಳಿಗೆ ಭೇಟಿ ನೀಡುವುದರಿಂದ ಚನ್ನಪಟ್ಟಣ ಕ್ಷೇತ್ರದ ಬಹುತೇಕ ಗ್ರಾಮಗಳನ್ನು ಸಂಪರ್ಕಿಸಿದಂತಾಗುತ್ತದೆ. ಎಂಟಕ್ಕಿಂತ ಹೆಚ್ಚು ಬಾರಿ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಅಭ್ಯರ್ಥಿ ಇಲ್ಲವೇ ಸಿ.ಪಿ.ಯೋಗೇಶ್ವರ್ ಈ ಕ್ಷೇತ್ರವನ್ನು ವಿಧಾನಸಭೆಯಲ್ಲಿ ಪ್ರತಿನಿಧಿಸುತ್ತಿದ್ದಾರೆ. ಜೆಡಿಎಸ್ ಬಿಟ್ಟರೆ ಯೋಗೇಶ್ವರ್ ತಮ್ಮ ವೈಯಕ್ತಿಕ ವರ್ಚಸ್ಸಿನಿಂದ ಗೆಲುವು ಸಾಧಿಸಿದ್ದಾರೆ, ಯೋಗೇಶ್ವರ್ ಕೂಡಾ ಕಾಂಗ್ರೆಸ್ ಚಿನ್ಹೆಯಿಂದ ವಿಧಾನಸಭೆ ಪ್ರವೇಶಿಸಿದ್ದರು. ಇದನ್ನು ಹೊರತುಪಡಿಸಿದರೆ, ಕಾಂಗ್ರೆಸ್ ಇತ್ತೀಚಿನ ಎಲ್ಲಾ ಚುನಾವಣೆಯಲ್ಲಿ ಮೂರನೇ ಸ್ಥಾನಕ್ಕೆ ತಳ್ಳಲ್ಪಟ್ಟಿರುವ ಜೊತೆಗೆ ಠೇವಣಿಯನ್ನೂ ಕಳೆದುಕೊಂಡಿದೆ. ತಮ್ಮ ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಸೋಲಿನ ಸೇಡನ್ನು ಈ ಕ್ಷೇತ್ರದಲ್ಲೇ ತೀರಿಸಿಕೊಳ್ಳಬೇಕೆಂಬ ಹಠ ಕಾಂಗ್ರೆಸ್ ಅಧ್ಯಕ್ಷರಿಗೆ ಇದ್ದಂತಿದೆ. ಇದಕ್ಕಾಗಿ ಪಕ್ಷ ಸಂಘಟನೆ ದಿಕ್ಕಿನಲ್ಲಿ ದೇವಸ್ಥಾನಗಳಿಗೆ ಭೇಟಿ ನೀಡುವ ಮೂಲಕ ಮತದಾರರ ವಿಶ್ವಾಸ ಪಡೆಯಲು ಮುಂದಾಗಿದ್ದಾರೆ. ಕುಮಾರಸ್ವಾಮಿ ಕಳೆದ ಶನಿವಾರವಷ್ಟೇ ವಿಧಾನಸಭಾ ಸದಸ್ಯತ್ವಕ್ಕೆ ನೀಡಿದ ರಾಜೀನಾಮೆ ಅಂಗೀಕಾರವಾಗುತ್ತಿದ್ದಂತೆ ಶಿವಕುಮಾರ್ ತಮ್ಮ ಜಿಲ್ಲೆಯ ಈ ಕ್ಷೇತ್ರವನ್ನು ವಶಪಡಿಸಿಕೊಳ್ಳಲು ಹೊರಟಿದ್ದಾರೆ. ಈಗಾಗಲೇ ಜಿಲ್ಲೆಯ ಕನಕಪುರ, ರಾಮನಗರ, ಮಾಗಡಿ ಕಾಂಗ್ರೆಸ್ ವಶದಲ್ಲಿದ್ದರೆ, ಚನ್ನಪಟ್ಟಣ ಜೆಡಿಎಸ್ ತೆಕ್ಕೆಯಲ್ಲಿತ್ತು.

ನಕ್ಕರೆ ಅದೇ ಸ್ವರ್ಗ

ಮೇಷ್ಟ್ರು : ಮೋಡಗಳು ಏಕೆ ಕಪ್ಪಾಗಿರುತ್ತವೆ?
ಗುಂಡ : ಸ್ವಲ್ಪ ಹೊತ್ತು ನಾವೇ ಬಿಸಿಲಲ್ಲಿ ತಿರುಗಾಡಿದ್ರೆ ಕಪ್ಪಾಗುತ್ತೀವಿ. ಇನ್ನು ದಿನಾ ಬಿಸಿಲಲ್ಲೇ ತಿರುಗಾಡೋ ಮೋಡಗಳು ಕಪ್ಪಾಗಲ್ವಾ ಮೇಷ್ಟ್ರೆ!?

ಮೈಸೂರು ಮಿತ್ರ

ಬುಧವಾರ, 19 ಜೂನ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........


ಎಲ್ಲಾ ಇದೆಯೆಂದು ಮೆರೆಯಬೇಡ, ಮೇಲೆ ಇರೋನು
ಕೊಟ್ಟು ನೋಡ್ತಾನೆ, ಕಿತ್ಕೊಂಡು ನೋಡ್ತಾನೆ – ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಬಾಯಲೆಲ್ಲಾ ವೇದಾಂತ, ಮಾಡುವುದೆಲ್ಲಾ ರಾದ್ಧಾಂತ.

ನಿಮ್ಮ ಪತ್ರಗಳು

ನೇರ ದರ್ಶನ ಭಾಗ್ಯ ಕಲ್ಪಿಸಿ

ಮಾನ್ಯರೆ,




ಆಷಾಢ ಶುಕ್ರವಾರಗಳಂದು (ಮುಂದಿನ ತಿಂಗಳು ಜುಲೈ 12, 19, 26, ಆಗಸ್ಟ್ 2 ಮತ್ತು 9ನೇ ತಾರಿಖು ಆಷಾಢ ಶುಕ್ರವಾರಗಳಿವೆ) ಸಾವಿರಾರು ಭಕ್ತರು ಚಾಮುಂಡಿ ಬೆಟ್ಟಕ್ಕೆ ಮೆಟ್ಟಿಲುಗಳ ಮೂಲಕ ಆಯಾಸದಿಂದ ಹತ್ತಿ ನಂತರ ಸರದಿ ಸಾಲಿನಲ್ಲಿ ಕ್ಯೂ ನಿಂತು ಶ್ರೀ ಚಾಮುಂಡೇಶ್ವರಿ ತಾಯಿಯ ದರ್ಶನ ಮಾಡುತ್ತಾರೆ. 1101 ಮೆಟ್ಟಿಲುಗಳನ್ನು ಹತ್ತಿ ಮೊದಲೇ ಸುಸ್ತಾಗಿರುತ್ತಾರೆ. ಅದರಲ್ಲಿ ಬೇರೆ ಮತ್ತೆ ಮಳೆ, ಬಿಸಿಲು ಎನ್ನದೇ ಕಿಲೋಮೀಟರ್‌ಗಟ್ಟಲೆ ಕ್ಯೂ ನಿಂತುಕೊಂಡು ಶ್ರೀ ಚಾಮುಂಡೇಶ್ವರಿ ತಾಯಿ ದರ್ಶನ ಮಾಡುತ್ತಾರೆ. ಎಷ್ಟೋ ಭಕ್ತಾದಿಗಳು ಕಷ್ಟಪಟ್ಟು ಮೆಟ್ಟಿಲುಗಳನ್ನು ಹತ್ತಿ ಕಿಲೋಮೀಟರ್‌ಗಟ್ಟಲೆ ಜನ ಕ್ಯೂ ನಿಂತಿರುವುದನ್ನು ನೋಡಿ ನನ್ನ ಕೈಲಿ ಇಷ್ಟೊಂದು ಕ್ಯೂ ಬಳಸಿಕೊಂಡು ಒಳಕ್ಕೆ ಹೋಗೋಕೆ ಆಗಲ್ಲ ಕಣಪ್ಪ ಎಂದು ಹೊರಗಡೆಯೇ ನಿಂತುಕೊಂಡು ಕೈಮುಗಿದು ಹೊರಟು ಬಿಡುತ್ತಾರೆ. ಅಂತಹ ಭಕ್ತಾದಿಗಳಿಗೆ ನೇರ ದರ್ಶನ ವ್ಯವಸ್ಥೆ ಇದ್ದರೆ ಜಗನ್ಮಾತೆಯ ದರ್ಶನ ಮಾಡಿ ಪುನೀತರಾಗುತ್ತಾರೆ.

ತಿರುಪತಿಯಲ್ಲಿರುವಂತೆ ಚಾಮುಂಡಿಬೆಟ್ಟದಲ್ಲಿಯೂ ಕೂಡ ಮೆಟ್ಟಿಲುಗಳ ಮೂಲಕ ಹತ್ತಿ ಬರುವ ಭಕ್ತಾದಿಗಳಿಗೆ ನೇರ ದರ್ಶನ ವ್ಯವಸ್ಥೆ ಮಾಡಿದರೆ ಜಗನ್ಮಾತೆಯ ದರ್ಶನ ಮಾಡಿ ಪುನೀತರಾಗುತ್ತಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದಕ್ಕೆ ಸಂಬಂಧಪಟ್ಟ ಮಂತ್ರಿಗಳು, ಶಾಸಕರು, ಅಧಿಕಾರಿಗಳ ಜೊತೆ ಚರ್ಚಿಸಿ ಈ ಬಾರಿಯ ಆಷಾಢ ಶುಕ್ರವಾರದಿಂದಲೇ ಜಾರಿಗೆ ಬರುವಂತೆ ಭಕ್ತಾದಿಗಳಿಗೆ ಶ್ರೀ ಚಾಮುಂಡೇಶ್ವರಿ ತಾಯಿಯ ನೇರ ದರ್ಶನ ಭಾಗ್ಯವನ್ನು ಕರುಣಿಸಬೇಕೆಂದು ಲಕ್ಷಾಂತರ ಭಕ್ತಾದಿಗಳ ಪರವಾಗಿ ವಿಶೇಷ ಮನವಿ. ರಾಜ್ಯದ ಜನತೆಗೆ ಹಲವು ಭಾಗ್ಯಗಳನ್ನು ಕರುಣಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮೆಟ್ಟಿಲುಗಳ ಮೂಲಕ ಹತ್ತಿ ಬರುವ ಭಕ್ತಾದಿಗಳಿಗೆ ನೇರ ದರ್ಶನ ಭಾಗ್ಯವನ್ನು ಕರುಣಿಸಲಿ.

–ಅಹಲ್ಯ .ಸಿ.ನಾ. ಚಂದ್ರ, ಜನತಾ ನಗರ, ಮೈಸೂರು.

ರೈಲು ನಿಲ್ದಾಣದಲ್ಲಿ ಟ್ರೈನ್ ಚಾರ್ಜ್‌ಗಿಂತ ವಾಹನ ಶುಲ್ಕ ದುಬಾರಿ

ಮಾನ್ಯರೆ,




ರೈಲಿನಲ್ಲಿ ಬೆಳಗ್ಗೆ ಮೈಸೂರಿನಿಂದ ಬೆಂಗಳೂರಿಗೆ ಹೋಗಿ ಬರಲು ಬಹುತೇಕ ಜನರು ರೈಲು ನಿಲ್ದಾಣದ ಬಳಿ ತಮ್ಮ ದ್ವಿಚಕ್ರ ವಾಹನಗಳನ್ನು ಪಾರ್ಕಿಂಗ್ ಮಾಡಿಯೇ ಹೋಗಬೇಕು. ಆದರೆ ಇಲ್ಲಿಯ ವಾಹನಗಳ ಪಾರ್ಕಿಂಗ್ ಶುಲ್ಕ ತೀರ ದುಬಾರಿಯಾಗಿದೆ, ಬೆಳಗ್ಗೆ ಮೈಸೂರಿನಿಂದ ಬೆಂಗಳೂರಿಗೆ ಹೋಗಿ ಸಂಜೆ ಮೈಸೂರಿಗೆ ಬಂದರೆ ಹೆಲ್ಮೆಟ್ ಮತ್ತು ದ್ವಿಚಕ್ರ ವಾಹನ ಸೇರಿ 50 ರೂಪಾಯಿಗಳನ್ನು ಪಾರ್ಕಿಂಗ್ ಶುಲ್ಕವಾಗಿ ವಸೂಲಿ ಮಾಡುತ್ತಿದ್ದಾರೆ. ಇದು ಒಂದು ರೀತಿಯಲ್ಲಿ ಹಗಲು ದರೋಡೆಯಲ್ಲವೇ? ಮೈಸೂರಿನಿಂದ ಬೆಂಗಳೂರಿಗೆ ಕೆಲವು ಷಟಲ್ ಟ್ರೈನ್‌ನಲ್ಲಿ 40 ರೂಪಾಯಿ ಟ್ರೈನ್ ಚಾರ್ಜ್ ಇದೆ. ಟ್ರೈನ್ ಚಾರ್ಜ್‌ಗಿಂತಲೂ ಪಾರ್ಕಿಂಗ್ ಶುಲ್ಕವೇ ಹೆಚ್ಚಾದರೆ ಬಡ– ಬಗ್ಗರ ಗತಿಯೇನು?

ಈ ದುಬಾರಿ ಪಾರ್ಕಿಂಗ್ ಶುಲ್ಕ ವಸೂಲಿ ಬಗ್ಗೆ ಮಾಜಿ ಸಂಸದ ಪ್ರತಾಪ್ ಸಿಂಹ ಅವರಲ್ಲೂ ಮನವಿ ಮಾಡಿದ್ದೆ. ಹಾಲಿ ಸಂಸದ ಯದುವೀರ ಕೃಷ್ಣರಾಜ ದತ್ತ ಚಾಮರಾಜ ಒಡೆಯರ್ ಅವರು ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಲಿ.

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು

ಲಕ್ಷ ವೃಕ್ಷ ಅಭಿಯಾನದ ನೇತಾರ ಹೆಚ್.ವಿ.ರಾಜೀವ್!


ಮಾನ್ಯರೇ,



ಮನುಷ್ಯನಾಗಿ ಹುಟ್ಟಿದ ಮೇಲೆ ಮಾನವ ಕುಲ ನೆನಪಿಡುವಂತಹ ಸಾರ್ಥಕ ಕೆಲಸಗಳನ್ನು ಮಾಡಬೇಕೆಂಬ ಉದ್ದೇಶ ಮತ್ತು ಮುಂದಿನ ಪೀಳಿಗೆಗೆ ಮಾದರಿಯಾಗುವಂತಹ ಗುರಿಯನ್ನು ಹೊಂದಿ, ಹೆಚ್.ವಿ.ರಾಜೀವ್ ಅವರು ತಮ್ಮ ಬಳಗದೊಂದಿಗೆ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಟ್ರಸ್ಟ್‌ನ ಸಹಯೋಗ ಮತ್ತು ಸುತ್ತೂರು ಶ್ರೀಗಳ ಮಾರ್ಗದರ್ಶನದೊಂದಿಗೆ ಕಳೆದ ಐದು ವರ್ಷಗಳಿಂದ ಲಕ್ಷ ವೃಕ್ಷ ಅಭಿಯಾನವನ್ನು ನಡೆಸಿಕೊಂಡು ಬಂದಿದ್ದಾರೆ. ಪ್ರತಿ ವರ್ಷ 20,000 ಸಸಿಗಳನ್ನು ಸಾರ್ವಜನಿಕರಿಗೆ ಮತ್ತು ಸಂಘ ಸಂಸ್ಥೆಗಳಿಗೆ ಉಚಿತವಾಗಿ ನೀಡಿ, ಅದನ್ನು ನೆಟ್ಟು ಪೋಷಿಸುವುದನ್ನು ಮಾಡಿರುತ್ತಾರೆ. ಈಗಾಗಲೇ ಒಂದು ಲಕ್ಷ ಸಸಿಗಳನ್ನು ನೆಡಲಾಗಿದೆ. ಅವುಗಳು ಈಗ ಎಲ್ಲೆಡೆ ತಂಪನ್ನು ನೀಡುತ್ತಿವೆ. ರಾಜೀವ್ ಅವರು ತಾವೇ ಸಸ್ಯಧಾಮವನ್ನು ಆರಂಭಿಸಿ, ಲಕ್ಷಾಂತರ ಔಷಧಿ ಸಸ್ಯಗಳನ್ನು ಮತ್ತು ಗಿಡಗಳನ್ನು ಇಟ್ಟಿರುತ್ತಾರೆ ಹಾಗೂ ಅವುಗಳನ್ನು ಆಸಕ್ತರಿಗೆ ಉಚಿತವಾಗಿ ವಿತರಿಸುತ್ತಿದ್ದಾರೆ. ಅಲ್ಲದೇ, ಲಕ್ಷ ವೃಕ್ಷ ಅಭಿಯಾನ ಕಾರ್ಯಕ್ರಮದಲ್ಲಿ ಪರಿಸರ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಹಲವಾರು ಗಣ್ಯರನ್ನು, ಸಾಧಕರನ್ನು ಸನ್ಮಾನಿಸಿರುತ್ತಾರೆ. ಜನಪ್ರಿಯ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರು ಹೆಚ್.ವಿ. ರಾಜೀವ್ ಹಾಗೂ ಅವರ ತಂಡದ ಪರಿಸರ ಸೇವೆಯನ್ನು ಮುಕ್ತಕಂಠದಿಂದ ಪ್ರಶಂಸಿಸಿದ್ದಾರೆ.

ಹೆಚ್.ವಿ.ರಾಜೀವ್ ಅವರು ಮಾಡುತ್ತಿರುವ ಪರಿಸರ ಸೇವೆ ಲಕ್ಷ ವೃಕ್ಷ ಅಭಿಯಾನ ಕಾರ್ಯಕ್ರಮ ಎಲ್ಲರಿಗೂ ಮಾದರಿಯಾಗಿದೆ. ಮುಂದಿನ ಪೀಳಿಗೆಗೆ ಈ ಕಾರ್ಯಕ್ರಮ ಆದರ್ಶವಾಗಿದೆ. ಪರಿಸರ ಪ್ರೇಮಿ ಹೆಚ್.ವಿ.ರಾಜೀವ್ ಅವರಿಗೆ ಹಾಗೂ ಅವರ ತಂಡದವರಿಗೆ ಅಭಿನಂದನೆಗಳು.

– ಅಮೋಘ ವರ್ಷ ನಾಗರಾಜ, ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು, ಅರವಿಂದನಗರ, ಮೈಸೂರು



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಯೋಗಾಭ್ಯಾಸದ ಪ್ರಾಚೀನತೆ

ಭಾರತೀಯ ಆಧ್ಯಾತ್ಮಿಕ ಜೀವನದ ಅವಿಭಾಜ್ಯ ಅಂಗ ಯೋಗ. ಅನಾದಿಯೆಂದು ಪರಿಗಣಿತವಾಗಿರುವ ವೇದಗಳಲ್ಲೇ ಯೋಗ ಶಬ್ದ ಪ್ರಯೋಗವಿದೆ.

ವೇದಾಂತ ವಿಜ್ಞಾನ ಸುನಿಶ್ಚಿತಾರ್ಥಾಃ
ಸಂನ್ಯಾಸಯೋಗಾದ್ ಯತಯಃ ಶುದ್ಧಸತ್ತ್ವಾಃ।
ತೇ ಬ್ರಹ್ಮಲೋಕೇ ತು ಪರಾಂತಕಾಲೇ
ಪರಾಮೃತಾತ್ ಪರಿಮುಚ್ಯಂತಿ ಸರ್ವೇ॥

ಎಂಬ ಮಂತ್ರದಲ್ಲಿ ಸಂನ್ಯಾಸಯೋಗ ಎಂಬ ಶಬ್ದವಿದೆ. ಮುಂದೆ ಉಪನಿಷತ್ತುಗಳಲ್ಲಿ ಯೋಗದ ಸ್ವರೂಪವನ್ನೂ, ಪ್ರಯೋಜನವನ್ನೂ ಕುರಿತು ಗಂಭೀರ ವಿವೇಚನೆ ನಡೆದಿರುವುದನ್ನು ಕಾಣುತ್ತೇವೆ. ಕಠೋಪನಿಷತ್ತಿನಲ್ಲಿ ಬರುವ ಒಂದು ಮಂತ್ರವನ್ನಿಲ್ಲಿ ಉಲ್ಲೇಖಿಸಬಹುದು.

ತಾಂ ಯೋಗಮಿತಿ ಮನ್ಯಂತೇ ಸ್ಥಿರಾಮಿಂದ್ರಿಯಧಾರಣಾಮ್।
ಅಪ್ರಮತ್ತಸ್ತದಾ ಭವತಿ ಯೋಗೋ ಹಿ ಪ್ರಭಾಪ್ಯಯೌ॥
(2–3–11)

ಅಂತಹ ಸ್ಥಿರವಾದ ಇಂದ್ರಿಯಧಾರಣವನ್ನೇ ಯೋಗವೆಂದು ಕರೆಯುತ್ತಾರೆ. ಆ ಯೋಗದಲ್ಲಿದ್ದಾಗ ಸಾಧಕನು ಅಪ್ರಮತ್ತನಾಗಿರುತ್ತಾನೆ ಎಂದರೆ ಪ್ರಮಾದವನ್ನು ಮಾಡನು. ಏಕೆಂದರೆ ಯೋಗವೇ ಪ್ರಭವವನ್ನೂ ಅಪ್ಯಯವನ್ನೂ ಹೊಂದಿರುತ್ತದೆ. ಅದಕ್ಕೆ ಆರಂಭವೂ ಕೊನೆಯೂ ಇರುವುದರಿಂದ ಅದರಲ್ಲಿ ಪ್ರಮಾದವನ್ನು, ತಪ್ಪನ್ನು ಮಾಡಬಾರದು ಎಂದು ಉಪನಿಷತ್ತು ತಿಳಿಸಿದೆ.

ಶ್ವೇತಾಶ್ವತರೋಪನಿಷತ್ತಿನ ಎರಡನೆಯ ಅಧ್ಯಾಯದಲ್ಲಿ ಯೋಗದ ಅಭ್ಯಾಸಕ್ಕೆ ಬೇಕಾಗುವ ನಿರ್ಮಲ ಪ್ರದೇಶ, ಸಿದ್ಧತೆ, ಯೋಗದಲ್ಲಿರುವಾಗ ಶರೀರದ ಸ್ಥಿತಿ, ಯೋಗಸಿದ್ಧಿಯನ್ನು ಹೊಂದಿರುವವನು ಪಡೆಯುವ ಮುನ್ನೋಟ ಇವುಗಳನ್ನೆಲ್ಲ ಹೇಳಲಾಗಿದೆ.

ತ್ರಿರುನ್ನತಂ ಸ್ಥಾಪ್ಯ ಸಮಂ ಶರೀರಂ
ಹೃದೀಂದ್ರಿಯಾಣಿ ಮನಸಾ ಸಂನಿವೇಶ್ಯ।
ಬ್ರಹ್ಮೋಡುಪೇನ ಪ್ರತರೇತ್ ವಿದ್ವಾನ್
ಸ್ರೋತಾಂಸಿ ಸರ್ವಾಣಿ ಭಯಾವಹಾನಿ ॥ (2–8)

ಸಾಧಕನು (ತಲೆ, ಕುತ್ತಿಗೆ, ಎದೆ) ಎಂಬ ಮೂರು ಶರೀರದ ಭಾಗಗಳನ್ನು ನೇರವಾಗಿ ನಿಲ್ಲಿಸಿಕೊಂಡು, ಮನಸ್ಸೆಂಬ ಕರಣದಿಂದ ಇಂದ್ರಿಯಗಳನ್ನು ಹೃದಯದಲ್ಲಿ ಸ್ಥಿರಗೊಳಿಸಿ, ಭಯಂಕರವಾದ ಎಲ್ಲಾ ಪ್ರವಾಹಗಳನ್ನು ಬ್ರಹ್ಮವಾಚಕವಾದ ಓಂಕಾರವೆಂಬ ತೆಪ್ಪದಿಂದ ದಾಟಿ ಹೋಗಬೇಕು.

ಇಲ್ಲಿರುವ ರೂಪಕಾಲಂಕಾರದ ತಾತ್ಪರ್ಯವನ್ನು ತಿಳಿದುಕೊಳ್ಳಬೇಕು. ಶಬ್ದ, ಸ್ಪರ್ಶ, ದೃಶ್ಯ, ರೂಪ, ರಸ ಎಂಬ ಇಂದ್ರಿಯ ವಿಷಯಗಳು ಆಧ್ಯಾತ್ಮಿಕ ಸಾಧಕನಿಗೆ ಭಯಂಕರ ಪ್ರವಾಹಗಳು. ಅವುಗಳನ್ನು ದಾಟಲು ಇರುವ ದೋಣಿ ಓಂಕಾರ. ಯೋಗ ಸಾಧನೆಗೆ ಶರೀರದ ಸುಸ್ಥಿತಿ ಆವಶ್ಯಕ. ಅದನ್ನು ಹೇಗೆ ಅಣಿಗೊಳಿಸಿಕೊಳ್ಳಬೇಕೆಂಬುದನ್ನು ಇಲ್ಲಿ ಉಪನಿಷತ್ತು ತಿಳಿಸಿದೆ. ಇದನ್ನೇ ಭಗವದ್ಗೀತೆಯ ಆರನೆಯ ಅಧ್ಯಾಯದಲ್ಲಿ ವಿವರಿಸಲಾಗಿದೆ. ಉಪನಿಷತ್ತಿನ ಮುಂದಿನ ಮಂತ್ರವು ಯೋಗಾಭ್ಯಾಸದ ಸ್ಥಳ ಹೇಗಿರಬೇಕು ಎಂದು ತಿಳಿಸುತ್ತದೆ.

ಸಮೇ ಶುಚೌ ಶರ್ಕರಾವಹ್ನಿವಾಲುಕಾ–
ವಿವರ್ಜಿತೇ ಶಬ್ದಜಲಾಶ್ರಯಾದಿಭಿಃ।
ಮನೋಽನುಕೂಲೇ ನತು ಚಕ್ಷುಪೀಡನೇ
ಗುಹಾನಿವಾತಾಶ್ರಯಣೇ ಪ್ರಯೋಜಯೇತ್ ॥ (2–10)

ಹಳ್ಳ ದಿನ್ನೆಗಳಿಲ್ಲದೆ ಸಮವಾದ, ಶುಚಿಯಾದ, ಕಲ್ಲಿನ ಚೂರು, ಬೆಂಕಿ, ಧೂಳು, ಶಬ್ದ, ನೀರು ಇತ್ಯಾದಿಗಳಿಲ್ಲದ, ಮನಸ್ಸಿಗೆ ಪ್ರಸನ್ನವಾಗಿರುವ, ಕಣ್ಣಿಗೆ ಬಾಧೆಯನ್ನು ಹುಟ್ಟಿಸದ, ಗಾಳಿ ಜೋರಾಗಿ ಬೀಸದ ಗುಹೆ ಮುಂತಾದ ಸ್ಥಳದಲ್ಲಿ ಯೋಗಾಭ್ಯಾಸವನ್ನು ಮಾಡಬೇಕು.

ಮಹಾಭಾರತದ ಮಧ್ಯವನ್ನಲಂಕರಿಸಿರುವುದೂ ಉಪನಿಷತ್ತುಗಳ ಸಾರವಾಗಿರುವುದೂ ಆದ ಭಗವದ್ಗೀತೆ ಯೋಗದ ಪ್ರಾಚೀನತೆಗೆ ಇನ್ನೊಂದು ಸಾಕ್ಷಿ. ಇದರ ನಾಲ್ಕನೆಯ ಅಧ್ಯಾಯದ ಪ್ರಾರಂಭದಲ್ಲಿ ಶ್ರೀಕೃಷ್ಣನು ಹೇಳಿದ್ದಾನೆ–

ಇಮಂ ವಿವಸ್ವತೇ ಯೋಗಂ ಪ್ರೋಕ್ತವಾನ್ ಅಹಮವ್ಯಯಮ್।
ವಿವಸ್ವಾನ್ ಮನವೇ ಪ್ರಾಹ ಮನುರಿಕ್ಷ್ವಾಕವೇಽಬ್ರವೀತ್॥



(ಈ ಶಾಶ್ವತವಾದ ಯೋಗವನ್ನು ನಾನು ವಿವಸ್ವಂತನಿಗೆ ಕಲಿಸಿದೆನು. ವಿವಸ್ವಂತನು ಮನುವಿಗೂ, ಮನುವು ಇಕ್ಷ್ವಾಕುವಿಗೂ ಕಲಿಸಿದನು).

ಇದರಿಂದ ಕೃಷ್ಣಾವತಾರಕ್ಕೂ ಬಹು ಹಿಂದೆ ಯೋಗ ವಿತ್ತೆಂಬುದು ಸ್ಪಷ್ಟವಾಗುತ್ತದೆ. ಕೃಷ್ಣನನ್ನು ಭಗವದ್ಗೀತೆಯಲ್ಲಿ ಯೋಗೇಶ್ವರನೆಂದು ಕರೆದಿದ್ದಾರೆ. ಭಗವದ್ಗೀತೆಯ ಪ್ರತಿಯೊಂದು ಅಧ್ಯಾಯಕ್ಕೂ ಯೋಗ ಎಂಬ ಹೆಸರಿದೆ. ಅರ್ಜುನ ವಿಷಾದ ಯೋಗ, ಸಾಂಖ್ಯಯೋಗ, ಕರ್ಮಯೋಗ, ಭಕ್ತಿಯೋಗ ಇತ್ಯಾದಿ.

ಪತಂಜಲಿಯು ರಚಿಸಿದ ಯೋಗಸೂತ್ರಗಳೂ ಇಂದಿಗೆ ಎರಡು ಸಾವಿರ ವರ್ಷಗಳಿಗೂ ಹೆಚ್ಚು ಹಿಂದಿನವು. ವ್ಯಾಕರಣ ಭಾಷ್ಯವನ್ನು ರಚಿಸಿದ ಪತಂಜಲಿ, ಯೋಗಸೂತ್ರಗಳನ್ನು ರಚಿಸಿದ ಪತಂಜಲಿಗಿಂತ ಭಿನ್ನನೋ ಅಥವಾ ಒಬ್ಬ ಋಷಿಯೇ ಎರಡು ಗ್ರಂಥಗಳನ್ನೂ ರಚಿಸಿದನೋ ನಮಗೆ ಖಚಿತವಾಗಿ ತಿಳಿಯದು. ಏನೇ ಆದರೂ ಯೋಗ ಸೂತ್ರಗಳು ಬ್ರಹ್ಮ ಸೂತ್ರಗಳಿಗಿಂತ ಪ್ರಾಚೀನ. ಏಕೆಂದರೆ ಬ್ರಹ್ಮಸೂತ್ರಗಳಲ್ಲಿ ಯೋಗ ದರ್ಶನದ ಖಂಡನೆಯಿದೆ. ಬ್ರಹ್ಮಸೂತ್ರಗಳು ಕ್ರಿ.ಪೂ. ಕಾಲದಲ್ಲಿ ಹುಟ್ಟಿದ ಬಗೆಗೆ ವಿದ್ವಾಂಸರ ಒಮ್ಮತವಿದೆ. ಆದ್ದರಿಂದ ಯೋಗ ಸೂತ್ರಗಳು ಕ್ರಿ.ಪೂ. ಎರಡನೆಯ ಶತಮಾನದಲ್ಲಿ ರಚಿತವಾಗಿರಬೇಕು.

ಪಾತಂಜಲ ಯೋಗ ಸೂತ್ರಗಳಿಗೆ ವ್ಯಾಸ ಎಂಬ ಹೆಸರಿನ ಯೋಗಿಯು ರಚಿಸಿರುವ ಭಾಷ್ಯವಿದೆ. ಇದರಲ್ಲಿರುವ ಅನೇಕ ಪ್ರಾಚೀನ ಉದ್ಧರಣಗಳು ಬೇರೆಲ್ಲಿಯೂ ಕಂಡುಬರುವುದಿಲ್ಲ. ಇದು ತುಂಬ ಹಳೆಯ ಕಾಲದ್ದಿರಬೇಕೆಂಬುದಕ್ಕೆ ಸೂಚಕವಾಗಿದೆ. ಇದರ ಭಾಷೆಯೂ ತುಂಬ ಪ್ರೌಢವಾಗಿದೆ. ಈ ಭಾಷ್ಯವನ್ನು ವಿವರಿಸಲು ಕ್ರಿ.ಶ. ಒಂಬತ್ತನೆಯ ಅಥವಾ ಹತ್ತನೆಯ ಶತಮಾನದಲ್ಲಿದ್ದ ವಾಚಸ್ಪತಿ ಮಿಶ್ರನು ಯೋಗ ವೈಶಾರದೀ ಎಂಬ ಪಾಂಡಿತ್ಯಪೂರ್ಣ ವ್ಯಾಖ್ಯಾನವನ್ನು ಬರೆದಿದ್ದಾನೆ. ಧಾರಾ ನಗರವನ್ನು ಕ್ರಿ.ಶ. ಹನ್ನೊಂದನೆಯ ಶತಮಾನದಲ್ಲಿ ಆಳುತ್ತಿದ್ದ ಶ್ರೀ ಭೋಜರಾಜನು ಪತಂಜಲಿಯ ಯೋಗಸೂತ್ರಗಳಿಗೆ ವೃತ್ತಿಯನ್ನು ರಚಿಸಿದ್ದಾನೆ. ಸುಮಾರು ಹದಿನೈದನೆಯ ಶತಮಾನದಲ್ಲಿದ್ದ ವಿಜ್ಞಾನ ಭಿಕ್ಷುವು ಯೋಗಸಾರ ಸಂಗ್ರಹ, ಯೋಗವಾರ್ತಿಕ ಎಂಬ ಗ್ರಂಥಗಳನ್ನು ರಚಿಸಿ ಲೋಕ ವಿಖ್ಯಾತನಾಗಿದ್ದಾನೆ.

ಯೋಗದರ್ಶನವು ಸಾಂಖ್ಯದರ್ಶನದ ಸಮಾನತಂತ್ರವಾಗಿದೆ. ಹಾಗೆಂದರೆ ಈ ಎರಡು ದರ್ಶನಗಳಲ್ಲಿ ಸಮಾನಾಂಶಗಳು ಅನೇಕವಿವೆ. ಸಾಂಖ್ಯ ಮತ್ತು ಯೋಗ ಎಂಬವು ಎರಡು ಬೇರೆ ಬೇರೆ ದರ್ಶನಗಳಲ್ಲ, ಅವು ಒಂದೇ ದರ್ಶನದ ಎರಡು ಮಗ್ಗುಲಗಳು ಎಂಬುದನ್ನು ಭಗವದ್ಗೀತೆಯು ಪ್ರತಿಪಾದಿಸಿದೆ.

ಸಾಂಖ್ಯಯೋಗೌಪೃಥಗ್ ಬಾಲಾಃ ಪ್ರವದಂತಿ ನ ಪಂಡಿತಾಃ।
ಏಕಮಪ್ಯಾಸ್ಥಿತಃ ಸಮ್ಯಗುಭಯೋರ್ವಿಂದತೆ ಫಲಮ್ ॥
ಯತ್ ಸಾಂಖ್ಯೈ : ಪ್ರಾಪ್ಯತೇ ಸ್ಥಾನಂ ತದ್ಯೋಗೈರಪಿ ಗಮ್ಯತೇ।
ಏಕಂ ಸಾಂಖ್ಯಂ ಚ ಯೋಗಂ ಚ ಯಃ ಪಶ್ಯತಿ ಸಪಶ್ಯತಿ ॥
(5–4–5)

(ಸಾಂಖ್ಯ ಮತ್ತು ಯೋಗ ಬೇರೆ ಎಂದು ಅಜ್ಞರು ಹೇಳುತ್ತಾರೆ. ಪಂಡಿತರು ಹಾಗೆ ಹೇಳುವುದಿಲ್ಲ. ಸಾಂಖ್ಯ–ಯೋಗಗಳಲ್ಲಿ ಯಾವುದಾದರೊಂದನ್ನು ದೃಢವಾಗಿ ಆಶ್ರಯಿಸಿದವನು ಎರಡು ದರ್ಶನಗಳ ಫಲವನ್ನು ಪಡೆಯುವನು. ಸಾಂಖ್ಯರು ತಲುಪುವ ಗುರಿಯನ್ನೇ ಯೋಗಿಗಳೂ ಸೇರುವರು. ಆದ್ದರಿಂದ ಸಾಂಖ್ಯವೂ ಯೋಗವೂ ಒಂದೇ ಎಂದು ಕಂಡುಕೊಂಡವನೇ ಸತ್ಯವನ್ನು ನೋಡಿದ್ದಾನೆ.)

ಸಾಂಖ್ಯ ದರ್ಶನದಲ್ಲಿ ಪ್ರಕೃತಿ, ಪುರುಷ ಎಂಬ ಎರಡು ನಿತ್ಯತತ್ತ್ವಗಳನ್ನು ಒಪ್ಪಿಕೊಂಡಿದ್ದಾರೆ. ಯೋಗ ದರ್ಶನವು ಇವೆರಡರ ಜೊತೆಗೆ ಈಶ್ವರ (ದೇವರು) ಎಂಬ ಮೂರನೆಯ ತತ್ತ್ವವನ್ನು ಒಪ್ಪಿಕೊಂಡಿದೆ. ಈಶ್ವರನ ಅಸ್ತಿತ್ವವನ್ನು ಸಾಧಿಸಲು ಯೋಗದರ್ಶನವು ಯತ್ನಿಸಿಲ್ಲ. ಆಗಮಪ್ರಾಮಾಣ್ಯವು ಒಪ್ಪಿಕೊಳ್ಳಲ್ಪಟ್ಟಿರುವುದರಿಂದ ಅದೇ ಪ್ರಮಾಣವೆಂದು ಭಾವನೆ ಇರಬಹುದು. ಈಶ್ವರಪ್ರಣಿಧಾನವು ಮೋಕ್ಷದ ಅಥವಾ ಕೈವಲ್ಯದ ಮುಖ್ಯ ಸಾಧನವೆಂಬುದು ಯೋಗದರ್ಶನದ ಮುಖ್ಯ ತತ್ತ್ವವಾಗಿದೆ. ಈಶ್ವರಪ್ರಣಿಧಾನ ಎಂದರೆ ಸರ್ವಜ್ಞನಾದ ಈಶ್ವರನಿಗೆ ಶರಣಾಗತನಾಗುವುದು. ಇದೇ ಭಕ್ತಿ ಯೋಗದ ತಿರುಳು. ಇದನ್ನೇ ರಾಮಾನುಜ ದರ್ಶನದಲ್ಲಿ 'ಪ್ರಪತ್ತಿ' ಎಂದು ಕರೆಯುತ್ತಾರೆ. ಹೀಗೆ ಯೋಗ ಮತ್ತು ವೇದಾಂತಗಳ ಸಮನ್ವಯವೂ ಆಗುತ್ತದೆ.

ಸಾಂಖ್ಯ ದರ್ಶನವು ಅತ್ಯಂತ ಪ್ರಾಚೀನ. ಬೌದ್ಧತ್ರಿಪಿಟಕಗಳಲ್ಲಿ ಸಾಂಖ್ಯರು ಗೌತಮಬುದ್ಧನೊಡನೆ ವಾದವನ್ನು ಮಾಡಿದ ಪ್ರಸ್ತಾಪ ದಾಖಲಾಗಿದೆ. ಸಾಂಖ್ಯಯೋಗಗಳು ಒಂದೇ ನಾಣ್ಯದ ಎರಡು ಮುಖಗಳಾದ್ದರಿಂದ ಯೋಗದ ಪ್ರಾಚೀನತ್ವವು ಸಿದ್ಧವಾಗುತ್ತದೆ.

ಕಾಳಿದಾಸನ ಕಾಲದಲ್ಲಿ ಯೋಗದ ಮಹಿಮೆಯ ಅರಿವು ಇದ್ದಿತು. ರಘುವಂಶದ ರಾಜರ ಬಗೆಗೆ ಹೇಳುತ್ತಾ ಅವನೆನ್ನುತ್ತಾನೆ–

ಶೈಶವೇಽಭ್ಯಸ್ತವಿದ್ಯಾನಾಂ ಯೌವನೇ ವಿಷಯೈಷಿಣಾಮ್ ।
ವಾರ್ಧಕೇ ಮುನಿವೃತ್ತೀನಾಂ ಯೋಗೇನಾಂತೇ ತನುತ್ಯಜಾಮ್ ॥

ರಘುವಂಶದ ರಾಜರು ತಮ್ಮ ಬಾಲ್ಯದಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. ಯೌವನದಲ್ಲಿ ವಿಷಯ ಸುಖಗಳನ್ನು ಅನುಭವಿಸಲು ಗೃಹಸ್ಥರಾಗುತ್ತಿದ್ದರು. ವೃದ್ಧರಾದಾಗ ವಾನಪ್ರಸ್ಥರಾಗಿ ಮುನಿಗಳಂತೆ ಜೀವಿಸುತ್ತಿದ್ದರು. ಜೀವಿತದ ಕೊನೆಯಲ್ಲಿ ಕೊನೆಗಾಲದಲ್ಲಿ ಯೋಗದಿಂದ ಮನಸ್ಸನ್ನು ಪರಮಾತ್ಮನಲ್ಲಿ ನಿಲ್ಲಿಸಿ ಶರೀರ ತ್ಯಾಗವನ್ನು ಮಾಡುತ್ತಿದ್ದರು ಎಂದು ಇದರ ತಾತ್ಪರ್ಯ. ಇದನ್ನು ಕಾಳಿದಾಸನು ರಘುವಂಶದ ಎಂಟನೆಯ ಸರ್ಗದಲ್ಲಿ ರಘು ಮಹಾರಾಜನು ತನ್ನ ಮಗನಿಗೆ ರಾಜ್ಯ ಭಾರವನ್ನು ವಹಿಸಿಕೊಟ್ಟು ತಾನು ಯೋಗಸಾಧನೆಯಲ್ಲಿ ತೊಡಗಿದನೆಂದು ವರ್ಣಿಸುವಾಗ ವಿವರಿಸಿದ್ದಾನೆ. ಅದರಲ್ಲಿ ಒಂದು ಶ್ಲೋಕ–

ನ ನವಃ ಪ್ರಭುರಾಫಲೋದಯಾತ್
ಸ್ಥಿರಕರ್ಮಾ ವಿರರಾಮ ಕರ್ಮಣಃ।
ನ ಚ ಯೋಗವಿಧೇರ್ನವೇತರಃ
ಸ್ಥಿರಧೀರಾ ಪರಮಾತ್ಮದರ್ಶನಾತ್ ॥

(ಹೊಸರಾಜ ಅಜನು ಯಾವುದೇ ಕೆಲಸವನ್ನಾರಂಭಿಸಿದರೂ ಅದರ ಫಲ ದೊರಕುವವರೆಗೂ ವಿರಮಿಸುತ್ತಿರಲಿಲ್ಲ. ಹಳಬನಾಗಿದ್ದ (ವೃದ್ಧನಾಗಿದ್ದ) ರಘು ಸ್ಥಿರ ಬುದ್ಧಿಯನ್ನು ಹೊಂದಿ ಪರಮಾತ್ಮ ದರ್ಶನವಾಗುವವರೆಗೂ ಯೋಗಾಭ್ಯಾಸದಲ್ಲಿ ವಿರಾಮವನ್ನು ತೆಗೆದುಕೊಳ್ಳಲಿಲ್ಲ.)

ಇದರಿಂದ ಯೋಗವಿಧಿಯ ಪರಮ ಪ್ರಯೋಜನ ಪರಮಾತ್ಮ ದರ್ಶನವೆಂಬುದು ಸಿದ್ಧವಾಗುತ್ತದೆ. ಹಠಯೋಗ, ರಾಜಯೋಗ, ಭಕ್ತಿಯೋಗ ಇತ್ಯಾದಿ ಯಾವುದೇ ಯೋಗವಾಗಲಿ, ಅದರ ಮುಖ್ಯ ಗುರಿ ಪರಮಾತ್ಮ ದರ್ಶನ. ಅದೇ ಕೈವಲ್ಯಪ್ರಾಪ್ತಿ. ಪ್ರಾಚೀನ ಕಾಲದಿಂದ ಯೋಗಿಗಳು ಇದಕ್ಕಾಗಿ ಸಮಗ್ರ ಬದುಕನ್ನು ಮುಡುಪಾಗಿಟ್ಟರು. ಅದನ್ನು ಇಂದೂ ಹಾಗೇ ಸಾಧಿಸುತ್ತಿರುವವರಿರಬಹುದು. ಜಗತ್ತಿನಲ್ಲಿ ಯಾವ ಸಿದ್ಧಾಂತವೂ ಯಾವ ಚಿಂತನೆಯೂ ಯಾವ ಪ್ರಕ್ರಿಯೆಯೂ ಹೊಸತಲ್ಲ. ಹಿಂದೆ ಯಾರೋ ಮಾಡಿದ್ದ ಸಿದ್ಧಾಂತ, ಚಿಂತನೆ, ಪ್ರಕ್ರಿಯೆ ಲಿಖಿತರೂಪದಲ್ಲಿ ದಾಖಲಾಗದೆ ಹೋಗಿರಬಹುದು. ಅದನ್ನು ನಾವು ಮಾಡಿ ಹೊಸತೆಂದು ಹೇಳಿಕೊಳ್ಳುತ್ತೇವೆ ಅಷ್ಟೆ. ಡಿ.ವಿ.ಜಿ. ಹೇಳುವ ಹಾಗೆ–

ಹಳೆ ಸೂರ್ಯ ಹಳೆ ಚಂದ್ರ ಹಳೆ ಭೂಮಿ ಹಳೆ ನೀರು
ಹಳೆ ಹಿಮಾಚಲ ಗಂಗೆ ಹಳೆ ವಂಶಚರಿತೆ ।
ಹಳೆಯವಿವು ನೀನಿದರೊಳಾಗುದನು ಕಳೆದೀಯೊ?
ಹಳದು ಹೊಸತರೊಳಿರದೆ ಮಂಕುತಿಮ್ಮ ॥

ಹೀಗಿರುವಾಗ ಯೋಗದ ಪ್ರಾಚೀನತೆ ಪ್ರಶ್ನಾತೀತ.

'ನಮ್ಮ ಭೂಮಿ–ನಮ್ಮ ಭವಿಷ್ಯ'ದೊಂದಿಗೆ ಪರಿಸರ ದಿನಾಚರಣೆ

ಪ್ರತಿಯೊಬ್ಬರು ಭೂಮಿಯನ್ನು ರಕ್ಷಿಸಬೇಕಾಗಿದೆ; ಬೊಷಪ್ ಬರ್ನಾಡ್ ಮೊರಾಸ್

ಮೈಸೂರು, ಜೂ.18(ಜಿಎ)–ಮೈಸೂರಿನ ಬನ್ನಿಮಂಟಪದಲ್ಲಿರುವ ದಿ ಆರ್ಗನೈಜೇಷನ್ ಫಾರ್ ದ ಡೆವಲಪ್‌ಮೆಂಟ್ ಆಫ್ ಪೀಪಲ್ (ಓಡಿಪಿ)ಮತ್ತು ಭೂಸಿರಿ ಡೆವಲಪ್‌ಮೆಂಟ್ ಫೌಂಡೇಷನ್ ಸಹಯೋಗದೊಂದಿಗೆ ಓಡಿಪಿ ಸಂಸ್ಥೆ ಆವರಣದಲ್ಲಿ 'ನಮ್ಮ ಭೂಮಿ– ನಮ್ಮ ಭವಿಷ್ಯ' ಘೋಷವಾಕ್ಯದೊಂದಿಗೆ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು.



ಮೈಸೂರಿನ ಬನ್ನಿಮಂಟಪದಲ್ಲಿರುವ ದಿ ಆರ್ಗನೈಜೇಷನ್ ಫಾರ್ ದ ಡೆವಲಪ್‌ಮೆಂಟ್ ಆಫ್ ಪೀಪಲ್ (ಓಡಿಪಿ) ಮತ್ತು ಭೂಸಿರಿ ಡೆವಲಪ್‌ಮೆಂಟ್ ಫೌಂಡೇಷನ್ ಸಹಯೋಗದೊಂದಿಗೆ ಓಡಿಪಿ ಸಂಸ್ಥೆ ಆವರಣದಲ್ಲಿ 'ನಮ್ಮ ಭೂಮಿ–ನಮ್ಮ ಭವಿಷ್ಯ' ಘೋಷ ವಾಕ್ಯದೊಂದಿಗೆ ವಿಶ್ವ ಪರಿಸರ ದಿನ ಆಚರಿಸಲಾಯಿತು.

ಓಡಿಪಿ ಸಂಸ್ಥೆ ಆವರಣದಲ್ಲಿ ವಿವಿಧ ಮಹಿಳಾ ಸ್ವಸಹಾಯ ಸಂಘದ ವತಿಯಿಂದ ತೆರೆದಿದ್ದ ಕೃಷಿ ಉತ್ಪನ್ನ, ಉಪಕರಣಗಳ ಮಳಿಗೆಗಳಿಗೆ ಬಿಷಪ್ ಡಾ.ಬರ್ನಾಡ್ ಮೊರಾಸ್ ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ನಾವು ತಿಳಿದುಕೊಂಡಿರುವಂತೆ ನಮ್ಮ ನಿವೇಶನ, ಜಮೀನುಗಳು ಮಾತ್ರ ಭೂಮಿಯಲ್ಲ ಇಡೀ ವಿಶ್ವವೇ ನಮ್ಮ ಭೂಮಿಯಾಗಿದೆ. ಅದಕ್ಕಾಗಿ ವಿಶ್ವ ಗುರು ಪೋಪ್ ಹೇಳುತ್ತಾರೆ ನಮ್ಮ ಭೂಮಿ ನಾವು ವಾಸಿಸುವ ಸ್ಥಳ ಎಲ್ಲರ ಮನೆ ನಮ್ಮ ಭೂಮಿಯಾಗಿದ್ದು ಅದನ್ನು ಕಾಪಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದಿದ್ದಾರೆ ಎಂದರು.

ನಗರಪಾಲಿಕೆ, ಸರ್ಕಾರದ ಅಧಿಕಾರಿಗಳು, ಸರ್ಕಾರ ನಾಡನ್ನು ಸುಂದರವಾಗಿಸಲು ಸಾಕಷ್ಟು ಯೋಜನೆಗಳನ್ನು ತಂದು ನಗರವನ್ನು ಸ್ವಚ್ಛಗೊಳಿಸುತ್ತಿದ್ದಾರೆ. ಆದರೆ, ನಾವುಗಳು ರಸ್ತೆ, ಉದ್ಯಾನವನಕ್ಕೆ ಕಸ ಸುರಿಯುತ್ತಿದ್ದು, ಇದನ್ನು ಪ್ರಾಣಿಗಳು ತಿನ್ನುತ್ತದೆ. ಇದ್ದರಿಂದ ಪರಿಸರ ಮಾಲಿನ್ಯವಾಗಿ ಅನಾರೋಗ್ಯದಿಂದ ನರಳಬೇಕಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರು ಭೂಮಿ ರಕ್ಷಣೆಯಲ್ಲಿ ತೊಡಗಿ ಎಂದು ಕರೆ ನೀಡಿದರು.

ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಯೋಗೇಶ್ ಮಾತನಾಡಿ, ವಿಶ್ವ ಪರಿಸರ ದಿನಾಚರಣೆಯಲ್ಲಿ ಭಾಗವಹಿಸುವುದು ಅಷ್ಟೇ ನಮ್ಮ ಕರ್ತವ್ಯವಲ್ಲ. ಭಾರತದಲ್ಲಿ ಭೂಮಿ ಶೇ.4ರಷ್ಟಿದೆ. ಆದರೆ ಜನಸಂಖ್ಯೆ 17ರಷ್ಟಿದೆ. ನೀರಿನ ಪ್ರಮಾಣ ಕೇವಲ ಶೇ.2.4ರಷ್ಟಿದೆ. ಇವೆಲ್ಲವನ್ನೂ ದುರ್ಬಳಕೆ ಮಾಡುತ್ತಿದ್ದೇವೆ. ಆದ್ದರಿಂದ ವಿಶ್ವ ಸಂಸ್ಥೆಯು 'ನಮ್ಮ ಭೂಮಿ ನಮ್ಮ ಭವಿಷ್ಯ' ಎಂದು ಕಾರ್ಯಕ್ರಮ ಆಯೋಜಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಓಡಿಪಿ ಉಪಾಧ್ಯಕ್ಷ ಅಲ್ಫ್ರೆಡ್ ಜಾನ್ ಮೆಂಡೋನ್ಸಾ, ನಾಗನಹಳ್ಳಿ ವಿಸ್ತರಣಾ ಶಿಕ್ಷಣ ಘಟಕದ ಡಾ.ಸಿ. ರಾಮಚಂದ್ರ, ಕೃಷಿ ಇಲಾಖೆ ಸಹಾಯಕ ಕೃಷಿ ನಿರ್ದೇಶಕ ಜಯರಾಮು, ಸಂತ ಫಿಲೋಮಿನಾ ಪ್ರಧಾನ ದೇವಾಲಯ ಗುರು ಫಾದರ್ ಸ್ಟ್ಯಾನಿ ಡಿ ಅಲ್ಮೇಡಾ, ಓಡಿಪಿ–ಬಿ ಡಿಎಫ್ ಸಂಸ್ಥೆಯ ನಿರ್ದೇಶಕ ಫಾದರ್ ಅಲೆಕ್ಸ್ ಪ್ರಶಾಂತ್ ಸಿಕ್ವೇರಾ, ಹಿರಿಯ ವೈಜ್ಞಾನಿಕ ಅಧಿಕಾರಿ ಎಂ.ಸಿ.ನಿತ್ಯಾನಂದ, ಗ್ರಾಮ ವಿಕಾಸ ಸ್ವ ಸಹಾಯ ಸಂಘದ ಮಹಾ ಒಕ್ಕೂಟದ ಅಧ್ಯಕ್ಷ ಆರೋಗ್ಯ, ನಿರ್ದೇಶಕರು, ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ಪ್ರಾಚೀನ ಕಾಲದಿಂದಲೂ ಯೋಗ ಭಾರತದ ಸಂಸ್ಕೃತಿಯ ಒಂದು ಭಾಗ

• ಮೈಸೂರಲ್ಲಿ ಮೂರು ದಿನಗಳ ರಾಷ್ಟ್ರೀಯ ಯೋಗ ಒಲಂಪಿಯಾಡ್ ಉದ್ಘಾಟನೆ • ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಮತ

ಮೈಸೂರು, ಜೂ.18 (ಆರ್‌ಕೆ)– ಪ್ರಾಚೀನ ಕಾಲದಿಂದಲೂ ಯೋಗ ನಮ್ಮ ದೇಶದ ಸಂಸ್ಕೃತಿಯ ಒಂದು ಭಾಗವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಇಂದಿಲ್ಲಿ ಅಭಿಪ್ರಾಯಪಟ್ಟಿದ್ದಾರೆ.

ಭಾರತ ಸರ್ಕಾರದ ಶಿಕ್ಷಣ ಮಂತ್ರಾಲಯ, ನ್ಯಾಷನಲ್ ಕೌನ್ಸಿಲ್ ಆಫ್ ಎಜುಕೇಷನಲ್ ರಿಸರ್ಚ್ ಅಂಡ್ ಟ್ರೈನಿಂಗ್ (ಎನ್‌ಸಿಇಆರ್‌ಟಿ) ಮತ್ತು ರೀಜನಲ್ ಇನ್‌ಸ್ಟಿಟ್ಯೂಟ್ ಆಫ್ ಎಜುಕೇಷನ್ (ಆರ್‌ಐಇ) ಸಂಯುಕ್ತಾಶ್ರಯದಲ್ಲಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ಕೆಎಸ್‌ಓಯು)ದ ಘಟಿಕೋತ್ಸವ ಭವನದಲ್ಲಿ ಏರ್ಪಡಿಸಿದ್ದ 'ನನಗಾಗಿ ಮತ್ತು ಸಮಾಜಕ್ಕಾಗಿ ಯೋಗ' ವಿಷಯ ಕುರಿತ ಮೂರು ದಿನಗಳ ರಾಷ್ಟ್ರೀಯ ಯೋಗ ಒಲಿಂಪಿಯಾಡ್ ಅನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ಸಂಸ್ಕೃತಿ, ಸಂಪ್ರದಾಯ, ಸಂಸ್ಕಾರಗಳಲ್ಲಿ ಯೋಗಕ್ಕೆ ಹಿಂದಿನಿಂದಲೂ ಮಹತ್ವದ ಸ್ಥಾನ ನೀಡಲಾಗಿದೆ. ಅದು ನಮ್ಮ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿರುವುದರಿಂದಲೇ ವಿಶ್ವದಲ್ಲಿ ಭಾರತಕ್ಕೆ ಯೋಗ ಗುರು ಸ್ಥಾನ ಸಂದಿದೆ ಎಂದರು.

ಯೋಗ ಮಾಡುವಾಗ ನಮಗೆ ದೈಹಿಕ ಮತ್ತು ಮಾನಸಿಕ ಆರೋಗ್ಯ, ಶಾಂತಿ, ಭಾವನಾತ್ಮಕ ತೃಪ್ತಿ ಸಿಗುತ್ತದೆ. ದೇಹ, ಮನಸ್ಸು ಮತ್ತು ಭಾವನೆಗಳನ್ನು ಸಮತೋಲನಗೊಳಿಸಲು ಯೋಗ ಉತ್ತಮ ಮಾರ್ಗವಾಗಿದೆ. ಸ್ವಾಮಿ ವಿವೇಕಾನಂದರು ಚಿಕಾಗೋದಲ್ಲಿನ ಧರ್ಮಗಳ ಸಂಸತ್ತಿನಲ್ಲಿ ಯೋಗದ ವೈಶಿಷ್ಟ್ಯಗಳನ್ನು ಪ್ರಸ್ತಾಪಿಸಿ ಇಡೀ ಜಗತ್ತಿಗೇ ಯೋಗವನ್ನು ಪರಿಚಯಿಸಿದರು ಎಂದರು.

2014ರ ಸೆಪ್ಟೆಂಬರ್ 27ರಂದು ಪ್ರಧಾನಿ ನರೇಂದ್ರ ಮೋದಿ ವಿಶ್ವಸಂಸ್ಥೆ ಸಾಮಾನ್ಯ ಸಭೆಯಲ್ಲಿ ಯೋಗ ಅಳವಡಿಸಿಕೊಳ್ಳುವಂತೆ ಪ್ರಪಂಚದ ಎಲ್ಲಾ ದೇಶಗಳಿಗೆ ಕರೆ ನೀಡಿ, ಪ್ರತೀ ವರ್ಷ ಯೋಗ ದಿನ ಆಚರಿಸುವಂತೆ ಪ್ರಸ್ತಾಪಿಸಿದ್ದರು. ಈ ಪ್ರಸ್ತಾವನೆಯನ್ನು ವಿಶ್ವಸಂಸ್ಥೆಯು ಕೇವಲ 90 ದಿನಗಳಲ್ಲಿ ಅನುಮೋದಿಸಿ ಜಾರಿಗೊಳಿಸಿದ್ದರಿಂದಾಗಿ ವಿಶ್ವದಾದ್ಯಂತ ಜೂನ್ 21ರಂದು ಅಂತರಾಷ್ಟ್ರೀಯ ಯೋಗ ದಿನವನ್ನು ಆಚರಿಸಲಾಗುತ್ತಿದೆ ಎಂದರು.

ಮಹಿಳಾ ಸಬಲೀಕರಣಕ್ಕಾಗಿ ಯೋಗ ಎಂಬ ಧ್ಯೇಯವಾಕ್ಯದೊಂದಿಗೆ ಪ್ರಸಕ್ತ ಸಾಲಿನ ಯೋಗ ದಿನಾಚರಣೆಯನ್ನು ಮಹಿಳೆಯರ ಭಾವನಾತ್ಮಕ, ಸಾಮಾಜಿಕ, ಆಧ್ಯಾತ್ಮಿಕವಾಗಿ ಬಲಿಷ್ಠಗೊಳಿಸುವುದಕ್ಕಾಗಿ ಆಚರಿಸಲಾಗುತ್ತಿದೆ ಎಂದ ಅವರು, ನಮ್ಮ ದೈಹಿಕ ಮತ್ತು ಮಾನಸಿಕ ಆರೋಗ್ಯದಲ್ಲಿ ಸಾಮರಸ್ಯ ಕಾಪಾಡಲು ಸಹಕಾರಿಯಾಗಿದೆ ಎಂದರು.

2016ರಲ್ಲಿ ಎನ್‌ಸಿಇಆರ್‌ಟಿಯು ಮೊದಲ ಬಾರಿ ರಾಷ್ಟ್ರೀಯ ಯೋಗ ಒಲಿಂಪಿಯಾಡ್ ಕಾರ್ಯಕ್ರಮವನ್ನು ಆಯೋಜಿಸಿತ್ತು. ಈವರೆಗೂ ಸಂಸ್ಥೆಯು ಅದನ್ನು ಯಶಸ್ವಿಯಾಗಿ ಮುಂದುವರೆಸಿಕೊಂಡು ಬಂದಿದೆ. ಮಕ್ಕಳಲ್ಲಿ ಯೋಗದ ಬಗ್ಗೆ ಆಸಕ್ತಿ ಮೂಡಿಸಲು, ಜಾಗೃತಿ ಮೂಡಿಸುವುದು, ಪ್ರಾಮುಖ್ಯತೆ ಬಗ್ಗೆ ಮಾಹಿತಿ ನೀಡಿ ವ್ಯಕ್ತಿತ್ವ ಬೆಳವಣಿಗೆ ಬಗ್ಗೆ ಜನರಲ್ಲಿ ಅರಿವು ಮೂಡಿಸುವುದು ಒಲಿಂಪಿಯಾಡ್ ಉದ್ದೇಶವಾಗಿದೆ ಎಂದು ಅವರು ತಿಳಿಸಿದರು.

ಯೋಗದ ಮೂಲಕ ವಿದ್ಯಾರ್ಥಿಗಳಲ್ಲಿ ವಿವಿಧ ಪಂಚಕೋಶ, ಅನ್ನಮಯ ಕೋಶ, ಪ್ರಾಣಮಯ ಕೋಶ, ಜ್ಞಾನಮಯ ಕೋಶ ಮತ್ತು ಆನಂದಮಯ ಕೋಶಗಳನ್ನು ಅಭಿವೃದ್ಧಿಪಡಿಸುವುದು ಭಾರತ ಸರ್ಕಾರದ ಗುರಿಯಾಗಿದೆ. ಮೈಸೂರಲ್ಲಿ ಮೊದಲ ಬಾರಿ ರಾಷ್ಟ್ರೀಯ ಒಲಿಂಪಿಯಾಡ್ ಆಯೋಜಿಸಿರುವುದು ಶ್ಲಾಘನೀಯ ಎಂದರು.

ಎನ್‌ಸಿಇಆರ್‌ಟಿ ನಿರ್ದೇಶಕ ಪ್ರೊ.ದಿನೇಶ್‌ಪ್ರಸಾದ್ ಸಕ್ಲಾನಿ, ಪ್ರಾದೇಶಿಕ ಶಿಕ್ಷಣ ಸಂಸ್ಥೆ ಪ್ರಾಂಶುಪಾಲ ಪ್ರ.ವೈ.ಶ್ರೀಕಾಂತ್, ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಎನ್.ಕೆ.ಲೋಕನಾಥ್, ಕರ್ನಾಟಕ ರಾಜ್ಯ ಮುಕ್ತ ವಿಶ್ವ ವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಹಾಗೂ ಒಲಿಂಪಿಯಾಡ್ ಸಂಯೋಜಕಿ ಪ್ರೊ.ಕಲ್ಪನಾ ವೇಣುಗೋಪಾಲ್ ಇನ್ನಿತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಆರ್‌ಐಇಯಲ್ಲಿ ನಡೆಯಲಿರುವ ಮೂರು ದಿನಗಳ ಒಲಿಂಪಿಯಾಡ್‌ನಲ್ಲಿ ಯೋಗ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಯೋಗ ಕುರಿತ ವಿಚಾರ ಸಂಕಿರಣಗಳು ನಡೆಯಲಿವೆ. ಕರ್ನಾಟಕ ಸೇರಿದಂತೆ ದೇಶಾದ್ಯಂತ ಸುಮಾರು 650 ಮಂದಿ ಶಾಲಾ ವಿದ್ಯಾರ್ಥಿಗಳು ಮೈಸೂರಿನ ಯೋಗ ಒಲಿಂಪಿಯಾಡ್‌ನಲ್ಲಿ ಭಾಗವಹಿಸಲಿದ್ದಾರೆ.


ಮೈಸೂರಿನ ಮುಕ್ತ ವಿಶ್ವವಿದ್ಯಾನಿಲಯದ ಘಟಿಕೋತ್ಸವ ಭವನದಲ್ಲಿ ಮಂಗಳವಾರ ಆಯೋಜಿಸಿದ್ದ ರಾಷ್ಟ್ರೀಯ ಯೋಗ ಒಲಿಂಪಿಯಾಡ್ ಉದ್ಘಾಟನಾ ಸಮಾರಂಭದಲ್ಲಿ ಆರ್‌ಐಇ ವಿದ್ಯಾರ್ಥಿಗಳು ಜನಪ್ರಿಯ 'ಜೈ ಹೋ' ಹಾಡಿಗೆ ಯೋಗ ಪ್ರದರ್ಶನ ನೀಡಿದರು. (ಚಿತ್ರದಲ್ಲಿ ಎಡದಿಂದ) ಮೈಸೂರು ವಿವಿ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಎನ್‌ಸಿಇಆರ್‌ಟಿ ನಿರ್ದೇಶಕ ಪ್ರೊ. ದಿನೇಶ್‌ಪ್ರಸಾದ್ ಸಕ್ಲಾನಿ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಆರ್‌ಐಇ ಪ್ರಾಂಶುಪಾಲ ಪ್ರೊ. ವೈ. ಶ್ರೀಕಾಂತ್ ಮತ್ತು ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಶರಣಪ್ಪ ವಿ. ಹಲಸೆ ಅವರನ್ನು ಕಾಣಬಹುದು.

> “ ಕರ್ನಾಟಕದಲ್ಲಿ ರಾಷ್ಟ್ರೀಯ ಯುವ ಉತ್ಸವ ಆಯೋಜಿಸಿದ್ದಾಗಲೂ ಯೋಗ ಪ್ರದರ್ಶನ ಮಾಡಲಾಯಿತು. ಕರ್ನಾಟಕ ಸರ್ಕಾರವು 'ಹರ್ ಘರ್ ಯೋಗ'ದ ಮೂಲಕ ರಾಜ್ಯವನ್ನು ಭಾರತದ ಪ್ರಮುಖ ಯೋಗ ಸಾಕ್ಷರ ರಾಜ್ಯವನ್ನಾಗಿ ಮಾಡಲು ಶ್ರಮಿಸುತ್ತಿದೆ. ಭಾರತದ ಪುಣ್ಯಭೂಮಿಯಿಂದ ಸೃಷ್ಟಿಯಾದ ಯೋಗವು 'ವಸುದೈವ ಕುಟುಂಬಕಂ' ಮತ್ತು 'ಸರ್ವೇ ಜನೋ ಸುಖಿನೋ ಭವಂತು, ಸರ್ವೇ ಸಂತು ನಿರಾಮಯ' ಚಿಂತನೆಯೊಂದಿಗೆ ಜನರನ್ನು ಸಂಪರ್ಕಿಸುತ್ತಿದೆ. ಅದರಿಂದಾಗಿ ಇಂದು ವಿಶ್ವದಾದ್ಯಂತ ಜನರು ತಮ್ಮ ಜೀವನದಲ್ಲಿ ಯೋಗವನ್ನು ಅಳವಡಿಸಿಕೊಂಡಿದ್ದಾರೆ ಹಾಗೂ ಯೋಗದಿಂದಾಗಿ ಸಂತೋಷದಿಂದ ದೀರ್ಘಾಯುಷ್ಯರಾಗಿ ಬದುಕುತ್ತಿದ್ದಾರೆ.
>
> **–ಥಾವರ್‌ಚಂದ್ ಗೆಹ್ಲೋಟ್, ರಾಜ್ಯಪಾಲರು**

ಮುಡಾ ಇಇ ಮುಂಬಡ್ತಿ ಆದೇಶ ರದ್ದುಪಡಿಸಲು ಸರ್ಕಾರ ಸೂಚನೆ

ಮೈಸೂರು, ಜೂ. 18(ಆರ್‌ಕೆ)–ಇಲಾಖಾ/ಕ್ರಿಮಿನಲ್ ವಿಚಾರಣೆ ಬಾಕಿ ಇರುವುದರಿಂದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಎ.ನಾಗೇಶ್ ಅವರಿಗೆ ಮುಂಬಡ್ತಿ/ಸ್ವತಂತ್ರ ಪ್ರಭಾರ ನೀಡಿರುವ ಅಧಿಕೃತ ಜ್ಞಾಪನವನ್ನು ರದ್ದುಪಡಿಸುವಂತೆ ಸರ್ಕಾರ ಮುಡಾ ಆಯುಕ್ತರಿಗೆ ನಿರ್ದೇಶನ ನೀಡಿದೆ.



ಜೂನ್ 13ರಂದು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಕೆ.ಲತಾ, ಮುಡಾ ಆಯುಕ್ತರಿಗೆ ಪತ್ರ ಬರೆದಿದ್ದು, ಅಸಿಸ್ಟೆಂಟ್ ಎಕ್ಸಿಕ್ಯೂಟಿವ್ ಇಂಜಿನಿಯರ್ ಎ.ನಾಗೇಶ್ ವಿರುದ್ಧ ಇಲಾಖಾ/ಕ್ರಿಮಿನಲ್ ವಿಚಾರಣೆ ಬಾಕಿ ಇದ್ದಾಗ್ಯೂ ಎಗ್ಸಿಕ್ಯೂಟಿವ್ ಇಂಜಿನಿಯರ್ ಹುದ್ದೆಗೆ ಕೆಸಿಎಸ್‌ಆರ್ ನಿಯಮ–1985ರ ನಿಯಮ–32ರಡಿ ಮುಂಬಡ್ತಿ/ಸ್ವತಂತ್ರ ಪ್ರಭಾರ ನೀಡಿರುವ 2024ರ ಫೆಬ್ರವರಿ 29ರ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಿ ಅದರ ಅನುಸರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಿದ್ದಾರೆ.

ಎ.ನಾಗೇಶ್ ವಿರುದ್ಧ ಲೋಕಾಯುಕ್ತ ಇಲಾಖಾ/ಕ್ರಿಮಿನಲ್ ವಿಚಾರಣೆ ಬಾಕಿ ಇದ್ದು ಸರ್ಕಾರದ ಹಂತದಲ್ಲಿ ಲೀನ್ ಕುರಿತು ಕಡತ ಪರಿಶೀಲನೆಯಲ್ಲಿರುವಾಗ ಸರ್ಕಾರದ ಯಾವುದೇ ಮಾರ್ಗದರ್ಶನ ಪಡೆಯದೇ ನಿಯಮ–32ರಡಿ ಮುಂಬಡ್ತಿ/ಸ್ವತಂತ್ರ ಪ್ರಭಾರ ನೀಡಿರುವ ಬಗ್ಗೆ ಮೂರು ದಿನದೊಳಗಾಗಿ ಸರ್ಕಾರಕ್ಕೆ ವಿವರಣೆ ನೀಡುವುದು, ತಪ್ಪಿದಲ್ಲಿ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲಾವುದು ಎಂದು ಲತಾ ತಮ್ಮ ಪತ್ರದಲ್ಲಿ ಮುಡಾ ಆಯುಕ್ತರಿಗೆ ನಿರ್ದೇಶನ ನೀಡಿದ್ದಾರೆ.

2024ರ ಫೆಬ್ರವರಿ 29ರಂದು ಮುಡಾ ಆಯುಕ್ತರು ಆದೇಶ ಹೊರಡಿಸಿದ್ದು, ಸಾರ್ವಜನಿಕ ಮತ್ತು ಆಡಳಿತಾತ್ಮಕ ದೃಷ್ಟಿಯಿಂದ ಎ.ನಾಗೇಶ್‌ರನ್ನು ಸ್ವತಂತ್ರ ಪ್ರಭಾರದಲ್ಲಿರಿಸಿ 2024ರ ಮಾರ್ಚ್ 1ರಿಂದ ಜಾರಿಗೆ ಬರುವಂತೆ ಆದೇಶಿಸಿದ್ದರು. ಲೋಕಾಯುಕ್ತ ತನಿಖೆ ವಿಚಾರಣೆ ಹಂತದಲ್ಲಿರುವುದರಿಂದ ಪ್ರಕರಣದ ಅಂತಿಮ ಆದೇಶಕ್ಕೆ ಒಳಪಟ್ಟಿರುತ್ತದೆ ಎಂಬ ಷರತ್ತಿನೊಂದಿಗೆ ಆದೇಶಿಸಲಾಗಿದೆ ಎಂದು ಆಯುಕ್ತರ ಆದೇಶದಲ್ಲಿ ಉಲ್ಲೇಖಿಸಿರುವುದನ್ನು ಇಲ್ಲಿ ಸ್ಮರಿಸಬಹುದು.

ನಾಯ್ಡುನಗರ ಸಾರಿಗೆ ಬಸ್ ನಿಲ್ದಾಣದಲ್ಲಿ ಅಂತರರಾಷ್ಟ್ರೀಯ ಯೋಗ ದಿನಾಚರಣೆ



ಮೈಸೂರಿನ ಶ್ರೀ ಛಾಯಾದೇವಿ ಶಿಕ್ಷಣ ಮಹಾ ವಿದ್ಯಾಲಯ ಹಾಗೂ ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಯೋಗದೊಂದಿಗೆ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ನಾಯ್ಡುನಗರ ಸಾರಿಗೆ ಬಸ್ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ನಂತರ ಬೀದಿ ನಾಟಕ, ಯೋಗದ ಮೂಲಕ ಮಾನವ ಸರಪಳಿ ಹಾಗೂ ಜಾಥಾ ನಡೆಸಲಾಯಿತು. ಕಾರ್ಯಕ್ರಮದಲ್ಲಿ RMNH ಸಂಸ್ಥೆಯ ವಿಜ್ಞಾನಿ ಡಾ.ಅರ್ಜುನ್ ಪ್ರಸಾದ್ ತಿವಾರಿ, ಅಂತರರಾಷ್ಟ್ರೀಯ ಯೋಗಪಟು ಪುರುಷೋತ್ತಮ್, ಸರ್ಕಾರಿ ಆಯುರ್ವೇದ ಸಂಶೋಧನಾ ಕೇಂದ್ರದ ಸಹಾಯಕ ನಿರ್ದೇಶಕ ಡಾ.ಲಕ್ಷ್ಮೀನಾರಾಯಣ ಶೆಣೈ, ಪ್ರಾಂಶುಪಾಲ ಡಾ.ಅಂತೋಣಿ ಪೌಲ್‌ರಾಜ್, ಮುಖ್ಯೋಪಾಧ್ಯಾಯ ಮಂಜುನಾಥ್, ಸಂಯೋಜಕ ಪಂಪತೀರ್ಥ, ಬೋಧಕ ವೃಂದ, ಪ್ರಥಮ ವರ್ಷದ ಪ್ರಶಿಕ್ಷಣಾರ್ಥಿಗಳು ಹಾಗೂ ಪ್ರೌಢಶಾಲೆಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶಿಷ್ಯ ವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು, ಜೂ.18–2024–25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಕಾನೂನು ಪದವೀಧರರಿಗೆ ನ್ಯಾಯವಾದಿ ವೃತ್ತಿಯ ಪ್ರಾಯೋಗಿಕ ತರಬೇತಿ ಕಾರ್ಯಕ್ರಮದಡಿ ಶಿಷ್ಯವೇತನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಪರಿಶಿಷ್ಟ ಜಾತಿಯ ಕಾನೂನು ಪದವೀಧರರು www.sw.kar.nic.inನಲ್ಲಿ ಜೂ.18ರಿಂದ ಜು.31ರವರೆಗೆ ಅರ್ಜಿಗಳನ್ನು ನೋಂದಾಯಿಸಲು ಅವಕಾಶವಿದ್ದು, ನೋಂದಾಯಿಸಿದ ನಂತರ ದಾಖಲಾತಿಗಳನ್ನು ಪತ್ರಾಂಕಿತ ಅಧಿಕಾರಿಗಳ ದೃಢೀಕರಣದೊಂದಿಗೆ ಆಯಾಯ ತಾಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಗ್ರೇಡ್–1 ಅವರ ಕಚೇರಿಗೆ ಜು.31ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:0821–2520910, ಇಮೇಲ್ tswomys@gmai.com ಅನ್ನು ಸಂಪರ್ಕಿಸಬಹುದು.

ನೂತನ ಸಂಸದ ಸುನಿಲ್ ಬೋಸ್‌ಗೆ ಸನ್ಮಾನ


ಚಾಮರಾಜನಗರ ಲೋಕಸಭಾ ಕ್ಷೇತ್ರದ ನೂತನ ಸಂಸದ ಸುನಿಲ್ ಬೋಸ್ ಅವರನ್ನು ಲಕ್ಷ್ಮಿನಾರಾಯಣ, ಇಂಧನ ಬಾಬು, ಹೆಜ್ಜಿಗೆ ಭಾಸ್ಕರ್, ಗೋಪಾಲ ಕೃಷ್ಣ, ಆನಂದ, ಮಹದೇವ, ರಮೇಶ ಇತರರು ಆತ್ಮೀಯವಾಗಿ ಅಭಿನಂದಿಸಿದರು.

ಛಲವಾದಿ ನಾರಾಯಣಸ್ವಾಮಿಗೆ ಸ್ವಾಗತ


ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಕಾರ್ಯಕರ್ತರ ತುರ್ತು ಸಭೆಗೆ ಆಗಮಿಸಿದ ವಿಧಾನ ಪರಿಷತ್ ಸದಸ್ಯ ಛಲವಾದಿ ನಾರಾಯಣಸ್ವಾಮಿ ಅವರನ್ನು ಬಿಜೆಪಿ ನಗರಾಧ್ಯಕ್ಷ ನಾಗೇಂದ್ರ, ಮೈಸೂರು ಜಿಲ್ಲಾ ಗ್ರಾಮಾಂತರ ಮೀನುಗಾರರ ಪ್ರಕೋಷ್ಠ ಸಂಚಾಲಕ ಡಿ.ಮಹೇಶನಾಯಕ, ಸೋಮೇಶ್, ಟಿ.ಬಿ.ನಾಗರಾಜ್, ಇತರರು ಸ್ವಾಗತಿಸಿದರು.

ಜೆ.ಕೆ.ಟೈರ್‌ನಿಂದ ಬೃಹತ್ ರಕ್ತದಾನ ಶಿಬಿರ

ಮೈಸೂರು, ಜೂ. 18–ಮೈಸೂರಿನ ಜೆ.ಕೆ.ಟೈರ್ಸ್ ಕಂಪನಿ ವತಿಯಿಂದ ಸಂಸ್ಥಾಪಕರಾದ ದಿವಂಗತ ಶ್ರೀಹರಿಶಂಕರ್ ಸಿಂಘಾನಿಯಾ ಅವರ 91ನೇ ವರ್ಷದ ಹುಟ್ಟುಹಬ್ಬದ ಅಂಗವಾಗಿ ಜೂ.20ರಂದು ಬೆಳಗ್ಗೆ 7 ಗಂಟೆಯಿಂದ ಕಾರ್ಖಾನೆ ಆವರಣದಲ್ಲಿ 11ನೇ ವರ್ಷದ ಬೃಹತ್ ರಕ್ತದಾನ ಶಿಬಿರ ಏರ್ಪಡಿಸಲಾಗಿದೆ.



ಶಿಬಿರವನ್ನು ಜೆ.ಕೆ.ಟೈರ್ಸ್ ಜೋನ್ ಅಂಡ್ ವೈಸ್ ಪ್ರೆಸಿಡೆಂಟ್ ವಿ.ಈಶ್ವರ್ ಉದ್ಘಾಟಿಸಲಿದ್ದಾರೆ. ಜೀವಧಾರ ರಕ್ತನಿಧಿ ಕೇಂದ್ರದ ಮ್ಯಾನೇಜಿಂಗ್ ಟ್ರಸ್ಟಿ ಎಸ್.ಇ. ಗಿರೀಶ್, ಜೀವಧಾರ ರಕ್ತನಿಧಿ ಕೇಂದ್ರದ ಎಕ್ಸಿಕ್ಯೂಟಿವ್ ಟ್ರಸ್ಟಿ ಲಯನ್ ಸಿ.ಜಿ.ಮುತ್ತಣ್ಣ, ಭಾರತೀಯ ವೈದ್ಯಕೀಯ ಮಂಡಳಿ ಅಧ್ಯಕ್ಷ ಡಾ.ಜಯಂತ್ ಉಪಸ್ಥಿತರಿರುವರು.

ರಾಜ್ಯ ಆಹಾರ ಆಯೋಗ ಮೈಸೂರಿಗೆ ಭೇಟಿ: ಆಹಾರ ಪದಾರ್ಥಗಳ ಪರಿಶೀಲನೆ

ಮೈಸೂರು.ಜೂ.18–ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಡಾ.ಹೆಚ್. ಕೃಷ್ಣ ನೇತೃತ್ವದಲ್ಲಿ ಐವರು ಸದಸ್ಯರಿರುವ ತಂಡವು ಮೈಸೂರಿಗೆ ಮಂಗಳವಾರ ಭೇಟಿ ನೀಡಿ ಚಾಮುಂಡಿಬೆಟ್ಟದಲ್ಲಿರುವ ನ್ಯಾಯ ಬೆಲೆ ಅಂಗಡಿ, ಬಂಡಿಪಾಳ್ಯದಲ್ಲಿರುವ ಸಗಟು ಗೋದಾಮು, ಆಲನಹಳ್ಳಿಯಲ್ಲಿರುವ ಅಂಗನವಾಡಿ, ಲಲಿತಾದ್ರಿಪುರದಲ್ಲಿರುವ ಸರ್ಕಾರಿ ಶಾಲೆಗೆ ಮತ್ತು ಕೆ.ಎಸ್.ಎಸ್ ಅನಾಥಾಲಯಕ್ಕೆ ಭೇಟಿ ನೀಡಿ ಸರ್ಕಾರದಿಂದ ನೀಡುತ್ತಿರುವ ಆಹಾರ ಪದಾರ್ಥಗಳನ್ನು ವಿತರಿಸುತ್ತಿರುವ ಬಗ್ಗೆ ಪರಿಶೀಲಿಸಿದರು.



ಈ ಸಂದರ್ಭದಲ್ಲಿ ಆಯೋಗದ ಸದಸ್ಯರಾದ ಲಿಂಗರಾಜ ಕೋಟೆ, ಸುಮಂತ್ ರಾವ್, ಮಾರುತಿ ಎಂ.ದೊಡ್ಡಲಿಂಗಣ್ಣವರ, ಎ.ರೋಹಿಣಿ ಪ್ರಿಯ, ಕೆ.ಎಸ್. ವಿಜಯಲಕ್ಷ್ಮಿ, ಸದಸ್ಯ ಕಾರ್ಯದರ್ಶಿ ಸುಜಾತ ಹೊಸಮನಿ, ಜಿಲ್ಲಾ ಮಟ್ಟದ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಇಂಧನ ದರ ಇಳಿಕೆಗೆ ಆಗ್ರಹ

ಮೈಸೂರು, ಜೂ.18(ಎಸ್‌ಪಿಎನ್)– ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆಯನ್ನು ರಾಜ್ಯ ಸರ್ಕಾರ ಹಿಂಪಡೆಯಬೇಕು ಎಂದು ಮೈಸೂರು ಹೋಟೆಲ್ ಮಾಲೀಕರ ಸಂಘ ಆಗ್ರಹಿಸಿದೆ.

ಜನಸಾಮಾನ್ಯರಿಗೆ ಐದು ಗ್ಯಾರಂಟಿಗಳನ್ನು ಜಾರಿಗೊಳಿಸಿ ಜನಪ್ರಿಯರಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಇದೀಗ ತೈಲ ಬೆಲೆ ಏರಿಕೆ ಮಾಡಿರುವುದರಿಂದ ಜನಸಾಮಾನ್ಯರ ಜೀವನ ದುಸ್ತರವಾಗುತ್ತಿದೆ. ತೈಲ ಬೆಲೆ ಏರಿಕೆಯನ್ನು ರಾಜ್ಯ ಸರ್ಕಾರ ಪುನರ್ ಪರಿಶೀಲಿಸಬೇಕು ಎಂದು ಮೈಸೂರು ಜಿಲ್ಲಾ ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ಸಿ.ನಾರಾಯಣಗೌಡ ಆಗ್ರಹಿಸಿದ್ದಾರೆ.

ತೈಲ ಬೆಲೆಯೇರಿಕೆಯಿಂದ ಎಲ್ಲಾ ವಸ್ತುಗಳ ಸಾಗಾಣಿಕೆ ವೆಚ್ಚ ದುಬಾರಿಯಾಗಿ, ದಿನಸಿ ಪದಾರ್ಥಗಳಾದ ಅಕ್ಕಿ, ಬೇಳೆಕಾಳು, ಹಣ್ಣು, ತರಕಾರಿ, ಹಾಲು ಮತ್ತಿತರ ದಿನಬಳಕೆ ವಸ್ತುಗಳು ತುಟ್ಟಿಯಾಗಲಿವೆ. ಅಲ್ಲದೆ, ಈಗಾಗಲೇ ಮುದ್ರಾಂಕ ಶುಲ್ಕ, ಅಬಕಾರಿ ಶುಲ್ಕ, ಆಸ್ತಿ ಶುಲ್ಕ, ವಾಹನ ನೋಂದಣಿ, ಛಾಪಾ ಕಾಗದ ಬೆಲೆ ಹೆಚ್ಚಾಗಿವೆ. ಕೂಲಿ ಕಾರ್ಮಿಕರ ಸಂಬಳ ಜಾಸ್ತಿಯಾಗಿವೆ. ಈಗಾಗಲೇ 2024ರ ಏ.1ರಿಂದ ಟ್ರೇಡ್ ಪರವಾನಗಿ ಶುಲ್ಕ ಶೇ.20ರಷ್ಟು ಏರಿಕೆಯಾಗಿರುವುದು ಹೋಟೆಲ್ ಉದ್ಯಮಕ್ಕೆ ಭಾರಿ ಪೆಟ್ಟು ಬಿದ್ದಿದೆ. ಜಿಎಸ್‌ಟಿ ತೆರಿಗೆಯೂ ಹೆಚ್ಚಳವಾಗಿದೆ. ಹಾಗಾಗಿ ಗಾಯದ ಮೇಲೆ ಬರೆ ಎಳೆದಂತೆ ರಾಜ್ಯ ಸರ್ಕಾರ ಏರಿಕೆ ಮಾಡಿರುವ ತೈಲ ಬೆಲೆ ಇಳಿಸಿ, ಜನಸಾಮಾನ್ಯರ ಹೊರೆ ಕಡಿಮೆ ಮಾಡುವಂತೆ ಸಿ.ನಾರಾಯಣಗೌಡ ಮನವಿ ಮಾಡಿದ್ದಾರೆ.


ಸಿ.ನಾರಾಯಣಗೌಡ

ಭಾರತೀಯ ಸೇನೆ, ಇತರೆ ಸೇವೆಗಳಿಗೆ ಉಚಿತ ತರಬೇತಿ

ಮೈಸೂರು.ಜೂ.18– 2024–25ನೇ ಸಾಲಿನಲ್ಲಿ ಭಾರತೀಯ ಸೇನೆ, ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ–1, 2(ಎ) ಹಾಗೂ 3(ಎ) ಹಾಗೂ 3(ಬಿ)ಗಳ ಅರ್ಹ ಅಭ್ಯರ್ಥಿಗಳಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯ್ಕೆಯ ಪೂರ್ವಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ತರಬೇತಿಗಾಗಿ ಅರ್ಹ (ಬಾಲಕರಿಗೆ ಮಾತ್ರ) ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ಗರಿಷ್ಠ ವಾರ್ಷಿಕ ಆದಾಯ (ಪ್ರವರ್ಗ–1 ಕ್ಕೆ ರೂ.2.50 ಲಕ್ಷಗಳು ಹಾಗೂ ಪ್ರವರ್ಗ–2(ಎ), 3(ಎ) ಮತ್ತು 3(ಬಿ)ಗಳಿಗೆ ರೂ.1.00 ಲಕ್ಷಗಳು). ಅಭ್ಯರ್ಥಿಯು 10ನೇ ತರಗತಿಯನ್ನು ಉತ್ತೀರ್ಣರಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45 ಅಂಕಗಳನ್ನು ಪಡೆದಿರಬೇಕು. ಅರ್ಜಿ ಸಲ್ಲಿಸಲು ಜು.10 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದಕ್ಷಿಣ ಕನ್ನಡ ಜಿಲ್ಲೆ ದೂ.ಸಂ:0824–2225078, ಉಡುಪಿ ಜಿಲ್ಲೆ ದೂ.ಸಂ: 0820–2574881, ಉತ್ತರ ಕನ್ನಡ ಜಿಲ್ಲೆ ದೂ.ಸಂ:08382–226589 ಹಾಗೂ ವೆಬ್‌ಸೈಟ್ https://bcwd.karnataka.gov.in ನ್ನು ಸಂಪರ್ಕಿಸಬಹುದು ಎಂದು ಮೈಸೂರು ಜಿಲ್ಲೆಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಖಂಡಿಸಿ ಇಂದು ಜೆಡಿಎಸ್ ಪ್ರತಿಭಟನೆ

ಮೈಸೂರು, ಜೂ. 18– ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆ ವಿರುದ್ಧವಾಗಿ ಮೈಸೂರು ನಗರ ಜನತಾದಳದ ವತಿಯಿಂದ ನಾಳೆ (ಜೂ.19) ಬೆಳಗ್ಗೆ 10.30 ಗಂಟೆಗೆ ಗಾಂಧಿ ವೃತ್ತದ ಬಳಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಪ್ರತಿಭಟನೆಯನ್ನು ಮಾಜಿ ಸಚಿವರೂ, ಜಾತ್ಯಾತೀತ ಜನತಾದಳದ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ, ಜೆಡಿಎಸ್ ರಾಜ್ಯ ಕಾರ್ಯಾಧ್ಯಕ್ಷ ಸಾ.ರಾ.ಮಹೇಶ್ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ. ಪ್ರತಿಭಟನೆಯಲ್ಲಿ ವಿಧಾನಪರಿಷತ್ ಸದಸ್ಯರಾದ ಸಿ.ಎನ್.ಮಂಜೇಗೌಡ, ವಿವೇಕಾನಂದ, ನಗರಾಧ್ಯಕ್ಷ ಕೆ.ಟಿ.ಚಲುವೇಗೌಡ, ಮಹಿಳಾ ಅಧ್ಯಕ್ಷೆ ಶ್ರೀಮತಿ ಪ್ರೇಮಾ ಶಂಕರೇಗೌಡ, ಮಾಜಿ ಮೇಯರ್‌ಗಳು, ನಗರ ಪಾಲಿಕೆ ಮಾಜಿ ಸದಸ್ಯರು ಭಾಗವಹಿಸಲಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಸುತ್ತೂರು ಜೆಎಸ್‌ಎಸ್ ಎನ್‌ಸಿಸಿ ವಾಯುದಳಕ್ಕೆ ಸಮಗ್ರ ಪ್ರಶಸ್ತಿ

ಸುತ್ತೂರು, ಜೂ.18– ಇಲ್ಲಿನ ಜೆಎಸ್‌ಎಸ್ ಪ್ರೌಢಶಾಲೆಯ ಎನ್‌ಸಿಸಿ ವಾಯುದಳಕ್ಕೆ ಸಮಗ್ರ ಪ್ರಶಸ್ತಿ ಲಭಿಸಿದೆ. ಮೈಸೂರಿನ ಜವಾಹರ್ ನವೋದಯ ವಿದ್ಯಾಲಯದಲ್ಲಿ 4ನೇ ಕರ್ನಾಟಕ ಏರ್ ಸ್ಕ್ವಾಡ್ರನ್ ಎನ್‌ಸಿಸಿ ಘಟಕದ ವತಿಯಿಂದ ಆಯೋಜಿಸಿದ್ದ 10 ದಿನಗಳ ವಾರ್ಷಿಕ ಶಿಬಿರದಲ್ಲಿ ನಡೆದ ಬಾಲಕಿಯರ ಥ್ರೋ ಬಾಲ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ, ಕವಾಯತು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ, ಹಗ್ಗ–ಜಗ್ಗಾಟ ಸ್ಪರ್ಧೆಯಲ್ಲಿ ಪ್ರಥಮ, ಏಕವ್ಯಕ್ತಿ ನೃತ್ಯ ಸ್ಪರ್ಧೆಯಲ್ಲಿ ಪ್ರಥಮ, ಸಮೂಹ ಗಾಯನ ದ್ವಿತೀಯ ಸ್ಥಾನ ಗಳಿಸುವ ಮೂಲಕ ಒಟ್ಟಾರೆ ಸಮಗ್ರ ಪ್ರಶಸ್ತಿಯನ್ನು ತಂಡ ಮುಡಿಗೇರಿಸಿಕೊಂಡಿದೆ.

10 ದಿನಗಳ ಎನ್‌ಸಿಸಿ ವಾಯುದಳದ ಶಿಬಿರದಲ್ಲಿ ಸುತ್ತೂರು, ಗುಂಡ್ಲುಪೇಟೆ, ಮೈಸೂರು, ಮಂಡ್ಯ ಮೊದಲಾದ ಭಾಗಗಳಿಂದ ಆಗಮಿಸಿದ್ದ 16 ಶಾಲೆಗಳ 500ಕ್ಕೂ ಹೆಚ್ಚು ಕೆಡೆಟ್‌ಗಳು ಭಾಗವಹಿಸಿದ್ದರು. ಶಿಬಿರದ ಸಂದರ್ಭದಲ್ಲಿ ಮಾದರಿ ಲಘು ವಿಮಾನಗಳ ತಯಾರಿಕೆ, ಹಾರಾಟವೂ ಸೇರಿದಂತೆ ವಿವಿಧ ತರಬೇತಿಗಳಲ್ಲಿ ಕೆಡೆಟ್‌ಗಳು ಸಕ್ರಿಯವಾಗಿ ಭಾಗವಹಿಸಿದ್ದರು. ಸಮಗ್ರ ಪ್ರಶಸ್ತಿ ಗಳಿಸಿದ ಕೆಡೆಟ್‌ಗಳ ಸಾಧನೆಯನ್ನು ಸಂಸ್ಥೆಯ ಆಡಳಿತಾಧಿಕಾರಿಗಳು, ಸಂಯೋಜನಾಧಿಕಾರಿಗಳು, ಮುಖ್ಯಸ್ಥರು, ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.



ಜೂ.21ರಂದು ಅಂತರರಾಷ್ಟ್ರೀಯ ಯೋಗ ದಿನಾಚರಣೆ

ಮೈಸೂರು,ಜೂ.18–ಜೂನ್.21 ರಂದು 10ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆಯನ್ನು ಅರಮನೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ. ಯೋಗ ದಿನಾಚರಣೆಯಲ್ಲಿ ಭಾಗವಹಿಸುವವರು ಯೋಗ ಮಾಡಲು ಅನುಕೂಲವಾದ ವಸ್ತ್ರಗಳನ್ನು ಧರಿಸಿ, ಬೆಳಗ್ಗೆ 6 ಗಂಟೆಯೊಳಗೆ ಸ್ಥಳಕ್ಕೆ ತಲುಪಿ ಆಸೀನರಾಗಿರಬೇಕು. ಯೋಗ ಮ್ಯಾಟ್‌ನ್ನು ತಾವೇ ತರಬೇಕು ಎಂದು ಜಿಲ್ಲಾ ಆಯುಷ್ ಅಧಿಕಾರಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಮೈಸೂರು ಮಿತ್ರ ಬುಧವಾರ 19 ಜೂನ್ 2024

ರೈತರ ಹಿತ ರಕ್ಷಣೆ ಸರ್ಕಾರದ ಆದ್ಯತೆ

ಮಂಡ್ಯ, ಜೂ.18– ರೈತರ ಹಿತ ರಕ್ಷಣೆ ರಾಜ್ಯ ಸರ್ಕಾರದ ಮೊದಲ ಆದ್ಯತೆ ಎಂದು ಕೃಷಿ ಸಚಿವರು ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್.ಚಲುವರಾಯಸ್ವಾಮಿ ತಿಳಿಸಿದರು.

ತಾಲೂಕಿನ ಬೆಳ್ಳೂರಿನಲ್ಲಿ ಎರಡು ಕೋಟಿ ರೂ. ವೆಚ್ಚದಲ್ಲಿ ರೈತ ಸಂಪರ್ಕ ಕೇಂದ್ರಕ್ಕೆ ಗುದ್ದಲಿ ಪೂಜೆ ನೆರವೇರಿಸಿ ಕೃಷಿಕರಿಗೆ ರಸಗೊಬ್ಬರ, ಬಿತ್ತನೆ ಬೀಜ, ಕೀಟನಾಶಕಗಳನ್ನು ವಿತರಿಸಿ ಅವರು ಮಾತನಾಡಿದರು.



ಕೃಷಿ ಸಚಿವ ಚಲುವರಾಯಸ್ವಾಮಿ 2 ಕೋಟಿ ರೂ ವೆಚ್ಚದಲ್ಲಿ ಬೆಳ್ಳೂರು ರೈತ ಸಂಪರ್ಕ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾರಿಯ ಶಂಕುಸ್ಥಾಪನೆ ನೆರವೇರಿಸಿ, ರೈತರಿಗೆ ರಸಗೊಬ್ಬರ, ಬಿತ್ತನೆ ಬೀಜ ಮತ್ತು ಕೀಟನಾಶಕಗಳನ್ನು ವಿತರಿಸಿದರು.

ರೈತರು ಸಮಗ್ರ ಬೇಸಾಯದ ಬಗ್ಗೆ ಗಮನ ಹರಿಸಬೇಕು. ಕಡ್ಡಾಯವಾಗಿ ಬೆಳೆ ವಿಮೆ ನೋಂದಣಿ ಮಾಡಿಸಿ ಅನಿರೀಕ್ಷಿತ ನಷ್ಟದಿಂದ ರಕ್ಷಣೆ ಪಡೆಯಬೇಕು ಎಂದು ಅವರು ಹೇಳಿದರು. ಎಲ್ಲಾ ರೈತ ಸಂಪರ್ಕ ಕೇಂದ್ರಗಳ ಮೂಲಕ ಬಿತ್ತನೆ ಬೀಜಗಳು, ರಸಗೊಬ್ಬರ ಹಾಗೂ ರೈತರಿಗೆ ಸಿಗುವ ಸಬ್ಸಿಡಿ ಸೇರಿದಂತೆ ಉಪಯೋಗವಾಗುವ ಇನ್ನಿತರ ಮಾಹಿತಿಯನ್ನು ನೀಡಲಾಗುತ್ತದೆ ಎಂದು ಚಲುವರಾಯಸ್ವಾಮಿ ತಿಳಿಸಿದರು.

ತಾವು ಕೃಷಿ ಸಚಿವರಾದ ನಂತರ ರೈತರಿಗೆ ಎಲ್ಲಾ ಸೌಲಭ್ಯ ಒಂದೇ ಕಡೆ ಸಿಗುವಂತೆ ಮಾಡಲು ರೈತ ಸಂಪರ್ಕ ಕೇಂದ್ರಗಳನ್ನು ಸಶಕ್ತಗೊಳಿಸಲಾಗುತ್ತಿದೆ ಎಂದು ಅವರು ಹೇಳಿದರು.

ರೈತರಿಗೆ ಅನುಕೂಲ ಕಲ್ಪಿಸುವ ಉದ್ದೇಶದಿಂದ ಇಲಾಖೆಯಲ್ಲಿ 600 ಸಹಾಯಕ ಕೃಷಿ ಅಧಿಕಾರಿ ಹಾಗೂ ಕೃಷಿ ಅಧಿಕಾರಿಗಳ ನೇಮಕಾತಿಗೆ ಕ್ರಮವಹಿದಲಾಗಿದೆ ಎಂದರು.

ರೈತರು ಮಳೆ ಪ್ರಮಾಣವನ್ನು ಅರಿತು ಕಡಿಮೆ ಮತ್ತು ದೀರ್ಘ ಅವಧಿಯಲ್ಲಿ ಬೆಳಗಳ ಬಗ್ಗೆ ನಿರ್ಧಾರ ಮಾಡಬೇಕಿದೆ. ಲಾಭದಾಯಕ ಕೃಷಿ ಬಗ್ಗೆ ರೈತ ಸಂಪರ್ಕ ಕೇಂದ್ರಗಳು ಮಾರ್ಗದರ್ಶನ ನೀಡುವ ಕಾರ್ಯ ನಿರ್ವಹಿಸಲಿವೆ ಎಂದು ಕೃಷಿ ಸಚಿವರು ತಿಳಿಸಿದರು. ಬೆಳ್ಳೂರು ಹೋಬಳಿಯ ರೈತರಿಗೆ ಉಪಯೋಗವಾಗುವಂತೆ ರೈತ ಸಂಪರ್ಕ ಕೇಂದ್ರ ಕಟ್ಟಡಕ್ಕೆ ಶಂಕುಸ್ಥಾಪನೆ ನೆರವೇರಿದೆ. ಮುಂದಿನ ದಿನಗಳಲ್ಲಿ ನಾಗಮಂಗಲ ತಾಲೂಕಿನ ಎಲ್ಲಾ ರೈತರಿಗೆ ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಪರಿಕರಗಳನ್ನು ಪೂರೈಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಅಶೋಕ್ ಹಾಗೂ ಉಪ ನಿರ್ದೇಶಕಿ ಮಮತ, ನಾಗಮಂಗಲ ತಹಶೀಲ್ದಾರ್ ನಯೀಂ ಉನ್ನಿಸಾ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ಆರೋಗ್ಯಯುತ ಜೀವನಕ್ಕಾಗಿ 1 ಗಂಟೆ ಸಮಯ ಮೀಸಲಿಡಿ



ಯೋಗೋತ್ಸವದಲ್ಲಿ ಮಾತನಾಡುತ್ತಿರುವ ಡಾ.ಸೀತಾ ಲಕ್ಷ್ಮಿ.

ಮಂಡ್ಯ,ಜೂ. 18– ಆರೋಗ್ಯಯುತ ಜೀವನಕ್ಕಾಗಿ ಪ್ರತಿದಿನ ಯೋಗ, ವ್ಯಾಯಾಮ, ವಾಕ್ ಯಾವುದಾದರೂ ದೈಹಿಕ ಚಟುವಟಿಕೆಗೆ ಒಂದು ಗಂಟೆ ಮೀಸಲಿಡಿ ಎಂದು ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ.ಸೀತಾಲಕ್ಷ್ಮಿ ಹೇಳಿದರು.

ಮಂಗಳವಾರ ಮಿಮ್ಸ್ ಇಲಾಖೆಯಲ್ಲಿ ಹಮ್ಮಿಕೊಂಡಿದ್ದ ಯೋಗೋತ್ಸವ ಕಾರ್ಯಕ್ರಮವನ್ನು ಕುರಿತು ಮಾತನಾಡಿದರು. 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಸಂಬಂಧ ಯೋಗೋತ್ಸವ ಕಾರ್ಯಕ್ರಮವನ್ನು ಇಂದು ಮಂಡ್ಯ ಜಿಲ್ಲೆಯ ಮಿಮ್ಸ್ ಇಲಾಖೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಭಾಗವಹಿಸುವ ಎಲ್ಲಾ ವಿದ್ಯಾರ್ಥಿಗಳಿಗೂ ಡಿಜಿಟಲ್ ಪ್ರಮಾಣಪತ್ರ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಎಸ್.ವೈ.ಎಸ್‌ನ ಜಿಲ್ಲಾ ಸಂಚಾಲಕ ಶಂಕರ ನಾರಾಯಣ ಶಾಸ್ತ್ರೀ, ಯೋಗ ತರಬೇತುದಾರ ಶಿವರುದ್ರಸ್ವಾಮಿ, ಪತಂಜಲಿ ಯೋಗ ಶಿಕ್ಷಣ ಸಮಿತಿ ಮುಖ್ಯಸ್ಥ ರವಿ, ಮಿಮ್ಸ್ ನಿರ್ದೇಶಕ ಹಾಗೂ ಡೀನ್ ಡಾ.ಪಿ.ನರಸಿಂಹಮೂರ್ತಿ, ಮಿಮ್ಸ್ ವೈದ್ಯಕೀಯ ಅಧೀಕ್ಷಕರು ಡಾ.ಶಿವಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು

ನಾಡಪ್ರಭು ಕೆಂಪೇಗೌಡರ ಜನ್ಮದಿನ ಅರ್ಥಪೂರ್ಣ ಆಚರಣೆಗೆ ನಿರ್ಧಾರ



ಶಾಸಕ ಹೆಚ್.ಟಿ.ಮಂಜು ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಂಘ ಸಂಸ್ಥೆಗಳ ಮುಖಂಡರ ಸಭೆ ನಡೆಯಿತು.

ಕೆ.ಆರ್.ಪೇಟೆ: ರಾಜ್ಯ ಸರ್ಕಾರದ ನಿರ್ದೇಶನದಂತೆ ಜೂನ್ 27ರಂದು ಪಟ್ಟಣದಲ್ಲಿ ನಾಡಪ್ರಭು ಕೆಂಪೇಗೌಡರ ಜಯಂತ್ಯುತ್ಸವ ಕಾರ್ಯಕ್ರಮವನ್ನು ಅದ್ದೂರಿಯಿಂದ ಆಚರಿಸಲು ತಾಲೂಕು ನಾಡಹಬ್ಬಗಳ ಆಚರಣಾ ಸಮಿತಿ ನಿರ್ಧರಿಸಿತು.

ಕೆಂಪೇಗೌಡರ ಜಯಂತಿ ಆಚರಣೆಯ ಸಂಬಂಧ ಶಾಸಕ ಹೆಚ್.ಟಿ.ಮಂಜು ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಸಂಘ ಸಂಸ್ಥೆಗಳ ಮುಖಂಡರ ಸಭೆ ಪಟ್ಟಣದ ತಾಲೂಕು ಕಚೇರಿಯ ಸಭಾಂಗಣದಲ್ಲಿ ನಡೆಯಿತು.

ಸರ್ಕಾರಿ ನಿಯಮಗಳಿಗೆ ಧಕ್ಕೆಯಾಗದಂತೆ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ ಸರ್ವ ಜನಾಂಗಗಳ ಸಮ್ಮಿಲನದ ಕಾರ್ಯಕ್ರಮವನ್ನಾಗಿ ಕೆಂಪೇಗೌಡರ ಜಯಂತಿಯನ್ನು ರೂಪಿಸುವಂತೆ ಸಲಹೆ ನೀಡಿದ ಶಾಸಕ ಹೆಚ್.ಟಿ.ಮಂಜು ನಾಡಪ್ರಭು ಕೆಂಪೇಗೌಡರು ಕೇವಲ ಒಕ್ಕಲಿಗ ಸಮುದಾಯಕ್ಕೆ ಸೇರಿದವರಲ್ಲ. ಸರ್ವ ಜನಂಗಗಳ ಹಿತರಕ್ಷಣೆಗಾಗಿಯೇ ಹಲವು ಪೇಟೆಗಳನ್ನು ನಿರ್ಮಿಸಿ ತಮ್ಮ ಕನಸಿನ ಬೆಂಗಳೂರು ನಿರ್ಮಿಸಿದವರು ಕೆಂಪೇಗೌಡರು. ಇದನ್ನು ಗಮನದಲ್ಲಿಟ್ಟುಕೊಂಡು ಕೆಂಪೇಗೌಡರ ಜಯಂತಿಯನ್ನು ಸರ್ವ ಜನರ ಜಯಂತಿಯನ್ನಾಗಿಸುವಂತೆ ಸಲಹೆ ನೀಡಿದರು.

ತಾಲೂಕು ಆಡಳಿತ ಸೌಧದ ಹೊರ ಆವರಣದಲ್ಲಿ ಬೃಹತ್ ವೇದಿಕೆ ನಿರ್ಮಿಸಿ ಕಾರ್ಯಕ್ರಮ ನಡೆಸಲು ಸಭೆ ನಿರ್ಧರಿಸಿತು. ಕೆಂಪೇಗೌಡರ ಜಯಂತಿಯ ಅಂಗವಾಗಿ ಪಟ್ಟಣದ ಪ್ರವಾಸಿ ಮಂದಿರ ವೃತ್ತದಿಂದ ವಿವಿಧ ಜನಪದ ಕಲಾ ತಂಡಗಳ ಪ್ರದರ್ಶನದೊಂದಿಗೆ ಪಟ್ಟಣದ ಪ್ರಮುಖ ರಸ್ತೆಯಲ್ಲಿ ಮೆರವಣಿಗೆಯ ಮೂಲಕ ಕಾರ್ಯಕ್ರಮದ ಮುಖ್ಯ ವೇದಿಕೆಯಲ್ಲಿ ಎಲ್ಲರೂ ಸಮ್ಮಿಳಗೊಳ್ಳಲು ನಿರ್ಧರಿಸಲಾಯಿತು.

ತಹಸೀಲ್ದಾರ್ ನಿಸರ್ಗಪ್ರಿಯ, ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಆರ್.ಎಸ್.ಶಿವರಾಮೇಗೌಡ, ವಿವಿಧ ಇಲಾಖೆಯ ಅಧಿಕಾರಿಗಳು, ಮುಖಂಡರು ಸಭೆಯಲ್ಲಿದ್ದರು.

ಅಪರಿಚಿತ ಯುವಕನ ಶವ ಪತ್ತೆ

ಶ್ರೀರಂಗಪಟ್ಟಣ, ಜೂ.18– ತಾಲೂಕಿನ ಬೆಳಗೊಳ ಗ್ರಾಮದ ಸಮೀಪ ಬಲಮುರಿ ಪ್ರವಾಸಿ ತಾಣದ ಕಾವೇರಿ ನದಿಯಲ್ಲಿ ಸುಮಾರು 30ರಿಂದ 35 ವಯಸ್ಸಿನ ಅಪರಿಚಿತ ಯುವಕನ ಶವ ಮಂಗಳವಾರ ಪತ್ತೆಯಾಗಿದೆ. ಸುಮಾರು 5.4 ಅಡಿ ಎತ್ತರ ಇರುವ ಯುವಕ ತನ್ನ ಬಿಳಿ ಬಣ್ಣದ ಟೀ ಶರ್ಟ್, ನೀಲಿ ಜೀನ್ಸ್ ಪ್ಯಾಂಟ್ ಸೇರಿದಂತೆ ಸ್ಮಾರ್ಟ್ ವಾಚ್ ಸಮೇತ ಬಟ್ಟೆಗಳನ್ನು ಸಮೀಪದ ಅಂಗಡಿ ಪಕ್ಕ ಬಿಚ್ಚಿಟ್ಟು ನದಿಯಲ್ಲಿ ನೀರಿಗೆ ಆಟವಾಡಲು ಹೋದವನು ಕಾಣೆಯಾಗಿದ್ದನು.

ಕಪ್ಪು ಮೈ ಬಣ್ಣ, ಉಡಿದಾರ ಧರಿಸಿದ್ದು ಸಾಧಾರಣ ಮೈಕಟ್ಟು ಹೊಂದಿದ್ದು, ಈತನ ಬಗ್ಗೆ ಮಾಹಿತಿ ಇದ್ದರೆ ಕೆ.ಆರ್. ಸಾಗರ ಪೊಲೀಸ್ ಠಾಣೆ ಅಥವಾ ಪಿ.ಎಸ್ಐ ಮೊಬೈಲ್ ಸಂಖ್ಯೆ 9480804856 ಸಂಪರ್ಕಿಸಲು ಕೋರಲಾಗಿದೆ.

ಸರ್ಕಾರಿ ಸೇವೆಗಳು ನಿಮ್ಮ ಮನೆಬಾಗಿಲಿಗೆ ಕಾರ್ಯಕ್ರಮ ಮುಂದುವರಿಕೆ

ಶಾಸಕರ ಸಮ್ಮುಖದಲ್ಲಿ ಸಾರ್ವಜನಿಕರಿಂದ ಸಮಸ್ಯೆಗಳ ಬಗ್ಗೆ ಅರ್ಜಿ ಸ್ವೀಕರಿಸಿದ ಅಧಿಕಾರಿಗಳು

ಪಾಂಡವಪುರ, ಜೂ.18– ಶಾಸಕ ದರ್ಶನ್ ಪುಟ್ಟಣ್ಣಯ್ಯ ಅವರ ನೇತೃತ್ವದಲ್ಲಿ ಕೆನ್ನಾಳು ಗ್ರಾಮ ಆವರಣದಲ್ಲಿ ನಡೆಯುತ್ತಿರುವ ಸರ್ಕಾರಿ ಸೇವೆಗಳು ನಿಮ್ಮ ಮನೆಬಾಗಿಲಿಗೆ ಕಾರ್ಯಕ್ರಮದಲ್ಲಿ ಮಂಗಳವಾರವು ಸಹ ಹಲವಾರು ಅರ್ಜಿಗಳನ್ನು ಅಧಿಕಾರಿಗಳು ಸ್ವೀಕರಿಸಿದರು.



ಕೆನ್ನಾಳು ಗ್ರಾಮ ಮುಂಭಾಗ ಆಯೋಜಿಸಿರುವ ಸರಕಾರಿ ಸೇವೆಗಳು ನಿಮ್ಮನೆ ಬಾಗಿಲಿಗೆ ಕಾರ್ಯಕ್ರಮದಲ್ಲಿ ಶಾಸಕ ದರ್ಶನ್ ಪುಟ್ಟಣ್ಣಯ್ಯ ಸಾರ್ವಜನಿಕರ ಅಹವಾಲು ಆಲಿಸಿದರು.

ಕಾರ್ಯಕ್ರಮದಲ್ಲಿ ಕಂದಾಯ, ತಾಲೂಕು ಪಂಚಾಯಿತಿ, ಕೃಷಿ, ತೋಟಗಾರಿಕೆ, ಸೆಸ್ಕ್, ಭೂ ಮಾಪನ ಇಲಾಖೆ ಸೇರಿದಂತೆ ತಾಲೂಕು ಮಟ್ಟದ ಎಲ್ಲಾ ಇಲಾಖೆ ಅಧಿಕಾರಿಗಳು ಭಾಗಿಯಾಗಿ ಜನರಿಗೆ ಅಗತ್ಯವಿರುವ ಸೇವೆಗಳನ್ನು ನೋಂದಣಿ ಮಾಡಿಕೊಂಡು ಸೇವೆಗಳನ್ನು ಒದಗಿಸುವ ಕೆಲಸ ಮಾಡುತ್ತಿದ್ದಾರೆ. ಶನಿವಾರ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಆಯೋಜಿಸಿದ್ದ ಜನಸ್ಪಂದನಾ ಕಾರ್ಯಕ್ರಮದಡಿ ಸ್ವೀಕರಿಸಲಾದ ಅರ್ಜಿಗಳನ್ನು ಹೊರತು ಪಡಿಸಿ ಈವರೆಗೂ ಸುಮಾರು 400ಕ್ಕೂ ಹೆಚ್ಚು ಅರ್ಜಿಗಳು ಸ್ವೀಕಾರವಾಗಿವೆ ಕೆಲವು ಕ್ಲಿಷ್ಟಕರ ಸಮಸ್ಯೆಗಳಿಗೂ ಪರಿಹಾರಗಳಿಗೂ ಸ್ಥಳದಲ್ಲಿಯೇ ಪರಿಹಾರ ಕಂಡುಕೊಡುವ ಕೆಲಸ ಮಾಡಲಾಗಿದೆ.

ಶಾಸಕ ದರ್ಶನ್ ಪುಟ್ಟಣ್ಣಯ್ಯ ಮಾತನಾಡಿ, ಸರಕಾರಿ ಸೇವೆಗಳು ನಿಮ್ಮ ಮನೆಬಾಗಿಲಿಗೆ ಕಾರ್ಯಕ್ರಮದಲ್ಲಿ ಅಧಿಕಾರಿಗಳ ಜತೆಗೂಡಿ ಹಲವು ಸಮಸ್ಯೆಗಳಿಗೆ ಪರಿಹಾರ ಕಂಡುಕೊಡುವ ಕೆಲಸ ಮಾಡಲಾಗುತ್ತಿದೆ. ರಸ್ತೆ ಮತ್ತು ಕೆರೆ ಜಮೀನು, ಪೌತಿ ಖಾತೆ, ಸರಕಾರಿ ನಿವೇಶನ ಅತಿಕ್ರಮಣ, ಗೋಮಾಳ, ಖರಾಬು ಇತ್ಯಾದಿಗಳನ್ನು ಸರ್ವೇ ಮಾಡಿ ಗಡಿ ಗುರುತಿಸುವುದು, ಗ್ರಾಮ ಠಾಣ ಜಾಗವನ್ನು ವಿಸ್ತರಿಸುವ ಕೆಲಸ ಮಾಡಲಾಗುತ್ತಿದೆ. ಸೆಸ್ಕ್ ಇಲಾಖೆ ವತಿಯಿಂದ ಶಿಥಿಲಗೊಂಡ ವಿದ್ಯುತ್ ಕಂಬಗಳ ತೆರವು, ಜೋತು ಬಿದ್ದ ವಿದ್ಯುತ್ ತಂತಿ ಬದಲಾವಣೆ, ಅಗತ್ಯವಿರುವ ಕಡೆಗಳಲ್ಲಿ ವಿದ್ಯುತ್ ಪರಿವರ್ತಕ ಅಳವಡಿಕೆ ಕಾರ್ಯಗಳು ನಡೆಯುತ್ತಿದೆ. ತೋಟಗಾರಿಕೆ ಇಲಾಖೆ ಮತ್ತು ಕೃಷಿ ಇಲಾಖೆ ವತಿಯಿಂದ ಸರಕಾರದಿಂದ ಸಿಗಬಹುದಾದ ಸವಲತ್ತುಗಳು, ಕೃಷಿ ಯಂತ್ರೋಪಕರಣಗಳು ಖರೀದಿ ಮತ್ತು ಇತರೆ ವಿಚಾರಗಳ ಮಾಹಿತಿ ಒದಗಿಸಲಾಗುತ್ತಿದೆ. ಅಂಗನವಾಡಿ ಕಾರ್ಯಕರ್ತರು ಮನೆ ಮನೆಗೆ ತೆರಳಿ ಕುಟುಂಬಗಳಿಗೆ ಅಗತ್ಯವಿರುವ ಸೌಲಭ್ಯಗಳ ಮಾಹಿತಿ ಪಡೆದುಕೊಳ್ಳುತ್ತಿದ್ದು, ಮಾಹಿತಿ ಆಧಾರದ ಮೇಲೆ ಸೇವೆಗಳನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಜಿ.ಎಸ್.ಶ್ರೇಯಸ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಟಿ.ಎಸ್.ಮಂಜುನಾಥ್, ತೋಟಗಾರಿಕೆ ಸಹಾಯಕ ನಿರ್ದೇಶಕಿ ಸೌಮ್ಯಾ, ಸಿಡಿಪಿಓ ಪೂರ್ಣಿಮ, ಕಂದಾಯ, ಆರೋಗ್ಯ, ತಾಪಂ ಸೇರಿದಂತೆ ಹಲವಾರು ಇಲಾಖೆ ಅಧಿಕಾರಿಗಳು ಇದ್ದರು.

ಸಾರ್ವಜನಿಕರಿಂದ ಕುಂದು ಕೊರತೆ ಅರ್ಜಿ ಸ್ವೀಕರಿಸಿದ ಸಚಿವ ಚಲುವರಾಯಸ್ವಾಮಿ

ಮಂಡ್ಯ,ಜೂ.18– ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ವಿವಿಧ ಕಾರ್ಯಕ್ರಮದಲ್ಲಿ ಭಾಗವಹಿಸುವಸಲುವಾಗಿ ನಾಗಮಂಗಲಕ್ಕೆ ಆಗಮಿಸಿದಾಗ ಸಾರ್ವಜನಿಕರಿಂದ ಕುಂದು ಕೊರತೆ ಆಲಿಸಿ ಅರ್ಜಿಗಳನ್ನು ಸ್ವೀಕರಿಸಿದರು.

ನಿಯಮ ಉಲ್ಲಂಘಿಸಿದ್ದಲ್ಲಿ ಕಾನೂನು ರೀತ್ಯಾ ಕ್ರಮ

ಮಂಡ್ಯ,ಜೂ.18– ಮಂಡ್ಯ ನಗರವು ಸ್ವಚ್ಛ ಭಾರತ್ ಮಿಷನ್ ಅಡಿಯಲ್ಲಿ ಬಯಲು ಶೌಚಮುಕ್ತ (ODF) ನಗರವೆಂದು ಘೋಷಣೆ ಮಾಡಲಾಗಿದ್ದು, ತಲೆ ಮೇಲೆ ಮಲ ಹೊರುವುದು ಹಾಗೂ ತೆರೆದ ಚರಂಡಿಗೆ ಮಲ–ಮೂತ್ರ ವಿಸರ್ಜನೆ ಮಾಡುವುದು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಅದರಂತೆ ದಿ ಎಂಪ್ಲಾಯ್ಮೆಂಟ್ ಆಫ್ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಅಂಡ್ ಡ್ರೈ ಲ್ಯಾಟ್ರಿನ್ ಆಕ್ಟ್ 2013 ರ ರೀತ್ಯಾ ಯಾವುದೇ ವ್ಯಕ್ತಿಯಿಂದ ಶೌಚಾಲಯದ ಪಿಟ್ನು ಸ್ವಚ್ಛಗೊಳಿಸುವುದನ್ನು ನಿಷೇಧಿಸಲಾಗಿರುವುದರಿಂದ, ನಗರಸಭೆಯಲ್ಲಿ 4000 ಮತ್ತು 6000 ಲೀಟರ್ ಸಾಮರ್ಥ್ಯದ ಸಕ್ಕಿಂಗ್ ಕಮ್ ಜೆಟ್ಟಿಂಗ್ ಯಂತ್ರ ಹೊಂದಿರುವ ಎರಡು ವಾಹನಗಳು ಲಭ್ಯವಿದ್ದು, ನಿಗದಿತ ಶುಲ್ಕವನ್ನು ನಗರಸಭೆಗೆ ಪಾವತಿಸಿ, ನಗರಸಭೆಯ ವಾಹನದಿಂದ ಶೌಚಾಲಯದ ಪಿಟ್‌ಗಳನ್ನು ಸ್ವಚ್ಛಗೊಳಿಸತಕ್ಕದ್ದು.

ಈ ಕಾಯ್ದೆಯನ್ನು ಉಲ್ಲಂಘಿಸಿ ಯಾವುದೇ ವ್ಯಕ್ತಿಯಿಂದ ಶೌಚಾಲಯದ ಪಿಟ್ನು ಸ್ವಚ್ಛಗೊಳಿಸಿದಲ್ಲಿ ಅಥವಾ ಮಲ ಹೊರುವ ಪದ್ಧತಿಗೆ ಪ್ರೋತ್ಸಾಹಿಸಿದಲ್ಲಿ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಎಂದು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪಿಎಂ ಕಿಸಾನ್ ಸಮ್ಮಾನ್ ನಿಧಿ ರೈತರಿಗೆ ಅನುಕೂಲ

ಕೇಂದ್ರ ಸಚಿವ ಕುಮಾರಸ್ವಾಮಿ ಅಭಿಮತ



ಧಾರವಾಡ: ಪಿಎಂ ಕಿಸಾನ್ ಸಮ್ಮಾನ್ ಯೋಜನೆಯಡಿ ನಾಲ್ಕು ತಿಂಗಳಿಗೊಮ್ಮೆ ರೈತ ಕುಟುಂಬಗಳಿಗೆ ತಲಾ 2 ಸಾವಿರ ನೀಡಲಾಗುತ್ತಿದೆ. ರೈತರಿಗೆ ಬಿತ್ತನೆ ಬೀಜ, ಗೊಬ್ಬರ ಖರೀದಿಸಲು, ಕೃಷಿ ಉಪಕರಣಗಳನ್ನು ಬಾಡಿಗೆಗೆ ಪಡೆಯಲು ಅನುಕೂಲವಾಗುತ್ತದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಉತ್ತರ ಪ್ರದೇಶದ ವಾರಣಾಸಿಯಲ್ಲಿ ಏರ್ಪಡಿಸಿದ್ದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ನಿಧಿಯ 17ನೇ ಕಂತು ಬಿಡುಗಡೆ ಸಮಾರಂಭದ ನೇರ ಪ್ರಸಾರವನ್ನು ನಗರದ ಕೃಷಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ವೀಕ್ಷಿಸಿ ಅವರು ಮಾತನಾಡಿದರು. 2019ರಲ್ಲಿ ಈ ಯೋಜನೆ ಪ್ರಾರಂಭವಾಯಿತು. 17ನೇ ಕಂತು ಬಿಡುಗಡೆ ಸಮಾರಂಭದಲ್ಲಿ ಸಾಂಕೇತಿಕವಾಗಿ ಈ ದಿನ 1458 ಕೋಟಿ ಹಣವನ್ನು ರೈತರಿಗೆ ಪ್ರಧಾನಿ ಮೋದಿ ಬಿಡುಗಡೆ ಮಾಡಿದ್ದಾರೆ. 17ನೇ ಕಂತಿನಲ್ಲಿಒಟ್ಟು 20 ಸಾವಿರ ಕೋಟಿ ಹಣ ರೈತರ ಖಾತೆಗೆ ಜಮೆಯಾಗುತ್ತದೆ ಎಂದು ತಿಳಿಸಿದರು.

ಧಾರವಾಡ ಜಿಲ್ಲೆಯಲ್ಲಿ ಈ ಯೋಜನೆಯಡಿ ಒಂದು ಲಕ್ಷಕ್ಕೂ ಹೆಚ್ಚು ರೈತ ಕುಟುಂಬಗಳಿಗೆ 20 ಕೋಟಿ ಹಣ ಪಾವತಿಯಾಗುತ್ತದೆ. ಕರ್ನಾಟಕದಲ್ಲಿ 45 ಲಕ್ಷ ರೈತ ಕುಟುಂಬಗಳಿಗೆ ಸುಮಾರು 350 ಕೋಟಿ ಹಣ ಜಮೆಯಾಗುತ್ತದೆ. ದೇಶದಲ್ಲಿಒಟ್ಟು 9.58 ಕೋಟಿ ರೈತ ಕುಟುಂಬಗಳಿಗೆ 20 ಸಾವಿರ ಕೋಟಿ ಹಣ ಪಾವತಿಯಾಗುತ್ತದೆ ಎಂದರು.

ಈ ಯೋಜನೆಯಡಿ ಮೂರು ಕಂತುಗಳಲ್ಲಿ ವರ್ಷಕ್ಕೆ 6 ಸಾವಿರ ರೈತ ಕುಟುಂಬಕ್ಕೆ ಜಮೆಯಾಗುತ್ತದೆ. ನೇರ ನಗದು ವರ್ಗಾವಣೆ (ಡಿಬಿಟಿ) ಮೂಲಕ ನೇರವಾಗಿ ರೈತರ ಖಾತೆಗೆ ಪಾವತಿಯಾಗುತ್ತದೆ. 2019ರಿಂದ 16 ಕಂತುಗಳಲ್ಲಿ 3.02 ಲಕ್ಷ ಕೋಟಿ ರೈತರ ಖಾತೆಗೆ ಜಮೆಯಾಗಿದೆ ಎಂದರು.

ಜನರ ದುಡ್ಡು ತಗೊಂಡು ಜನರಿಗೆ ಕೊಡೋಕೆ ನೀವೇ ಆಡಳಿತ ಮಾಡಬೇಕಾ?

ಸಿಎಂ ವಿರುದ್ಧ ಹೆಚ್‌ಡಿಕೆ ಕಿಡಿ

ಬೆಂಗಳೂರು: ಕೇಂದ್ರ ಸರ್ಕಾರ ಪೆಟ್ರೋಲ್, ಡಿಸೇಲ್ ಬೆಲೆ ಇಳಿಕೆ ಮಾಡಬೇಕು ಎಂಬ ಸಿಎಂ ಸಿದ್ದರಾಮಯ್ಯ ವಿರುದ್ಧ ಕೇಂದ್ರ ಸಚಿವ ಕುಮಾರಸ್ವಾಮಿ ಕಿಡಿಕಾರಿದ್ದಾರೆ.

ತೈಲ ಬೆಲೆ ಏರಿಕೆ ವಿರುದ್ಧ ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಬೆಲೆ ಇಳಿಕೆ ಮಾಡೋದು ಆಮೇಲೆ. ಈಗ ನೀವು ಯಾಕೆ ತರಾತುರಿಯಲ್ಲಿ 3 ರೂ. ಮತ್ತು 3.50 ರೂ. ಬೆಲೆ ಏರಿಕೆ ಮಾಡಿದ್ದಿರಿ. ಕೇಂದ್ರ ಸರ್ಕಾರ ಬೆಲೆ ಇಳಿಕೆ ಬಗ್ಗೆ ಇಷ್ಟು ದಿನ ಯಾಕೆ ನೀವು ಮಾತಾಡಿಲ್ಲ. ಮೊದಲೇ ಅದನ್ನು ಹೇಳಬೇಕಿತ್ತು. ಸರ್ಕಾರದಲ್ಲಿ ಹಣದ ಕೊರತೆಯಿಂದ ಇವತ್ತು ಬೆಲೆ ಏರಿಕೆ ಮಾಡಿ 3 ಸಾವಿರ ಕೋಟಿ ಆದಾಯ ತೆಗೆಯಲು ಹೊರಟಿದ್ದೀರಾ. 3 ಸಾವಿರ ಕೋಟಿ ಜನರ ಜೇಬಿಂದ ಕಿತ್ತುಕೊಳ್ಳೋಕೆ ಹೊರಟಿದ್ದೀರಾ. ಜನರ ದುಡ್ಡು ತೆಗೆದುಕೊಂಡು ನೀವೇನು ಗ್ಯಾರಂಟಿ ಕೊಡೋದು. ಜನರ ದುಡ್ಡು ತಗೊಂಡು ಜನರಿಗೆ ಕೊಡೋಕೆ ನೀವೇ ಬೇಕಾ. ಯಾರು ಬೇಕಾದರೂ ಆಡಳಿತ ನಡೆಸುತ್ತಾರೆ ಎಂದು ಕಿಡಿಕಾರಿದರು.

ಪೆಟ್ರೋಲ್, ಡೀಸೆಲ್ ಬಳಿಕ ಅದ್ಯಾವುದೋ 25 ಸಾವಿರ ಎಕರೆ ಭೂಮಿ ಮೇಲೆ ಕಣ್ಣು ಹಾಕಿದ್ದಾರಂತೆ. ಅದನ್ನು ಪತ್ರಿಕೆಯಲ್ಲಿ ನೋಡಿದೆ. ಕಾರ್ಯಕ್ರಮ ಅನುಷ್ಠಾನಕ್ಕೆ ತಂದಾಗ ಏನೇನು ಆಗುತ್ತೆ ಅಂತ ಮೊದಲೇ ಯೋಚನೆ ಮಾಡಬೇಕಿತ್ತು. ನೀವು ಅರ್ಥಿಕ ಸಚಿವರಾಗಿರುವವರು. 14 ಬಜೆಟ್ ಮಂಡನೆ ಮಾಡಿರೋರು. ಈ ಕಾರ್ಯಕ್ರಮ ಮಾಡಿದರೆ ಏನಾಗುತ್ತೆ ಅಂತ ನಿಮಗೆ ಅನುಭವ ಇರಲಿಲ್ಲವಾ ಎಂದು ಸಿಎಂಗೆ ಪ್ರಶ್ನಿಸಿದರು.

ಇವತ್ತು ಹಲವಾರು ಇಲಾಖೆಗಳಲ್ಲಿ ಹಣ ಸೋರಿಕೆ ಆಗುತ್ತಿದೆ. ಬಿಬಿಎಂಪಿ ಬಗ್ಗೆ ಒಂದು ಆರ್ಟಿಕಲ್ ಓದಿದೆ. ಕೆಲಸಕ್ಕೆ ಎರಡು ಬಿಲ್ ಮಾಡಿ ಕೋಟ್ಯಂತರ ರೂ. ಲೂಟಿ ಹೊಡೆದಿದ್ದಾರೆ ಅಂತ ದೊಡ್ಡ ಸುದ್ದಿ ಪತ್ರಿಕೆಯಲ್ಲಿ ಇದೆ. ಬೋರ್ಡ್, ಕಾರ್ಪೋರೇಷನ್‌ಗಳಲ್ಲಿ ಇರೋ ದುಡ್ಡಿಗೆ ಹೇಳೋರು ಕೇಳೋರು ಇಲ್ಲ. ಅದು ಎಲ್ಲಿಗೆ ಹೋಗಿದೆಯೋ ಏನೋ? ಜನರ ಹೆಸರಲ್ಲಿ ಅ ಹಣವನ್ನು ಲೂಟಿ ಮಾಡಿಕೊಂಡು ಕೂತಿದ್ದೀರಾ. ಇದೆಲ್ಲವನ್ನೂ ಬಿಗಿಯಾಗಿ ಆಡಳಿತ ನಡೆಸಿದರೆ ಇವತ್ತು ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡೋ ಅವಶ್ಯಕತೆ ಬರುತ್ತಿರಲಿಲ್ಲ ಎಂದು ವಾಗ್ದಾಳಿ ನಡೆಸಿದರು.

ಎಲ್ಲಾ ತಾಲೂಕಲ್ಲಿ ಕೆಂಪೇಗೌಡರ ಜಯಂತಿ ಆಚರಿಸಲು 1 ಲಕ್ಷ: ಡಿಕೆಶಿ

ಬೆಂಗಳೂರು: ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಕೆಂಪೇಗೌಡರ ಜಯಂತಿ ಆಚರಿಸಲು 1 ಲಕ್ಷ ರೂ. ನೀಡಲಾಗುವುದು ಹಾಗೂ ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಕೆಂಪೇಗೌಡರ ಬಗ್ಗೆ ವಿದ್ಯಾರ್ಥಿಗಳಿಗೆ ವಿಚಾರಸಂಕಿರಣ ಏರ್ಪಡಿಸಲು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ 1 ಲಕ್ಷ ರೂ.ನೀಡಲಾಗುವುದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.



ಡಿ.ಕೆ.ಶಿವಕುಮಾರ್

ಕೆಂಪೇಗೌಡರ ಜಯಂತಿ ಆಚರಣೆ ಸಂಬಂಧ ವಿಧಾನಸೌಧದಲ್ಲಿ ಏರ್ಪಡಿಸಿದ್ದ ಪೂರ್ವಭಾವಿ ಸಭೆ ನಂತರ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಲಾ ಮಕ್ಕಳಿಗೆ ಕೆಂಪೇಗೌಡರ ಕುರಿತು ಚರ್ಚಾಸ್ಪರ್ಧೆ ಏರ್ಪಡಿಸಲಾಗುವುದು. ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ 20 ಸಾವಿರ ರೂ., ತಾಲೂಕು ಕೇಂದ್ರಗಳಿಗೆ 20 ಸಾವಿರದ ಜೊತೆಗೆ ಹೆಚ್ಚುವರಿಯಾಗಿ 1 ಲಕ್ಷ ರೂ. ನೀಡಲಾಗುವುದು. ಜಿಲ್ಲಾ ಕೇಂದ್ರಗಳಿಗೆ 50 ಸಾವಿರ ನೀಡಲಾಗುತ್ತಿದ್ದು, ಹೆಚ್ಚು ಮಾಡಲು ಚಿಂತನೆ ನಡೆಸಲಾಗುವುದು. ನಾಡಪ್ರಭು ಕೆಂಪೇಗೌಡರ 515ನೇ ಜಯಂತಿ ಉತ್ಸವವನ್ನು ಅರಮನೆ ಮೈದಾನ ಅಥವಾ ಹೊರಾಂಗಣ ಮೈದಾನದಲ್ಲಿ ಜೂನ್ 27 ರಂದು ನಡೆಸಲು ತೀರ್ಮಾನಿಸಲಾಗಿದೆ ಎಂದರು.

ಹುಲಿಯೂರು ದುರ್ಗ, ಮಾಗಡಿ, ಆವತಿ ಸೇರಿದಂತೆ ಬೆಂಗಳೂರಿನ ಎಲ್ಲಾ ದಿಕ್ಕುಗಳಿಂದ ಪ್ರತಿವರ್ಷದಂತೆ ಗೋಪುರ ಮತ್ತು ಜ್ಯೋತಿಗಳ ಮೆರವಣಿಗೆ ಬರುತ್ತದೆ. ಕೆಂಪೇಗೌಡರು ನಿರ್ಮಾಣ ಮಾಡಿದ್ದ ಗೋಪುರಗಳನ್ನು ದಾಟಿ ಬೆಂಗಳೂರು ಮರ ನಾಲ್ಕು ಪಟ್ಟು ಹೆಚ್ಚು ಬೆಳೆದಿದೆ. ಬೆಂಗಳೂರು ಇಷ್ಟು ಅಗಾಧವಾಗಿ ಬೆಳೆಯಬಹುದು ಎನ್ನುವ ಕಲ್ಪನೆ ಸ್ವತಃ ಕೆಂಪೇಗೌಡರಿಗೆ ಇರಲಿಲ್ಲ. ಈ ನಗರ ಸ್ಥಾಪಿಸಿದ ಮಹಾನ್ ವ್ಯಕ್ತಿಯ ಜಯಂತಿಯನ್ನು ಇತರೇ ಸಾಧಕರ ಜಯಂತಿಯಂತೆ ಆಚರಿಸಬೇಕಿದೆ ಎಂದು ಹೇಳಿದರು.

ಬಿ.ಎಲ್.ಶಂಕರ್ ಅವರ ನೇತೃತ್ವದಲ್ಲಿ ಕೆಂಪೇಗೌಡ ಪ್ರಶಸ್ತಿ ಆಯ್ಕೆ ಸಮಿತಿ ರಚನೆ ಮಾಡಲಾಗಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಿಡಿಎ, ಬಿಬಿಎಂಪಿಯಿಂದ ಕೆಂಪೇಗೌಡ ಪ್ರಶಸ್ತಿ ನೀಡಲು ಯೋಜಿಸಲಾಗಿದೆ. ಪ್ರಶಸ್ತಿಗೆ ನಾನು ಒಂದಷ್ಟು ಹೆಸರು ಸೂಚಿಸಿದ್ದೆ. ವಾರ್ಡ್ ಮಟ್ಟದಲ್ಲಿ ಅಥವಾ ಬೇರೆ ಸ್ವರೂಪದಲ್ಲಿ ಪ್ರಶಸ್ತಿ ನೀಡಬೇಕಾ ಎಂದು ಗೊಂದಲ ಇರುವ ಕಾರಣಕ್ಕೆ ಮುಂದುವರೆದಿಲ್ಲ. ಮುಂದಿನ ದಿನಗಳಲ್ಲಿ ಈ ಪ್ರಶಸ್ತಿ ನೀಡಲಾಗುವುದು. ಕೆಂಪೇಗೌಡರ ಮೂಲ ಸಮಾಧಿ ಸ್ಥಳ, ಕೋಟೆಯನ್ನು ಅಭಿವೃದ್ಧಿಪಡಿಸುವ ಕ್ರಿಯಾಯೋಜನೆ ಸಿದ್ಧ ಪಡಿಸಲಾಗಿದೆ. ಅವರ ಬಗ್ಗೆ ಮಾಹಿತಿಯೂ ಸಿಗಬೇಕು ಹಾಗೂ ಪ್ರವಾಸಿ ಸ್ಥಳವಾಗಿಯೂ ಪರಿವರ್ತನೆಯಾಗಬೇಕು ಎಂದು ತಿಳಿಸಿದರು.

ಸಚಿವರಾದ ಕೆ.ಹೆಚ್.ಮುನಿಯಪ್ಪ ಅವರ ಕ್ಷೇತ್ರದಲ್ಲಿ ಕೆಂಪೇಗೌಡರ ಜನ್ಮಸ್ಥಳ ಅಭಿವೃದ್ಧಿಗೆ 10 ಎಕರೆ ಮಂಜೂರು ಮಾಡಲಾಗಿದೆ. ಶೀಘ್ರದಲ್ಲೇ ಸ್ಥಳ ಪರಿಶೀಲನೆ ನಡೆಸಲಾಗುವುದು. ಸುಮನಹಳ್ಳಿಯಲ್ಲಿ ಕೆಂಪೇಗೌಡ ಪ್ರಾಧಿಕಾರದ ಕಚೇರಿಗಾಗಿ 5 ಎಕರೆ ಜಾಗವನ್ನು ಮಂಜೂರು ಮಾಡಲಾಗಿದೆ. ಜಯಂತಿಯಂದೇ ಗುದ್ದಲಿಪೂಜೆಗೆ ಯೋಚಿಸಲಾಗಿದೆ. ಕೆಂಪೇಗೌಡರನ್ನು ಕೇವಲ ಒಂದು ಜಾತಿಗೆ ಸೀಮಿತ ಮಾಡಬಾರದು. ಜಾತ್ಯಾತೀತ ತತ್ವದಲ್ಲಿ ಆಚರಣೆ ಮಾಡಬೇಕು. ಕೆಂಪೇಗೌಡರ ಜಯಂತಿ ಕೇವಲ ಸರ್ಕಾರಿ ಕಾರ್ಯಕ್ರಮವಲ್ಲ. ಈ ರೀತಿ ನಮ್ಮ ಸರ್ಕಾರ ಬಿಂಬಿಸುವುದಿಲ್ಲ. ಎಲ್ಲಾ ವರ್ಗದ ಜನರಿಗೂ ಕೆಂಪೇಗೌಡರು ಸಹಕಾರ ನೀಡಿದ್ದಾರೆ. ಬಸವಣ್ಣನವರ ಜಯಂತಿಯನ್ನು ಕೇವಲ ಲಿಂಗಾಯತರು ಹಾಗೂ ಅಂಬೇಡ್ಕರ್ ಅವರ ಜಯಂತಿಯನ್ನು ಪರಿಶಿಷ್ಟರು ಮಾಡುತ್ತಿದ್ದಾರೆ. ನಾವು ಎಲ್ಲಾ ಸಂಘ ಸಂಸ್ಥೆಗಳನ್ನು, ಸಮುದಾಯಗಳನ್ನು ಸೇರಿಸಿಕೊಂಡು ಆಚರಣೆ ಮಾಡಬೇಕು. ಸಭೆಯಲ್ಲಿ 100ಕ್ಕೂ ಉತ್ತಮವಾದ ಸಲಹೆಗಳು ಬಂದಿವೆ. ಇದರಲ್ಲಿ ಸೂಕ್ತವಾದವುಗಳನ್ನು ಅಧಿಕಾರಿಗಳ ಬಳಿ ಚರ್ಚಿಸಲಾಗುವುದು ಎಂದರು.

ಮೋದಿ–ಸಿದ್ದರಾಮಯ್ಯ ಸರ್ಕಾರ; ದರ್ಶನ್ ಬಗ್ಗೆ ಕೋಡಿಶ್ರೀ ಸ್ಫೋಟಕ ಭವಿಷ್ಯ

ಚಿಕ್ಕಬಳ್ಳಾಪುರ: ಈಗ ದೇಶದಲ್ಲಿ ಕ್ರೋಧಿ ನಾಮ ಸಂವತ್ಸರ ಇದೆ. ಶುಭಗಳಿಗಿಂತ ಅಶುಭಗಳೇ ಹೆಚ್ಚಾಗಿ ನಡೆಯುತ್ತವೆ. ದೇಶದಲ್ಲಿ ಜಲಕಂಟಕ, ಅಗ್ನಿಕಂಟಕ, ವಾಯು ಕಂಟಕಗಳು ಹೆಚ್ಚಾಗಲಿವೆ. ರಾಜ್ಯದಲ್ಲಿ ಈ ಬಾರಿ ಅತಿ ವೃಷ್ಟಿ ಸಾಧ್ಯತೆ ಇದೆ ಎಂದು ಕೋಡಿಮಠದ ಶ್ರೀಗಳಾದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿಯವರು ಸ್ಫೋಟಕ ಭವಿಷ್ಯ ನುಡಿದಿದ್ದಾರೆ.



ಚಿಕ್ಕಬಳ್ಳಾಪುರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೋಡಿಮಠದ ಶ್ರೀ, ಗುರುಗಳು ಶಿಷ್ಯರಾಗುತ್ತಾರೆ, ಶಿಷ್ಯರು ಗುರುಗಳಾಗುತ್ತಾರೆ. ಹೆಣ್ಣು ಮಕ್ಕಳ ಪ್ರಾಬಲ್ಯ ಹೆಚ್ಚಾಗಲಿದೆ. ರಾಜ್ಯದಲ್ಲಿ ಸಿದ್ದರಾಮಯ್ಯ ಸರ್ಕಾರಕ್ಕೆ ಯಾವುದೇ ಆಪತ್ತು ಇರುವುದಿಲ್ಲ. ಶ್ರಾವಣದಲ್ಲಿ ನಾನು ಮತ್ತೊಂದು ಸ್ಫೋಟಕ ಭವಿಷ್ಯ ಹೇಳುತ್ತೇನೆ. ಕೇಂದ್ರ ಸರ್ಕಾರ ಹಾಗೂ ಮೋದಿ ಅವರ ಬಗ್ಗೆ ಶ್ರಾವಣದಲ್ಲಿ ಮಾತನಾಡುತ್ತೇನೆ ಎಂದಿದ್ದಾರೆ.

ಈ ಮೂಲಕ ಲೋಕಸಭಾ ಚುನಾವಣೆ ಬಳಿಕ ಸಿದ್ದರಾಮಯ್ಯ ಸರ್ಕಾರ ಪತನವಾಗುತ್ತೆ ಎನ್ನುವ ಚರ್ಚೆಗಳ ಮಧ್ಯ ಏನು ಆಗುವುದಿಲ್ಲ ಎಂದು ಕೋಡಿಶ್ರೀ ಭವಿಷ್ಯ ನುಡಿದಿದ್ದಾರೆ. ಇನ್ನು ಈ ಬಾರಿ ಕೇಂದ್ರದಲ್ಲಿ ಬಿಜೆಪಿ ಬಹುಮತ ಬರದಿದ್ದಕ್ಕೆ ಎನ್‌ಡಿಎ ಮೈತ್ರಿ ಸರ್ಕಾರ ರಚನೆ ಮಾಡಿದ್ದು, ಇದು ಬಹಳ ದಿನ ಉಳಿಯುವುದಿಲ್ಲ ಎಂದು ವಿಪಕ್ಷಗಳ ಭವಿಷ್ಯದ ನಡುವೆ ಕೋಡಿಮಠದ ಶ್ರೀಗಳಾದ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಯವರು ಪ್ರತಿಕ್ರಿಯಿಸಿ, ಸರ್ಕಾರ ಹಾಗೂ ಮೋದಿ ಅವರ ಬಗ್ಗೆ ಶ್ರಾವಣದಲ್ಲಿ ಮಾತನಾಡುತ್ತೇನೆ ಎಂದು ಹೇಳಿದ್ದಾರೆ.

ದರ್ಶನ್–ಉಮಾಪತಿ ಬಗ್ಗೆ ಕೋಡಿಶ್ರೀ ಭವಿಷ್ಯ: ಇದೇ ವೇಳೆ ಕೊಲೆ ಆರೋಪಿಯಾಗಿರುವ ಸ್ಯಾಂಡಲ್‌ವುಡ್ ನಟ ದರ್ಶನ್ ಹಾಗೂ ನಿರ್ಮಾಪಕ ಉಮಾಪತಿ ನಡುವಿನ ವಿವಾದದ ಬಗ್ಗೆ ಪ್ರತಿಕ್ರಿಯಿಸಿ, ಕೋಪ ಕಡಿಮೆ ಮಾಡಿಕೊಳ್ಳಬೇಕು. ತಂದೆ–ತಾಯಿ ಮಾತು ಕೇಳಬೇಕು. ಆ ರೀತಿ ನಡೆದುಕೊಂಡಿದ್ದರಿಂದ ಈಗ ಒಳ್ಳೆಯ ಸ್ಥಾನಮಾನದಲ್ಲಿ ಇದ್ದೇನೆ. ದರ್ಶನ್ ವಿರುದ್ಧ ಗಲಾಟೆ ನಡೆದಾಗ ನಾನು ಕೋಪ ಮಾಡಿಕೊಳ್ಳಲಿಲ್ಲ. ಕೋಪದ ಕೈಗೆ ಬುದ್ಧಿ ಕೊಟ್ಟರೆ ಈ ರೀತಿಯ ಅವಘಡಗಳು ಸಂಭವಿಸುತ್ತವೆ ಎಂದು ಉಮಾಪತಿಯೇ ಹೇಳಿದ್ದಾರೆ. ಕರೆಯದೆ ಬರುವವನು ಕೋಪ, ಬರೆಯದೆ ಓದುವವನು ಕಣ್ಣು, ಬರಿಗಾಲಲ್ಲಿ ನಡೆಯುವವನು ಮನಸ್ಸು ಎಂದು ಇಬ್ಬರ ನಡುವಿನ ಗಲಾಟೆ ಬಗ್ಗೆ ಮಾರ್ಮಿಕವಾಗಿ ನುಡಿದಿದ್ದಾರೆ.

ಮೈಸೂರು, ಮಂಡ್ಯ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ

ಇಂದಿನಿಂದ ಜೂ.23ರವರೆಗೆ ತುಂತುರುವಿನಿಂದ ಕೂಡಿದ ಸಾಧಾರಣ ಮಳೆ ಸಂಭವ

ಮೈಸೂರು,ಜೂ.18(ಪಿಎಂ)– ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜೂ.19ರಿಂದ 23ರವರೆಗೆ ಮೈಸೂರು, ಮಂಡ್ಯ, ಕೊಡಗು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ತುಂತುರುವಿನಿಂದ ಕೂಡಿದ ಸಾಧಾರಣ ಮಳೆಯಾಗುವ ಸಂಭವವಿದೆ ಎಂದು ನಾಗನಹಳ್ಳಿಯ ಕೃಷಿ ಹವಾಮಾನ ಕ್ಷೇತ್ರ ವಿಭಾಗವು ಪ್ರಕಟಣೆಯಲ್ಲಿ ತಿಳಿಸಿದೆ.

ಅದರಂತೆ ಮೈಸೂರು ಜಿಲ್ಲೆಯಲ್ಲಿ ಮೋಡ ಕವಿದ ವಾತಾವರಣವಿದ್ದು, ತುಂತುರುವಿನಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 29ರಿಂದ 31 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 16.9ರಿಂದ 18 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.83ರಿಂದ 94ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.48ರಿಂದ 82ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 14ರಿಂದ 18 ಕಿಲೋಮೀಟರ್ ವೇಗದಲ್ಲಿ ಬೀಸುವ ಸಂಭವವಿದೆ.

ಮಂಡ್ಯ ಜಿಲ್ಲೆಯಲ್ಲಿ ಭಾಗಶಃ ಮೋಡ ಕವಿದ ವಾತಾವರಣವಿದ್ದು, ತುಂತುರುವಿನಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 30.4ರಿಂದ 34.3 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 17.6ರಿಂದ 19 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.80ರಿಂದ 93ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.43ರಿಂದ 72ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 17ರಿಂದ 19 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ.

ಕೊಡಗು ಜಿಲ್ಲೆಯಲ್ಲಿ ಮೋಡ ಕವಿದ ವಾತಾವರಣವಿದ್ದು, ತುಂತುರುವಿನಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 27ರಿಂದ 28 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 18.2ರಿಂದ 18.9 ರವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.90 ರಿಂದ 97ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.61ರಿಂದ 94ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 8ರಿಂದ 9 ಕಿಲೋ ಮೀಟರ್ ವೇಗದಲ್ಲಿ ಬೀಸುವ ಸಂಭವವಿದೆ.

ಚಾಮರಾಜನಗರ ಜಿಲ್ಲೆಯಲ್ಲಿ ಮೋಡ ಕವಿದ ವಾತಾವರಣವಿದ್ದು, ತುಂತುರುವಿನಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ಗರಿಷ್ಠ ಉಷ್ಣಾಂಶ 28–30 ಡಿಗ್ರಿ ಸೆಲ್ಸಿಯಸ್ ಮತ್ತು ಕನಿಷ್ಠ ಉಷ್ಣಾಂಶ 16.9ರಿಂದ 18 ಡಿಗ್ರಿ ಸೆಲ್ಸಿಯಸ್‌ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ.73ರಿಂದ 92ರವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ.43ರಿಂದ 74ರವರೆಗೆ ದಾಖಲಾಗುವ ಸಾಧ್ಯತೆ ಇದೆ. ಗಾಳಿಯು ಗಂಟೆಗೆ 11ರಿಂದ 15 ಕಿಮೀ ವೇಗದಲ್ಲಿ ಬೀಸುವ ಸಂಭವವಿದೆ.

ಏಳು ಬಣ್ಣಗಳ ಕಾಮನಬಿಲ್ಲು ಒಡಮೂಡಿದ ಕ್ಷಣ...



ಮಂಗಳವಾರ ಸಂಜೆ ಮೈಸೂರಿನ ಹಳೇ ಜಿಲ್ಲಾಧಿಕಾರಿ ಆವರಣದಿಂದ ಬಾನಂಗಳದಲ್ಲಿ ಕಂಡುಬಂದ ಏಳು ಬಣ್ಣಗಳ ಕಾಮನಬಿಲ್ಲಿನ ಸೊಗಸು ಕ್ಯಾಮರಾಗೆ ಸೆರೆಯಾಗಿದ್ದು ಹೀಗೆ.

ದೇಶ - ವಿದೇಶ

ವಿಧಾನಸಭಾ ಚುನಾವಣೆ: ಬಿಜೆಪಿ ಉಸ್ತುವಾರಿಗಳಾಗಿ 5 ಕೇಂದ್ರ ಸಚಿವರ ನೇಮಕ!

ನವದೆಹಲಿ, ಜೂ.18– ಲೋಕಸಭಾ ಚುನಾವಣೆಯಲ್ಲಿ ಸ್ವತಂತ್ರವಾಗಿ ಸರ್ಕಾರ ರಚಿಸುವಷ್ಟು ಬಹುಮತ ಪಡೆಯುವಲ್ಲಿ ಬಿಜೆಪಿ ವಿಫಲವಾಗಿದ್ದು, ಈಗ ವಿಧಾನಸಭೆಯತ್ತ ಬಿಜೆಪಿ ತನ್ನ ಗಮನವನ್ನು ಕೇಂದ್ರೀಕರಿಸಿದೆ. ವರ್ಷಾಂತ್ಯಕ್ಕೆ ಮಹಾರಾಷ್ಟ್ರ, ಜಾರ್ಖಂಡ್, ಹರ್ಯಾಣ, ಜಮ್ಮು–ಕಾಶ್ಮೀರದಲ್ಲಿ ಚುನಾವಣೆಗಳು ನಡೆಯಲಿದ್ದು, ಬಿಜೆಪಿ ರಾಷ್ಟ್ರಾಧ್ಯಕ್ಷ ಜೆಪಿ ನಡ್ಡಾ ಸೋಮವಾರದಂದು ಈ ರಾಜ್ಯಗಳಿಗೆ ಚುನಾವಣಾ ಉಸ್ತುವಾರಿ ಹಾಗೂ ಸಹ ಉಸ್ತುವಾರಿಗಳನ್ನು ನೇಮಕ ಮಾಡಿದ್ದಾರೆ.

ಕೇಂದ್ರ ಸಚಿವ ಭೂಪೇಂದ್ರ ಯಾದವ್ ಅವರನ್ನು ಮಹಾರಾಷ್ಟ್ರಕ್ಕೆ ಉಸ್ತುವಾರಿಯನ್ನಾಗಿ ನೇಮಕ ಮಾಡಿದ್ದರೆ, ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಸಹ ಉಸ್ತುವಾರಿಯಾಗಿದ್ದಾರೆ. ಹರ್ಯಾಣಗೆ ಕೇಂದ್ರ ಸಚಿವರಾದ ಧರ್ಮೇಂದ್ರ ಪ್ರಧಾನ್ ಹಾಗೂ ಮಾಜಿ ತ್ರಿಪುರಾ ಸಿಎಂ ಬಿಪ್ಲಬ್ ದೇವ್ ಅವರನ್ನು ಉಸ್ತುವಾರಿ, ಸಹ ಉಸ್ತುವಾರಿಯನ್ನಾಗಿ ನೇಮಿಸಲಾಗಿದೆ. ಜಾರ್ಖಂಡ್‌ಗೆ, ಕೇಂದ್ರ ಸಚಿವ ಮತ್ತು ಮಧ್ಯಪ್ರದೇಶದ ಮಾಜಿ ಸಿಎಂ ಶಿವರಾಜ್ ಸಿಂಗ್ ಚೌಹಾಣ್ ಉಸ್ತುವಾರಿ ಮತ್ತು ಅಸ್ಸಾಂ ಸಿಎಂ ಹಿಮಂತ ಬಿಸ್ವಾ ಶರ್ಮಾ ಸಹ ಉಸ್ತುವಾರಿ. ಕೇಂದ್ರ ಸಚಿವ ಜಿ ಕಿಶನ್ ರೆಡ್ಡಿ ಅವರನ್ನು ಜಮ್ಮು–ಕಾಶ್ಮೀರಕ್ಕೆ ಉಸ್ತುವಾರಿಯಾಗಿ ನೇಮಿಸಲಾಗಿದೆ.

ಹಾಡುಹಗಲೇ ಕಬ್ಬಿಣದ ಸ್ಪ್ಯಾನರ್‌ನಿಂದ 15 ಬಾರಿ ಹೊಡೆದು ಪ್ರೇಯಸಿ ಕೊಂದ ಪ್ರಿಯಕರ!

ಮುಂಬೈ, ಜೂ.18– ಮುಂಬೈನ ವಸಾಯಿಯಲ್ಲಿ ಪ್ರಿಯಕರನೊಬ್ಬ ತನ್ನ



ಪ್ರೇಯಸಿಗೆ ನಡುರಸ್ತೆಯಲ್ಲೇ ಕಬ್ಬಿಣದ ಸ್ಪ್ಯಾನರ್‌ನಿಂದ ತಲೆಗೆ 15 ಬಾರಿ ಹೊಡೆದು ಬರ್ಬರವಾಗಿ ಹತ್ಯೆ ಮಾಡಿದ್ದಾನೆ. ಮಂಗಳವಾರ ಬೆಳಗ್ಗೆ 8.30ರ ಸುಮಾರಿಗೆ ವಸಾಯಿ ಪೂರ್ವದ ಚಿಂಚ್ಪಾಡಾ ಪ್ರದೇಶದಲ್ಲಿ ಈ ಘಟನೆ ನಡೆದಿದೆ. ಸಾರ್ವಜನಿಕರು ಈ ಕೃತ್ಯ ನೋಡುತ್ತಾ ನಿಂತಿದ್ದರೇ ಹೊರತು ಯಾರು ಯುವತಿಯ ಸಹಾಯಕ್ಕೆ ಮುಂದಾಗಲಿಲ್ಲ. ಆರೋಪಿ ರೋಹಿತ್ ಯಾದವ್ 20 ವರ್ಷದ ಆರತಿ ಯಾದವ್ ಮೇಲೆ ಮಾರಣಾಂತಿಕ ದಾಳಿ ನಡೆಸಿ ಕೊಲೆ ಮಾಡಿದ್ದಾನೆ. ಪೊಲೀಸರ ಪ್ರಕಾರ, ಪ್ರೀತಿ–ಪ್ರೇಮ ಕಾರಣಕ್ಕೆ ಈ ಕೊಲೆಯಾಗಿದೆ. ರೋಹಿತ್ ಯಾದವ್–ಆರತಿ ಪ್ರೀತಿಸುತ್ತಿದ್ದರು. ಆದರೆ ಕೆಲ ದಿನಗಳ ಹಿಂದಷ್ಟೇ ಆತನಿಂದ ಬ್ರೇಕಪ್ ಮಾಡಿಕೊಂಡಿದ್ದಳು. ಇದಾದ ನಂತರ ಆರತಿ ಬೇರೊಬ್ಬನ ಜೊತೆ ತಿರುಗುತ್ತಿದ್ದಾಳೆ ಎಂದು ಶಂಕಿಸಿ ರೋಹಿತ್ ಆಕ್ರೋಶಗೊಂಡು ಆಕೆಯನ್ನು ಹತ್ಯೆ ಮಾಡಿದ್ದಾನೆ ಎನ್ನಲಾಗಿದೆ.

ಪತ್ನಿ ಮೃತಪಟ್ಟ ಕೆಲವೇ ನಿಮಿಷಗಳಲ್ಲಿ ಅಸ್ಸಾಂ ಗೃಹ ಕಾರ್ಯದರ್ಶಿ ಆತ್ಮಹತ್ಯೆಗೆ ಶರಣು!

ಗುವಾಹಟಿ: ಅಸ್ಸಾಂ ಸರ್ಕಾರದ ಗೃಹ ಇಲಾಖೆಯ ಕಾರ್ಯದರ್ಶಿ ಹಾಗೂ ಹಿರಿಯ ಐಪಿಎಸ್ ಅಧಿಕಾರಿ ಶಿಲಾದಿತ್ಯ ಚೇಟಿಯಾ ಅವರು ಮಂಗಳವಾರ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.



ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಅವರ ಪತ್ನಿ ಆಸ್ಪತ್ರೆಯಲ್ಲಿ ನಿಧನರಾದ ಸುದ್ದಿ ತಿಳಿದ ಕೆಲವೇ ನಿಮಿಷಗಳಲ್ಲಿ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ರಾಜ್ಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ. ಹಿರಿಯ ಐಪಿಎಸ್ ಅಧಿಕಾರಿಯ ಸಾವಿನ ಬಗ್ಗೆ ಮಾಹಿತಿ ನೀಡಿದ ಅಸ್ಸಾಂನ ಪೊಲೀಸ್ ಮಹಾನಿರ್ದೇಶಕ ಜಿಪಿ ಸಿಂಗ್ ಅವರು, ಶಿಲಾದಿತ್ಯ ಚೇಟಿಯಾ ಅವರ ಪತ್ನಿ ಕ್ಯಾನ್ಸರ್‌ನಿಂದ ಮೃತಪಟ್ಟ ಕೆಲವೇ ನಿಮಿಷಗಳಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು.

ದೀರ್ಘಕಾಲದಿಂದ ಕ್ಯಾನ್ಸರ್ ನಿಂದ ಬಳಲುತ್ತಿದ್ದ ಅವರ ಪತ್ನಿಗೆ ಚಿಕಿತ್ಸೆ ನೀಡುತ್ತಿದ್ದ ವೈದ್ಯರು, ಅಧಿಕಾರಿಯ ಪತ್ನಿ ಮೃತಪಟ್ಟಿರುವುದಾಗಿ ಘೋಷಿಸಿದ ಕೆಲವೇ ನಿಮಿಷಗಳ ನಂತರ ಈ ಘಟನೆ ನಡೆದಿದ್ದು, ಇಡೀ ಅಸ್ಸಾಂ ಪೊಲೀಸ್ ಕುಟುಂಬ ತೀವ್ರ ದುಃಖದಲ್ಲಿದೆ ಎಂದು ಅಸ್ಸಾಂ ಪೊಲೀಸ್ ಮುಖ್ಯಸ್ಥರು ಹೇಳಿದ್ದಾರೆ. ಸ್ಥಳೀಯ ಮಾಧ್ಯಮ ವರದಿಗಳ ಪ್ರಕಾರ, ಉನ್ನತ ಅಧಿಕಾರಿಯ ಪತ್ನಿಯು ಗುವಾಹಟಿಯ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದರು. ಚೇತಿಯಾ ಅವರು ತಾವೇ ಗುಂಡು ಹಾರಿಸಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ದೋಣಿ ದುರಂತದಲ್ಲಿ 11 ಸಾವು; 66ಕ್ಕೂ ಹೆಚ್ಚು ಮಂದಿ ನಾಪತ್ತೆ

ರೋಮ್, ಇಟಲಿ, ಜೂ.18– ಇಟಲಿಯ ಕರಾವಳಿಯಲ್ಲಿ ಹಾಯಿ



ದೋಣಿಯೊಂದು ಮುಳುಗಿ ಕನಿಷ್ಠ 11 ವಲಸಿಗರು ಮೃತಪಟ್ಟಿದ್ದಾರೆ. ಇನ್ನೂ 66 ಮಂದಿ ನಾಪತ್ತೆಯಾಗಿದ್ದಾರೆ ಎಂದು ಇಟಾಲಿಯನ್ ಅಧಿಕಾರಿಗಳು ತಿಳಿಸಿದ್ದಾರೆ. ಈ ಸುದ್ದಿ ತಿಳಿಯುತ್ತಿದ್ದಂತೆ ಮೆಡಿಟರೇನಿಯನ್‌ನಲ್ಲಿ ಇಟಲಿಯ ಕರಾವಳಿ ಸಿಬ್ಬಂದಿ ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ ಎಂದು ಕ್ಸಿನ್ಹುವಾ ಸುದ್ದಿ ಸಂಸ್ಥೆ ವರದಿ ಮಾಡಿದೆ. ದಕ್ಷಿಣ ಇಟಲಿಯ ಕ್ಯಾಲಬ್ರಿಯಾದ ಕರಾವಳಿಯಿಂದ ಸುಮಾರು 120 ಮೈಲಿಗಳು ದೂರದಲ್ಲಿ ಹಾಯಿ ದೋಣಿಯೊಂದು ಮುಳುಗಿತ್ತು. ಆ ಪ್ರದೇಶದಲ್ಲಿ ವ್ಯಾಪಾರಿ ಹಡಗು ಈ ಬಗ್ಗೆ ಮಾಹಿತಿ ಪಡೆದುಕೊಂಡಿತ್ತು. ಆ ಬಳಿಕ ಸಂಕಷ್ಟದಲ್ಲಿ ಸಿಲುಕಿದವರಿಗಾಗಿ ರಕ್ಷಣಾ ಕಾರ್ಯಾಚರಣೆ ಆರಂಭಿಸಲಾಯಿತು. ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿದ ವ್ಯಾಪಾರಿ ಹಡಗು 12 ಜನರನ್ನು ರಕ್ಷಿಸುವಲ್ಲಿ ಯಶಸ್ವಿಯಾಗಿದೆ. ಇಟಾಲಿಯನ್ ಕರಾವಳಿ ರಕ್ಷಣಾ ಹಡಗು, ಅಪಘಾತದ ಸ್ಥಳಕ್ಕೆ ಬರುವವರೆಗೂ ಅವರಿಗೆ ಸಹಾಯ ಮಾಡಿತು.

ಮಸಾಲೆ ಪದಾರ್ಥಗಳ ರಫ್ತು ದಾಖಲೆಯ ಏರಿಕೆ: ಕೆಂಪು ಮೆಣಸಿನಕಾಯಿ ರಫ್ತು ಶೇ.15ರಷ್ಟು ಹೆಚ್ಚಳ

ನವದೆಹಲಿ, ಜೂ.18– ಭಾರತದ ಸಾಂಬಾರು ಪದಾರ್ಥಗಳು ಮತ್ತು ಸಾಂಬಾರು



ಉತ್ಪನ್ನಗಳ ರಫ್ತು 2023–24ರ ಹಣಕಾಸು ವರ್ಷದಲ್ಲಿ ದಾಖಲೆಯ 4.46 ಬಿಲಿಯನ್ ಡಾಲರ್‌ನಷ್ಟು ಸಾರ್ವಕಾಲಿಕ ಗರಿಷ್ಠ ಮಟ್ಟವನ್ನು ತಲುಪಿದೆ. ಮೆಣಸು, ಏಲಕ್ಕಿ ಮತ್ತು ಅರಿಶಿನದಂತಹ ಕೆಲ ಪದಾರ್ಥಗಳ ಬೆಲೆಗಳು ಏರಿಕೆಯಾಗಿದ್ದರಿಂದ ಮತ್ತು ಪ್ರಮಾಣ ಹೆಚ್ಚಾಗಿದ್ದರಿಂದ ಈ ಬೆಳವಣಿಗೆ ಕಂಡುಬಂದಿದೆ. ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯದ ಅಡಿಯಲ್ಲಿ ಬರುವ ಮಸಾಲೆ ಮಂಡಳಿಯು ನೀಡಿದ ಇತ್ತೀಚಿನ ಮಾಹಿತಿಯ ಪ್ರಕಾರ, 2023–24ರ ಹಣಕಾಸು ವರ್ಷದಲ್ಲಿ ದೇಶದಿಂದ 36,958.80 ಕೋಟಿ ರೂ.ಗಳ (4.46 ಬಿಲಿಯನ್ ಡಾಲರ್) ಮೌಲ್ಯದ 15,39,692 ಟನ್‌ಗಳಷ್ಟು ಸಾಂಬಾರು ಪದಾರ್ಥಗಳು ಮತ್ತು ಮಸಾಲೆ ಉತ್ಪನ್ನಗಳನ್ನು ರಫ್ತು ಮಾಡಲಾಗಿದೆ. ಚೀನಾ ಮತ್ತು ಬಾಂಗ್ಲಾದೇಶದಿಂದ ಬೇಡಿಕೆ ಹೆಚ್ಚಾಗಿದ್ದರಿಂದ ಕೆಂಪು ಮೆಣಸಿನಕಾಯಿ ರಫ್ತು 2024ರ ಹಣಕಾಸು ವರ್ಷದಲ್ಲಿ ದಾಖಲೆಯ 1.5 ಬಿಲಿಯನ್ ಡಾಲರ್‌ಗೆ ತಲುಪಿದೆ. ಇದು ಹಿಂದಿನ ವರ್ಷದ 1.3 ಬಿಲಿಯನ್ ಡಾಲರ್‌ಗಿಂತ ಶೇಕಡಾ 15ರಷ್ಟು ಹೆಚ್ಚಾಗಿದೆ.

ಜಿಯೋ ಸರ್ವರ್ ಡೌನ್: ನೆಟ್‌ವರ್ಕ್ ಸಿಗದೆ ಬಳಕೆದಾರರ ಪರದಾಟ

ನವದೆಹಲಿ: ದೇಶಾದ್ಯಂತ ಜಿಯೋ ಸರ್ವರ್ ಡೌನ್ ಆಗಿದೆ. ವಾಟ್ಸಾಪ್, ಇನ್ಸ್ಟಾಗ್ರಾಮ್, ಎಕ್ಸ್, ಸ್ನ್ಯಾಪ್ಚಾಟ್, ಯೂಟ್ಯೂಬ್ ಮತ್ತು ಗೂಗಲ್ ಸೇರಿದಂತೆ ಎಲ್ಲಾ ದೈನಂದಿನ ಬಳಕೆಯ ಅಪ್ಲಿಕೇಶನ್ ಪ್ರವೇಶಿಸಲು ಸಾಧ್ಯವಾಗದ ಕಾರಣ ದೇಶಾದ್ಯಂತ ಬಳಕೆದಾರರು ಜಿಯೋ ಸೇವೆಗಳು ಕಾರ್ಯನಿರ್ವಹಿಸುತ್ತಿಲ್ಲ ಎಂದು ದೂರುತ್ತಿದ್ದಾರೆ. ಸರ್ವರ್‌ಗಳ ಮೇಲೆ ನಿಗಾ ಇಡುವ ಡೌನ್‌ಡಿಟೆಕ್ಟರ್ ಸಂಸ್ಥೆ ವರದಿ ಪ್ರಕಾರ ಶೇ.54ರಷ್ಟು ಗ್ರಾಹಕರು ಮೊಬೈಲ್ ಇಂಟರ್‌ನೆಟ್ ಸಮಸ್ಯೆ ಬಗ್ಗೆ ದೂರಿದರೆ, ಶೇ.38ರಷ್ಟು ಜಿಯೋ ಬಳಕೆದಾರರು ಜಿಯೋ ಫೈಬರ್ ಹಾಗೂ ಶೇ.7ರಷ್ಟು ಗ್ರಾಹಕರು ಮೊಬೈಲ್ ನೆಟ್‌ವರ್ಕ್ ಸಮಸ್ಯೆ ಬಗ್ಗೆ ದೂರಿದ್ದಾರೆ ಎಂದು ತಿಳಿಸಿದೆ. ಬೆಂಗಳೂರು, ಹೈದರಾಬಾದ್, ಚೆನ್ನೈ ಸೇರಿ ದೇಶದ ಮೂಲೆ ಮೂಲೆಗಳ ಗ್ರಾಹಕರು ಎಕ್ಸ್ ಸಾಮಾಜಿಕ ಜಾಲತಾಣಗಳಲ್ಲಿ ಇಂಟರ್‌ನೆಟ್, ನೆಟ್‌ವರ್ಕ್ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ.


ನಾಯಿ ಬೊಗಳಿದರೆ ದೇವಲೋಕ ಹಾಳಾಗಲ್ಲ ಅಂತಾರೆ... ಆದರೆ ಬೆದರಿದ ಕಾಡಾನೆ ತೆರೆದ ಬಾವಿಗೆ ಬಿದ್ದು ಸತ್ತಿದೆ!

● ಕೊಡಗು ಜಿಲ್ಲೆಯ ಪಾಲಂಗಾಲ ಗ್ರಾಮದಲ್ಲಿ ದುರಂತ ● ಎರಡು ದಂತ ವಶಕ್ಕೆ; ಬಾವಿಯಲ್ಲೇ ಅಂತ್ಯಸಂಸ್ಕಾರ

ಸಿದ್ದಾಪುರ,ಜೂ.18(ಮುಬಾರಕ್)–'ಆನೆ ಹೋಗುವಾಗ ನಾಯಿ ಬೊಗಳಿದರೆ ಏನೂ ಆಗುವುದಿಲ್ಲ...' ಎನ್ನುವುದು ಜನಜನಿತ ಮಾತು. ಆದರೆ ಕಾಡಾನೆಯೊಂದು ನಾಯಿ ಬೊಗಳಿದ್ದರಿಂದ ಬೆಚ್ಚಿ, ತೆರೆದ ಬಾವಿಗೆ ಬಿದ್ದು, ದುರಂತ ಸಾವಿಗೀಡಾಗಿದೆ. ಈ ಘಟನೆ ಕೊಡಗಿನಲ್ಲಿ ಮಂಗಳವಾರ ಮುಂಜಾನೆ ಸಂಭವಿಸಿದೆ.

ಆಹಾರ ಅರಸಿ ಕೊಡಗು ಜಿಲ್ಲೆ ಕೆದಮುಳ್ಳೂರು ಗ್ರಾಪಂ ವ್ಯಾಪ್ತಿಯ ಪಾಲಂಗಾಲ ಗ್ರಾಮಕ್ಕೆ ನುಗ್ಗಿದ ಸುಮಾರು 20 ವರ್ಷದ ಗಂಡಾನೆ, ಮನೆಯೊಂದರ ಅಂಗಳದಲ್ಲಿದ್ದ ನಾಯಿ ಬೊಗಳಿದ್ದರಿಂದ ಗಾಬರಿಗೊಂಡು ಹಿಮ್ಮುಖವಾಗಿ ಹೋಗಿ ತೆರೆದ ಬಾವಿಗೆ ಬಿದ್ದು, ಸುಮಾರು 4 ಗಂಟೆಗಳ ಕಾಲ ಜೀವನ್ಮರಣ ಸ್ಥಿತಿಯಲ್ಲಿ ನರಳಾಡಿದೆ. ಹೊಟ್ಟೆ ಹಸಿವಿನಿಂದ ಅಡ್ಡಾಡಿ, ಕೊನೆಗೆ ಪ್ರಾಣ ಬಿಟ್ಟಿದೆ.

ಕೆದಮುಳ್ಳೂರು ಗ್ರಾಮ ಪಂಚಾಯ್ತಿ ವತಿಯಿಂದ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಪಾಲಂಗಾಲ ಗ್ರಾಮದ ಬಿದ್ದಪ್ಪ(ಶಂಬು) ಅವರ ಮನೆ ಮುಂದೆ ತೆರೆದ ಬಾವಿ ನಿರ್ಮಾಣ ಕಾಮಗಾರಿ ಪ್ರಗತಿಯಲ್ಲಿದೆ. ಮಂಗಳವಾರ ಮುಂಜಾನೆ ಆಹಾರ ಅರಸುತ್ತಿದ್ದ ಕಾಡಾನೆ, ಅವರ ಮನೆಯಂಗಳಕ್ಕೆ ಬಂದಿದೆ. ಈ ವೇಳೆ ಅಲ್ಲಿಯೇ ಇದ್ದ ನಾಯಿ, ಆನೆಯನ್ನು ನೋಡಿ ಗಾಬರಿಯಿಂದ ಜೋರಾಗಿ ಬೊಗಳಲಾರಂಭಿಸಿದೆ. ಇದರಿಂದ ಆನೆಯೂ ಗಾಬರಿಗೊಂಡು ಮನೆಯಂಗಳದಿಂದ ಹಿಮ್ಮುಖವಾಗಿ ಹೋಗಿದೆ. ಈ ವೇಳೆ ಆಕಸ್ಮಿಕವಾಗಿ ಸುಮಾರು 30 ಅಡಿ ಆಳದ ತೆರೆದ ಬಾವಿಗೆ ಬಿದ್ದು, ಮೇಲೇಳಲಾರದೆ ನರಳಾಡಿದೆ. ನಾಯಿ ಬೊಗಳಿದ್ದು, ನಂತರ ಭಾರಿ ಶಬ್ಧದಿಂದ ಎಚ್ಚರಗೊಂಡ ಬಿದ್ದಪ್ಪ ಮನೆಯವರು ಹೊರಗೆ ಓಡಿ ಬಂದಿದ್ದಾರೆ. ಬಾವಿ ಬಳಿ ಬಂದು ನೋಡಿದಾಗ ಅದರೊಳಗೆ ಆನೆ ಬಿದ್ದಿರುವುದು ಗೊತ್ತಾಗಿದೆ. ಕೂಡಲೇ ಅವರು ಅರಣ್ಯ ಇಲಾಖೆಗೆ ಮಾಹಿತಿ ನೀಡಿದ್ದಾರೆ.



ಮಂಗಳವಾರ ಮುಂಜಾನೆ ಕೆದಮುಳ್ಳೂರು ಗ್ರಾಮದಲ್ಲಿ ತೆರೆದ ಬಾವಿಗೆ ಬಿದ್ದು 20 ವರ್ಷದ ಆನೆ ಸತ್ತಿದೆ.

ಬಳಿಕ ಸ್ಥಳಕ್ಕೆ ಆಗಮಿಸಿದ ವಿರಾಜಪೇಟೆ ವಲಯ ಅರಣ್ಯಾಧಿಕಾರಿ ಕಳ್ಳಿರ ಎಂ.ದೇವಯ್ಯ ಹಾಗೂ ಸಿಬ್ಬಂದಿ, ಪರಿಶೀಲಿಸಿ ಈ ಬಗ್ಗೆ ಮೇಲಧಿಕಾರಿಗಳಿಗೆ ಮಾಹಿತಿ ನೀಡಿದ ಹಿನ್ನೆಲೆಯಲ್ಲಿ ವಿರಾಜಪೇಟೆ ಡಿಎಫ್‌ಓ ಜಗನ್ನಾಥ್, ಎಸಿಎಫ್ ನೆಹರು ಮತ್ತಿತರ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿದರು.



ಬಾವಿಗೆ ಬಿದ್ದ ಆನೆಯ ಸ್ಥಿತಿಗತಿ ಅರಿಯಲು ಅರಣ್ಯ ಸಿಬ್ಬಂದಿ ನಾನಾ ಕಸರತ್ತು ನಡೆಸಿದರು.

ಕತ್ತಲು ಹಾಗೂ ಮಳೆ ಕಾರಣದಿಂದ ರಕ್ಷಣಾ ಕಾರ್ಯಾಚರಣೆ ನಡೆಸಲು ಸಾಧ್ಯವಾಗದೆ, ಸ್ಥಳದಲ್ಲಿ ಠಿಕಾಣಿ ಹೂಡಿದ್ದರು. ಮುಂಜಾನೆ 4 ಗಂಟೆ ಸುಮಾರಿಗೆ ನೋಡಿದಾಗ ಆನೆ ಮೃತಪಟ್ಟಿತ್ತು. ನಾಲ್ಕೈದು ಗಂಟೆಗಳ ಕಾಲ ನರಳಿ ನರಳಿ ಉಸಿರು ಚೆಲ್ಲಿತ್ತು. ಆನೆಯ ಕಳೇಬರವನ್ನು ಮೇಲೆತ್ತುವ ಪ್ರಯತ್ನವೂ ವಿಫಲವಾಯಿತು. ಹಾಗಾಗಿ ವನ್ಯಜೀವಿ ವೈದ್ಯ ಡಾ.ಚೆಟ್ಟಿಯಪ್ಪ ಹಗ್ಗದ ಮೂಲಕ ಬಾವಿಗಿಳಿದು ಮರಣೋತ್ತರ ಪರೀಕ್ಷೆ ನಡೆಸಿ, ಸುಮಾರು 12 ಕೆಜಿ ತೂಕದ ಎರಡು ದಂತಗಳನ್ನು ಬೇರ್ಪಡಿಸಿ, ಅರಣ್ಯಾಧಿಕಾರಿಗಳ ವಶಕ್ಕೆ ನೀಡಿದರು. ನಂತರ ಮೇಲಾಧಿಕಾರಿಗಳ ನಿರ್ದೇಶನದಂತೆ ಅದೇ ಬಾವಿಗೆ ಮಣ್ಣು ಸರಿದು, ಆನೆಯ ಅಂತ್ಯಸಂಸ್ಕಾರ ಮಾಡಲಾಯಿತು.



ಕೊನೆಗೆ ಬಾವಿಯಲ್ಲೇ ಆನೆಯ ಅಂತ್ಯಕ್ರಿಯೆ ನೆರವೇರಿಸಿದ ನಂತರ ಸಮಾಧಿ ಮೇಲೆ ಹೂ ಇಡುತ್ತಿರುವ ಅರಣ್ಯ ಸಿಬ್ಬಂದಿ

ಉಪಟಳ ನೀಡುತ್ತಿದ್ದ ಒಂಟಿ ಸಲಗ?: ಕೆಲ ತಿಂಗಳುಗಳಿಂದ ಈ ಆನೆ ಒಂಟಿಯಾಗಿ ಕಾಫಿ ತೋಟಗಳಲ್ಲಿ ಬೀಡು ಬಿಟ್ಟು, ಕೃಷಿ ಫಸಲು ನಾಶ ಮಾಡುತ್ತಿತ್ತು. ಇದರಿಂದ ಬೆಳೆಗಾರರು ಹಾಗೂ ಕಾರ್ಮಿಕರು ಭಯಭೀತಗೊಂಡಿದ್ದರು. ತಿಂಗಳ ಹಿಂದೆ ಪಿಕಪ್ ಜೀಪ್ ಮೇಲೆ ದಾಳಿ ಮಾಡಿ, ಹಾನಿ ಮಾಡಿತ್ತು. ಬಹುಶಃ ತೆರೆದ ಬಾವಿಗೆ ಬಿದ್ದು ಸಾವನ್ನಪ್ಪಿರುವುದು ಅದೇ ಒಂಟಿ ಸಲಗ ಇರಬಹುದು ಎಂದು ಅರಣ್ಯ ಇಲಾಖೆ ಅಧಿಕಾರಿಗಳ ಅಭಿಪ್ರಾಯವಾಗಿದೆಯಾದರೂ ಇದಿನ್ನೂ ಸ್ಪಷ್ಟವಾಗಬೇಕಿದೆ.

ಶಾಶ್ವತ ಪರಿಹಾರಕ್ಕೆ ಆಗ್ರಹ: ಕಾಡಾನೆ ಮೃತಪಟ್ಟ ವಿಷಯ ತಿಳಿದ ಸುತ್ತಮುತ್ತಲ ನಿವಾಸಿಗಳು ಸ್ಥಳದಲ್ಲಿ ಜಮಾಯಿಸಿದ್ದರು. ಸುತ್ತಮುತ್ತಲ ಕಾಫಿ ತೋಟಗಳಲ್ಲಿ ಕಾಡಾನೆ ಹಿಂಡು ನಿರಂತರವಾಗಿ ಕಾಣಿಸಿಕೊಳ್ಳುತ್ತಿದೆ. ಇದರಿಂದ ಜನ ಓಡಾಡುವುದಕ್ಕೂ ಭಯಪಡುವಂತಾಗಿದೆ. ಕಾರ್ಮಿಕರು ಕೆಲಸ ಮಾಡಲು ಹೆದರುತ್ತಿದ್ದಾರೆ. ಬೆಳೆಗಾರರು ಆತಂಕಗೊಳ್ಳುವುದರ ಜೊತೆಗೆ ತೋಟ ನಿರ್ವಹಣೆಗೆ ಹೆಣಗಾಡುವಂತಾಗಿದೆ. ಆಹಾರ ಅರಸಿ ಬರುವ ಆನೆಗಳು ಈ ರೀತಿ ದುರಂತದಲ್ಲಿ ಸಾವನ್ನಪ್ಪುತ್ತಿವೆ. ಆದ್ದರಿಂದ ಕಾಡಾನೆ ಹಾವಳಿಯನ್ನು ಶಾಶ್ವತವಾಗಿ ತಡೆಯುವ ನಿಟ್ಟಿನಲ್ಲಿ ಪರಿಣಾಮಕಾರಿ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳನ್ನು ಆಗ್ರಹಿಸಿದರು.

ಉಸಿರಾಟ ಸಮಸ್ಯೆಯಿಂದ ಸಾವು: ಈ ವೇಳೆ ಡಿಎಫ್‌ಓ ಜಗನ್ನಾಥ್ ಮಾತನಾಡಿ, ನಾಯಿ ಬೊಗಳಿದ್ದರಿಂದ ಗಾಬರಿಗೊಂಡು ಆಕಸ್ಮಿಕವಾಗಿ ಕಾಡಾನೆಯೊಂದು ತೆರೆದ ಬಾವಿಗೆ ಬಿದ್ದು ಮೃತಪಟ್ಟಿದೆ. ಘಟನಾ ಸ್ಥಳಕ್ಕೆ ರಾತ್ರಿಯೇ ಭೇಟಿ ನೀಡಿ ಪರಿಶೀಲನೆ ನಡೆಸಲಾಗಿತ್ತು. ತೀವ್ರ ಅಸ್ವಸ್ಥಗೊಂಡಿದ್ದ ಕಾಡಾನೆ ಉಸಿರಾಟದ ಸಮಸ್ಯೆಯಿಂದ ಮೃತಪಟ್ಟಿದೆ. ಮೇಲಾಧಿಕಾರಿಗಳ ನಿರ್ದೇಶನದಂತೆ ಮರಣೋತ್ತರ ಪರೀಕ್ಷೆ ನಡೆಸಿ ಅಂತ್ಯಸಂಸ್ಕಾರ ಮಾಡಲಾಗಿದೆ. ಈ ವ್ಯಾಪ್ತಿಯಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ಹೆಚ್ಚುವರಿ ಸಿಬ್ಬಂದಿಗಳನ್ನು ನೇಮಿಸಲಾಗಿದ್ದು, ತೀವ್ರ ನಿಗಾ ವಹಿಸಲಾಗಿದೆ. ಶಾಶ್ವತವಾಗಿ ಆನೆ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಕಾರ್ಯ ಯೋಜನೆ ರೂಪಿಸಲಾಗುತ್ತಿದೆ ಎಂದು ಭರವಸೆ ನೀಡಿದರು.

ಯಾವುದೇ ಪ್ರಯೋಜನವಾಗಿಲ್ಲ: ಕೆದಮುಳ್ಳೂರು ಗ್ರಾಮ ಪಂಚಾಯ್ತಿ ಉಪಾಧ್ಯಕ್ಷ ಪರಮೇಶ್ವರ್ ಮಾಧ್ಯಮದವರೊಂದಿಗೆ ಮಾತನಾಡಿ, ಈ ವ್ಯಾಪ್ತಿಯಲ್ಲಿ ಹಲವು ವರ್ಷಗಳಿಂದಲೂ ಕಾಡಾನೆ ಹಾವಳಿ ಮಿತಿ ಮೀರಿದೆ. ಕಾರ್ಮಿಕರು, ಬೆಳೆಗಾರರು, ಶಾಲಾ ವಿದ್ಯಾರ್ಥಿಗಳು, ಸಾರ್ವಜನಿಕರು ನೆಮ್ಮದಿಯಾಗಿ ನಡೆದಾಡಲು ಸಾಧ್ಯವಾಗದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಕಾಡಾನೆ ಹಾವಳಿ ತಡೆಗಟ್ಟುವಂತೆ ಹಲವು ಬಾರಿ ಮನವಿ ಮಾಡಿದ್ದರೂ ಅರಣ್ಯ ಇಲಾಖೆ ಅಧಿಕಾರಿಗಳು ಯಾವುದೇ ಕ್ರಮ ವಹಿಸಿಲ್ಲ. ಶಾಸಕರು, ಸಂಸದರು ಕಾಡಾನೆ ಹಾವಳಿ ತಡೆಗೆ ಶಾಶ್ವತ ಯೋಜನೆ ರೂಪಿಸುವ ಮೂಲಕ ಆನೆ ಮಾನವ ಸಂಘರ್ಷವನ್ನು ತಡೆಗಟ್ಟಬೇಕು ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಎಸಿಎಫ್ ನೆಹರು, ವಿರಾಜಪೇಟೆ ವಲಯ ಅರಣ್ಯಾಧಿಕಾರಿ ಕಳ್ಳಿರ ದೇವಯ್ಯ, ಡಿಆರ್‌ಎಫ್‌ಓ ಆನಂದ್, ಜನಾರ್ದನ್, ಅರಣ್ಯ ರಕ್ಷಕ ಅರುಣ, ಆರ್‌ಆರ್‌ಟಿ ಹಾಗೂ ಆನೆ ಕಾರ್ಯಪಡೆ ತಂಡದ ಸಿಬ್ಬಂದಿ, ಜನಪ್ರತಿನಿಧಿಗಳು ಹಾಜರಿದ್ದರು.

ಇಂದು ರಾಷ್ಟ್ರೀಯ ಸಿಕಲ್ ಸೆಲ್ ಅನಿಮಿಯಾ ನಿರ್ಮೂಲನಾ ಕಾರ್ಯಕ್ರಮ

ಮೈಸೂರು, ಜೂ.18– ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ರಾಜ್ಯ ಮಟ್ಟದ ರಾಷ್ಟ್ರೀಯ ಸಿಕಲ್ ಸೆಲ್ ಅನಿಮಿಯಾ ನಿರ್ಮೂಲನಾ ಕಾರ್ಯಕ್ರಮದ ದಿನಾಚರಣೆಯನ್ನು ಜೂ.19ರಂದು ಬೆಳಗ್ಗೆ 9:30 ಗಂಟೆಗೆ ಜಿಲ್ಲಾ ಪಂಚಾಯತ್‌ನ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ, ಸಮಾಜ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹಾಗೂ ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವ ಕೆ.ವೆಂಕಟೇಶ್ ಘನ ಉಪಸ್ಥಿತಿಯಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವ ದಿನೇಶ್ ಗುಂಡೂರಾವ್ ಕಾರ್ಯಕ್ರಮವನ್ನು ಉದ್ಘಾಟನೆ ಮಾಡಲಿದ್ದು, ಚಾಮರಾಜ ವಿಧಾನಸಭಾ ಕ್ಷೇತ್ರದ ಶಾಸಕ ಕೆ.ಹರೀಶ್ ಗೌಡ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮೈಸೂರು–ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಚಾಮರಾಜನಗರ ಸಂಸದ ಸುನಿಲ್ ಬೋಸ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಎಚ್.ಡಿ ಕೋಟೆ ಶಾಸಕರೂ ಆದ ಮೈಸೂರು ಜಂಗಲ್ ಲಾಡ್ಜ್ಸ್‌ನ ಅಧ್ಯಕ್ಷ ಅನಿಲ್ ಕುಮಾರ್, ಚಾಮುಂಡೇಶ್ವರಿ ವಿದ್ಯುತ್ ನಿಗಮ ನಿಯಮಿತ ಮಂಡಳಿ ಅಧ್ಯಕ್ಷ ರಮೇಶ್ ಬಂಡಿಸಿದ್ದೇಗೌಡ ಹಾಗೂ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷೆ ಡಾ.ಪುಷ್ಪಾ ಉಪಸ್ಥಿತರಿರುವರು.

ಶಾಸಕರಾದ ತನ್ವೀರ್ ಸೇಠ್, ಜಿ.ಟಿ.ದೇವೇಗೌಡ, ರವಿಶಂಕರ್ ಡಿ, ಜಿ.ಡಿ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ್, ಟಿ.ಎಸ್ ಶ್ರೀವತ್ಸ ಹೆಚ್.ವಿಶ್ವನಾಥ್, ಡಾ.ಡಿ.ತಿಮ್ಮಯ್ಯ, ಸಿ.ಎನ್.ಮಂಜೇಗೌಡ, ಮಧು ಜಿ.ಮಾದೇಗೌಡ, ಡಾ.ಯತೀಂದ್ರ.ಎಸ್, ವಿವೇಕಾನಂದ ಅವರು ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸುವರು.

ಶೆಟ್ಟರ್ ರಾಜೀನಾಮೆಯಿಂದ ತೆರವಾದ ಪರಿಷತ್ ಸ್ಥಾನಕ್ಕೆ ಜು.12ಕ್ಕೆ ಉಪಚುನಾವಣೆ

ಕಾಂಗ್ರೆಸ್‌ನ ಬಸನಗೌಡ ಬಾದರ್ಲಿ ಆಯ್ಕೆ ಖಚಿತ

ಬೆಂಗಳೂರು, ಜೂ.18(ಕೆಎಂಶಿ)–ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಅವರಿಂದ ತೆರವಾದ ವಿಧಾನಪರಿಷತ್ತಿನ ಒಂದು ಸ್ಥಾನದ ಉಪಚುನಾವಣೆಗೆ ಕೇಂದ್ರ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿದೆ.




ಬಸನಗೌಡ ಬಾದರ್ಲಿ

ವಿಧಾನಸಭೆಯಿಂದ ವಿಧಾನಪರಿಷತ್ತಿನ ಈ ಸ್ಥಾನಕ್ಕೆ ಜುಲೈ 12ರಂದು ಚುನಾವಣೆ ನಡೆಯಲಿದ್ದು, ಜೂನ್ 25ರಿಂದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಳ್ಳಲಿದೆ.

ವಿಧಾನಸಭೆಯ ಸಂಖ್ಯಾಬಲ ಆಧಾರದ ಮೇಲೆ ಆಡಳಿತಾರೂಢ ಕಾಂಗ್ರೆಸ್‌ಗೆ ಈ ಸ್ಥಾನ ದಕ್ಕಲಿದ್ದು, ಈಗಾಗಲೇ ಬಸನಗೌಡ ಬಾದರ್ಲಿ ಪಕ್ಷದ ಅಭ್ಯರ್ಥಿಯೆಂದು ವರಿಷ್ಠರು ಪ್ರಕಟಿಸಿದ್ದಾರೆ. ಬಾದರ್ಲಿ ಅವಿರೋಧ ಆಯ್ಕೆಯಾಗುವುದು ಖಚಿತ. ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ್ದ ಶೆಟ್ಟರ್ ಅವರನ್ನು ವಿಧಾನಪರಿಷತ್‌ಗೆ ಆಯ್ಕೆ ಮಾಡಲಾಗಿತ್ತು, ಬದಲಾದ ರಾಜಕೀಯ ಸನ್ನಿವೇಶದಲ್ಲಿ ಶೆಟ್ಟರ್ ಮಾತೃ ಪಕ್ಷಕ್ಕೆ ತೆರಳುವ ಮುನ್ನ ತಮ್ಮ ವಿಧಾನಪರಿಷತ್ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರು.

ಮೈಸೂರಿನ ಹಲವು ಬಡಾವಣೆಗಳಲ್ಲಿ ಇಂದು ವಿದ್ಯುತ್ ವ್ಯತ್ಯಯ

ಮೈಸೂರು, ಜೂ.18–ವಿ.ವಿ. ಮೊಹಲ್ಲಾ ವಿಭಾಗ ವ್ಯಾಪ್ತಿಯ ಕೆ.ವಿ ಜಿ.ಐ.ಎಸ್ ಕಲಾ ಮಂದಿರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 1ನೇ ತ್ರೈಮಾಸಿಕ ನಿರ್ವಹಣಾ ಕೆಲಸದ ನಿಮಿತ್ತ ಜೂ.19ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.



ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು: ಸರಸ್ವತಿಪುರಂ 1ರಿಂದ 5ನೇ ಮೇನ್, ನ್ಯೂಕಾಂತರಾಜ ಅರಸ್ ರಸ್ತೆ, ಕೆ.ಜಿಕೊಪ್ಪಲು ಮುಖ್ಯರಸ್ತೆ, ಯುನಿವರ್ಸಿಟಿ ಕ್ವಾರ್ಟ್ರಸ್, ಮುಸ್ಲಿಂ ಹಾಸ್ಟೆಲ್, ವಿಶ್ವಮಾನವ ಜೋಡಿ ರಸ್ತೆ ಮುರುಗನ್ ಮೆಡಿಕಲ್ಸ್‌ನಿಂದ ಕುಕ್ಕರಹಳ್ಳಿ ಕೆರೆ ರಸ್ತೆವರೆಗೆ, ಸರಸ್ವತಿಪುರಂ 5 ರಿಂದ 16ನೇ ಮೇನ್, ಪಡುವರಾಹಳ್ಳಿ, ಡಿ.ಸಿ ರೆಸಿಡೆನ್ಸಿ, ರಿಜನಲ್ ಕಮಿಷನರ್ ಆಫೀಸ್, ಸಿ.ಎಫ್.ಟಿ.ಆರ್.ಐ ಕ್ಯಾಂಪಸ್, ವಾಲ್ಮೀಕಿ ರಸ್ತೆ, ಜಡ್ಜ್ ಕ್ವಾರ್ಟ್ರಸ್, ಒಂಟಿಕೊಪ್ಪಲು, ಹುಣಸೂರು ಮುಖ್ಯರಸ್ತೆ, ವಾಗ್ದೇವಿ ನಗರ, ಜೆ.ಸಿ ಕಾಲೇಜು ಸುತ್ತಮುತ್ತ, ಚಾಮರಾಜ ಮೊಹಲ್ಲಾ, ಜಿಲ್ಲಾ ಪಂಚಾಯತ್ ಕಚೇರಿ, ಕೋರ್ಟ್, ಅರಸುರಸ್ತೆ, ಜಿಲ್ಲಾಧಿಕಾರಿ ಕಚೇರಿ, ಮಹಾರಾಜ ಮತ್ತು ಯುವರಾಜ ಕಾಲೇಜು ಸುತ್ತಮುತ್ತ, ಶಿವರಾಂಪೇಟೆ, ದಿವಾನ್ಸ್ ರಸ್ತೆ, ಧನ್ವಂತರಿ ರಸ್ತೆ, ಜೆ.ಕೆ ಗ್ರೌಂಡ್ ಸುತ್ತಮುತ್ತಲಿನ ಪ್ರದೇಶ, ಮೆಟ್ರೋಪೋಲ್ ಸುತ್ತಮುತ್ತ, ಜೆ.ಎಲ್.ಬಿ ರಸ್ತೆ, ಜಯಲಕ್ಷ್ಮೀ ವಿಲಾಸ್, ಜಿಲ್ಲಾ ಪಂಚಾಯತ್ ಕಚೇರಿ, ನ್ಯಾಯಾಲಯದ ಆವರಣ, ಏರ್‌ಲೈನ್ಸ್ ಹೋಟೇಲ್ ರಸ್ತೆ, ಮಹಾರಾಜ ಹಾಸ್ಟೆಲ್ ಏರಿಯಾ, ಗೀತಾರಸ್ತೆ, ರಾಮಸ್ವಾಮಿ ವೃತ್ತ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಪ್ರಕಟಣೆ ತಿಳಿಸಿವೆ

ಅಂಧ ಮಹಿಳೆ ಮೇಲೆ ಅತ್ಯಾಚಾರ; ಆರೋಪಿಗೆ 10 ವರ್ಷ ಜೈಲು ಶಿಕ್ಷೆ

ಮೈಸೂರು, ಜೂ.18(ಬಿಎಲ್‌ಯು)– ಅಂಧ ಮಹಿಳೆ ಮೇಲೆ ಅತ್ಯಾಚಾರ ಎಸಗಿದ ಆರೋಪಿಗೆ ಮೈಸೂರು ನ್ಯಾಯಾಲಯ 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ.

ಹುಣಸೂರು ತಾಲೂಕು ಬಿಳಿಕೆರೆ ಹೋಬಳಿ ಕೊಮ್ಮೇಗೌಡನಕೊಪ್ಪಲು ಗ್ರಾಮದ ವಾಸಿ ಚಲುವರಾಜು ಎಂಬಾತ ಶಿಕ್ಷೆಗೆ ಗುರಿಯಾದ ಅಪರಾಧಿಯಾಗಿದ್ದಾನೆ.

ಅದೇ ಗ್ರಾಮದ ಅಂಧ ಮಹಿಳೆ ಮನೆಗೆ ನುಗ್ಗಿ ಚಲುವರಾಜು ಆಕೆ ಮೇಲೆ ಅತ್ಯಾಚಾರ ಎಸಗಿದ್ದ. ಈ ವಿಚಾರವನ್ನು ಯಾರಿಗಾದರೂ ಹೇಳಿದರೆ ಕೊಲೆ ಮಾಡುವುದಾಗಿ ಬೆದರಿಕೆ ಕೂಡ ಹಾಕಿದ್ದ. ಈ ಬಗ್ಗೆ ಸಂತ್ರಸ್ತೆಯ ಅತ್ತಿಗೆ ಬಿಳಿಕೆರೆ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಈ ಸಂಬಂಧ ತನಿಖೆ ನಡೆಸಿದ್ದ ಅಂದಿನ ಹುಣಸೂರು ತಾಲೂಕು ಸರ್ಕಲ್ ಇನ್ಸ್‌ಪೆಕ್ಟರ್ ಕೆ.ಸಿ.ಪೂವಯ್ಯ ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ಸಲ್ಲಿಸಿದ್ದರು. ಸರ್ಕಾರಿ ಅಭಿಯೋಜಕ ಕೆ.ನಾಗರಾಜ ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು. ಈ ಸಂಬಂಧ ವಿಚಾರಣೆ ನಡೆಸಿದ ಮೈಸೂರಿನ 7ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಎಂ.ರಮೇಶ ಅವರು ಆರೋಪಿ ಚಲುವರಾಜುಗೆ 10 ವರ್ಷ ಕಠಿಣ ಶಿಕ್ಷೆ ಹಾಗೂ 20 ಸಾವಿರ ರೂಪಾಯಿ ದಂಡ ವಿಧಿಸಿದ್ದಾರೆ.

ಜೂ.28ರಂದು ಬಿಜೆಪಿ ಎಸ್‌ಟಿ ಮೋರ್ಚಾದಿಂದ ಮೈಸೂರು ಡಿಸಿ ಕಚೇರಿಗೆ ಮುತ್ತಿಗೆ

ಮೈಸೂರು, ಜೂ.18(ಬಿಎಲ್‌ಯು)– ಶ್ರೀ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ಅವ್ಯವಹಾರದ ಹಿನ್ನೆಲೆಯಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಬಿಜೆಪಿ ಎಸ್‌ಟಿ ಮೋರ್ಚಾ ಮೈಸೂರು ಜಿಲ್ಲಾಧಿಕಾರಿ ಕಚೇರಿಗೆ ಜೂನ್ 28 ರಂದು ಮುತ್ತಿಗೆ ಹಾಕಲು ನಿರ್ಧರಿಸಿದೆ.



ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಮಂಗಳವಾರ ಪೂರ್ವಭಾವಿ ಸಭೆ ನಡೆಯಿತು.

ಈ ಸಂಬಂಧ ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಪೂರ್ವಭಾವಿ ಸಭೆ ನಡೆಯಿತು. ಈ ವೇಳೆ ಮಾತನಾಡಿದ ನಗರ ಬಿಜೆಪಿ ಅಧ್ಯಕ್ಷ ಎಲ್.ನಾಗೇಂದ್ರ, ಪರಿಶಿಷ್ಟ ಪಂಗಡದ ಅಭಿವೃದ್ಧಿಗೆ ಮೀಸಲಿಟ್ಟ ಕೋಟ್ಯಾಂತರ ರೂಪಾಯಿ ಹಣವನ್ನು ದುರುಪಯೋಗ ಮಾಡಿಕೊಳ್ಳಲಾಗಿದೆ. ಸರ್ಕಾರದ ಹಣ ಖಾಸಗಿ ವ್ಯಕ್ತಿಗಳಿಗೆ ಅಕ್ರಮವಾಗಿ ವರ್ಗಾವಣೆಯಾಗಿದೆ. ಈ ಅವ್ಯವಹಾರದ ಬಗ್ಗೆ ಡೆತ್‌ನೋಟ್ ಬರೆದಿಟ್ಟು ಇಲಾಖಾ ದಕ್ಷ ಅಧಿಕಾರಿ ಚಂದ್ರಶೇಖರನ್ ಆತ್ಮಹತ್ಯೆಯಿಂದ ಈ ಹಗರಣ ಬಯಲಿಗೆ ಬಂದಿದೆ ಎಂದರು.

ಈ ಹಗರಣದ ಬಗ್ಗೆ ಜನರಿಗೆ ತಿಳಿಸಲು ಕರಪತ್ರಗಳನ್ನು ಹಂಚಲಾಗುವುದು. ಬಿಜೆಪಿ ಕಾರ್ಯಕರ್ತರು ಕರಪತ್ರಗಳನ್ನು ಪರಿಶಿಷ್ಟ ಪಂಗಡ ಸಮುದಾಯದ ಪ್ರತಿಯೊಂದು ಮನೆಗೂ ಹಂಚಬೇಕು. ಈ ಮೂಲಕ ರಾಜ್ಯ ಸರ್ಕಾರದ ಜನ ವಿರೋಧಿ ನೀತಿಯನ್ನು ಮನವರಿಕೆ ಮಾಡಿಕೊಡಬೇಕು ಎಂದು ನಾಗೇಂದ್ರ ಸಲಹೆ ನೀಡಿದರು.

ಈ ವೇಳೆ ಮಾತನಾಡಿದ ಬಿಜೆಪಿ ಜಿಲ್ಲಾಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ, ಅಂದಿನ ಪ್ರತಿಭಟನೆಗೆ ಹೆಚ್ಚಿನ ಜನರನ್ನು ಸೇರಿಸಬೇಕು. ಈ ಮೂಲಕ ಹೋರಾಟ ಯಶಸ್ವಿಗೊಳಿಸಬೇಕು ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಎಸ್‌ಟಿ ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ಎಂ.ರಾಮಕೃಷ್ಣ, ಅಂದಿನ ಪ್ರತಿಭಟನೆಗೆ ಎಸ್‌ಟಿ ಮೋರ್ಚಾದವರು ಮಾತ್ರವಲ್ಲದೆ, ಬಿಜೆಪಿಯ ಎಲ್ಲಾ ಮೋರ್ಚಾದ ಕಾರ್ಯಕರ್ತರು ಭಾಗಿಯಾಗಬೇಕು ಎಂದು ಮನವಿ ಮಾಡಿದರು. ಮಾಜಿ ಮೇಯರ್ ಶಿವಕುಮಾರ್, ಮುಖಂಡರಾದ ವಿಜೇಂದ್ರ, ಬಂಗಾರು ಹನುಮಂತ, ಮುದ್ದುಕೃಷ್ಣ, ಎಂ.ಮಹೇಶ್, ಪ್ರಶಾಂತ್, ನಾರಾಯಣ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.

ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನುಗೊಳಿಸಿ

ಸಭೆಯಲ್ಲಿ ಕೃಷಿ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್ ಸೂಚನೆ



ಮಡಿಕೇರಿ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ.ಪ್ರಸಾದ್, ಡಿಸಿ ವೆಂಕಟ್‌ರಾಜಾ ಬೆಳೆವಿಮೆ ಯೋಜನೆ ಮಾಹಿತಿ ಪೋಸ್ಟರ್ ಬಿಡುಗಡೆ ಮಾಡಿದರು.

ಮಡಿಕೇರಿ, ಜೂ.18–ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರವನ್ನು ಸಾಕಷ್ಟು ದಾಸ್ತಾನು ಮಾಡಿಕೊಳ್ಳಬೇಕು ಎಂದು ಕುದಾಯ ಹಾಗೂ ಕೃಷಿ ಇಲಾಖೆ ಅಧಿಕಾರಿಗಳಿಗೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎನ್.ವಿ.ಪ್ರಸಾದ್ ಸೂಚಿಸಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಳೆವಿಮೆ ಸೌಲಭ್ಯ ಬಳಸಿಕೊಳ್ಳಲು ರೈತರಿಗೆ ಮತ್ತಷ್ಟು ಮಾಹಿತಿ ನೀಡಬೇಕು. ಆ ನಿಟ್ಟಿನಲ್ಲಿ ಹೆಚ್ಚಿನ ಶ್ರಮ ವಹಿಸಬೇಕು. ಬೆಳೆವಿಮೆಗೆ ಹೆಚ್ಚಿನ ಕೃಷಿಕರು ತಮ್ಮ ಹೆಸರು ನೋಂದಾಯಿಸಲು ಅಗತ್ಯ ಕ್ರಮವಹಿಸಬೇಕು ಎಂದು ಆದೇಶಿಸಿದರು.

ನಂತರ ಮಾತನಾಡಿದ ಕೃಷಿ ಇಲಾಖೆ ಜಂಟಿ ನಿರ್ದೇಶಕ ಸೋಮಸುಂದರ, ಮುಂಗಾರು ಹಂಗಾಮಿನ ಅಧಿಸೂಚನೆಯಂತೆ ಜಿಲ್ಲೆಯಲ್ಲಿ ಕರ್ನಾಟಕ ರೈತ ಸುರಕ್ಷಾ, ಪ್ರಧಾನ ಮಂತ್ರಿ ಫಸಲ್ ಬಿಮಾ(ವಿಮಾ) ಯೋಜನೆಯನ್ನು ಹೋಬಳಿ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ. ಭತ್ತ ಮತ್ತು ಮುಸುಕಿನ ಜೋಳದ ಬೆಳೆಗಳನ್ನು ಬೆಳೆವಿಮೆ ಯೋಜನೆಗೆ ಸೇರಿಸಲಾಗಿದೆ ಎಂದು ಮಾಹಿತಿ ನೀಡಿದರು.

ಕೊಡಗು ಜಿಲ್ಲೆಗೆ ಓರಿಯಂಟಲ್ ಸಾಮಾನ್ಯ ವಿಮಾ ಕಂಪನಿಯನ್ನು 2024–25 ಮತ್ತು 2025–26ನೇ ಸಾಲಿಗೆ ಅನುಷ್ಠಾನ ಸಂಸ್ಥೆಯನ್ನಾಗಿ ಆಯ್ಕೆ ಮಾಡಲಾಗಿದೆ. ಮುಸುಕಿನ ಜೋಳದ ಬೆಳೆಗೆ ಜು.31 ಹಾಗೂ ಭತ್ತದ ಬೆಳೆಗೆ ಆ.16ರವರೆಗೆ ವಿಮೆ ಯೋಜನೆಯಡಿ ರೈತರು ತಮ್ಮ ಹೆಸರು ನೋಂದಣಿಗೆ ಅವಕಾಶವಿದೆ ಎಂದು ತಿಳಿಸಿದರು.

ಬಳಿಕ ಕೃಷಿ ಇಲಾಖೆ ಜಂಟಿ ನಿರ್ದೇಶಕರು ಮಾತನಾಡಿ, ಮುಂದಿನ ದಿನಗಳಲ್ಲಿ ಉತ್ತಮ ಮಳೆಯಾಗುವ ಸಾಧ್ಯತೆ ಇದೆ. ಜಿಲ್ಲೆಯಲ್ಲಿ ಮುಸುಕಿನ ಜೋಳ ಬಿತ್ತನೆ ಕಾರ್ಯ ನಡೆದಿದ್ದು, ಜಿಲ್ಲೆಯಲ್ಲಿ ಈಗ ಉತ್ತಮ ಮಳೆಯಾದಲ್ಲಿ ಸಸಿಮಡಿ ಕಾರ್ಯ ಆರಂಭವಾಗಲಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಮೀನುಗಾರಿಕೆಗೆ ಬೇಡಿಕೆ ಇದ್ದು, ಕೆರೆಗಳನ್ನು ಇನ್ನಷ್ಟು ಅಭಿವೃದ್ಧಿಪಡಿಸಿ ಮೀನುಗಾರಿಕೆಗೆ ಹೆಚ್ಚಿನ ಉತ್ತೇಜನ ನೀಡಬೇಕು. ಈ ಸಂಬಂಧ ತಾಪಂ ಇಓಗಳು ಮತ್ತು ಮೀನುಗಾರಿಕೆ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಕಾರ್ಯನಿರ್ವಹಿಸುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಎನ್.ವಿ. ಪ್ರಸಾದ್ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಎನ್. ವೀಣಾ, ಉಪವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಜಿಪಂ ಉಪ ಕಾರ್ಯದರ್ಶಿ ಧನರಾಜ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಶೇಖರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ನಟರಾಜು, ಐಟಿಡಿಪಿ ಇಲಾಖೆ ಅಧಿಕಾರಿ ಹೊನ್ನೇಗೌಡ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿ ದಿವಾಕರ, ಸೆಸ್ಕ್ ಇಇ ಅನಿತಾ ಬಾಯಿ, ಜಿಪಂ ಇಂಜಿನಿಯರ್‌ಗಳಾದ ಸುರೇಶ್ ಕುಮಾರ್, ಮುತ್ತುರಾಜ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಯೋಗೀಶ್, ತಹಸೀಲ್ದಾರ್‌ಗಳಾದ ಪ್ರವೀಣ್ ಕುಮಾರ್, ಕಿರಣ್ ಗೌರಯ್ಯ, ರಾಮಚಂದ್ರ, ನವೀನ್ ಕುಮಾರ್, ಮೋಹನ್ ಕುಮಾರ್, ಪಶುಪಾಲನಾ ಇಲಾಖೆ ಉಪನಿರ್ದೇಶಕ ಲಿಂಗರಾಜ ದೊಡ್ಡಮನಿ, ಜಿಲ್ಲಾ ಆಯುಷ್ ಅಧಿಕಾರಿ ಡಾ.ರೇಣುಕಾದೇವಿ, ಡಾ.ಸತೀಶ್ ಕುಮಾರ್ ಇದ್ದರು.

5 ಕೋಟಿ ಬಿಡುಗಡೆಗೆ ಪ್ರಸ್ತಾವನೆ

ಕೊಡವ ಹೆರಿಟೇಜ್ ಮುಂದುವರಿದ ಕಾಮಗಾರಿಗೆ 5 ಕೋಟಿ ರೂ. ಬಿಡುಗಡೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈ ಸಂಬಂಧ ಅನುದಾನ ಬಿಡುಗಡೆಯಾಗಬೇಕಿದೆ. ಹಾಗೆಯೇ ಕುಶಾಲನಗರದಲ್ಲಿ ಮಿನಿವಿಧಾನಸೌಧ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಬೇಕಿದೆ ಎಂದು ಲೋಕೋಪಯೋಗಿ ಇಲಾಖೆಯ ಇಇ ಸಿದ್ದೇಗೌಡ ಅವರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಗಮನಕ್ಕೆ ತಂದರು.

ಜಿಪಂ ಸಿಇಓ ವರ್ಣಿತ್ ನೇಗಿ ಮಾತನಾಡಿ, ಮಹಾತ್ಮ ಗಾಂಧಿ ಗ್ರಾಮೀಣ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಗುರಿ ತಲುಪಲಾಗಿದೆ. ಸ್ವಚ್ಛ ಭಾರತ್ ಮಿಷನ್ ಅಭಿಯಾನ ಹಾಗೂ ವಸತಿ ಯೋಜನಾ ಕಾರ್ಯಕ್ರಮಗಳ ಅನುಷ್ಠಾನ ಸಂಬಂಧ ಮಾಹಿತಿ ನೀಡಿದರು.

ಜಿಲ್ಲಾಧಿಕಾರಿ ವೆಂಕಟ್‌ರಾಜಾ ಮಾತನಾಡಿ, ಸಭೆಯಲ್ಲಿ ನೀಡಲಾಗಿರುವ ನಿರ್ದೇಶನವನ್ನು ಚಾಚೂ ತಪ್ಪದೇ ಆಯಾ ಇಲಾಖೆ ಅಧಿಕಾರಿಗಳು ಪಾಲಿಸಬೇಕು. ಮುಂದಿನ ಸಭೆಯಲ್ಲಿ ಕೆಲಸಗಳು ಆಗಿರಬೇಕು ಎಂದು ಸೂಚಿಸಿದರು.

ಪ್ರಯಾಣಿಕರ ಆಟೋ ಸೌಂಡ್‌ಬಾಕ್ಸ್ ಕಳವು



ಸುಂಟಿಕೊಪ್ಪ, ಜೂ.18–ರಾತ್ರಿ ವೇಳೆ ಪಟ್ಟಣದಲ್ಲಿ ನಿಲ್ಲಿಸಿದ್ದ ಪ್ರಯಾಣಿಕರ ಆಟೋಗಳಿಂದ ಸೌಂಡ್ ಬಾಕ್ಸ್ ಕಳ್ಳತನ ಮಾಡಲಾಗುತ್ತಿದ್ದು, ಇದರಿಂದ ಸುಂಟಿಕೊಪ್ಪ ನಿವಾಸಿಗಳಲ್ಲಿ ಆತಂಕ ಉಂಟಾಗಿದೆ.

ಚಾಮುಂಡೇಶ್ವರಿ ಬಡಾವಣೆ ಸಚಿನ್ ತಮ್ಮ ಆಟೋವನ್ನು ಸೋಮ ವಾರ ರಾತ್ರಿ 10 ಗಂಟೆಯಲ್ಲಿ ಪಾರ್ವತವ್ವ ಬಡಾವಣೆಯ ಗಣೇಶ ಅವರ ಮನೆ ಸಮೀಪ ನಿಲ್ಲಿಸಿದ್ದರು. ಈ ವೇಳೆ ಆಟೋ ಹಿಂಭಾಗದ ಟಾರ್ಪಲ್ ಹರಿದು ಸೌಂಡ್ ಬಾಕ್ಸ್ ಕಳವು ಮಾಡಲಾಗಿದೆ.

ಎಂದಿನಂತೆ ಮಂಗಳವಾರ ಬೆಳಗ್ಗೆ ಬಂದು ಬಾಡಿಗೆಗೆ ತೆರಳಲು ಆಟೋ ನೋಡಿದಾಗ ಟಾರ್ಪಲ್ ಹರಿದು ಆಟೋದಲ್ಲಿದ್ದ 20 ಸಾವಿರ ರೂ. ಮೌಲ್ಯದ 2 ಸ್ಪೀಕರ್ ಹಾಗೂ ಸೌಂಡ್‌ಸಿಸ್ಟಂ ಅನ್ನು ಕಳ್ಳತನ ಮಾಡಿರುವುದು ಪತ್ತೆಯಾಗಿದೆ. ಈ ಸಂಬಂಧ ಆಟೋ ಮಾಲೀಕರು ಸುಂಟಿಕೊಪ್ಪ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಶಾಸಕರಿಂದ ಕಾಮಗಾರಿ ಪರಿಶೀಲನೆ...



ಸುಂಟಿಕೊಪ್ಪ ಸಮೀಪದ ಹರದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗರಗಂದೂರು ಮುಖ್ಯ ರಸ್ತೆಬದಿಯ ಚರಂಡಿ ನಿರ್ಮಾಣ ಕಾಮಗಾರಿಯನ್ನು ಶಾಸಕ ಡಾ.ಮಂತರ್‌ಗೌಡ ಪರಿಶೀಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದರು. ಗ್ರಾಪಂ ಉಪಾಧ್ಯಕ್ಷ ಸಲೀಂ, ಹೊಸತೋಟ ಭಾಗದ ಗ್ರಾಮಸ್ಥರು ಇದ್ದರು.

ಶಾಸಕ ಪೊನ್ನಣ್ಣ ಫ್ಲೈ ಓವರ್ ಪರಿಶೀಲನೆ



ಭಾಗಮಂಡಲ ಫ್ಲೈ ಓವರ್ ಅನ್ನು ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಅಧಿಕಾರಿಗಳೊಂದಿಗೆ ಪರಿಶೀಲಿಸಿದರು.

ಮಡಿಕೇರಿ, ಜೂ.18–ಕೊಡಗಿನ ಮೊಟ್ಟ ಮೊದಲ ಫ್ಲೈ ಓವರ್ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವ ಭಾಗಮಂಡಲ ಮೇಲ್ಸೇತುವೆ ಕಾಮಗಾರಿ ಮುಕ್ತಾಯ ಹಂತದಲ್ಲಿದ್ದು, ವಾಹನ ಸಂಚಾರಕ್ಕೆ ಅನುವು ಮಾಡಲಾಗುವುದು.

ಈ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರ ಹಾಗೂ ವಿರಾಜಪೇಟೆ ಶಾಸಕ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಅವರು ಫ್ಲೈ ಓವರ್ ಪರಿಶೀಲನೆ ನಡೆಸಿದರು. ಕೆಲವು ಕಡೆ ಅಪಘಾತ ನಡೆಯುವ ಸ್ಥಳಗಳಿದ್ದು, ಪೊಲೀಸ್ ಅಧಿಕಾರಿಗಳೊಂದಿಗೆ ಚರ್ಚಿಸಿದ ಪೊನ್ನಣ್ಣ, ಅಪಘಾತ ತಡೆಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಮಾಲೋಚನೆ ನಡೆಸಿದರು. ಮೇಲ್ಸೇತುವೆಗೆ ಮತ್ತೊಂದು ಸುತ್ತಿನ ಡಾಂಬರೀಕರಣವಾಗಬೇಕಿದೆ. ಮಳೆ ಮುಗಿದ ಬಳಿಕ ಈ ಡಾಂಬರೀಕರಣ ಮಾಡುವುದಾಗಿ ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ಮತ್ತು ಇಂಜಿನಿಯರ್‌ಗಳು ಶಾಸಕರಿಗೆ ಮಾಹಿತಿ ನೀಡಿದರು. ಕೆಲವು ಕಡೆ ನೀರು ನಿಂತಿರುವ ಹಿನ್ನೆಲೆಯಲ್ಲಿ ನೀರು ಸರಾಗವಾಗಿ ಹರಿಯಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಶಾಸಕರು ಸೂಚನೆ ನೀಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಪೊನ್ನಣ್ಣ, ಮೇಲ್ಸೇತುವೆ ಮತ್ತು ತ್ರಿವೇಣಿ ಸಂಗಮದ ಅಭಿವೃದ್ಧಿ ಕಾಮಗಾರಿ ವೀಕ್ಷಿಸಲಾಗಿದೆ. ಇದೀಗ ಮೇಲ್ಸೇತುವೆಯಲ್ಲಿ ವಾಹನಗಳ ಓಡಾಟಕ್ಕೆ ಅನುವು ಮಾಡಿಕೊಡಲಾಗಿದೆ. ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಸಲಹೆ ಪಡೆಯಲಾಗಿದೆ. ಸಣ್ಣಪುಟ್ಟ ಕೆಲಸಗಳು ನಡೆಯಬೇಕಿದ್ದು, ಅದನ್ನೂ ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ಕೊಡಗಿನಲ್ಲೇ ಹೆಚ್ಚು ಹಣ ವೆಚ್ಚ ಮಾಡಿ ನಿರ್ಮಿಸಿರುವ ಮೇಲ್ಸೇತುವೆ ಇದಾಗಿದೆ. ಆದ್ದರಿಂದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮೇಲ್ಸೇತುವೆಗೆ ಕಾರಣೀಭೂತರಾದ ಇಂಧನ ಸಚಿವ ಕೆ.ಜೆ.ಜಾರ್ಜ್ ಅವರನ್ನು ಉದ್ಘಾಟನೆಗೆ ಆಮಂತ್ರಿಸಲಾಗುವುದು. ಮಳೆಗಾಲ ಮುಕ್ತಾಯದ ಬಳಿ ಅಧಿಕೃತವಾಗಿ ಫ್ಲೈ ಓವರ್ ಉದ್ಘಾಟಿಸುವ ನಿಟ್ಟಿನಲ್ಲಿ ಚಿಂತಿಸಲಾಗುತ್ತಿದೆ ಎಂದರು.

ಪವಿತ್ರ ಧಾರ್ಮಿಕ ಕ್ಷೇತ್ರದಲ್ಲಿ ಪಾವಿತ್ರ್ಯತೆ ಕಾಪಾಡಿ

ದಕ್ಷಿಣ ಭಾರತದ ಅತ್ಯಂತ ಪವಿತ್ರ ಧಾರ್ಮಿಕ ಕ್ಷೇತ್ರವಾದ ಕಾವೇರಿ ತ್ರಿವೇಣಿ ಸಂಗಮದಲ್ಲಿ ಜಲಕ್ರೀಡೆಗೆ ಯಾವ ಕಾರಣಕ್ಕೂ ಅವಕಾಶ ನೀಡಬೇಡಿ ಎಂದು ಪೊಲೀಸರು ಮತ್ತು ಭಗಂಡೇಶ್ವರ ದೇವಾಲಯ ಸಿಬ್ಬಂದಿಗೆ ಶಾಸಕ ಪೊನ್ನಣ್ಣ ಸೂಚಿಸಿದರು.

ಭಾಗಮಂಡಲ ಮೇಲ್ಸೇತುವೆ ವೀಕ್ಷಣೆ ವೇಳೆ ತ್ರಿವೇಣಿ ಸಂಗಮದಲ್ಲಿ ಈಜಾಡುತ್ತಿದ್ದ ಪ್ರವಾಸಿಗರನ್ನು ಕಂಡು ಗರಂ ಆದ ಶಾಸಕರು, ಅಲ್ಲಿನ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು. ನಂತರ ಜಲಕ್ರೀಡೆಯಲ್ಲಿ ತೊಡಗಿದ್ದ ಪ್ರವಾಸಿಗರಿಗೆ ಕ್ಷೇತ್ರದ ಪಾವಿತ್ರ್ಯತೆ ಬಗ್ಗೆ ತಿಳಿಸಿ ಮನವರಿಕೆ ಮಾಡಿದರು. ತ್ರಿವೇಣಿ ಸಂಗಮದಲ್ಲಿ ಧಾರ್ಮಿಕ ವಿಧಿವಿಧಾನಗಳನ್ನು ಹೊರತುಪಡಿಸಿ ಬೇರೆ ಯಾವುದೇ ಚಟುವಟಿಕೆ ನಡೆಯದಂತೆ ಸಿಬ್ಬಂದಿ ಕಾವಲು ಕಾಯುವಂತೆ ನಿರ್ದೇಶನ ನೀಡಿದ ಪೊನ್ನಣ್ಣ, ಹೆಚ್ಚಿನ ಸಿಬ್ಬಂದಿ ಅವಶ್ಯಕತೆ ಇದ್ದರೆ ಒದಗಿಸುವುದಾಗಿ ತಿಳಿಸಿದರು.

ಪ್ರವಾಸಿಗರಿಗೆ ಈ ನಿಟ್ಟಿನಲ್ಲಿ ಮಾಹಿತಿ ನೀಡಲು ತಿಳುವಳಿಕೆ ಸೂಚನಾ ಫಲಕ ಅಳವಡಿಸುವಂತೆ ಸಬ್‌ಇನ್ಸ್‌ಪೆಕ್ಟರ್‌ಗೆ ಸೂಚನೆ ನೀಡಿದರು. ಇದೇ ವೇಳೆ ತೆನ್ನಿರಮೈನಾ, ರಮಾನಾಥ್, ಸೂರಜ್ ಹೊಸೂರು, ಸುನೀಲ್ ಪತ್ರಾವೋ, ನೆರವಂಡ ಉಮೇಶ್, ದೇವಂಗೋಡಿ ಹರ್ಷ, ಕುದುಪಜೆ ಪ್ರಕಾಶ್ ಪ್ರಮುಖರು ಉಪಸ್ಥಿತರಿದ್ದರು.

ಹಿಂದುಳಿದ ವರ್ಗ ಮೋರ್ಚಾದಿಂದ ಸಂಸದ ಯದುವೀರ್‌ಗೆ ಸನ್ಮಾನ

ಮಡಿಕೇರಿ, ಜೂ.18–ಮೈಸೂರು–ಕೊಡಗು ಕ್ಷೇತ್ರದ ನೂತನ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರನ್ನು ಜಿಲ್ಲಾ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ವತಿಯಿಂದ ಸನ್ಮಾನಿಸಲಾಯಿತು.

ಮೈಸೂರಿನ ಕುವೆಂಪು ನಗರದಲ್ಲಿರುವ ಬಿಜೆಪಿ ಕಚೇರಿಯಲ್ಲಿ ಹಿಂದುಳಿದ ವರ್ಗಗಳ ಮೋರ್ಚಾ ಜಿಲ್ಲಾಧ್ಯಕ್ಷ ಅಪ್ರು ರವೀಂದ್ರ ನೇತೃತ್ವದ ನಿಯೋಗ ಸಂಸದ ಯದುವೀರ್ ಅವರಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಿ, ಗೆಲುವಿನ ಹರ್ಷ ಹಂಚಿಕೊಂಡಿತು.

ಈ ಸಂದರ್ಭ ಮಾತನಾಡಿದ ಯದುವೀರ್, ಕೊಡಗು ಜಿಲ್ಲೆಯ ಸಮಸ್ಯೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸುವುದಾಗಿ ಭರವಸೆ ನೀಡಿದರು. ಕೊಡಗು ಜಿಲ್ಲೆಯಲ್ಲಿ ಸಂಸದರ ಕಚೇರಿ ತೆರೆದು ಅಲ್ಲಿನ ಜನರ ಅಹವಾಲುಗಳನ್ನು ಸ್ವೀಕರಿಸಲಾಗುವುದು. ಏನೇ ಸಮಸ್ಯೆಗಳಿದ್ದರೂ ತಮ್ಮ ಆಪ್ತ ಸಹಾಯಕರ ಮೂಲಕ ನನ್ನ ಗಮನಕ್ಕೆ ತನ್ನಿ. ನನ್ನ ಗೆಲುವಿಗೆ ಶ್ರಮಿಸಿದ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಅಪ್ರು ರವೀಂದ್ರ ಮಾತನಾಡಿ, ನೂತನ ಸಂಸದರಿಂದ ಕೊಡಗಿನ ಬಿಜೆಪಿ ಕಾರ್ಯಕರ್ತರಲ್ಲಿ ಹೊಸ ಉತ್ಸಾಹ ಬಂದಿದೆ. ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ ದೊರೆಯುತ್ತದೆ ಎನ್ನುವ ವಿಶ್ವಾಸ ಮೂಡಿದೆ ಎಂದರು.

ಹಿಂದುಳಿದ ವರ್ಗಗಳ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ವಿನೋದ್ ಪೂಜಾರಿ, ರಘು ಶನಿವಾರಸಂತೆ, ಉಪಾಧ್ಯಕ್ಷರಾದ ತಿಮ್ಮಪ್ಪ, ರಾಜಚಂದ್ರಶೇಖರ್, ಗಂಗಾಧರ್, ಕೋಲೆಯಂಡ ಗಿರೀಶ್, ಕಾರ್ಯಕಾರಿಣಿ ಸದಸ್ಯರಾದ ಉಮಾ ಪ್ರಭು, ನಳಿನಿ, ಭವ್ಯಶ್ರೀ, ಸರಸ್ವತಿ, ಸುಧೀಶ್, ವಿರಾಜಪೇಟೆ ತಾಲೂಕು ಅಧ್ಯಕ್ಷ ನವೀನ್ ಉತ್ತಯ್ಯ, ಸೋಮವಾರಪೇಟೆ ತಾಲೂಕು ಅಧ್ಯಕ್ಷ ಸುನೀಲ್, ಮಡಿಕೇರಿ ಗ್ರಾಮಾಂತರ ಅಧ್ಯಕ್ಷ ಪ್ರದೀಪ್ ಹಾಗೂ ಮಂಡಲ ಅಧ್ಯಕ್ಷರು, ಕಾರ್ಯಕರ್ತರು ಉಪಸ್ಥಿತರಿದ್ದರು.



ಮೈಸೂರಿನಲ್ಲಿ ನೂತನ ಸಂಸದ ಯದುವೀರ್ ಅವರನ್ನು ಕೊಡಗು ಜಿಲ್ಲಾ ಬಿಜೆಪಿ ಹಿಂದುಳಿದ ವರ್ಗಗಳ ಮೋರ್ಚಾ ವತಿಯಿಂದ ಸನ್ಮಾನಿಸಲಾಯಿತು.

ರೇಣುಕಾಸ್ವಾಮಿ ಹತ್ಯೆ ಖಂಡಿಸಿ, ದರ್ಶನ್ ಸಿನಿಮಾಗಳ ಸಿಡಿ ಸುಟ್ಟು

ಚಾ.ನಗರದಲ್ಲಿ ವೀರಶೈವ ಮಹಾಸಭಾ ಪ್ರತಿಭಟನೆ



ರೇಣುಕಾಸ್ವಾಮಿ ಹತ್ಯೆ ಆರೋಪಿಗಳಾದ ದರ್ಶನ್ ಮತ್ತು ಗ್ಯಾಂಗ್‌ಗೆ ಉಗ್ರ ಶಿಕ್ಷೆ ನೀಡುವಂತೆ ಒತ್ತಾಯಿಸಿ ಅಖಿಲ ಭಾರತ ವೀರಶೈವ ಮಹಾಸಭಾ ಹಾಗೂ ವಿವಿಧ ಸಂಘ ಸಂಸ್ಥೆಗಳು ಚಾಮರಾಜನಗರದದಲ್ಲಿ ಪ್ರತಿಭಟನೆ ನಡೆಸಿದವು.

ಚಾಮರಾಜನಗರ, ಜೂ.18–ಚಿತ್ರದುರ್ಗದ ರೇಣುಕಾಸ್ವಾಮಿ ಹತ್ಯೆ ಆರೋಪಿಗಳಾದ ದರ್ಶನ್ ಮತ್ತು ಗ್ಯಾಂಗ್‌ಗೆ ಉಗ್ರ ಶಿಕ್ಷೆ ನೀಡಬೇಕು ಎಂದು ಒತ್ತಾಯಿಸಿ ಅಖಿಲ ಭಾರತ ವೀರಶೈವ–ಲಿಂಗಾಯತ ಮಹಾಸಭಾ ಹಾಗೂ ಸಮುದಾಯದ ವಿವಿಧ ಸಂಘ ಸಂಸ್ಥೆಗಳು ಹಾಗೂ ವಿವಿಧ ಮಠಾಧೀಶರು ನಗರದಲ್ಲಿ ಮಂಗಳವಾರ ಪ್ರತಿಭಟನೆ ನಡೆಸಿದರು.

ನಗರದ ಶ್ರೀ ಚಾಮರಾಜೇಶ್ವರ ದೇವಸ್ಥಾನ ಮುಂಭಾಗ ಹರವೆ ಮಠದ ಶ್ರೀ ಸರ್ಪಭೂಷಣಸ್ವಾಮೀಜಿ, ಮರಿಯಾಲ ಮಠದ ಶ್ರೀ ಇಮ್ಮಡಿ ಮುರುಘರಾಜೇಂದ್ರಸ್ವಾಮೀಜಿ, ನಗರ ಮಠದ ಶ್ರೀ ಚೆನ್ನಬಸವಸ್ವಾಮೀಜಿ ನೇತೃತ್ವದಲ್ಲಿ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು, ಭುವನೇಶ್ವರಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಕೆಲಕಾಲ ಧರಣಿ ನಡೆಸಿದರು.

ಕಾನೂನಿನ ಮುಂದೆ ಯಾರು ದೊಡ್ಡವರಲ್ಲ. ನಟ ದರ್ಶನ್ ಮತ್ತು ಗ್ಯಾಂಗ್‌ಗೆ ಉಗ್ರ ಶಿಕ್ಷೆ ನೀಡಬೇಕು. ರೇಣುಕಾಸ್ವಾಮಿ ಕುಟುಂಬಕ್ಕೆ ನ್ಯಾಯ ಕಲ್ಪಿಸಿ, ದರ್ಶನ್‌ನನ್ನು ಚಲನಚಿತ್ರ ರಂಗದಿಂದ ಬ್ಯಾನ್ ಮಾಡಬೇಕು ಎಂದು ಆಗ್ರಹಿಸಿದ ಪ್ರತಿಭಟನಾಕಾರರು, ದರ್ಶನ್ ಸಿನಿಮಾದ ಸಿಡಿಗಳನ್ನು ಸುಟ್ಟು ಆಕ್ರೋಶ ವ್ಯಕ್ತಪಡಿಸಿದರು. ನಂತರ ಜಿಲ್ಲಾಡಳಿತ ಭವನಕ್ಕೆ ತೆರಳಿ, ಅಲ್ಲಿ ಕೆಲಕಾಲ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಶಿಲ್ಪಾನಾಗ್‌ಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮೂವರು ಶ್ರೀಗಳು, ರೇಣುಕಾಸ್ವಾಮಿ ಹತ್ಯೆ ಮಾಡಿರುವುದು ನಾಗರಿಕ ಸಮಾಜವೇ ತಲೆ ತಗ್ಗಿಸುವಂತಹ ವಿಚಾರವಾಗಿದೆ. ಪ್ರಸಿದ್ಧ ನಟನಾಗಿ ಗ್ಯಾಂಗ್‌ನೊಂದಿಗೆ ದರ್ಶನ್ ವಿಕೃತಿ ಮೆರೆದು ಆತನನ್ನು ಕೊಲೆ ಮಾಡಿರುವುದು ಖಂಡನೀಯ. ಪೊಲೀಸರು ಯಾವುದೇ ಒತ್ತಡಕ್ಕೆ ಮಣಿಯದೆ ಕೊಲೆ ಪ್ರಕರಣ ಬೇಧಿಸಿ, ದರ್ಶನ್‌ನನ್ನು ಬಂಧಿಸಿ, ತೀವ್ರ ವಿಚಾರಣೆ ನಡೆಸಿ, ನ್ಯಾಯಾಲಯಕ್ಕೆ ಸೂಕ್ತ ಸಾಕ್ಷಿಗಳನ್ನು ನೀಡಿರುವುದು ದಿಟ್ಟತನ ಎಂದು ಪೊಲೀಸರಿಗೆ ಪ್ರಶಂಸೆ ವ್ಯಕ್ತಪಡಿಸಿದರು.

ಮಹಾಸಭಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭೋಗಾಪುರ ನಾಗೇಂದ್ರ ಮಾತನಾಡಿ, ದರ್ಶನ್ ಹಣದ ದರ್ಪ ಹಾಗೂ ನಾನು ದೊಡ್ಡ ನಟ ಎಂಬ ಅಹಂನಿಂದ ಅಮಾಯಕ ರೇಣುಕಾಸ್ವಾಮಿ ಹತ್ಯೆ ಮಾಡಿದ್ದಾರೆ. ಆತನ ಕುಟುಂಬ ಬೀದಿಗೆ ಬಿದ್ದಿದೆ. ಆತನ ಪತ್ನಿ ಐದು ತಿಂಗಳ ಗರ್ಭಿಣಿಯಾಗಿದ್ದು, ಸಂಕಷ್ಟದಲ್ಲಿರುವ ಕುಟುಂಬಕ್ಕೆ ಸರ್ಕಾರ ಕೂಡಲೇ ದರ್ಶನ್ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡು ಅರ್ಧ ಭಾಗವನ್ನು ಮೃತ ರೇಣುಕಾಸ್ವಾಮಿ ಕುಟುಂಬಕ್ಕೆ ನೀಡಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮಹಾಸಭಾ ಅಧ್ಯಕ್ಷ ಮೂಡ್ಲುಪುರ ನಂದೀಶ್, ಜಿಲ್ಲಾ ಬಸವ ಕೇಂದ್ರದ ಅಧ್ಯಕ್ಷ ಎನ್.ಎಚ್.ಮಹದೇವಸ್ವಾಮಿ, ಮಹಾಸಭಾದ ಚಾ.ನಗರ ತಾಲೂಕು ಅಧ್ಯಕ್ಷ ನಟೇಶ್, ಗುಂಡ್ಲುಪೇಟೆ ತಾಲೂಕು ಅಧ್ಯಕ್ಷಹಂಗಳ ನಂಜಪ್ಪ ಕೊಳ್ಳೇಗಾಲ ತಾಲೂಕು ಅಧ್ಯಕ್ಷ ಮಹದೇವ ಪ್ರಸಾದ್, ಬಿ.ಕೆ.ರವಿಕುಮಾರ್, ಮೂಡ್ಲುಪುರ ಮಂಜೇಶ್, ಆರ್.ಎಸ್.ಲಿಂಗರಾಜು, ಮಹದೇವಸ್ವಾಮಿ, ನೌಕರರ ಸಂಘದ ಮಾಜಿ ಅಧ್ಯಕ್ಷ ಡಾ.ಪರಮೇಶ್ವರಪ್ಪ, ವಸಂತಮ್ಮ, ರತ್ನಮ್ಮ ಬಸವರಾಜು, ನಟರಾಜು, ಮನೋಜ್ ಪಟೇಲ್, ಗುರುಸ್ವಾಮಿ, ಮಹೇಶ್ ಪಟೇಲ್ ಭಾಗವಹಿಸಿದ್ದರು.

ಇಂದು ಕೊಳ್ಳೇಗಾಲದಲ್ಲಿ ಪ್ರತಿಭಟನೆ

ಕೊಳ್ಳೇಗಾಲ: ರೇಣುಕಾಸ್ವಾಮಿ ಹತ್ಯೆ ಖಂಡಿಸಿ ತಾಲೂಕು ಜಾಗತಿಕ ಲಿಂಗಾಯತ ಮಹಾಸಭಾ ವತಿಯಿಂದ ಜೂ.19ರಂದು ಬೆಳಗ್ಗೆ 10 ಗಂಟೆಗೆ ಪಟ್ಟಣದಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದು ಮಹಾಸಭಾ ತಾಲೂಕು ಅಧ್ಯಕ್ಷ ಬಿಂದು ಲೋಕೇಶ್ ತಿಳಿಸಿದರು.

ಪಟ್ಟಣದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸ್ ನಿಲ್ದಾಣ ಬಳಿಯ ಗಣೇಶ ದೇಗುಲದಿಂದ ಮೆರವಣಿಗೆ ನಡೆಸಲಾಗುವುದು. ಸರ್ಕಾರ ರೇಣುಕಾಸ್ವಾಮಿ ಕುಟುಂಬಕ್ಕೆ ಸೂಕ್ತ ಪರಿಹಾರ ನೀಡಬೇಕು ಹಾಗೂ ಕೊಲೆ ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಬೇಕು. ಯಾವುದೇ ಕಾರಣಕ್ಕೂ ಆರೋಪಿಗಳನ್ನು ಸರ್ಕಾರ ರಕ್ಷಣೆ ಮಾಡಬಾರದು ಎಂದು ಒತ್ತಾಯಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾ ತಾಲೂಕು ನಿರ್ದೇಶಕರಾದ ಮಲ್ಲಿಕಾರ್ಜುನಸ್ವಾಮಿ ಜಿನಕನಹಳ್ಳಿ, ಮಹೇಶ್ ಉಗನಿಯ, ಶಿವಸ್ವಾಮಿ ಕಾಮಗೆರೆ, ಪಾಳ್ಯ ರಘು, ಸುಂದರಪ್ಪ, ಟಗರಪುರ ಮಹದೇವಸ್ವಾಮಿ, ಆಲಹಳ್ಳಿ ಪುಟ್ಟಪ್ಪ, ಕುಂತೂರು ನಂಜುಂಡಸ್ವಾಮಿ ಇದ್ದರು.

ರೈತ ಸಂಘದ ಎರಡು ಬಣಗಳಿಂದ ಪ್ರತ್ಯೇಕ ಪ್ರತಿಭಟನೆ



ತಾಲೂಕು ಕಚೇರಿ ಎದುರು ರೈತ ಸಂಘದ ಬಣವೊಂದು ಪ್ರತಿಭಟನೆ ನಡೆಸಿದರು.

ಕೊಳ್ಳೇಗಾಲ: ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ, ರೇಣುಕಾಸ್ವಾಮಿ ಕೊಲೆ ಖಂಡಿಸಿ ಹಾಗೂ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ರೈತ ಸಂಘದ ಎರಡು ಬಣಗಳ ಕಾರ್ಯಕರ್ತರು ಪ್ರತ್ಯೇಕವಾಗಿ ಮಂಗಳವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ರಾಜ್ಯ ರೈತ ಸಂಘದ ಬಣವೊಂದರ ಪದಾಧಿಕಾರಿಗಳು ಪಟ್ಟಣದ ಮುಡಿಗುಂಡದ ಸೇತುವೆ ಬಳಿ ಕೆಲಕಾಲ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು. ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯಿಂದ ರೈತರು ಹಾಗೂ ಬಡವರಿಗೆ ತೊಂದರೆಯಾಗಲಿದೆ. ಕೂಡಲೇ ರಾಜ್ಯ ಸರ್ಕಾರ ದರ ಇಳಿಕೆ ಮಾಡಬೇಕು ಎಂದು ಆಗ್ರಹಿಸಿದರು.

ನಟ ದರ್ಶನ್ ಮತ್ತು ಅವರ ಗ್ಯಾಂಗ್ ರೇಣುಕಾಸ್ವಾಮಿಯನ್ನು ಅಮಾನುಷವಾಗಿ ಕೊಲೆ ಮಾಡಿದ್ದು, ತಪ್ಪಿತಸ್ಥರನ್ನು ಯಾವುದೇ ಕಾರಣಕ್ಕೂ ಸರ್ಕಾರ ರಕ್ಷಣೆ ಮಾಡದೆ ಶಿಕ್ಷೆ ನೀಡಲು ಕ್ರಮವಹಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ರೈತ ಸಂಘದ ತಾಲೂಕು ಅಧ್ಯಕ್ಷ ಶಿವಮಲ್ಲು, ಕಾರ್ಯದರ್ಶಿ ಪೆರಿಯಾನಾಯಗಂ, ಜಿಲ್ಲಾ ಉಪಾಧ್ಯಕ್ಷ ಗೌಡೇಗೌಡ, ಪ್ರಧಾನ ಕಾರ್ಯದರ್ಶಿ ಭಾಸ್ಕರ್, ಮಧುವನಹಳ್ಳಿ ಬಸವರಾಜು, ಸಂಘಟನಾ ಕಾರ್ಯದರ್ಶಿ ಜಾನ್, ತಾಲೂಕು ಗೌರವಾಧ್ಯಕ್ಷ ಪಿ.ಮಹದೇವ, ಸತ್ತೇಗಾಲ ಗ್ರಾಮ ಘಟಕದ ಅಧ್ಯಕ್ಷ ರಾಮೇಗೌಡ, ಮೋಳೆ ಗ್ರಾಮ ಘಟಕದ ಅಧ್ಯಕ್ಷ ನಟೇಶ್, ಇಕ್ಕಡಹಳ್ಳಿ ಮಹದೇವಪ್ಪ, ಸತ್ತೇಗಾಲ ಮಹದೇವ, ಮುಡಿಗುಂಡ ಮಲ್ಲಪ್ಪ, ಮಧುವನಹಳ್ಳಿ ಮಸಣಶೆಟ್ಟಿ ಇನ್ನಿತರು ಪಾಲ್ಗೊಂಡಿದ್ದರು.

ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹ: ಕೃಷಿಕರ ಸಮಸ್ಯೆ ಬಗೆಹರಿಸಲು ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿ ರೈತ ಸಂಘದ ಮತ್ತೊಂದು ಬಣದ ಕಾರ್ಯಕರ್ತರು ತಾಲೂಕು ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಈ ಬಾರಿ ತಾಲೂಕಿನಲ್ಲಿ ಉತ್ತಮ ಬೆಳೆಯಾಗಿದೆ ಎಂದು ಸರ್ಕಾರಕ್ಕೆ ಸುಳ್ಳು ವರದಿ ನೀಡಲಾಗಿದೆ. ರೈತರಿಗೆ ಹತ್ತು ವರ್ಷಗಳಿಂದ ಪಾವತಿಯಾಗುತ್ತಿದ್ದ ಬೆಳೆವಿಮೆಯನ್ನು ಈ ಬಾರಿ ಏಕಾಏಕಿ ಸ್ಥಗಿತಗೊಳಿಸಲಾಗಿದೆ. ಇದಕ್ಕೆ ಕೃಷಿ ಇಲಾಖೆ ಅಧಿಕಾರಿಗಳ ವೈಫಲ್ಯವೇ ಕಾರಣ. ಬಣ್ಣಾರಿ ಅಮ್ಮನ್ ಕಾರ್ಖಾನೆ ನಿರ್ಲಕ್ಷ್ಯದಿಂದ ಬೆಳೆಗಾರರು ಸಕಾಲಕ್ಕೆ ಕಬ್ಬು ಕಟಾವು ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಸಂಘದ ತಾಲೂಕು ಅಧ್ಯಕ್ಷ ಕುಂತೂರು ನಂಜುಂಡಸ್ವಾಮಿ, ಕಾರ್ಯದರ್ಶಿ ಜವರನಾಯಕ, ವಿಷಕಂಠೇಗೌಡ, ತೇರಂಬಳ್ಳಿ ಶಾಂತಮಲ್ಲು, ಲೋಕೇಶ್ ಕಿನಕಹಳ್ಳಿ ಇನ್ನಿತರ ಪಾಲ್ಗೊಂಡಿದ್ದರು.



ರಾಜ್ಯ ರೈತ ಸಂಘದ ಪದಾಧಿಕಾರಿಗಳು ಮುಡಿಗುಂಡದ ಸೇತುವೆ ಬಳಿ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.


ಇಂದು ನಂದಿನಿ ಕೆಫೆಮೂ ಉದ್ಘಾಟನೆ

ಗುಂಡ್ಲುಪೇಟೆ, ಜೂ.18– ಕೆಎಂಎಫ್ ಮತ್ತು ಚಾಮುಲ್ ಸಹಯೋಗದೊಂದಿಗೆ ಪಟ್ಟಣದ ಕೆಇಬಿ ಕಚೇರಿ ಮುಂಭಾಗ ನಂದಿನಿ ಕೆಫೆಮೂ ಅನ್ನು ಬುಧವಾರ ಬೆಳಗ್ಗೆ 11 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಉದ್ಘಾಟಿಸಲಿದ್ದಾರೆ.



ಕಾರ್ಯಕ್ರಮದಲ್ಲಿ ಸಂಸದ ಸುನೀಲ್ ಬೋಸ್, ಶಾಸಕ ಹೆಚ್.ಎಂ.ಗಣೇಶ್‌ಪ್ರಸಾದ್, ಕೆಎಂಎಫ್ ಅಧ್ಯಕ್ಷ ಭೀಮಾನಾಯಕ್, ಎಂಡಿ ಎಂ.ಕೆ.ಜಗದೀಶ್, ಚಾಮುಲ್ ಅಧ್ಯಕ್ಷ ನಾಗೇಂದ್ರ, ನಿರ್ದೇಶಕರಾದ ಎಂ.ನಂಜುಂಡಸ್ವಾಮಿ, ಎಂ.ಪಿ.ಸುನಿಲ್, ಹೆಚ್.ಎಸ್.ಬಸವರಾಜು, ಸದಾಶಿವಮೂರ್ತಿ, ಶಾಹುಲ್ ಹಮೀದ್, ಶೀಲಾ ಪುಟ್ಟರಂಗಶೆಟ್ಟಿ, ಕೆ.ಕೆ.ರೇವಣ್ಣ, ವ್ಯವಸ್ಥಾಪಕ ನಿರ್ದೇಶಕ ಕೆ.ರಾಜಕುಮಾರ್ ಇತರರು ಭಾಗವಹಿಸಲಿದ್ದಾರೆ ಎಂದು ನಿರ್ದೇಶಕ ಹೆಚ್.ಎಸ್. ನಂಜುಂಡಪ್ರಸಾದ್ ತಿಳಿಸಿದ್ದಾರೆ.

ವೈದ್ಯಾಧಿಕಾರಿ ವರ್ಗಾವಣೆಗೆ ಆಗ್ರಹಿಸಿ ಮನವಿ ಸಲ್ಲಿಕೆ



ಚಾಮರಾಜನಗರ, ಜೂ.18– ತಾಲೂಕಿನ ಉಡಿಗಾಲ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಬೇಜವಾಬ್ದಾರಿ ವರ್ತನೆ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ ಹಾಗೂ ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಎಸ್. ಚಿದಂಬರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಗ್ರಾಮದ ಆರೋಗ್ಯ ಕೇಂದ್ರ ವೈದ್ಯಾಧಿಕಾರಿ ಡಾ.ಉಮಾರಾಣಿ, ರೋಗಿಗಳಿಗೆ ಅವಧಿ ಮುಗಿದ ಔಷಧಗಳನ್ನು ನೀಡುತ್ತಿದ್ದಾರೆ. ಅವಧಿ ಮೀರಿದ ಗುಕ್ಲೋಸ್ ನೀಡಿದ ಪರಿಣಾಮ ರೋಗಿ ಮಹದೇವಸ್ವಾಮಿ ಮೃತಪಟ್ಟಿದ್ದಾರೆ. ಮತ್ತೊಬ್ಬ ರೋಗಿ ಲೀಲಾವತಿ ಬೇರೊಂದು ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದು ಜೀವ ಉಳಿಸಿಕೊಂಡಿದ್ದಾರೆ. ಈ ಸಂಬಂಧ ಚಾಮರಾಜನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದು, 2 ವರ್ಷ ಹಿಂದೆ ತಮ್ಮ ಇಲಾಖೆಗೂ ದೂರು ಸಲ್ಲಿಸಲಾಗಿದೆ. ಆದ್ದರಿಂದ ಇಂತಹ ಬೇಜವಾಬ್ದಾರಿ ವೈದ್ಯಾಧಿಕಾರಿಗಳ ಮೇಲೆ ಶಿಸ್ತು ಕ್ರಮಕೈಗೊಂಡು ವರ್ಗಾವಣೆಗೊಳಿಸಬೇಕು ಎಂದು ಒತ್ತಾಯಿಸಿದ್ದಾರೆ. ಮಧ್ಯಾಹ್ನ 2 ಗಂಟೆಗೆಯೇ ಆಸ್ಪತ್ರೆ ಬಂದ್ ಆಗಿರುತ್ತದೆ. ರಾತ್ರಿ ವೇಳೆ ಆಸ್ಪತ್ರೆಯಲ್ಲಿ ಯಾರು ಕೆಲಸ ನಿರ್ವಹಿಸುತ್ತಿಲ್ಲ. 24 ಗಂಟೆ ನಿರಂತರ ಸೇವೆ ಸಿಗುವಂತಾಗ ಬೇಕು. ಒಂದು ತಿಂಗಳೊಳಗಾಗಿ ಕ್ರಮ ಕೈಗೊಳ್ಳದಿದ್ದರೆ ಡಿಹೆಚ್‌ಓ ಕಚೇರಿ ಎದುರು ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಕಾರ್ಯಾಧ್ಯಕ್ಷ ಉಡಿಗಾಲ ರೇವಣ್ಣ, ಉಪಾಧ್ಯಕ್ಷ ಪಟೇಲ್ ಶಿವಮೂರ್ತಿ, ಕಾರ್ಯದರ್ಶಿ ಎಚ್.ಮೂಕಳ್ಳಿ ಮಹದೇವಸ್ವಾಮಿ, ಮೈಸೂರು ಜಿಲ್ಲಾ ಕಾರ್ಯಾಧ್ಯಕ್ಷ ಕಿರಗಸೂರ್ ಶಂಕರ್, ತಾಲೂಕು ಅಧ್ಯಕ್ಷ ನಂಜೇದೇವನಪುರ ಸತೀಶ್, ಉಪಾಧ್ಯಕ್ಷ ಶಿವಸ್ವಾಮಿ, ಕಾರ್ಯದರ್ಶಿ ಉಡಿಗಾಲ ಸುಂದ್ರಪ್ಪ ಹಿರಿಯೂರು ಮಹೇಶ್, ಹಿಂದ್ವಾಡಿ ಮಾದೇಶ್, ಕುರಟ್ಟಿ ಉಮೇಶ್, ಗ್ರಾಮ ಘಟಕ ಅಧ್ಯಕ್ಷ ಮಾದೇಶ್, ರಾಚಪ್ಪಾಜಿ, ಎಸ್. ಕಿರಣ್, ಬಲರಾಮು, ಎಸ್.ಶಿವಕುಮಾರ್, ರೇವಣ್ಣಸ್ವಾಮಿ, ಲೋಕೇಶ್, ಗುರುಮಲ್ಲಪ್ಪ ರೇವಣ್ಣ ಹಾಜರಿದ್ದರು.

ಜೂ.23ರಿಂದ ಗಿರಿಜಾ ಕಲ್ಯಾಣ ಮಹೋತ್ಸವ

ಚಾಮರಾಜನಗರ: ನಗರದ ಶ್ರೀ ಚಾಮರಾಜೇಶ್ವರ ದೇವಾಲಯದಲ್ಲಿ ಗಿರಿಜಾ ಕಲ್ಯಾಣ ಮಹೋತ್ಸವ ಅಂಗವಾಗಿ ಜೂ.23ರಿಂದ 28ರವರೆಗೆ ಕೆಂಪನಂಜಾಂಬ ಅಮ್ಮನವರ ಸಮೇತ ಚಾಮರಾಜೇಶ್ವರಸ್ವಾಮಿ ಕಲ್ಯಾಣ ಮಹೋತ್ಸವ ನಡೆಯಲಿದೆ.

ಜೂ.23ರಂದು ಸಂಜೆ 6 ಗಂಟೆಗೆ ಅನುಜ್ಞಾಪೂರ್ವಕ ಎಣ್ಣೆ ಅರಿಶಿಣ ಪ್ರಧಾನ, ರಾತ್ರಿ 8 ಗಂಟೆಗೆ ವರಪೂಜಾ ಮಹೋತ್ಸವ, 24ರಂದು ತೃತೀಯ ಬೆಳಗ್ಗೆ 10 ಗಂಟೆಗೆ ಅಂಕುರಾರ್ಪಣ ಪೂರ್ವಕ ಕನ್ನಡಿ ಕಲಶ ತರುವುದು, ನಂತರ ಮಂಗಳಸ್ನಾನ, ಸಂಜೆ 5 ಗಂಟೆಗೆ ಕಾಶಿಯಾತ್ರೆ ಮಹೋತ್ಸವ, ರಾತ್ರಿ 7.30ಕ್ಕೆ ಅಕ್ಷತಾರೋಪಣೆ, ಧಾರಾಮಹೋತ್ಸವ, ಪ್ರಧಾನಹೋಮ, ಮಹಾಮಂಗಳಾರತಿ ಜರುಗಲಿದೆ.

25ರಂದು ಬೆಳಗ್ಗೆ ಮತ್ತು ರಾತ್ರಿ ಉರುಟಣೆ ಉಯ್ಯಾಲೋತ್ಸವ, 26ರಂದು ರಾತ್ರಿ ಪಾಕಿನಿ ಮಹೋತ್ಸವ, 27ರಂದು ರಾತ್ರಿ ಶೇಷಹೋಮ, ನಾಕಬಲಿ, ಹೋಳಲು ಸುತ್ತುವುದು ಗಜಾರೋಹಣ ಪೂಜೆ, ಗೃಹಪ್ರವೇಶ ಮಹೋತ್ಸವ ನಡೆಯಲಿದೆ. 28ರಂದು ದೇವತಾ ಉದ್ವಾಸನೆ, ವಿವಾಹ ದೀಕ್ಷಾ ವಿಸರ್ಜನೆ, ಸ್ತಂಭ ಪೂಜಾ, ರಾತ್ರಿ ಪುಷ್ಪಾಂದೋಳಿ ಹಾಗೂ ಶಯನೋತ್ಸವ ನಡೆಯಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸಚಿವ ಸ್ಥಾನ ಸಿಗುವ ವಿಶ್ವಾಸ



ಬೆಳಗಾವಿ: ನನಗೂ ಸಚಿವನಾಗಬೇಕು ಎಂಬ ಆಸೆ ಇರುತ್ತದೆ. ಉತ್ತರ ಕರ್ನಾಟಕ ಭಾಗದಲ್ಲಿ ನನ್ನದೇ ಆದ ಛಾಪು ಇದೆ. ಸಚಿವ ಸ್ಥಾನ ನೀಡುವಾಗ, ನನಗೆ ಇರುವ ಹಿರಿತನವೂ ಪರಿಗಣನೆಗೆ ಬರುತ್ತದೆ ಎಂಬ ವಿಶ್ವಾಸವಿದೆ ಎಂದು ಧಾರವಾಡ ಶಾಸಕ ವಿನಯ ಕುಲಕರ್ಣಿ ಹೇಳಿದರು. ನಾನು ಮತ್ತು ಶಾಸಕ ಲಕ್ಷ್ಮಣ ಸವದಿ ಸಚಿವರಾಗುತ್ತೇವೆ ಎಂಬ ಚರ್ಚೆ ನಡೆದ ಬಗ್ಗೆ ನನಗೆ ಮಾಹಿತಿ ಇಲ್ಲ. ಪಕ್ಷದಲ್ಲಿ ನನ್ನ ಬಗ್ಗೆ ಒಳ್ಳೆಯ ಅಭಿಪ್ರಾಯವಿದೆ. ನಾನು ಕೇಳದೆಯೇ ಕೆಪಿಸಿಸಿ ಕಾರ್ಯಾಧ್ಯಕ್ಷ ಸ್ಥಾನ, ನಿಗಮ–ಮಂಡಳಿ ಅಧ್ಯಕ್ಷ ಸ್ಥಾನ ಕೊಟ್ಟಿದ್ದಾರೆ. ಹೀಗಾಗಿ ಸಚಿವ ಸ್ಥಾನ ಸಿಗಲಿದೆ ಎಂದು ಅವರು ಮಂಗಳವಾರ ಸುದ್ದಿಗಾರರಿಗೆ ತಿಳಿಸಿದರು. ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ಪಡೆಯಲು ಬಸವಜಯ ಮೃತ್ಯುಂಜಯ ಸ್ವಾಮೀಜಿ 25 ವರ್ಷಗಳಿಂದ ಹೋರಾಟ ನಡೆಸಿದ್ದಾರೆ. ನಾವೂ ಅವರಿಗೆ ಬೆಂಬಲ ನೀಡಿ, ರಾಜ್ಯ ಸರ್ಕಾರಕ್ಕೂ ಕೋರಿದ್ದೇವೆ. ಲಿಂಗಾಯತ ಸಮುದಾಯವನ್ನು ಕೇಂದ್ರದ ಒಬಿಸಿ ಪಟ್ಟಿಗೆ ಸೇರಿಸುವಂತೆ ಹೋರಾಟ ಆರಂಭಿಸುತ್ತೇವೆ ಎಂದರು.

ಒಂದನೇ ಪುಟದಿಂದ

ನೀರು ಸೇರದಂತೆ ಮುಡಾ ಯೋಜನೆ

ಮೈಸೂರಿನ ಸಾಲುಂಡಿಯಲ್ಲಿ ಇತ್ತೀಚಿಗೆ ಕಲುಷಿತ ನೀರು ಸೇವನೆಯಿಂದ ವ್ಯಕ್ತಿಯೊಬ್ಬ ಮೃತಪಟ್ಟ ಪ್ರಕರಣವನ್ನು ಸಿದ್ದರಾಮಯ್ಯ ಗಂಭೀರವಾಗಿ ಪರಿಗಣಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕಲುಷಿತ ನೀರು ಸೇರುತ್ತಿರುವ ನಗರದ ಕೆರೆಗಳ ಬಗ್ಗೆ ಕೆಡಿಪಿ ಸಭೆಯಲ್ಲಿ ಸಮಗ್ರ ಮಾಹಿತಿ ನೀಡುವಂತೆ ಸಿದ್ದರಾಮಯ್ಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಆದೇಶ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ಮುಡಾ ಅಧ್ಯಕ್ಷ ಮರೀಗೌಡ ಹಾಗೂ ಆಯುಕ್ತ ದಿನೇಶ್‌ಕುಮಾರ್ ಇಂದು ನಗರದ ಹಲವು ಬಡಾವಣೆ ಹಾಗೂ ಕೆರೆಗಳಿಗೆ ಭೇಟಿ ನೀಡಿ ಕಲುಷಿತ ನೀರು ಎಲ್ಲೆಲ್ಲಿ ಕೆರೆ ಸೇರುತ್ತಿದೆ, ಇದನ್ನು ತಡೆಗಟ್ಟಲು ಕೈಗೊಂಡಿರುವ ಯೋಜನೆಗಳೇನು, ಅಂದಾಜು ವೆಚ್ಚ, ಕಲುಷಿತ ನೀರು ಸಂಸ್ಕರಿಸಿ ಎಲ್ಲಿ ಹರಿಸಬೇಕು ಎಂಬ ಹಲವು ಮಾಹಿತಿಗಳನ್ನು ಕಲೆ ಹಾಕಿದರು. ಮೊದಲು ಸರ್ದಾರ್ ವಲ್ಲಭಭಾಯ್ ಪಟೇಲ್ ನಗರ, ಐಪಿಎಸ್ ಶ್ರೀನಿವಾಸನ್‌ನಗರ ಮಧ್ಯೆ ಇರುವ ತಿಪ್ಪಯ್ಯನ ಕೆರೆಗೆ ಭೇಟಿ ನೀಡಿದರು. ಇಲ್ಲಿ ಕೆರೆಗೆ ಕಲುಷಿತ ನೀರು ಸೇರುತ್ತಿರುವ ಬಗ್ಗೆ ಮರೀಗೌಡ ಅಧಿಕಾರಿಗಳಿಂದ ಮಾಹಿತಿ ಪಡೆದರು.

ನಂತರ ಪತ್ರಕರ್ತರಿಗೆ ಈ ಬಗ್ಗೆ ವಿವರಣೆ ನೀಡಿದ ಮರೀಗೌಡ, ಸುತ್ತಮುತ್ತ ಇರುವ ಖಾಸಗಿ ಬಡಾವಣೆಯ ಒಳ ಚರಂಡಿ ತ್ಯಾಜ್ಯ ನೀರು ಸಂಸ್ಕರಣೆಯಾಗದೆ ನೇರವಾಗಿ ಈ ಕೆರೆಗೆ ಬಂದು ಸೇರುತ್ತಿದೆ. ಸದ್ಯ ಈ ಕೆರೆ ಚಾಮರಾಜೇಂದ್ರ ಮೃಗಾಲಯದ ಸ್ವಾಧೀನದಲ್ಲಿದೆ. ಆದರೆ ಕಲುಷಿತ ನೀರು ತಡೆಯಲು ಅವರಿಂದ ಯಾವುದೇ ಕಾರ್ಯ ಆಗಿಲ್ಲ ಎಂದರು. ಈ ಹಿನ್ನೆಲೆಯಲ್ಲಿ ತಿಪ್ಪಯ್ಯನ ಕೆರೆ ಸಮೀಪ 2 ಎಂಎಲ್ ಡಿ ವೆಟ್ ವೆಲ್ ನಿರ್ಮಿಸಿ ಕಲುಷಿತ ನೀರನ್ನು ಸಂಸ್ಕರಿಸಲಾಗುವುದು. ತರುವಾಯ ಸಂಸ್ಕರಣೆಗೊಂಡ ನೀರನ್ನು ನೇರವಾಗಿ ರಾಯನಕೆರೆಗೆ ಹರಿಸಲಾಗುವುದು. ಇದಕ್ಕಾಗಿ 12.60 ಕೋಟಿ ಟೆಂಡರ್ ಕರೆಯಲಾಗಿದ್ದು, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮೂಲಕ ಈ ಕಾಮಗಾರಿ ನಿರ್ವಹಿಸಲಾಗುವುದು. ಈ ಯೋಜನೆಯ ಪ್ರಸ್ತಾವನೆ ಸರ್ಕಾರಕ್ಕೆ ಕಳುಹಿಸಲಾಗಿದೆ ಎಂದು ತಿಳಿಸಿದರು. ಸುತ್ತಮುತ್ತಲ ಬಡಾವಣೆಯ ಒಳ ಚರಂಡಿ ನೀರು ತಿಪ್ಪಯ್ಯನ ಕೆರೆ ಸೇರುತ್ತಿದ್ದು, ಗಬ್ಬು ವಾಸನೆ ಬೀರುತ್ತಿದೆ. ಇದರಿಂದ ಇಲ್ಲಿ ವಾಸ ಮಾಡುವವರಿಗೆ ಯಾತನೆಯಾಗಿದೆ ಎಂದು ಸ್ಥಳಿಯರು ತಮ್ಮ ಬವಣೆ ತೋಡಿಕೊಂಡರು.

ಪರಿಶೀಲನೆ ವೇಳೆ ಪ್ರಾಧಿಕಾರದ ಅಧೀಕ್ಷಕ ಧರಣೇಂದ್ರಪ್ಪ, ಕಾರ್ಯದರ್ಶಿ ಶೇಖರ್, ನಗರ ಯೋಜನಾ ಶಾಖೆ ಸದಸ್ಯ ಶಿವರಾಮಯ್ಯ, ವಿಶೇಷ ಭೂಸ್ವಾಧೀನಾಧಿಕಾರಿ ಮಂಜುನಾಥ್, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಯಾದಗಿರಿ, ಮೋಹನ್, ಸಹಾಯಕ ಆಯುಕ್ತರಾದ ಪ್ರಶಾಂತ್, ಲಕ್ಷ್ಮೀಶ್, ರೂಪ ಹಾಜರಿದ್ದರು.

ಮುಡಾ ಕಟ್ಟಡಗಳ ಬಾಡಿಗೆ ಹೆಚ್ಚಳಕ್ಕೆ ನಿರ್ಧಾರ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮಾಲೀಕತ್ವದ ಕಮರ್ಷಿಯಲ್ ಕಾಂಪ್ಲೆಕ್ಸ್, ಕಲ್ಯಾಣ ಮಂಟಪ ಸೇರಿದಂತೆ ಎಲ್ಲಾ ಕಟ್ಟಡಗಳ ಬಾಡಿಗೆ ದರ ಹೆಚ್ಚಳ ಮಾಡಲಾಗುವುದು ಎಂದು ಇದೇ ವೇಳೆ ಮರೀಗೌಡ ತಿಳಿಸಿದರು. ಮುಡಾ ಅಧೀನದ ಕಟ್ಟಡಗಳಿಗೆ ಬಹಳ ಹಿಂದೆ ಬಾಡಿಗೆ ದರ ನಿಗದಿ ಮಾಡಲಾಗಿದೆ. ಆಗಿನ ಬಾಡಿಗೆಗೂ ಈಗಿನ ಬಾಡಿಗೆಗೂ ಅಜಗಜಾಂತರ ವ್ಯತ್ಯಾಸವಿದೆ. ಈ ಹಿನ್ನೆಲೆಯಲ್ಲಿ ಬಾಡಿಗೆ ದರ ಹೆಚ್ಚಳ ಮಾಡಲು ಕರಾರು ನವೀಕರಣ ಮಾಡಲು ತೀರ್ಮಾನ ಮಾಡಲಾಗಿದೆ ಎಂದರು.

ಈಗಿನ ಮಾರುಕಟ್ಟೆ ಬೆಲೆಗೆ ಬಾಡಿಗೆ ದರ ಹೆಚ್ಚಳ ಮಾಡಿದರೆ ಪ್ರಾಧಿಕಾರಕ್ಕೆ ನಾಲ್ಕು ಪಟ್ಟು ಆದಾಯ ಹೆಚ್ಚಾಗುತ್ತದೆ. ಈ ಹಿನ್ನೆಲೆಯಲ್ಲಿ ಮುಡಾ ಮಾಲೀಕತ್ವದ ಕಮರ್ಷಿಯಲ್ ಕಾಂಪ್ಲೆಕ್ಸ್ ಹಾಗೂ ಕಲ್ಯಾಣ ಮಂಟಪಗಳಿಗೂ ಭೇಟಿ ನೀಡಿ ಪರಿಶೀಲನೆ ಮಾಡಲಾಗುವುದು ಎಂದು ಮರೀಗೌಡ ತಿಳಿಸಿದರು.

ಖಾಲಿ ಇರುವ ಸಿಎ ನಿವೇಶನ ವಾಪಸ್ಸು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಮಂಜೂರು ಮಾಡಿರುವ ಸಿಎ ನಿವೇಶನಗಳಲ್ಲಿ ನಿಗದಿತ ಉದ್ದೇಶಕ್ಕೆ ಬಳಸದೇ ಇದ್ದಲ್ಲಿ ವಾಪಸ್ಸು ಪಡೆಯಲಾಗುವುದು ಎಂದು ಮುಡಾ ಅಧ್ಯಕ್ಷ ಮರೀಗೌಡ ತಿಳಿಸಿದರು. ಬಹಳಷ್ಟು ಸಂಘ ಸಂಸ್ಥೆಗಳು ಸಿಎ ನಿವೇಶನ ಪಡೆದು, ನಿರ್ದಿಷ್ಟ ಉದ್ದೇಶಕ್ಕೆ ಬಳಸದೇ ಖಾಲಿ ಬಿಟ್ಟಿವೆ. ಅಂತಹ ಸಿಎ ನಿವೇಶನಗಳನ್ನು ಪ್ರಾಧಿಕಾರ ವಾಪಸ್ಸು ಪಡೆಯಲಿದೆ ಎಂದರು. ಕೆಲವರು ಯಾವ ಉದ್ದೇಶಕ್ಕೆ ಸಿಎ ನಿವೇಶನ ಪಡೆದಿದ್ದಾರೊ ಅದಕ್ಕೆ ಬಳಕೆ ಮಾಡದೆ ವಾಣಿಜ್ಯ ಉದ್ದೇಶಕ್ಕೆ ಬಳಕೆ ಮಾಡಿದ್ದಾರೆ. ಈ ಬಗ್ಗೆಯೂ ಮಾಹಿತಿ ಸಂಗ್ರಹಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಮೈಸೂರಿನ ಸಾತಗಳ್ಳಿಯಲ್ಲಿ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣ ಮಾಡುವ ಪ್ರಸ್ತಾವನೆಯನ್ನು ಕೈ ಬಿಡಲು ಚಿಂತಿಸಲಾಗಿದೆ. ಕ್ರಿಕೆಟ್ ಸ್ಟೇಡಿಯಂ ನಿರ್ಮಿಸಲು ಸಾತಗಳ್ಳಿ ಸೂಕ್ತ ಸ್ಥಳವಲ್ಲ ಎಂಬ ಅಭಿಪ್ರಾಯದ ಹಿನ್ನೆಲೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದರು. ಸಾತಗಳ್ಳಿ ಬದಲು ಇಲವಾಲದಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಇದಕ್ಕೆ ಅವಶ್ಯವಿರುವ ಭೂಮಿ ಅಲ್ಲಿದೆ ಎಂದು ಮರೀಗೌಡ ಸ್ಪಷ್ಟಪಡಿಸಿದರು. ವಸಂತನಗರದ ಬಳಿ 30 ಕೋಟಿ ರೂಪಾಯಿ ವೆಚ್ಚದಲ್ಲಿ ವಾಟರ್ ಟ್ಯಾಂಕ್ ನಿರ್ಮಿಸಲಾಗುತ್ತಿದೆ. ಜರ್ಮನ್ ಪ್ರೆಸ್ ಬಳಿಯಿಂದ ಇಲ್ಲಿಗೆ ನೀರಿನ ಸಂಪರ್ಕ ಕಲ್ಪಿಸಲಾಗುವುದು. ತರುವಾಯ ವಸಂತನಗರ ಸೇರಿದಂತೆ ಇತರೆ ಬಡಾವಣೆಗಳಿಗೆ ಕುಡಿಯುವ ನೀರು ಸರಬರಾಜು ಮಾಡಲಾಗುವುದು. ಮರೀಗೌಡ ಹಾಗೂ ದಿನೇಶ್ ಕುಮಾರ್ ಈ ಯೋಜನಾ ಸ್ಥಳವನ್ನು ಪರಿಶೀಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದರು.

ರಿಂಗ್ ರಸ್ತೆ ಅಕ್ಕ ಪಕ್ಕದ ಬಡಾವಣೆಗಳು ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ

ಮೈಸೂರಿನ ರಿಂಗ್ ರಸ್ತೆ ಅಕ್ಕ ಪಕ್ಕದಲ್ಲಿರುವ ಮುಡಾ ಹಾಗೂ ಖಾಸಗಿ ಬಡಾವಣೆಗಳನ್ನು ಶೀಘ್ರವೇ ಸ್ಥಳಿಯ ಸಂಸ್ಥೆಗಳಿಗೆ ಹಸ್ತಾಂತರಿಸಿ, ಕಸ ಶೇಖರಣೆ, ನಿರ್ವಹಣೆ ಸೇರಿದಂತೆ ಇತರೆ ಜವಾಬ್ದಾರಿಗಳನ್ನು ಅವರಿಗೆ ವಹಿಸಲಾಗುವುದು ಎಂದು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತ ಜಿ.ಟಿ. ದಿನೇಶ್ ಕುಮಾರ್ ತಿಳಿಸಿದರು. ರಿಂಗ್ ರಸ್ತೆ ಅಕ್ಕಪಕ್ಕದಲ್ಲಿರುವ ಎಲ್ಲಾ ಬಡಾವಣೆಗಳನ್ನು ಪಟ್ಟಣ ಪಂಚಾಯಿತಿ ಸೇರಿದಂತೆ ಇತರೆ ಸ್ಥಳೀಯ ಸಂಸ್ಥೆಗಳಿಗೆ ಹಸ್ತಾಂತರ ಮಾಡಿದಾಗ ಅವರೇ ಅದರ ನಿರ್ವಹಣೆ ಮಾಡುತ್ತಾರೆ ಎಂದರು. ಹೊರ ವರ್ತುಲ ರಸ್ತೆ ನಿರ್ಮಾಣಕ್ಕೆ ಡಿಪಿಆರ್ ಸಿದ್ಧಪಡಿಸಲು ಈಗಾಗಲೇ ಟೆಂಡರ್ ಕರೆಯಲಾಗಿದೆ ಎಂದು ದಿನೇಶ್ ಕುಮಾರ್ ಹೇಳಿದರು. ಮೈಸೂರಿನ ಇಟ್ಟಿಗೆಗೂಡಿನ ಮೃಗಾಲಯದ ಮುಂಭಾಗದಲ್ಲಿ ಪ್ರಾಧಿಕಾರದ ಜಾಗದಲ್ಲಿ ಹೊಸ ಕಟ್ಟಡ ನಿರ್ಮಾಣ ಮಾಡಲಾಗಿದೆ. ಇದನ್ನು ಬಾಡಿಗೆಗೆ ನೀಡಲು ಶೀಘ್ರವೇ ಟೆಂಡರ್ ಕರೆಯಲಾಗುವುದು ಎಂದು ತಿಳಿಸಿದರು. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ಈ ಕಟ್ಟಡವನ್ನು ಬಾಡಿಗೆಗೆ ಕೇಳಿದ್ದರು. ಆದರೆ ಬಾಡಿಗೆ ದುಬಾರಿ ಎಂಬ ಕಾರಣಕ್ಕೆ ಹಿಂದೆ ಸರಿದರು. ಪಾಸ್‌ಪೋರ್ಟ್ ಕಚೇರಿಗೆ ಕೇಳಿದ್ದರು. ಅವರು ಕೂಡ ನಿರಾಸಕ್ತಿ ತೋರಿದರು. ಈಗ ಇಡೀ ಕಟ್ಟಡವನ್ನು ಬಾಡಿಗೆಗೆ ನೀಡಲು ಟೆಂಡರ್ ಕರೆಯಲಾಗುವುದು ಎಂದು ದಿನೇಶ್ ಕುಮಾರ್ ಹೇಳಿದರು.

ನೀವು ನಾಲಾಯಕ್

ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ ಪಾವತಿ ಮಾಡಲಾಗಿದೆ, 2,48,887 ವಿದ್ಯಾರ್ಥಿಗಳಿಗೆ 302.64 ಕೋಟಿ ರೂ. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪಾವತಿ ಮಾಡಲಾಗಿದೆ. ಹಾಸ್ಟೆಲ್‌ಗಳಿಗೆ ಸಂಜೆ ವೇಳೆ ಭೇಟಿ ನೀಡಿ, ಶುಚಿ ಕಿಟ್‌ಗಳು, ಆಹಾರ ಪದಾರ್ಥ ವಿತರಣೆ ಸಮರ್ಪಕವಾಗಿ ಆಗುತ್ತಿದೆಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಕೆಲವು ಆಶ್ರಮ ಶಾಲೆಗಳಲ್ಲಿ ರಾತ್ರಿ ವೇಳೆ ಮಕ್ಕಳು ಇರುವುದಿಲ್ಲ, ಮಕ್ಕಳು ರಾತ್ರಿ ಊಟವಾದ ನಂತರ ಮನೆಗೆ ಕರೆದುಕೊಂಡು ಹೋಗುತ್ತಾರೆ, ಚಿಕ್ಕ ಮಕ್ಕಳು ಎಂದು ಮನೆಗೆ ಕರೆದುಕೊಂಡು ಹೋಗುತ್ತಾರೆ, ಎಲ್ಲ ಸೌಲಭ್ಯ ಇದ್ದೂ, ಯಾಕೆ ಮನೆಗೆ ಕರೆದುಕೊಂಡು ಹೋಗುತ್ತಾರೆ, ಈ ಕುರಿತು ಪರಾಮರ್ಶೆ ನಡೆಸಿ, ಪೋಷಕರಿಗೆ ಮನವರಿಕೆ ಮಾಡಲು ಸೂಚಿಸಿದರು.

ಮೈಸೂರಲ್ಲಿ ಸ್ಥಳ ಮಹಜರು

ಪೊಲೀಸರ ಸ್ಥಳ ಮಹಜರ್‌ಗೆ ಬಂದೋಬಸ್ತ್ ಒದಗಿಸಿ, ಸಹಕರಿಸಲಾಯಿತು. ನಂತರ ಆರೋಪಿಗಳನ್ನು ತಿ.ನರಸೀಪುರ ರಸ್ತೆಯಲ್ಲಿರುವ ನಟ ದರ್ಶನ್ ಫಾರಂ ಹೌಸ್‌ಗೆ ಕರೆದೊಯ್ಯಲಾಗುತ್ತದೆ ಎಂಬ ಮಾಹಿತಿ ಇತ್ತಾದರೂ, ಆದರೆ, ಪೊಲೀಸರು ಮಧ್ಯಾಹ್ನ 2.30 ಗಂಟೆ ವೇಳೆಗೆ ಬೆಂಗಳೂರಿಗೆ ಮರಳಿದರು.

ಜನರು ಹೆಚ್ಚಿನ ಸಂಖ್ಯೆಯಲ್ಲಿ ಜಮಾಯಿಸಿ ಮಹಜರ್‌ಗೆ ಅಡ್ಡಿಯಾಗಬಹುದು ಎಂಬ ಕಾರಣಕ್ಕಾಗಿ ಇಂದು ನಟ ದರ್ಶನ್‌ನನ್ನು ಕರೆತಂದಿಲ್ಲ ಎಂಬ ಮಾತು ಕೇಳಿಬಂತು. ತನಿಖಾಧಿಕಾರಿಗಳು ಶೀಘ್ರದಲ್ಲೇ ಮುಂಜಾನೆ ವೇಳೆ ದರ್ಶನ್ ಕರೆತಂದು ಮಹಜರ್ ಮಾಡಲು ಸಿದ್ಧತೆ ನಡೆಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಇಂಧನ ದರ ಏರಿಕೆ ಖಂಡಿಸಿ ಮೈಸೂರಲ್ಲಿ ಬಿಜೆಪಿ ಭಾರಿ ಪ್ರತಿಭಟನೆ

● ಜಟಕಾಬಂಡಿ, ಎತ್ತಿನಗಾಡಿಯೊಂದಿಗೆ ಮೆರವಣಿಗೆ ● ಬೆಲೆ ಏರಿಕೆ ಕೈಬಿಡದಿದ್ದಲ್ಲಿ ನಿರಂತರ ಹೋರಾಟದ ಎಚ್ಚರಿಕೆ





ಇಂಧನ ಬೆಲೆ ಏರಿಕೆ ವಿರೋಧಿಸಿ ಮೈಸೂರಿನ ಸಿದ್ಧಾರ್ಥನಗರದ ನೂತನ ಜಿಲ್ಲಾಧಿಕಾರಿ ಕಚೇರಿ ಬಳಿ ಬಿಜೆಪಿ ಕಾರ್ಯಕರ್ತರು ಭಾರಿ ಪ್ರತಿಭಟನೆ ನಡೆಸಿದರು. ಮತ್ತೊಂದು ಚಿತ್ರದಲ್ಲಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸುತ್ತಿರುವುದನ್ನು ಕಾಣಬಹುದು

ಮೈಸೂರು, ಜೂ.18(ಎಂಟಿವೈ)– ಪೆಟ್ರೋಲ್, ಡೀಸೆಲ್ ದರ ಏರಿಕೆ ಕೈಬಿಡುವಂತೆ ಆಗ್ರಹಿಸಿ ಮೈಸೂರಲ್ಲಿ ಬಿಜೆಪಿ ಕಾರ್ಯಕರ್ತರು ಜಟಕಾಬಂಡಿ, ಎತ್ತಿನಗಾಡಿಯೊಂದಿಗೆ ಪ್ರತಿಭಟನಾ ಮೆರವಣಿಗೆ ಮೂಲಕ ತೆರಳಿ ನೂತನ ಜಿಲ್ಲಾಧಿಕಾರಿ ಕಚೇರಿ ಬಳಿ ಧರಣಿ ನಡೆಸುವುದರೊಂದಿಗೆ ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಮೈಸೂರು ನಗರ ಹಾಗೂ ಗ್ರಾಮಾಂತರ ಬಿಜೆಪಿ ಘಟಕದ ವತಿಯಿಂದ ನಡೆದ ಈ ಪ್ರತಿಭಟನಾ ಮೆರವಣಿಗೆಯಲ್ಲಿ ಕಾರ್ಯಕರ್ತರು ಸಿದ್ಧಾರ್ಥನಗರದ ಹಳೆಯ ಹಾಲಿನ ಡೈರಿ ಮುಂಭಾಗದಿಂದ ಎತ್ತಿನಗಾಡಿ, ಕುದುರೆಗಾಡಿಯೊಂದಿಗೆ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗುತ್ತಾ ಸಾಗಿದರು.

ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಬಹುದಾದ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ಕೊನೆಗೆ ಮುಖ್ಯರಸ್ತೆಯ ಪ್ರವೇಶ ದ್ವಾರದ ಬಳಿಯೇ ಪ್ರತಿಭಟನೆ ನಡೆಸಿದ ಬಿಜೆಪಿ ಕಾರ್ಯಕರ್ತರು ಜಿಲ್ಲಾಧಿಕಾರಿ ಡಾ.ಕೆ.ವಿ. ರಾಜೇಂದ್ರ ಅವರಿಗೆ ಮನವಿ ಸಲ್ಲಿಸಿದರು.

ಶಾಸಕ ಟಿ.ಎಸ್.ಶ್ರೀವತ್ಸ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯರ ಸರ್ಕಾರ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡಿ, ಸಮರ್ಥಿಸಿಕೊಳ್ಳುತ್ತಿರುವುದು ನಾಚಿಕೆಗೇಡಿನ ಸಂಗತಿ. ಕಳೆದ ಹನ್ನೆರಡು ತಿಂಗಳಿಂದ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ. ಹಾಲಿನ ದರ, ಆಸ್ತಿ ತೆರಿಗೆ ಹೆಚ್ಚು ಮಾಡಲಾಗಿದೆ. ದಲಿತರ ಕಲ್ಯಾಣ ಕಾರ್ಯಕ್ರಮಗಳಿಗೆ ಮೀಸಲಾದ ಹಣವನ್ನು ದುರ್ಬಳಕೆ ಮಾಡಲಾಗಿದೆ. ರಾಜ್ಯದಲ್ಲಿ ರೌಡಿಗಳ ಅಟ್ಟಹಾಸ ಶುರುವಾಗಿದೆ. ಕಾನೂನು ಸುವ್ಯವಸ್ಥೆ ಕಾಪಾಡಲು ಸರ್ಕಾರ ವಿಫಲವಾಗಿದೆ. ಗ್ಯಾರಂಟಿ ಯೋಜನೆಯಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ ನೀಡುತ್ತೇವೆಂದು ಹೇಳಿ ಈಗ ಬಸ್ ದರ ಹೆಚ್ಚಿಸಲು ಮುಂದಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಉಡಾಫೆ ಉತ್ತರ ನೀಡುವ ಬದಲು ಕೂಡಲೇ ಇಂಧನ ದರ ಹೆಚ್ಚಳ ಆದೇಶ ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು.

ಮೈಸೂರು ನಗರ ಬಿಜೆಪಿ ಅಧ್ಯಕ್ಷ ಎಲ್. ನಾಗೇಂದ್ರ ಮಾತನಾಡಿ, ರಾಜ್ಯ ಸರ್ಕಾರ ಏಕಪಕ್ಷೀಯ ತೀರ್ಮಾನದಂತೆ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ ಮಾಡಿ ಬಡವರ ಮೇಲೆ ಗದಾಪ್ರಹಾರ ಮಾಡಿದೆ. ಖಜಾನೆ ಖಾಲಿಯಾಗಿ ಆಂಬುಲೆನ್ಸ್‌ಗಳ ಚಾಲಕರಿಗೆ ವೇತನ ಕೊಟ್ಟಿಲ್ಲ. ಕಾನೂನು –ಸುವ್ಯವಸ್ಥೆ ಸಂಪೂರ್ಣ ಹದಗೆಟ್ಟು ಹೇಳು ವವರು, ಕೇಳುವವರು ಇಲ್ಲದಂತಾಗಿದೆ. ಸರ್ಕಾರದ ಜನ ವಿರೋಧಿ ನೀತಿ ಖಂಡಿಸಿ ನಿರಂತರವಾಗಿ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

> ರಾಜ್ಯ ಸರ್ಕಾರದ ನಿರ್ಧಾರದಿಂದ ಬಡವರು, ಮಧ್ಯಮ ವರ್ಗದವರಿಗೆ ತೊಂದರೆಯಾಗುತ್ತದೆ. ಕೂಡಲೆ ಇಂಧನ ಬೆಲೆ ಏರಿಕೆ ನಿರ್ಧಾರವನ್ನು ಹಿಂಪಡೆಯಬೇಕು. ಜನಸಾಮಾನ್ಯರ ಹಿತಕಾಯಲು ಸರ್ಕಾರ ಮುಂದಾಗಬೇಕು. ಜನರಿಗೆ ತೊಂದರೆಯಾಗುವ ತೀರ್ಮಾನ ಕೈಗೊಳ್ಳುವುದು ಸರಿಯಲ್ಲ. ಇಂಧನ ಬೆಲೆ ಏರಿಕೆ ಮಾಡಿದರೆ ಪ್ರತಿಯೊಂದು ವಸ್ತುವಿನ ಬೆಲೆ ಹೆಚ್ಚಳಕ್ಕೆ ಅದು ಕಾರಣವಾಗಲಿದೆ. ಪಕ್ಷದ ವತಿಯಿಂದ ನಡೆಯುತ್ತಿರುವ ಹೋರಾಟ ಮುಂದುವರೆಯಲಿದೆ.
>
> -ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸಂಸದ

ಜಿಲ್ಲಾ ಗ್ರಾಮಾಂತರ ಬಿಜೆಪಿ ಅಧ್ಯಕ್ಷ ಎಲ್.ಆರ್.ಮಹದೇವಸ್ವಾಮಿ ಮಾತನಾಡಿ, ನಮ್ಮ ಸರ್ಕಾರ ಬಂದಾಗ ಪೆಟ್ರೋಲ್ ಬೆಲೆ ಇಳಿಸುತ್ತೇವೆಂದು ಹೇಳಿದ್ದ ಸಿಎಂ ಈಗ ತಾವೇ ದರ ಹೆಚ್ಚಿಸಿದ್ದಾರೆ. ಸರ್ಕಾರ ಇಂಧನ ದರ ಇಳಿಕೆ ಮಾಡದೆ ಹೋದಲ್ಲಿ ಉಗ್ರ ಹೋರಾಟ ಮಾಡಲಾಗುವುದು. ಹಳ್ಳಿಗಳಲ್ಲಿ ರಸ್ತೆತಡೆ ಚಳವಳಿ ನಡೆಸುತ್ತೇವೆ. ಪ್ರತಿ ತಾಲೂಕು ಕಚೇರಿಗೆ ಮುತ್ತಿಗೆ ಹಾಕುವುದಾಗಿ ತಿಳಿಸಿದರು.

ಮಾಜಿ ಮೇಯರ್ ಸಂದೇಶ್ ಸ್ವಾಮಿ ಮಾತನಾಡಿ, ಗ್ಯಾರಂಟಿ ಹೆಸರಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಈಗ ನಿರಂತರವಾಗಿ ಬಡವರ್ಗದವರ ಮೇಲೆ ಗದಾಪ್ರಹಾರ ಮಾಡುತ್ತಿದೆ. ಬೇರೆ ರಾಜ್ಯಗಳಲ್ಲಿ ಪೆಟ್ರೋಲ್ ಬೆಲೆ ಕಡಿಮೆ ಇದ್ದರೂ ಕರ್ನಾಟಕದಲ್ಲಿ ಹೆಚ್ಚಳ ಮಾಡಿರುವುದು ಸರಿಯಲ್ಲ ಎಂದರು.

ಪ್ರತಿಭಟನೆಯಲ್ಲಿ ಮಾಜಿ ಮೇಯರ್ ಶಿವಕುಮಾರ್, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಎ.ಹೇಮಂತಕುಮಾರ್‌ಗೌಡ, ಮಿರ್ಲೆ ಶ್ರೀನಿವಾಸಗೌಡ, ಕಾಂಪೋಸ್ಟ್ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಕರ್ನಾಟಕ ಮೃಗಾಲಯ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಂ.ಶಿವಕುಮಾರ್, ನಗರಪಾಲಿಕೆ ಮಾಜಿ ಸದಸ್ಯರಾದ ಎಂ.ಕೆ.ಶಂಕರ್, ಆರ್.ರವೀಂದ್ರ, ಬಿ.ವಿ. ಮಂಜುನಾಥ್, ಜೆಎಸ್.ಜಗದೀಶ್, ರಮೇಶ್, ಪ್ರಶಾಂತ್‌ಗೌಡ, ವೇದಾವತಿ, ಪ್ರಮೀಳಾ ಭರತ್, ಡಾ.ಎಂ. ರೂಪಾ, ಛಾಯಾದೇವಿ, ಲೋಲಾಕ್ಷಿ ನಾರಾಯಣಪ್ಪ, ಮಾಜಿ ಉಪ ಮೇಯರ್ ವಿ.ಶೈಲೇಂದ್ರ, ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಜಿ.ಗಿರಿಧರ್, ಬಿ.ಎಂ.ರಘು, ಮಹೇಶ್ ಮಂಡವಾಡಿ, ಮಹೇಶ್ ಕೇಬಲ್, ಹಿರಿಯ ಮುಖಂಡ ಅರುಣ್‌ಕುಮಾರ್ ಗೌಡ, ಜಿಲ್ಲಾ ಉಪಾಧ್ಯಕ್ಷ ಜೋಗಿ ಮಂಜು, ಎಸ್‌ಟಿ ಮೋರ್ಚಾ ಅಧ್ಯಕ್ಷ ಪಡುವಾರಹಳ್ಳಿ ರಾಮಕೃಷ್ಣ, ವಕ್ತಾರ ಕೆ.ವಸಂತಕುಮಾರ್, ಮಹಿಳಾ ಮೋರ್ಚಾ ಅಧ್ಯಕ್ಷೆ ರೇಣುಕಾರಾಜ್, ಕಾವೇರಿ, ಸರ್ವ ಮಂಗಳ, ಕ್ಯಾತಮಾರನಹಳ್ಳಿ ಪ್ರಕಾಶ್, ರಾಕೇಶ್‌ಗೌಡ, ರಾಕೇಶ್ ಭಟ್, ವಿನಯ್ ಪಾಂಚಜನ್ಯ, ದೇವರಾಜು, ಮಹೇಶ್‌ರಾಜೇ ಅರಸ್, ಡಾ.ಭಾನು ಪ್ರಕಾಶ್, ಮಂಜುನಾಥ್ ಇನ್ನಿತರರು ಪಾಲ್ಗೊಂಡಿದ್ದರು.

ಲಗೇಜ್‌ನಲ್ಲಿ ಬಾಂಬ್ ಇದೆ ಎಂದ ವೃದ್ಧನ ವಿಮಾನ ಹತ್ತಲು ಬಿಡದ ಸಿಬ್ಬಂದಿ!

ಬೆಂಗಳೂರು: ಉದ್ಯಾನನಗರಿ ಬೆಂಗಳೂರಿನಿಂದ ದುಬೈಗೆ ತೆರಳುತ್ತಿದ್ದ 81ರ ಹರೆಯದ ಪ್ರಯಾಣಿಕರೊಬ್ಬರು ಸೋಮವಾರ ವಿಮಾನದಲ್ಲಿ ದಿನನಿತ್ಯದ ತಪಾಸಣೆ ವೇಳೆ ತಮ್ಮ ಬ್ಯಾಗ್‌ನಲ್ಲಿ ಬಾಂಬ್ ಇದೆ ಎಂದು ಏರ್‌ಲೈನ್ ಎಕ್ಸಿಕ್ಯೂಟಿವ್‌ಗೆ ಹೇಳಿದ್ದಾನೆ. ಈ ವೇಳೆ ಆತನನ್ನು ವಿಮಾನ ಹತ್ತಲು ಬಿಡಲಿಲ್ಲ. ವಿಮಾನ ನಿಲ್ದಾಣದ ಪೊಲೀಸರು, ವಯೋವೃದ್ಧರ ವಿರುದ್ಧ ನಾನ್ ಕಾಗ್ನೈಸಬಲ್ ವರದಿಯನ್ನು (NCR) ದಾಖಲಿಸಿ ತನಿಖೆ ನಡೆಸುತ್ತಿದ್ದಾರೆ.

ಬೆಂಗಳೂರಿನ ಅಂಜನಾಪುರದ ನಿವಾಸಿ ಸಿ. ಕೃಷ್ಣರಾಜ್ ಎಂಬುವರು ಎಮಿರೇಟ್ಸ್ ಇಕೆ–565 ವಿಮಾನದಲ್ಲಿ ದುಬೈಗೆ ಪ್ರಯಾಣಿಸುತ್ತಿದ್ದರು, ಅದು ಟರ್ಮಿನಲ್ 1 ರಿಂದ ಬೆಳಗ್ಗೆ 10.35ಕ್ಕೆ ಟೇಕ್‌ಆಫ್ ಆಗಬೇಕಿತ್ತು.

ಬೆಳಗ್ಗೆ 8.10ರ ಸುಮಾರಿಗೆ ನಿರ್ಗಮಿಸುವ ವಿಮಾನದಲ್ಲಿ ಪ್ರಯಾಣಿಕರ ಲಗ್ಗೇಜ್‌ಗಳ ತಪಾಸಣೆ ನಡೆಯುತ್ತಿರುವಾಗ ಈ ಘಟನೆ ನಡೆದಿದೆ. ಸೆಲ್ಫ್ ಬ್ಯಾಗೇಜ್ ಡ್ರಾಪ್ ಕೌಂಟರ್‌ನಲ್ಲಿ, ಏರ್‌ಲೈನ್ ಎಕ್ಸಿಕ್ಯೂಟಿವ್ ತನ್ನ ಬ್ಯಾಗ್‌ನಲ್ಲಿ ಏನಿದೆ ಎಂದು ಕೇಳಿದರು. ಅದಕ್ಕೆ ವೃದ್ಧರು ಸಿಟ್ಟಿನಿಂದ ಬಾಂಬ್ ಇದೆ ಎಂದು ವ್ಯಂಗ್ಯವಾಗಿ ಪ್ರತಿಕ್ರಿಯಿಸಿದರು. ಅದು ಇತರ ಪ್ರಯಾಣಿಕರಲ್ಲಿ ಆತಂಕ ಉಂಟುಮಾಡಿತು.

ಏರ್‌ಲೈನ್ಸ್ ಎಕ್ಸಿಕ್ಯೂಟಿವ್ ತಕ್ಷಣವೇ ವೃದ್ಧರಿಗೆ ಎಚ್ಚರಿಕೆ ನೀಡಿ ಕೇಂದ್ರ ಕೈಗಾರಿಕಾ ಭದ್ರತಾ ಪಡೆ ಸಿಬ್ಬಂದಿಯನ್ನು ಕರೆದು. ನಂತರ ವೃದ್ಧ ಪ್ರಯಾಣಿಕರನ್ನು ವಶಕ್ಕೆ ಪಡೆದು ವ್ಯಕ್ತಿ ಮತ್ತು ಸಾಮಾನುಗಳನ್ನು ತಪಾಸಣೆ ನಡೆಸಲಾಯಿತು. ಇದೊಂದು ಹುಸಿ ಹೇಳಿಕೆ ಎಂದು ನಂತರ ಗೊತ್ತಾಯಿತು. ಕೊನೆಗೆ ವೃದ್ಧ ಪ್ರಯಾಣಿಕ ಕೃಷ್ಣರಾಜ್ ಅವರನ್ನು ವಿಮಾನ ಹತ್ತಲು ಬಿಡಲಿಲ್ಲ. ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪೊಲೀಸ್ ಠಾಣೆಗೆ ಕರೆದೊಯ್ಯಲಾಯಿತು ಎಂದು ಮತ್ತೊಂದು ಮೂಲ ತಿಳಿಸಿದೆ.

ಪೆಟ್ರೋಲ್, ಡೀಸೆಲ್ ದರ ಏರಿಕೆಯಿಂದ ಜನರ ಜೀವನ ಸಂಕಷ್ಟಕ್ಕೆ ಸಿಲುಕಿದೆ

ಮಾಜಿ ಉಪ ಮೇಯರ್ ಶೈಲೇಂದ್ರ ಕಳವಳ




ಮೈಸೂರು, ಜೂ.18(ಜಿಎ)–ರಾಜ್ಯ ಸರ್ಕಾರ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಮಾಡಿ ಜನರನ್ನು ಸಂಕಷ್ಟಕ್ಕೆ ದೂಡಿ, ಕಣ್ಣೀರಲಿ ಕೈ ತೊಳೆಯುವ ಹಾಗೆ ಮಾಡಿದೆ ಎಂದು ಮಾಜಿ ಉಪ ಮೇಯರ್ ಹಾಗೂ ಮೈಸೂರು ನಗರ ಬಿಜೆಪಿ ಎಸ್‌ಸಿ ಮೋರ್ಚಾ ಅಧ್ಯಕ್ಷರೂ ಆದ ವಿ.ಶೈಲೇಂದ್ರ ಕಳವಳ ವ್ಯಕ್ತಪಡಿಸಿದ್ದಾರೆ.

ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯಾದರೆ ಜೀವನಕ್ಕೆ ಅವಶ್ಯಕವಾದ ಪ್ರತಿಯೊಂದು ಸಾಮಗ್ರಿಗಳ ಬೆಲೆ ಏರಿಕೆ ಆಗುತ್ತದೆ. ಇವರು ಕೊಟ್ಟ ಗ್ಯಾರಂಟಿಗಳನ್ನು ಉಳಿಸಿಕೊಳ್ಳಲು ಜನರನ್ನು ಸಂಕಷ್ಟಕ್ಕೆ ದೂಡಿ, ಜನರ ಜೇಬಿನಿಂದ ಕಿತ್ತು ಜನರಿಗೆ ಹಿಂತಿರುಗಿಸುವ ಗ್ಯಾರಂಟಿಯನ್ನು ಸಿದ್ದರಾಮಯ್ಯನವರು ರಾಜ್ಯದ ಜನತೆಗೆ ನೀಡಿದ್ದಾರೆ. ಬಡವರು, ಮಧ್ಯಮ ವರ್ಗದವರು ಜೀವನ ಸಾಗಿಸಲು ಹೆಣಗಾಡುವಂತೆ ಮಾಡಿದ್ದಾರೆ ಎಂದರು.

ಸಿದ್ದರಾಮಯ್ಯನವರು ಗ್ಯಾರಂಟಿ ಕೊಡಬೇಕಾಗಿರುವುದು ಉಚಿತ ಶಿಕ್ಷಣ, ಉಚಿತ ಆರೋಗ್ಯ, ಹಾಗೂ ಉದ್ಯೋಗ. ರಾಜ್ಯದ ಅಭಿವೃದ್ಧಿಗೆ ಕಂಕಣ ತೊಟ್ಟು ದುಡಿಯಬೇಕು, 180 ಕೋಟಿ ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ ಸೇರಬೇಕಾಗಿರುವ ಅನುದಾನವನ್ನು ದುರುಪಯೋಗಪಡಿಸಿಕೊಂಡಿರುವುದು ದಲಿತರಿಗೆ ಮಾಡಿರುವ ದ್ರೋಹವಾಗಿದೆ ಎಂದು ದೂರಿದರು. 2013ರಲ್ಲಿ ಮುಖ್ಯಮಂತ್ರಿ ಗಳಾಗಿದ್ದ ಸಿದ್ದರಾಮಯ್ಯನವರಿಗೂ 2023ರಲ್ಲಿ ಆಗಿರುವ ಸಿದ್ದರಾಮಯ್ಯನವರಿಗೂ ಬಹಳ ವ್ಯತ್ಯಾಸ ವಿದೆ. ರಾಜ್ಯದ ಅಭಿವೃದ್ಧಿಯನ್ನು ಮರೆತಿದ್ದಾರೆ. ಹಾಗಾಗಿ ಕೂಡಲೆ ಸಿದ್ದರಾಮಯ್ಯನವರು ರಾಜ್ಯದ ಜನರ ಕ್ಷಮೆಯಾಚಿಸಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆ ಏರಿಕೆಯನ್ನು ಹಿಂದಕ್ಕೆ ಪಡೆಯಬೇಕೆಂದು ಈ ಮೂಲಕ ಆಗ್ರಹಿಸುತ್ತೇನೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆನ್‌ಲೈನ್‌ನಲ್ಲಿ 15 ಸಾವಿರ ರೂ. ವಂಚನೆ: ಮಹಾರಾಣಿ ಕಾಲೇಜು ವಿದ್ಯಾರ್ಥಿನಿ ಆತ್ಮಹತ್ಯೆ!



ಬೆಂಗಳೂರು, ಜೂ.18– ಮಹಾರಾಣಿ ಕಾಲೇಜಿನ ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿನಿಯೊಬ್ಬಳು ನೇಣುಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ.

ಮಹಾರಾಣಿ ಕಾಲೇಜಿನಲ್ಲಿ ಪ್ರಥಮ ವರ್ಷದ ಬಿಎಸ್‌ಸಿ ಓದುತ್ತಿದ್ದ 19 ವರ್ಷದ ಪಾವನಾ ಡೆತ್‌ನೋಟ್ ಬರೆದಿಟ್ಟು ಜೂ.16ರಂದು ಹಾಸ್ಟೆಲ್‌ನ ರೂಂ ನಂಬರ್ 17ರಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ರಾತ್ರಿ 11.30ರ ಸುಮಾರಿಗೆ ಸಹಪಾಠಿಗಳು ಪಾವನಾ ರೂಂನಲ್ಲಿ ಇಣುಕಿ ನೋಡಿದಾಗ ಪ್ರಕರಣ ಬೆಳಕಿಗೆ ಬಂದಿದೆ.

ವಿದ್ಯಾರ್ಥಿನಿ ಆತ್ಮಹತ್ಯೆ ಮಾಹಿತಿ ತಿಳಿಯುತ್ತಿದ್ದಂತೆ ಹೈಗ್ರೌಂಡ್ಸ್ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲದೆ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

ಮೃತ ವಿದ್ಯಾರ್ಥಿನಿ ತಂದೆ ನೀಡಿದ ದೂರಿನ ಆಧಾರದ ಮೇಲೆ ಅಸ್ವಾಭಾವಿಕ ಸಾವು ಅಂತ ಪೊಲೀಸರು ದೂರು ದಾಖಲಿಸಿಕೊಂಡಿದ್ದಾರೆ. ಡೆತ್‌ನೋಟ್‌ನಲ್ಲಿ ಪಾವನಾ ಆನ್‌ಲೈನ್ ಆ್ಯಪ್‌ನಲ್ಲಿ 15 ಸಾವಿರ ಹೂಡಿಕೆ ಮಾಡಿದ್ದರು. ಆದರೆ, ಹೂಡಿಕೆ ಮಾಡಿದ ಹಣ ವಾಪಸ್ಸು ಬಂದಿಲ್ಲ. ಇದರಿಂದ ಮನನೊಂದು ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆಗೆ ಶರಣಾಗಿರಬಹುದು ಎಂದು ಕೇಂದ್ರ ವಿಭಾಗದ ಡಿಸಿಪಿ ಶೇಖರ್ ಹೇಳಿದ್ದಾರೆ.

'ಸರಳ' ವೈದ್ಯರು ತಮ್ಮ ಅತಿಯಾದ ಹಣಕಾಸು ಸಮರ್ಥಿಸಿಕೊಳ್ಳಬೇಕು

ಚೇತನ್ ಅಹಿಂಸಾ ಆಗ್ರಹ

ಬೆಂಗಳೂರು: 'ಸರಳ' ವೈದ್ಯ ಡಾ. ಸಿ.ಎನ್. ಮಂಜುನಾಥ್ ತನ್ನ ಅತಿಯಾದ ಹಣಕಾಸನ್ನು ಸಮರ್ಥಿಸಿಕೊಳ್ಳಬೇಕು ಎಂದು ನಟ ಚೇತನ್ ಅಹಿಂಸಾ ಆಗ್ರಹಿಸಿದ್ದಾರೆ.

ಈ ಸಂಬಂಧ ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಮಾಡಿರುವ ನಟ ಚೇತನ್ ಅಹಿಂಸಾ, ಸಾಮಾಜಿಕ ಕಾಳಜಿಗೆ ಹೆಸರುವಾಸಿಯಾದ ಡಾ. ಸಿ.ಎನ್. ಮಂಜುನಾಥ ಅವರು ಸುಮಾರು 100 ಕೋಟಿ ರೂ. ಆಸ್ತಿಯನ್ನು ಘೋಷಿಸಿದ್ದಾರೆ.

ವರ್ಷಕ್ಕೆ 20 ಲಕ್ಷ ಗಳಿಸುವ ಸರ್ಕಾರಿ ವೈದ್ಯರು 35 ವರ್ಷಗಳಲ್ಲಿ 7 ಕೋಟಿ ರೂ ಗಳಿಸುತ್ತಾರೆ. ಸೇವೆಯೇ ಆದ್ಯತೆಯಾಗಿದ್ದಾಗ ಒಬ್ಬರ ಬಳಿ ಇಷ್ಟೊಂದು ಹಣ ಇರುವುದು ಹೇಗೆ ಎಂಬುದು ದೊಡ್ಡ ಪ್ರಶ್ನೆಯಾಗಿದೆ. 'ಸರಳ' ವೈದ್ಯರು ತನ್ನ ಅತಿಯಾದ ಹಣಕಾಸನ್ನು ಸಮರ್ಥಿಸಿಕೊಳ್ಳಬೇಕು' ಎಂದು ನಟ ಚೇತನ್ ಅಹಿಂಸಾ ಹೇಳಿದ್ದಾರೆ

ಅತ್ಯಾಚಾರ; ಲೈಂಗಿಕ ದೌರ್ಜನ್ಯ ಪ್ರಕರಣ

ಪ್ರಜ್ವಲ್ ರೇವಣ್ಣಗೆ ಜೂನ್ 24ರವರೆಗೆ ನ್ಯಾಯಾಂಗ ಬಂಧನ



ಬೆಂಗಳೂರು: ಅತ್ಯಾಚಾರ ಮತ್ತು ಲೈಂಗಿಕ ದೌರ್ಜನ್ಯದ ಆರೋಪ ಎದುರಿಸುತ್ತಿರುವ ಜೆಡಿಎಸ್‌ನ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ACMM ವಿಶೇಷ ನ್ಯಾಯಾಲಯ ಜೂನ್ 24 ರವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ. 42ನೇ ಹೆಚ್ಚುವರಿ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯವು ಜೂನ್ 12 ರಂದು ಆತನ ವಿರುದ್ಧದ ಪ್ರಕರಣಗಳ ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ಜೂನ್ 18 ರವರೆಗೆ ಅವರನ್ನು ವಶಕ್ಕೆ ನೀಡಿತ್ತು. 33 ವರ್ಷದ ಪ್ರಜ್ವಲ್ ರೇವಣ್ಣ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಹಾಸನ ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧಿಸಿ ಸೋತಿದ್ದರು.

ದೆಹಲಿ ಮಾದರಿ ದಕ್ಷಿಣ ಭಾರತದಲ್ಲೂ ರೈತ ಚಳವಳಿಗೆ ಚಿಂತನೆ

ಜೂ.24ರಂದು ಶಿವಮೊಗ್ಗದಲ್ಲಿ ದೇಶದ ರೈತ ಮುಖಂಡರ ಸಭೆ



ಜಲದರ್ಶಿನಿ ಅತಿಥಿ ಗೃಹದಲ್ಲಿ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಮೈಸೂರು, ಜೂ.18(ಎಂಟಿವೈ)– ದೆಹಲಿಯಲ್ಲಿ ನಡೆದ ರೈತ ಹೋರಾಟದಂತೆ ದಕ್ಷಿಣ ಭಾರತದಲ್ಲಿ ರೈತ ಚಳವಳಿಯನ್ನು ಪ್ರಬಲಗೊಳಿಸಲು ಜೂ.24ರಂದು ಶಿವಮೊಗ್ಗದಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ರೈತ ಮುಖಂಡರ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರ್ ಶಾಂತಕುಮಾರ್ ತಿಳಿಸಿದ್ದಾರೆ.

ಮೈಸೂರಿನ ಜಲದರ್ಶಿನಿ ಅತಿಥಿ ಗೃಹದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿ, ರೈತರ ಕೃಷಿ ಸಾಲ ಮನ್ನಾ ಮಾಡಬೇಕು. ಬೆಳೆ ವಿಮೆ ನೀತಿ ಬದಲಾಯಿಸಿ ಹೊಲದ ಬೆಳೆ ವಿಮೆ ಜಾರಿಗೆ ತರಬೇಕು. ಬರಗಾಲ, ಅತಿವೃಷ್ಟಿ, ಮಳೆ ಹಾನಿ, ಪ್ರವಾಹ, ಪ್ರಕೃತಿ ವಿಕೋಪದಿಂದಾಗುವ ಹಾನಿ, ಬೆಳೆ ನಷ್ಟ ಪರಿಹಾರದ ಎನ್‌ಡಿಆರ್‌ಎಫ್ ಮಾನದಂಡ ತಿದ್ದುಪಡಿಗೆ ಒತ್ತಾಯಿಸುವ ವಿಷಯಗಳ ಬಗ್ಗೆ ಚರ್ಚಿಸಲಾಗುವುದು ಎಂದರು.

ರೈತ ಚಳವಳಿಯನ್ನು ಗಟ್ಟಿಗೊಳಿಸಲು ಸಹಕಾರ ನೀಡುವಂತೆ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು, ಬಿಹಾರದ ಮುಖ್ಯಮಂತ್ರಿ ನಿತೀಶ್ ಕುಮಾರ್ ಅವರನ್ನು ರೈತ ಮುಖಂಡರ ನಿಯೋಗದ ಜೊತೆ ಭೇಟಿ ಮಾಡಿ ಚರ್ಚಿಸಲು ತೀರ್ಮಾನಿಸಿದೆ. ಕೇಂದ್ರ ಸರ್ಕಾರ ರಾಜ್ಯದ ರೈತರ ಉತ್ಪನ್ನಗಳ ಎಂಎಸ್‌ಪಿ ಖರೀದಿ ಅನುದಾನ ಪ್ರಮಾಣ ಏರಿಕೆ ಮಾಡಬೇಕು. ಪಂಜಾಬ್, ಹರಿಯಾಣ, ತೆಲಂಗಾಣ ರಾಜ್ಯಗಳಲ್ಲಿ ಹೋಬಳಿ ಮಟ್ಟದಲ್ಲಿ ಖರೀದಿ ಕೇಂದ್ರಗಳನ್ನು ತೆರೆದು ರೈತರಿಂದ ಶೇ. 45ರಷ್ಟು ರೈತರ ಉತ್ಪನ್ನಗಳ ಖರೀದಿ ಮಾಡುತ್ತಾರೆ. ಆದರೆ ಕೇಂದ್ರ ಸರ್ಕಾರ ನಮ್ಮ ರಾಜ್ಯದಲ್ಲಿ ಕೇವಲ ಶೇ. 3.ರಷ್ಟು ಖರೀದಿ ಕೇಂದ್ರಗಳ ಮೂಲಕ ಖರೀದಿ ಮಾಡಲು ಅನುದಾನ ನೀಡುತ್ತಿದೆ. ಕೇಂದ್ರ ಸರ್ಕಾರದ ತಾರತಮ್ಯ ನೀತಿಯಿಂದ ರಾಜ್ಯದ ರೈತರಿಗೆ ಅನ್ಯಾಯವಾಗುತ್ತಿದೆ. ಕೇಂದ್ರ ಆಹಾರ ಸಚಿವ ಪ್ರಹ್ಲಾದ್ ಜೋಶಿ ಈ ಸಮಸ್ಯೆ ಬಗೆಹರಿಸಿ ರಾಜ್ಯದ ರೈತರ ಹಿತ ಕಾಪಾಡಬೇಕು ಎಂದು ಒತ್ತಾಯಿಸಿದರು.

ಓಟಿಎಸ್ ಸಾಲ ಮೇಳ ನಡೆಸಿ ಹೊಸ ಸಾಲ ವಿತರಿಸಬೇಕು ಎಂದು ಸರ್ಕಾರ ಕರ್ನಾಟಕ ಗ್ರಾಮೀಣ ಬ್ಯಾಂಕಿಗೆ ಆದೇಶ ನೀಡಿದೆ. ಎಸ್‌ಎಲ್‌ಬಿಸಿ ಮೆಗಾ ಅದಾಲತ್ ನಡೆಸಲು ಸೂಚಿಸಿದೆ. ಈ ಬಗ್ಗೆ ಬ್ಯಾಂಕಿನವರು ಕಾರ್ಯಕ್ರಮ ನಡೆಸದಿದ್ದರೆ ಬ್ಯಾಂಕ್ ಮುಂದೆ ಚಳವಳಿ ನಡೆಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

25 ಸಾವಿರ ಕೋಟಿ ಹಣಕಾಸಿನ ವ್ಯವಹಾರ ನಡೆಯುವ ಕಬ್ಬು ಬೆಳೆಗಾರರು ಹಾಗೂ ಸಕ್ಕರೆ ಉದ್ದಿಮೆ ಡಿಜಿಟಲೀಕರಣ ಮಾಡಬೇಕು. ಇದರಿಂದ ಕಬ್ಬು ಬೆಳೆಗಾರರು ಹಾಗೂ ಕಾರ್ಖಾನೆ ನಡುವೆ ದ್ವಿಪಕ್ಷೀಯ ಒಪ್ಪಂದ ಪತ್ರ, ಕಬ್ಬಿನ ತೂಕ ಸಂದೇಶ, ಕಬ್ಬಿನ ಹಣ ಪಾವತಿ ಸಂದೇಶ ಸಕ್ಕರೆ ಇಳುವರಿ ಸಂದೇಶ ರೈತರ ಮೊಬೈಲ್‌ಗೆ ಮಾಹಿತಿ ನೀಡುವ ಆ್ಯಪ್‌ವೊಂದನ್ನು ಸಿದ್ದಗೊಳಿಸಲಾಗಿದೆ. ರಾಜ್ಯ ಸರ್ಕಾರ ಪ್ರಸಕ್ತ ಸಾಲಿನಿಂದಲೇ ಕಬ್ಬು ಅರೆಯುವ ಅನುಮತಿ ಪತ್ರ ನೀಡುವ ಮೊದಲೇ ಡಿಜಿಟಲೀಕರಣ ಜಾರಿ ಮಾಡಬೇಕು. ಸಕ್ಕರೆ ಕಾರ್ಖಾನೆಗಳ ಒತ್ತಡಕ್ಕೆ ಮಣಿದು ರೈತರಿಗೆ ವ್ಯವಸ್ಥಿತ ವಂಚನೆ ನಡೆಸಲು ಸಹಕಾರ ನೀಡಬಾರದು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಕಬ್ಬು ಬೆಳೆಗಾರರ ಸಂಘದ ಜಿಲ್ಲಾ ಉಪಾಧ್ಯಕ್ಷ ಮಾರ್ಬಳ್ಳಿ ನೀಲಕಂಠಪ್ಪ, ಜಿಲ್ಲಾ ಕಾರ್ಯದರ್ಶಿ ಬರಡನಪುರ ನಾಗರಾಜ್, ತಾಲೂಕ ಅಧ್ಯಕ್ಷ ವೆಂಕಟೇಶ್, ನಂಜನಗೂಡು ತಾಲೂಕು ಅಧ್ಯಕ್ಷ ವಿಜಯೇಂದ್ರ, ತಿ. ನರಸೀಪುರ ತಾಲೂಕು ಸಂಘಟನಾ ಕಾರ್ಯದರ್ಶಿ ಪ್ರದೀಪ್, ಮಹದೇವ ಇದ್ದರು.

ಮೈಸೂರು ಮಿತ್ರ

ರೇಣುಕಾಸ್ವಾಮಿ ನಿವಾಸಕ್ಕೆ ಬಿಜೆಪಿ ನಿಯೋಗ ಭೇಟಿ: 2 ಲಕ್ಷ ರೂ. ನೆರವು

ಮೃತನ ಪತ್ನಿಗೆ ಸರ್ಕಾರಿ ಉದ್ಯೋಗ ನೀಡುವಂತೆ ಸರ್ಕಾರಕ್ಕೆ ಆಗ್ರಹ



ಚಿತ್ರದುರ್ಗ, ಜೂ.18– ಚಿತ್ರದುರ್ಗದ ವಿಆರ್‌ಎಸ್ ಬಡಾವಣೆಯ ರೇಣುಕಾಸ್ವಾಮಿ ನಿವಾಸಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ನೇತೃತ್ವದ ಬಿಜೆಪಿ ನಿಯೋಗ ಮಂಗಳವಾರ ಭೇಟಿ ನೀಡಿತ್ತು. ಪಕ್ಷದ ವತಿಯಿಂದ 2 ಲಕ್ಷ ನೆರವು ನೀಡಿ, ಮೃತ ವ್ಯಕ್ತಿಯ ಪತ್ನಿಗೆ ಸರ್ಕಾರಿ ಉದ್ಯೋಗ ನೀಡುವಂತೆ ಸರ್ಕಾರಕ್ಕೆ ಒತ್ತಾಯಿಸಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು, ರೇಣುಕಾಸ್ವಾಮಿ ಅವರ ಹತ್ಯೆ ಅಮಾನವೀಯವಾಗಿದ್ದು, ಸುಸಂಸ್ಕೃತ ಸಮಾಜದಲ್ಲಿ ಯಾರೂ ಇದನ್ನು ಬೆಂಬಲಿಸಲು ಸಾಧ್ಯವಿಲ್ಲ, ಈ ಘಟನೆಯನ್ನು ಪ್ರತಿಯೊಬ್ಬರೂ ತೀವ್ರವಾಗಿ ಖಂಡಿಸಬೇಕು. ಈ ಹೇಯ ಹತ್ಯೆ ರಾಜ್ಯ ಮಾತ್ರವಲ್ಲದೆ ರಾಷ್ಟ್ರಮಟ್ಟದಲ್ಲಿ ಚರ್ಚೆಯಾಗುತ್ತಿದೆ. ಮೃತ ವ್ಯಕ್ತಿಯ ಪೋಷಕರು ಮತ್ತು ಹೆಂಡತಿಯನ್ನು ನೋಡಿದರೆ ನೋವಾಗುತ್ತದೆ. ಅವರಿಗೆ ಹೇಗೆ ಸಾಂತ್ವನ ಹೇಳುವುದು ಮತ್ತು ಅವರಲ್ಲಿ ಧೈರ್ಯ ತುಂಬುವುದು ಹೇಗೆ ಎಂದು ನಮಗೆ ಅರ್ಥವಾಗುತ್ತಿಲ್ಲ ಎಂದ ಹೇಳಿದರು.

ಕೊಲೆ ನಡೆದು ಇಷ್ಟು ದಿನ ಕಳೆದರೂ ಸರ್ಕಾರದ ಪರವಾಗಿ ಯಾವೊಬ್ಬ ಸಚಿವರು ಬಾರದೆ ಇರುವುದು ಖಂಡನೀಯ ಸಂಗತಿ. ಇಂತಹ ಸಂದರ್ಭದಲ್ಲಿ ಯಾವುದೇ ವ್ಯಕ್ತಿಗೆ ಆದರೂ ಧೈರ್ಯ ತುಂಬುವ ಕೆಲಸವನ್ನು ಸರ್ಕಾರ ಮಾಡಬೇಕು. ಪರಿಹಾರ ಕೊಟ್ಟು, ಸರ್ಕಾರಿ ಉದ್ಯೋಗ ನೀಡಬೇಕು ಎಂದು ಆಗ್ರಹಿಸಿದರು.

ಖದೀಮನ ಬಂಧನ; 7 ಲ್ಯಾಪ್‌ಟಾಪ್ ವಶಕ್ಕೆ

●ಐಟಿ ಉದ್ಯೋಗಿಗಳೇ ಇವನ ಟಾರ್ಗೆಟ್ ●ಮತ್ತೊಬ್ಬ ಆರೋಪಿಗಾಗಿ ಶೋಧ

ಮೈಸೂರು, ಜೂ.18(ಎಸ್‌ಬಿಡಿ)– ಐಟಿ ಉದ್ಯೋಗಿಗಳನ್ನೇ ಟಾರ್ಗೆಟ್ ಮಾಡಿ, ಹೊಂಚುಹಾಕಿ ಅವರ ಲ್ಯಾಪ್‌ಟಾಪ್‌ಗಳನ್ನು ಎಗರಿಸುತ್ತಿದ್ದ ಖತರ್ನಾಕ್ ಕಳ್ಳನನ್ನು ಮೈಸೂರಿನ ಹೆಬ್ಬಾಳು ಠಾಣೆ ಪೊಲೀಸರು ಬಂಧಿಸಿದ್ದಾರೆ.

ಪೊಲೀಸರ ವಿಶೇಷ ತಂಡ ಮೈಸೂರಿನ ಸಬರ್ಬನ್ ಬಸ್ ನಿಲ್ದಾಣದ ಬಳಿ ಆರೋಪಿಯನ್ನು ಬಂಧಿಸಿ, ಸುಮಾರು 2.22 ಲಕ್ಷ ರೂ. ಮೌಲ್ಯದ 7 ಲ್ಯಾಪ್‌ಟಾಪ್‌ಗಳು, 2 ಮೊಬೈಲ್ ಹಾಗೂ 2 ಸಾವಿರ ರೂ. ನಗದು ವಶಪಡಿಸಿಕೊಂಡಿದೆ. ಈತನೊಂದಿಗೆ ಕಳ್ಳತನದಲ್ಲಿ ಭಾಗಿಯಾಗಿದ್ದ ಮತ್ತೋರ್ವ ತಲೆಮರೆಸಿಕೊಂಡಿದ್ದು, ಆತನ ಬಂಧನಕ್ಕೂ ಪೊಲೀಸರು ಬಲೆ ಬೀಸಿದ್ದಾರೆ.

ಹೆಬ್ಬಾಳು ಕೈಗಾರಿಕಾ ಪ್ರದೇಶ, ಕೆಐಎಡಿಬಿ ಬಡಾವಣೆಯಲ್ಲಿರುವ ಈಜಿ ಲಿವಿಂಗ್ ಪಿ.ಜಿ ರೂಂಗಳು, ಮಾದೇಗೌಡ ವೃತ್ತದ ಬಳಿ 5ನೇ ಕ್ರಾಸ್‌ನ ಮನೆ ಮತ್ತು ಹೆಬ್ಬಾಳು ಒಂದನೇ ಹಂತದ 8ನೇ ಕ್ರಾಸ್‌ನ ಮನೆಯೊಂದರಲ್ಲಿ ಕೈಚಳಕ ಮೆರೆದಿದ್ದ ಖದೀಮರು, ಒಟ್ಟು 7 ಲ್ಯಾಪ್‌ಟಾಪ್ ಮತ್ತು 3 ಮೊಬೈಲ್‌ಗಳನ್ನು ಕದ್ದೊಯ್ದಿದ್ದರು. ಈ ಸಂಬಂಧ ಹೆಬ್ಬಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದವು.

ಒಂದೇ ದಿನ ಹಲವೆಡೆ ಲ್ಯಾಪ್‌ಟಾಪ್‌ಗಳ ಕಳ್ಳತನವಾಗಿದ್ದರಿಂದ ಹೆಬ್ಬಾಳ ಠಾಣೆ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನೊಳಗೊಂಡ ವಿಶೇಷ ತಂಡ ರಚಿಸಿ, ಕಾರ್ಯಾಚರಣೆ ನಡೆಸಲಾಗುತ್ತಿತ್ತು. ಖಚಿತ ಮಾಹಿತಿ ಮೇರೆಗೆ ಕೆಲ ದಿನಗಳ ಹಿಂದೆ ಸಬರ್ಬನ್ ಬಸ್ ನಿಲ್ದಾಣದಲ್ಲಿ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಮತ್ತೋರ್ವನೊಂದಿಗೆ ಸೇರಿಕೊಂಡು ಐಟಿ ಉದ್ಯೋಗಿಗಳು ವಾಸವಿರುವ ಪಿಜಿಗಳು, ಮನೆಗಳಲ್ಲಿ ಲ್ಯಾಪ್‌ಟಾಪ್ ಕಳ್ಳತನ ಮಾಡುತ್ತಿದ್ದುದ್ದಾಗಿ ತಿಳಿಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾನೆ. ಆತನನ್ನು ಬಂಧಿಸಿ, 7 ಲ್ಯಾಪ್‌ಟಾಪ್ ಹಾಗೂ 2 ಮೊಬೈಲ್ ವಶಪಡಿಸಿಕೊಳ್ಳಲಾಗಿದೆ. ಈ ಮೂಲಕ ಲ್ಯಾಪ್‌ಟಾಪ್ ಕಳ್ಳತನದ ಮೂರು ಪ್ರಕರಣಗಳು ಪತ್ತೆಯಾದಂತಾಗಿದೆ. ತಲೆಮರೆಸಿಕೊಂಡಿರುವ ಮತ್ತೋರ್ವನ ಬಂಧನಕ್ಕೂ ಕ್ರಮ ವಹಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಪರಾಧ ಮತ್ತು ಸಂಚಾರ ವಿಭಾಗದ ಡಿಸಿಪಿ ಎಸ್.ಜಾಹ್ನವಿ ಮಾರ್ಗದರ್ಶನ, ವಿಜಯನಗರ ಉಪವಿಭಾಗದ ಎಸಿಪಿ ಗಜೇಂದ್ರಪ್ರಸಾದ್ ನೇತೃತ್ವದಲ್ಲಿ ನಡೆಸಲಾದ ಕಾರ್ಯಾಚರಣೆಯಲ್ಲಿ ಹೆಬ್ಬಾಳು ಠಾಣೆ ಇನ್ಸ್‌ಪೆಕ್ಟರ್ ಈ.ವಿ.ವಿನಯ್, ಸಬ್‌ಇನ್ಸ್‌ಪೆಕ್ಟರ್ ಕೆ.ಎಸ್.ಭಾಸ್ಕರ್, ಎಎಸ್‌ಐ ಆರ್.ಟಿ.ಗಣೇಶ್, ಸಿಬ್ಬಂದಿ ರವಿಕುಮಾರ್, ವೀರಭದ್ರಪ್ಪ, ಹರೀಶ್, ಎನ್.ವೆಂಕಟೇಶ್, ಮಹೇಶ್ ಹೊಸಮನಿ, ಸುಭಾನಲ್ಲಾ ಬಾಲ್‌ದಾರ್, ಅವಿನಾಶ್ ಮತ್ತು ತಾಂತ್ರಿಕ ವಿಭಾಗದ ಪಿ. ಕುಮಾರ್ ಭಾಗವಹಿಸಿದ್ದರು. ಈ ತಂಡದ ಕಾರ್ಯಾಚರಣೆ ಬಗ್ಗೆ ನಗರ ಪೊಲೀಸ್ ಆಯುಕ್ತ ಬಿ.ರಮೇಶ್ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಲ್ಯಾಪ್‌ಟಾಪ್ ಕಳ್ಳರೇ ತಲೆನೋವು

ಮೈಸೂರಿನ ಹೆಬ್ಬಾಳ ಠಾಣೆ ಪೊಲೀಸರಿಗೆ ಲ್ಯಾಪ್‌ಟಾಪ್ ಕಳ್ಳರೇ ತಲೆನೋವಾಗಿದ್ದಾರೆ. ಪ್ರಸಕ್ತ ವರ್ಷದಲ್ಲಿ ಠಾಣೆಯಲ್ಲಿ ದಾಖಲಾಗಿರುವ ಬಹುತೇಕ ಪ್ರಕರಣಗಳು ಇದೇ ವಿಚಾರಕ್ಕೆ ಸಂಬಂಧಿಸಿವೆ. ಹೆಬ್ಬಾಳು ಕೈಗಾರಿಕೆ ಪ್ರದೇಶಗಳಲ್ಲಿರುವ ಐಟಿ ಕಂಪನಿಗಳ ಉದ್ಯೋಗಿಗಳಲ್ಲಿ ಹೆಚ್ಚಿನವರು ಹೆಬ್ಬಾಳು ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪಿಜಿಗಳು ಹಾಗೂ ಬಾಡಿಗೆ ರೂಂಗಳಲ್ಲಿ ವಾಸವಿದ್ದಾರೆ. ಐಟಿ ಉದ್ಯೋಗಿಗಳ ಬಳಿ ಸಹಜವಾಗಿ ಲ್ಯಾಪ್‌ಟಾಪ್ ಇರುತ್ತದೆ ಎಂಬುದನ್ನು ತಿಳಿದಿರುವ ಖದೀಮರು ಹೊಂಚುಹಾಕಿ ದುಷ್ಕೃತ್ಯ ಮೆರೆಯುತ್ತಿದ್ದಾರೆ. ಕೊಠಡಿಗೆ ಬೀಗ ಹಾಕಿಕೊಂಡು ಕೆಲಸಕ್ಕೆ ಹೋದ ನಂತರ ಲ್ಯಾಪ್‌ಟಾಪ್‌ಗಳನ್ನು ಎಗರಿಸುತ್ತಿದ್ದಾರೆ. ಸೆಕೆ ಕಾರಣಕ್ಕೆ ಬಾಗಿಲು ತೆಗೆದುಕೊಂಡು ರೂಮಿನಲ್ಲಿ ಮಲಗಿದ್ದಾಗಲೂ ಲ್ಯಾಪ್‌ಟಾಪ್ ಎಗರಿಸಿರುವ ಪ್ರಕರಣಗಳು ನಡೆದಿವೆ. ಸದ್ಯ ಒಂದೇ ದಿನ ಮೂರು ಕಡೆ ಕಳ್ಳತನವಾಗಿದ್ದ ಕಾರಣ ಪೊಲೀಸರು ವಿಶೇಷ ತಂಡ ರಚಿಸಿಕೊಂಡು ಕಾರ್ಯಾಚರಣೆಗಿಳಿದ ಪರಿಣಾಮ ಓರ್ವ ಆರೋಪಿ ಸಿಕ್ಕಿಬಿದ್ದಿದ್ದಾನೆ. ಈ ಕಾರ್ಯಾಚರಣೆ ಮುಂದುವರೆಸಿ, ಲ್ಯಾಪ್‌ಟಾಪ್ ಖದೀಮರನ್ನು ಹೆಡೆಮುರಿ ಕಟ್ಟಬೇಕಿದೆ.

ರೇಣುಕಾಸ್ವಾಮಿ ಕುಟುಂಬಕ್ಕೆ ಆರ್ಥಿಕ ನೆರವು ನೀಡುವ ಬಗ್ಗೆ ಚರ್ಚಿಸಿ ತೀರ್ಮಾನ


ಕೇಸಿನಲ್ಲಿ ಯಾರೇ ಭಾಗಿಯಾಗಿದ್ದರೂ ಕ್ರಮ: ಡಾ. ಜಿ.ಪರಮೇಶ್ವರ್



ಬೆಂಗಳೂರು, ಜೂ.18– ನಟ ದರ್ಶನ್ ತೂಗುದೀಪ ಸಹಚರರಿಂದ ಹತ್ಯೆಯಾಗಿದ್ದಾರೆ ಎಂದು ಹೇಳಲಾಗುತ್ತಿರುವ ರೇಣುಕಾಸ್ವಾಮಿ ಕುಟುಂಬಕ್ಕೆ ಆರ್ಥಿಕ ನೆರವು ನೀಡುವ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಜೊತೆಗೆ ಚರ್ಚೆ ನಡೆಸಿ ತೀರ್ಮಾನ ಮಾಡಲಾಗುವುದು ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ಇಂದು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ರೇಣುಕಾಸ್ವಾಮಿ ಕುಟುಂಬಸ್ಥರನ್ನು ಭೇಟಿ ಮಾಡಲು ನಿನ್ನೆ ತೆರಳಬೇಕಿತ್ತು. ಆದರೆ, ಬಕ್ರೀದ್ ಹಬ್ಬ ಇದ್ದಿದ್ದರಿಂದ ಹೋಗಲು ಸಾಧ್ಯವಾಗಿಲ್ಲ. ರೇಣುಕಾಸ್ವಾಮಿ ಮನೆಗೆ ಭೇಟಿ ಕೊಟ್ಟು ಧೈರ್ಯ ಹೇಳಿ ಬರುತ್ತೇನೆ ಎಂದರು. ರೇಣುಕಾಸ್ವಾಮಿ ಕುಟುಂಬದ ಸದಸ್ಯರಿಗೆ ಆರ್ಥಿಕ ನೆರವು ನೀಡುವ ಬಗ್ಗೆ, ತನಿಖೆ ನಡೆದ ಬಳಿಕ ಆರ್ಥಿಕ ನೆರವು ಬಗ್ಗೆ ಚರ್ಚೆ ಮಾಡುತ್ತೇವೆ. ಸರ್ಕಾರದಿಂದ ನೆರವು ಬಗ್ಗೆ ಸಿಎಂ ಜೊತೆ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇನೆ ಎಂದರು.

ಮನೆ ಬಾಗಿಲು ಮೀಟಿ ಚಿನ್ನಾಭರಣ, ಬೆಳ್ಳಿ ಪದಾರ್ಥಗಳ ಕಳವು



ಮೈಸೂರು, ಜೂ.18(ಎಸ್‌ಬಿಡಿ)– ಮೈಸೂರಿನ ಹೊರವಲಯದ ಎರಡು ಕಡೆ ಡೋರ್‌ಲಾಕ್ ಮೀಟಿ ಚಿನ್ನಾಭರಣ ಹಾಗೂ ದೇವರಕೋಣೆಯಲ್ಲಿನ ಬೆಳ್ಳಿ ವಸ್ತುಗಳನ್ನು ದೋಚಿರುವುದು ವರದಿಯಾಗಿದೆ.

ಮೈಸೂರು ದಕ್ಷಿಣ ಪೊಲೀಸ್ ಠಾಣೆ ವ್ಯಾಪ್ತಿಯ ರಮಾಬಾಯಿನಗರದಲ್ಲಿ ಶಿಕ್ಷಕರೊಬ್ಬರ ಮನೆಗೆ ನುಗ್ಗಿ ಸುಮಾರು 8 ಲಕ್ಷ ರೂ. ಚಿನ್ನಾಭರಣ ದೋಚಲಾಗಿದ್ದು, ಇಲವಾಲ ಪೊಲೀಸ್ ಠಾಣೆ ವ್ಯಾಪ್ತಿಯ ಮನೆಯೊಂದರಲ್ಲಿ ದೇವರ ಕೋಣೆಯನ್ನು ದೋಚಲಾಗಿದೆ.

ಪ್ರಕರಣ 1: ರಮಾಬಾಯಿನಗರದ ಬಸವೇಶ್ವರ ಬಡಾವಣೆ ನಿವಾಸಿ ಆರ್.ಪಿ.ಪ್ರಕಾಶ್, ಚಾಮರಾಜನಗರ ತಾಲೂಕು ಕೋಡಿಮೊಳೆ ಗ್ರಾಮದ ಸರ್ಕಾರಿ ಶಾಲೆಯಲ್ಲಿ ಶಿಕ್ಷಕರಾಗಿದ್ದಾರೆ. ರಜೆ ಇದ್ದ ಹಿನ್ನೆಲೆಯಲ್ಲಿ ಜೂ.16ರಂದು ಬೆಳಗ್ಗೆ ಮನೆಗೆ ಬೀಗ ಹಾಕಿ, ಕುಟುಂಬ ಸಮೇತ ತಮ್ಮ ಸ್ವಗ್ರಾಮ ಚಾಮರಾಜನಗರ ಬಳಿಯ ರಾಮಸಮುದ್ರಕ್ಕೆ ತೆರಳಿದ್ದರು. ಜೂ.17ರಂದು ಬೆಳಗ್ಗೆ ಎದುರು ಮನೆಯವರು ಕರೆ ಮಾಡಿ, ನಿಮ್ಮ ಮನೆಯ ಬಾಗಿಲು ಅರ್ಧ ತೆರೆದಂತಿದೆ ಎಂದು ತಿಳಿಸಿದ್ದರು. ಊರಿಂದ ವಾಪಸ್ ಬಂದು ನೋಡಿದಾಗ ಮನೆ ಮುಂಬಾಗಿಲಿನ ಲಾಕ್ ಅನ್ನು ಯಾವುದೋ ಆಯುಧದಿಂದ ಮೀಟಿದ್ದು ಕಂಡು ಬಂದಿತು. ಒಳಹೋಗಿ ಪರಿಶೀಲಿಸಿದಾಗ ಬೆಡ್‌ರೂಂನ ಗೋಡೆಬೀರಿನ ಬಾಗಿಲನ್ನೂ ಮೀಟಿ, ಅಲ್ಲಿದ್ದ ಸುಮಾರು 8 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿರುವುದು ತಿಳಿಯಿತು. ಬೀಗ ಹಾಕಿಕೊಂಡು ಊರಿಗೆ ಹೋಗುವುದನ್ನು ಗಮನಿಸಿಯೇ ಖದೀಮರು ಅದೇ ದಿನ ರಾತ್ರಿ ಈ ದುಷ್ಕೃತ್ಯ ವೆಸಗಿದ್ದಾರೆ ಎಂದು ಶಂಕಿಸಲಾಗಿದ್ದು, ಈ ಸಂಬಂಧ ಮೈಸೂರು ದಕ್ಷಿಣ ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಪ್ರಕರಣ 2: ಇಲವಾಲದ ಈರಪ್ಪನಕೊಪ್ಪಲು ರಸ್ತೆಯ, ರಿದ್ದ ಹೆಬಿಟೇಟ್ ನಿವಾಸಿ, ಗೊಬ್ಬರದ ವ್ಯಾಪಾರಿ ಕೆ.ಎಂ.ಸುರೇಶ್, ತನ್ನ ಅಣ್ಣನ ಮಗಳ ಮದುವೆ ನಿಮಿತ್ತ ಕುಟುಂಬ ಸಮೇತ ಜೂ.15ರಂದು ಮಧ್ಯಾಹ್ನ ಚನ್ನರಾಯಪಟ್ಟಣಕ್ಕೆ ತೆರಳಿದ್ದರು. ಜೂ.17ರಂದು ಮನೆಗೆ ವಾಪಸ್ಸಾದಾಗ ಮುಂಭಾಗದ ಗೇಟ್‌ಗೆ ಹಾಕಿದ್ದ ಬೀಗ ನಾಪತ್ತೆಯಾಗಿತ್ತು. ಮನೆ ಮುಂಬಾಗಿಲು ತೆರೆದಿತ್ತು. ಗಾಬರಿಯಿಂದ ಒಳಹೋಗಿ ನೋಡಿದಾಗ ವಸ್ತುಗಳೆಲ್ಲಾ ಚೆಲ್ಲಾಪಿಲ್ಲಿಯಾಗಿ ಬಿದ್ದಿದ್ದವು. ದೇವರ ಮನೆಯಲ್ಲಿದ್ದ ಬೆಳ್ಳಿ ದೀಪಗಳು, ಗಣೇಶನ ಮುಖವಾಡ ಸೇರಿದಂತೆ ಸುಮಾರು 73 ಸಾವಿರ ರೂ. ಮೌಲ್ಯದ ಬೆಳ್ಳಿ ಪದಾರ್ಥಗಳು ಕಳುವಾಗಿರುವುದು ಗೊತ್ತಾಯಿತು. ಬಳಿಕ ಈ ಬಗ್ಗೆ ಇಲವಾಲ ಠಾಣೆಗೆ ದೂರು ನೀಡಿದ್ದು, ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪೊಲೀಸರಿಗೆ ಮಾಹಿತಿ ನೀಡಿ: ಮನೆಗೆ ಬೀಗ ಹಾಕಿಕೊಂಡು ಕುಟುಂಬ ಸಮೇತ 2–3 ದಿನ ಹೊರಗೆ ಹೋಗುವುದಿದ್ದರೆ ಸ್ವಲ್ಪ ಮುನ್ನೆಚ್ಚರಿಕೆ ವಹಿಸುವುದು ಒಳ್ಳೆಯದು. ಅಕ್ಕಪಕ್ಕದ ಮನೆಯವರಿಗೆ ಗಮನಹರಿಸುವಂತೆ ಮನವಿ ಮಾಡಿಕೊಳ್ಳುವುದರ ಜೊತೆಗೆ ಆ ವ್ಯಾಪ್ತಿಯ ಪೊಲೀಸ್ ಠಾಣೆ ಗಮನಕ್ಕೆ ತರುವುದು ಸೂಕ್ತ. ಹಾಗೆ ಮಾಹಿತಿ ನೀಡಿದರೆ ಆ ಭಾಗದಲ್ಲಿ ಗಸ್ತು ಹೆಚ್ಚಿಸಬಹುದು. ಖದೀಮರು ಹೊಂಚು ಹಾಕಿ ಊರಿಗೆ ತೆರಳುವ ನಿಮ್ಮ ತಯಾರಿಯನ್ನು ಗಮನಿಸಬಹುದು. ಎಷ್ಟು ದಿನ ಮನೆಯಲ್ಲಿರುವುದಿಲ್ಲ ಎಂದು ಸೂಕ್ಷ್ಮವಾಗಿ ತಿಳಿದುಕೊಂಡು ಮನೆ ದೋಚಬಹುದು. ಹಾಗಾಗಿ ತಮ್ಮ ಎಚ್ಚರಿಕೆಯಲ್ಲಿ ತಾವಿರುವುದು ತುಂಬಾ ಅಗತ್ಯ.

ದರ್ಶನ್ ಫಾರ್ಮ್ ಹೌಸ್ ನೋಡಿಕೊಳ್ಳುತ್ತಿದ್ದ ಮ್ಯಾನೇಜರ್ ಆತ್ಮಹತ್ಯೆ

●ಏಪ್ರಿಲ್ 16 ರಂದು ವಿಷ ಸೇವಿಸಿ ಆತ್ಮಹತ್ಯೆ ●1 ವರ್ಷ ಕಾಲ ಮ್ಯಾನೇಜರ್ ಆಗಿದ್ದ ಶ್ರೀಧರ್



ಬೆಂಗಳೂರು: ದರ್ಶನ್‌ಗೆ ಸೇರಿದ ಫಾರ್ಮ್ ಹೌಸ್‌ನಲ್ಲಿ ಮ್ಯಾನೇಜರ್ ಒಬ್ಬ ಆತ್ಮಹತ್ಯೆಗೆ ಶರಣಾದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಮಾನಸಿಕ ಖಿನ್ನತೆಗೆ ಒಳಗಾಗಿ ಡೆತ್‌ನೋಟ್ ಬರೆದಿಟ್ಟು ಶ್ರೀಧರ್ ಅವರು ಆನೇಕಲ್ ತಾಲೂಕಿನ ಬಗ್ಗನದೊಡ್ಡಿಯಲ್ಲಿ ಏಪ್ರಿಲ್ 16 ರಂದು ಆತ್ಮಹತ್ಯೆಗೆ ಶರಣಾಗಿದ್ದರು. ಕಲ್ಲು ಬಂಡೆ ಮೇಲೆ ಅನಾಥವಾಗಿ ಶ್ರೀಧರ್ ಮೃತದೇಹ ಪತ್ತೆಯಾಗಿತ್ತು. ಶ್ರೀಧರ್ ಮೃತದೇಹ ಕಂಡು ಪೊಲೀಸರಿಗೆ ಸ್ನೇಹಿತ ಮಾಹಿತಿ ನೀಡಿದ್ದರು.

ಸುಮಾರು 10 ಎಕರೆ ಪ್ರದೇಶದಲ್ಲಿದ್ದ ಫಾರ್ಮ್‌ಹೌಸ್‌ನಲ್ಲಿ ಸುಮಾರು 1 ವರ್ಷ ಕಾಲ ಶ್ರೀಧರ್ ಮ್ಯಾನೇಜರ್ ಆಗಿ ಕೆಲಸ ಮಾಡಿದ್ದರು. ವಿಷ ಸೇವಿಸಿದ ಪರಿಣಾಮ ಫಾರ್ಮ್ ಹೌಸ್ ಪಕ್ಕದಲ್ಲಿ ರಕ್ತಕಾರಿ ಶ್ರೀಧರ್ ಸಾವನ್ನಪ್ಪಿದ್ದರು. ಈ ಸಂಬಂಧ ಆನೇಕಲ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಡೆತ್‌ನೋಟ್‌ನಲ್ಲಿ ಮಾನಸಿಕ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆಗೆ ಶರಣಾಗಿದ್ದೇನೆ ಎಂದಿದ್ದರು. ಅಷ್ಟೇ ಅಲ್ಲದೇ ವಿಡಿಯೋದಲ್ಲಿ ನನ್ನ ಸಾವಿಗೆ ನಾನೇ ಕಾರಣ ಎಂದು ಹೇಳಿದ್ದರು.

ಬೆಂಗಳೂರು ಗ್ರಾಮಾಂತರ ಎಸ್‌ಪಿ ಮಲ್ಲಿಕಾರ್ಜುನ ಬಾಲದಂಡಿ ಪ್ರತಿಕ್ರಿಯಿಸಿ, ಆತ್ಮಹತ್ಯೆ ಮಾಡಿಕೊಳ್ಳುವಾಗ ಶ್ರೀಧರ್ ಡೆತ್‌ನೋಟ್ ಬರೆದಿದ್ದರು. ಡೆತ್‌ನೋಟ್‌ನಲ್ಲಿ ಒಂಟಿತನದಿಂದ ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದೇನೆ ಎಂದು ಉಲ್ಲೇಖ ಮಾಡಿದ್ದರು. ಪೊಲೀಸರು ಯಾರಿಗೂ ತೊಂದರೆ ಕೊಡಬೇಡಿ ಎಂದು ವಿಡಿಯೋದಲ್ಲಿ ಹೇಳಿಕೊಂಡಿದ್ದಾರೆ. ನಮ್ಮ ಅಧಿಕಾರಿಗಳು ತನಿಖೆಯನ್ನು ನಡೆಸುತ್ತಿದ್ದು ಡೆತ್‌ನೋಟ್ ಮತ್ತು ವಿಡಿಯೋ ಕೂಡ ಪರಿಶೀಲನೆ ಮಾಡಲಾಗುತ್ತಿದೆ. ಮರಣೋತ್ತರ ಪರೀಕ್ಷೆ ವರದಿಯಲ್ಲಿ ವಿಷ ಸೇವಿಸಿ ಸಾವು ಸಂಭವಿಸಿದೆ ಎಂದು ವರದಿ ಬಂದಿದೆ ಎಂದು ತಿಳಿಸಿದರು.

ಆತ್ಮಹತ್ಯೆ ಪತ್ರದಲ್ಲಿ ಏನಿತ್ತು?: ಪೊಲೀಸ್ ಸರ್ ನನ್ನ ಸಾವಿಗೆ ನಾನೇ ಕಾರಣ. ನನ್ನ ಸಾವಿನ ಬಗ್ಗೆ ಯಾರೂ ಕಾರಣ ಅಲ್ಲ. ನನ್ನ ಒಂಟಿತನ ನನಗೆ ತುಂಬಾ ಜಾಸ್ತಿ ಕಾಡುತ್ತಾ ಇತ್ತು. ಎಷ್ಟೇ ಪ್ರಯತ್ನ ಪಟ್ಟರೂ ನನ್ನಿಂದ ಆಗಲಿಲ್ಲ. ಅದಕ್ಕೆ ಚೆನ್ನಾಗಿ ಯೋಚನೆ ಮಾಡಿ ನನ್ನ ಸಾವಿನ ನಿರ್ಧಾರ ನಾನೇ ಮಾಡಿ ಸಾಯುತ್ತಾ ಇದ್ದೇನೆ.

ನನ್ನ ಅಮ್ಮ, ಅಪ್ಪ, ಅಕ್ಕಂದಿರು ಮತ್ತು ನನ್ನ ಫ್ರೆಂಡ್ಸ್ ಯಾರಾದ್ರೂ ನನ್ನ ಸಾವಿನ ಬಗ್ಗೆ ಅನುಮಾನ ಇದೆ ಅಂತಾ ಹೇಳಿ ದೂರು ಕೊಟ್ಟರೆ ಅದನ್ನು ತಗೋಬೇಡಿ ಸರ್.

ಯಾಕಂದ್ರೆ ನನ್ನ ಸಾವು ನನ್ನ ನಿರ್ಧಾರ. ನಾನು ಚೆನ್ನಾಗಿ ಯೋಚನೆ ಮಾಡಿ, ನನ್ನ ನಾನೇ ಕಳೆದು ಕೊಳ್ತಾ ಇದ್ದೇನೆ. ದಯವಿಟ್ಟು ನನ್ನ ಬಗ್ಗೆ ಯಾರೂ ಕೆಟ್ಟದಾಗಿ ತಿಳ್ಕೊಬೇಡಿ. ಪೊಲೀಸ್ ಸರ್ ನನ್ನ ಸಾವಿಗೆ ನಾನೇ ಕಾರಣ. ದಯವಿಟ್ಟು ಸರ್ ಯಾರಿಗೂ ತೊಂದರೆ ಕೊಡಬೇಡಿ.

ಪ್ಲೀಸ್ ಸರ್. ನನ್ನ ಸಾವಿಗೆ ನಾನೇ ಕಾರಣ ಬದುಕಿದ್ದು ಮನೆ ಕಟ್ಟಬೇಕು ಅಂತಾ ತುಂಬಾ ಆಸೆ ಇತ್ತು. ಆಗ್ತಿಲ್ಲ. ನಾನು ಸತ್ತಮೇಲೆ ನನ್ನ ಗೋರಿ ಆದ್ರು ಕಟ್ಟಿ ಖುಷಿಯಾಗಿ ಇರಿ.

ಅಂತರಸಂತೆ ವನ್ಯಜೀವಿ ವಲಯದಲ್ಲಿ ಕಾಡಾನೆ ಸಾವು



ಮೈಸೂರು,ಜೂ. 18(ಎಸ್‌ಪಿಎನ್)– ಮೂವತ್ತು ವರ್ಷ ಪ್ರಾಯದ ಕಾಡಾನೆಯೊಂದು ಅಂತರಸಂತೆ ವನ್ಯಜೀವಿ ವಲಯದಲ್ಲಿ ಸಹಜ ರೀತಿ ಮೃತಪಟ್ಟಿದೆ ಎಂದು ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯ ಅಂತರಸಂತೆ ವನ್ಯಜೀವಿ ವಲಯದ ತಾರಕ ಶಾಖೆಯ ಹೊಸಕೆರೆ ಗಸ್ತಿನ ಗೋಪಾಲದೇವರ ಗುಡಿ ಬೆಂಕಿ ರೇಖೆ ಬಳಿ ಈ ಆನೆ ಮೃತಪಟ್ಟಿದೆ. ಜೂ.17ರಂದು ಮಧ್ಯಾಹ್ನ 2 ಗಂಟೆ ಸಮಯದಲ್ಲಿ ತಾರಕ ಶಾಖೆಯ ಹೊಸಕೆರೆ ಗಸ್ತು ಅರಣ್ಯಪಾಲಕರು, ಕಾಡಾನೆ ಮೃತಪಟ್ಟಿರುವ ಕುರಿತು ಖಚಿತಪಡಿಸಿಕೊಂಡು ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿದ್ದಾರೆ.

ವಿಷಯ ತಿಳಿದ ತಕ್ಷಣ ಮೆಟ್ಟಿಕುಪ್ಪೆ ವನ್ಯಜೀವಿ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಅಂತರಸಂತೆ ವನ್ಯಜೀವಿ ವಲಯ ಅರಣ್ಯಾಧಿಕಾರಿ ಡಿ.ಭರತ್ ಹಾಗೂ ಸಿಬ್ಬಂದಿ ಸ್ಥಳಕ್ಕಾಗಮಿಸಿ ಪರಿಶೀಲನೆ ನಡೆಸಿದ್ದು, ಸೋಮವಾರ ರಾತ್ರಿಯಾದ ಕಾರಣ ಮೃತ ಆನೆ ಸುತ್ತ ಟ್ರ್ಯಾಪಿಂಗ್ ಕ್ಯಾಮರಗಳನ್ನು ಅಳವಡಿಸಿದ್ದರು.

ಮಂಗಳವಾರ ಬೆಳಗ್ಗೆ ಹೆಚ್.ಡಿ.ಕೋಟೆ ತಾಲೂಕಿನ ಮುಖ್ಯ ಪಶು ವೈದ್ಯಾಧಿಕಾರಿ ಡಾ.ಬಿ.ಬಿ.ಪ್ರಸನ್ನ ಮೃತ ಕಾಡಾನೆ ಇದ್ದ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿದ್ದಾರೆ. ನಂತರ ಎಲ್ಲಾ ಅರಣ್ಯಾಧಿಕಾರಿಗಳ ಸಮ್ಮುಖದಲ್ಲಿ ಮರಣೋತ್ತರ ಪರೀಕ್ಷೆ ನಡೆಸಿ, ಈ ಕಾಡಾನೆ ಸಹಜವಾಗಿ ಮೃತಪಟ್ಟಿದೆ ವರದಿ ನೀಡಿದ್ದಾರೆ. ಎಸ್‌ಓಪಿ ಮಾರ್ಗಸೂಚಿ ಅನ್ವಯ ಮೃತ ಕಾಡಾನೆ ಕಳೇಬರವನ್ನು ಸ್ಥಳದಲ್ಲಿ ಬಿಡಲಾಗಿದೆ ಎಂದು ತಿಳಿಸಿದ್ದಾರೆ.

ಈ ವೇಳೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಹರ್ಷಕುಮಾರ್ ಚಿಕ್ಕನರಗುಂದ ಅವರ ನಿರ್ದೇಶನದಂತೆ ಹುಣಸೂರು ವನ್ಯಜೀವಿ ಉಪವಿಭಾಗದ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಪಶುವೈದ್ಯಾಧಿಕಾರಿ ಡಾ.ಬಿ.ಬಿ.ಪ್ರಸನ್ನ, ವಲಯ ಅರಣ್ಯಾಧಿಕಾರಿ ಡಿ.ಭರತ್ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಾಲಿವುಡ್ ಗಾಯಕಿ ಅಲ್ಕಾ ಯಾಗ್ನಿಕ್‌ಗೆ ಹಠಾತ್ ಕಿವುಡುತನ!



ಮುಂಬೈ, ಜೂ.18– ಬಾಲಿವುಡ್ ಗಾಯಕಿ ಅಲ್ಕಾ ಯಾಗ್ನಿಕ್ ಅವರು ಹಠಾತ್ ಕಿವುಡುತನಕ್ಕೆ ಒಳಗಾಗಿದ್ದಾರೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಇನ್‌ಸ್ಟಾಗ್ರಾಂನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ಕೆಲವು ವಾರಗಳ ಹಿಂದೆ ವಿಮಾನದಿಂದ ಇಳಿದು ಬರುವಾಗ ಏನೂ ಕೇಳಿಸದಂತಹ ಅನುಭವವಾಯಿತು. ವೈದ್ಯರ ಬಳಿ ತಪಾಸಣೆ ಮಾಡಿಸಿದಾಗ ವೈರಾಣು ಸೋಂಕಿನಿಂದ ಕಿವಿಯಲ್ಲಿರುವ ನರಕೋಶಗಳಿಗೆ ಆಗಿರುವ ತೊಂದರೆಯಿಂದಾಗಿ ಇದ್ದಕ್ಕಿದ್ದಂತೆ ಕಿವುಡುತನ ಕಾಣಿಸಿಕೊಂಡಿದೆ ಎಂದರು. ಆದಷ್ಟು ಹೆಡ್‌ಫೋನ್ ಬಳಕೆ ಮತ್ತು ಜೋರಾದ ಶಬ್ದಗಳಿಂದ ದೂರವಿರಿ ಎಂದು ನನ್ನ ಅಭಿಮಾನಿಗಳು ಮತ್ತು ಯುವಜನರನ್ನು ಕೇಳಿಕೊಳ್ಳುತ್ತೇನೆ. ನನ್ನ ವೃತ್ತಿ ಜೀವನದಲ್ಲಾದ ಅನಾರೋಗ್ಯ ಸಮಸ್ಯೆಗಳ ಬಗ್ಗೆ ಮುಂದೊಂದು ದಿನ ವಿವರಿಸುತ್ತೇನೆ. ಈ ಕಷ್ಟದ ಸಮಯದಲ್ಲಿ ನಿಮ್ಮೆಲ್ಲರ ಪ್ರೋತ್ಸಾಹ, ಆಶೀರ್ವಾದವಿರಲಿ ಆದಷ್ಟು ಬೇಗ ಚೇತರಿಸಿಕೊಳ್ಳುತ್ತೇನೆ ಎಂದು ಬರೆದುಕೊಂಡಿದ್ದಾರೆ. 58 ವರ್ಷದ ಅಲ್ಕಾ ಅವರು ಈ ವರೆಗೆ 1,114 ಸಿನಿಮಾಗಳಿಗೆ ಸುಮಾರು 2,486 ಹಾಡುಗಳನ್ನು ಹಾಡಿದ್ದಾರೆ. ಈ ಮೂಲಕ ಬಾಲಿವುಡ್‌ನಲ್ಲಿ ಅತಿ ಹೆಚ್ಚು ಹಾಡುಗಳನ್ನು ಹಾಡಿದ ಗಾಯಕರ ಪಟ್ಟಿಯಲ್ಲಿ ಐದನೇ ಸ್ಥಾನದಲ್ಲಿದ್ದಾರೆ.

0.001% ರಷ್ಟು ನಿರ್ಲಕ್ಷ್ಯವಿದ್ದರೂ ಅದನ್ನು ಸರಿಪಡಿಸಬೇಕು

NEET-UG ಪರೀಕ್ಷೆ ಬಗ್ಗೆ ಸುಪ್ರೀಂಕೋರ್ಟ್

ನವದೆಹಲಿ: NEET-UG ಪರೀಕ್ಷೆಯಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿರುವುದರ ಕುರಿತು ಅರ್ಜಿ ವಿಚಾರಣೆ ನಡೆಸಿರುವ ಸುಪ್ರೀಂ ಕೋರ್ಟ್, ಈ ವಿಷಯದಲ್ಲಿ 0.001% ರಷ್ಟು ನಿರ್ಲಕ್ಷ್ಯವಿದ್ದರೂ ಅದನ್ನು ಒಪ್ಪಿಕೊಂಡು ಸರಿಪಡಿಸಬೇಕು ಎಂದು ಎನ್‌ಟಿಎಗೆ ಹೇಳಿದೆ.

ಪರೀಕ್ಷಾ ಸಂಸ್ಥೆಯಾಗಿ, ನೀವು ನ್ಯಾಯಯುತವಾಗಿ ವರ್ತಿಸಬೇಕು. ತಪ್ಪಿದ್ದರೆ, ಹೌದು, ಇದು ತಪ್ಪು ಎಂದು ಹೇಳಿ, ಯಾರಿಗೆ ಸಂಬಂಧಿಸಿದಂತೆಯಾದರೂ 0.001% ನಿರ್ಲಕ್ಷ್ಯವಿದ್ದರೆ, ಅದನ್ನು ಸಂಪೂರ್ಣವಾಗಿ ಸರಿಪಡಿಸಿಕೊಳ್ಳಬೇಕು ಎಂದು ನ್ಯಾಯಮೂರ್ತಿ ವಿಕ್ರಮ್‌ನಾಥ್ ಮತ್ತು ನ್ಯಾಯಮೂರ್ತಿ ಎಸ್ವಿಎನ್ ಭಟ್ಟಿ ನೇತೃತ್ವದ ಉನ್ನತ ನ್ಯಾಯಾಲಯದ ದ್ವಿಸದಸ್ಯ ರಜಾಕಾಲದ ಪೀಠ ಹೇಳಿದೆ.

NEET-UG, 2024 ರಲ್ಲಿನ ಆಪಾದಿತ ಪೇಪರ್ ಸೋರಿಕೆ ಮತ್ತು ದುಷ್ಕೃತ್ಯಗಳಿಗೆ ಸಂಬಂಧಿಸಿದಂತೆ ಈ ಹೊಸ ಮನವಿಗಳ ಕುರಿತು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಮತ್ತು ಕೇಂದ್ರದಿಂದ ವಿವರವಾದ ಪ್ರತಿಕ್ರಿಯೆಯನ್ನು ನೀಡುವಂತೆ ಕಠಿಣವಾದ ಸೂಚನೆ ನೀಡಿರುವ ಸುಪ್ರೀಂ ಕೋರ್ಟ್ ಪೀಠ ಈ ಸಂಬಂಧ ನೋಟಿಸ್ ಜಾರಿ ಮಾಡಿದೆ.

ಮಕ್ಕಳು ಪರೀಕ್ಷೆಗಳಿಗೆ ತಯಾರಿ ನಡೆಸಿದ್ದಾರೆ ಮತ್ತು ಈ ಪರೀಕ್ಷೆಗಳಿಗೆ ತಯಾರಿ ನಡೆಸಲು ಅವರ ಶ್ರಮವನ್ನು ನಾವು ಮರೆಯಲು ಸಾಧ್ಯವಿಲ್ಲ ಎಂದು ಕೇಂದ್ರ ಮತ್ತು ಎನ್‌ಟಿಎ ಪರವಾಗಿ ಹಾಜರಾದ ವಕೀಲರಿಗೆ ಸುಪ್ರೀಂಕೋರ್ಟ್ ವಿಚಾರಣೆಯ ಸಂದರ್ಭದಲ್ಲಿ ಹೇಳಿದೆ.

ಯೂನಿಯನ್ ಆಫ್ ಇಂಡಿಯಾ (ಯುಒಐ), ಎನ್ಟಿಎ, ನೇಷನ್ ಮೆಡಿಕಲ್ ಕಮಿಷನ್ (ಎನ್‌ಎಂಸಿ), ಮೆಡಿಕಲ್ ಕೌನ್ಸೆಲಿಂಗ್ ಕಮಿಟಿ (ಎಂಸಿಸಿ) ವಿರುದ್ಧ ಅಮೂಲ್ಯ ವಿಜಯಾ ಪಿನಾಪಾಟಿ, ನಿತಿನ್ ವಿಜಯ್ ಮತ್ತು ಇತರರು ಸಲ್ಲಿಸಿರುವ ಹೊಸ ಅರ್ಜಿಗಳ ವಿಚಾರಣೆಯನ್ನು ಮಂಗಳವಾರ ಸುಪ್ರೀಂಕೋರ್ಟ್ ನಡೆಸಿತು.

ಭಾರತ ವಿರೋಧಿ ಪಾಕ್ ಮಾಜಿ ಬ್ರಿಗೇಡಿಯರ್ ಅಮೀರ್ ಹಮ್ಜಾ ಹತ್ಯೆ

ಇಸ್ಲಾಮಾಬಾದ್, ಜೂ.18– ಪಾಕಿಸ್ತಾನದ ಪಂಜಾಬ್ ಪ್ರಾಂತ್ಯದ ಝೀಲಂ ಪ್ರದೇಶದ ಲೀಲಾ ಇಂಟರ್‌ಚೇಂಜ್‌ನಲ್ಲಿ ಉದ್ದೇಶಿತ ದಾಳಿಯಲ್ಲಿ ಪಾಕಿಸ್ತಾನ ಸೇನೆಯ ನಿವೃತ್ತ ಬ್ರಿಗೇಡಿಯರ್ ಅಮೀರ್ ಹಮ್ಜಾನನ್ನು ಗುಂಡಿಕ್ಕಿ ಹತ್ಯೆ ಮಾಡಲಾಗಿದೆ. ವರದಿಗಳ ಪ್ರಕಾರ ಅಪರಿಚಿತ ಬಂದೂಕುಧಾರಿಗಳು ಈ ದಾಳಿ ನಡೆಸಿದ್ದಾರೆ. ಘಟನೆಯ ವೇಳೆ ಬ್ರಿಗೇಡಿಯರ್ ಹಮ್ಜಾ ಅವರು ಪತ್ನಿ ಮತ್ತು ಮಗಳೊಂದಿಗೆ ಪ್ರಯಾಣಿಸುತ್ತಿದ್ದರು. ದಾಳಿಕೋರರು ಅವರ ಮೇಲೆ ಗುಂಡು ಹಾರಿಸಿದ್ದಾರೆ.

ಈ ಬಗ್ಗೆ ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ. ಆದರೆ, ಪೊಲೀಸರು ದಾಖಲಿಸಿರುವ ಎಫ್‌ಐಆರ್‌ನಲ್ಲಿ ಭಯೋತ್ಪಾದನೆಗೆ ಸಂಬಂಧಿಸಿದ ಸೆಕ್ಷನ್‌ಗಳಿಲ್ಲ. ದಾಳಿಕೋರರ ಗುರುತು ಅಥವಾ ಉದ್ದೇಶದ ಬಗ್ಗೆ ಯಾವುದೇ ಸ್ಪಷ್ಟ ಸುಳಿವುಗಳಿಲ್ಲದ ಕೊಲೆ ಎಂದು ಪರಿಗಣಿಸುತ್ತಿದ್ದಾರೆ. ನಿವೃತ್ತ ಬ್ರಿಗೇಡಿಯರ್ ಅಮೀರ್ ಹಮ್ಜಾ ಅವರು ತುರ್ತು ಸೇವೆಗಳ ಅಕಾಡೆಮಿ 1122ರ ಮಾಜಿ ಮಹಾನಿರ್ದೇಶಕರಾಗಿದ್ದರು. ಜಮ್ಮು ಮತ್ತು ಕಾಶ್ಮೀರದ ಸುಂಜ್ವಾನ್ ಸೇನಾ ಶಿಬಿರದ ಮೇಲೆ 2018ರ ಭಯೋತ್ಪಾದಕ ದಾಳಿಯ ಹಿಂದಿನ ಪ್ರಮುಖ ಸಂಚುಕೋರರಲ್ಲಿ ಒಬ್ಬ ಎಂದು ಹೇಳಲಾಗಿದೆ. ಈ ದಾಳಿಯನ್ನು ಜೈಷ್–ಎ–ಮೊಹಮ್ಮದ್ ಉಗ್ರರು ನಡೆಸಿರುವ ಶಂಕೆ ವ್ಯಕ್ತವಾಗಿದೆ.

ಬಿಹಾರದ ಬಾಕ್ರಾ ನದಿಗೆ ಹೊಸದಾಗಿ ನಿರ್ಮಿಸಿದ್ದ ಸೇತುವೆ ಕುಸಿತ

ಅರಾರಿಯಾ (ಬಿಹಾರ), ಜೂ.18– ಬಿಹಾರದ ಅರಾರಿಯಾ ಜಿಲ್ಲೆಯ ಪರಾರಿಯಾ ಗ್ರಾಮದಲ್ಲಿ ಬಾಕ್ರಾ ನದಿಗೆ ಅಡ್ಡಲಾಗಿ ನಿರ್ಮಿಸಿದ್ದ ಸೇತುವೆಯ ಒಂದು ಭಾಗ ಕುಸಿದಿದೆ. ಘಟನೆಯಲ್ಲಿ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ.

ಬಿಹಾರ ರಾಜ್ಯಸರ್ಕಾರದಿಂದ ಹೊಸದಾಗಿ ಈ ಸೇತುವೆ ನಿರ್ಮಾಣವಾಗಿದ್ದು, ಸಾರ್ವಜನಿಕರ ಸಂಚಾರಕ್ಕೆ ಇನ್ನೂ ಮುಕ್ತವಾಗಿರಲಿಲ್ಲ. ಅಲ್ಲದೆ ಸೇತುವೆಯನ್ನು ಸಂಪರ್ಕಿಸುವ ರಸ್ತೆಯೂ ನಿರ್ಮಾಣವಾಗಿರಲಿಲ್ಲ. ಈ ಸೇತುವೆ ಅರಾರಿಯ ಜಿಲ್ಲೆಯ ಕುರ್ಸಾ ಕಾಂತ ಮತ್ತು ಸಿಕ್ತ್ಯ ಪ್ರದೇಶಗಳನ್ನು ಸಂಪರ್ಕಿಸುತ್ತಿತ್ತು.

ಘಟನೆಯ ಕುರಿತು ಮಾಹಿತಿ ನೀಡಿರುವ ಪೊಲೀಸ್ ಅಧಿಕಾರಿಯೊಬ್ಬರು ಪರಿಶೀಲನೆ ನಡೆಸಲು ಸ್ಥಳಕ್ಕೆ ಅಧಿಕಾರಿಗಳು ಭೇಟಿ ನೀಡಿದ್ದಾರೆ ಎಂದರು. ನಿರ್ಮಾಣ ಸಂಸ್ಥೆಯ ಮಾಲೀಕನ ನಿರ್ಲಕ್ಷದಿಂದಾಗಿ ಸೇತುವೆ ಕುಸಿದಿದೆ. ಈ ಬಗ್ಗೆ ತನಿಖೆ ನಡೆಸಬೇಕೆಂದು ಸರ್ಕಾರಕ್ಕೆ ಆಗ್ರಹಿಸುತ್ತೇವೆ ಎಂದು ಸ್ಥಳೀಯ ಶಾಸಕಿ ವಿಜಯಕುಮಾರಿ ಎಎನ್‌ಐಗೆ ಪ್ರತಿಕ್ರಿಯಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣ: ಪವನ್ ಮನೆಯಿಂದ ನಾಲ್ಕೂವರೆ ಲಕ್ಷ ಸೀಜ್

ಬೆಂಗಳೂರು: ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕಿಡ್ನಾಪ್ ಹಾಗೂ ಕೊಲೆ ಪ್ರಕರಣದ ತನಿಖೆ ದಿನದಿಂದ ದಿನಕ್ಕೆ ಜಟಿಲವಾಗುತ್ತಿದೆ. ಪ್ರಕರಣ ತನಿಖೆ ನಡೆಸುತ್ತಿರುವ ಪೊಲೀಸರು ಇಂದು ಆರೋಪಿ ಪವನ್ ಮನೆಯಿಂದ 4 ಲಕ್ಷ 50 ಸಾವಿರ ಹಣವನ್ನು ಸೀಜ್ ಮಾಡಿದ್ದಾರೆ.

ವಿನಯ್ ತಾಯಿಗೆ ಪವನ್ 1 ಲಕ್ಷ ಅಡ್ವಾನ್ಸ್ ಹಣ ನೀಡಿದ್ದ. ಬಳಿಕ ವಿನಯ್‌ಗೆ ನೀಡಬೇಕಾಗಿದ್ದ ಹಣವನ್ನ ಪವನ್ ತನ್ನ ಮನೆಯಲ್ಲಿಟ್ಟಿದ್ದ. ಇದೀಗ ಪೊಲೀಸರು ಒಟ್ಟು 4 ಲಕ್ಷ 50 ಸಾವಿರವನ್ನು ಪೊಲೀಸರು ಸೀಜ್ ಮಾಡಿದ್ದಾರೆ.

ಈ ಹಿಂದೆ 30 ಲಕ್ಷ ಸೀಜ್: ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣವನ್ನು ಒಪ್ಪಿಕೊಳ್ಳಲು, ಮೃತದೇಹ ಸಾಗಿಸಲು ಮತ್ತು ನಟ ದರ್ಶನ್ ಹೆಸರನ್ನು ಬಾಯಿಬಿಡದಿರಲು ಬಂಧಿತರ ಪೈಕಿ ಐವರಿಗೆ 30 ಲಕ್ಷಕ್ಕೆ ಸುಪಾರಿ ನೀಡಲಾಗಿತ್ತು. ಮೃತದೇಹ ಯಾರಿಗೂ ಸಿಗದಂತೆ ಸಾಗಿಸಲು ಮೂವರು ಆರೋಪಿಗಳಿಗೆ ಮುಂಗಡವಾಗಿ ಒಟ್ಟು 5 ಲಕ್ಷ ಸಂದಾಯ ಮಾಡಲಾಗಿತ್ತು. ಉಳಿದ ಇಬ್ಬರು ಆರೋಪಿಗಳು ಜೈಲಿಗೆ ಹೋದ ಮೇಲೆ ಅವರ ಮನೆಯವರಿಗೆ ಹಣ ತಲುಪಿಸುವುದಾಗಿ ಹೇಳಲಾಗಿತ್ತು. ಈ ವಿಚಾರವನ್ನು ಆರೋಪಿಗಳು ಪೊಲೀಸರ ಮುಂದೆ ಬಾಯ್ಬಿಟ್ಟಿದ್ದರು.

ಪ್ರಕರಣ ಸಂಬಂಧ ದರ್ಶನ್ ಆಪ್ತನೊಬ್ಬನ ಮನೆ ಮೇಲೆ ದಾಳಿ ನಡೆಸಿದ ಪೊಲೀಸರು ಹಣವನ್ನು ವಶಕ್ಕೆ ಪಡೆದಿದ್ದಾರೆ. ನಟ ಕೊಟ್ಟಿದ್ದ 30 ಲಕ್ಷ ಹಣವನ್ನು ಆಪ್ತನೊಬ್ಬನ ಮನೆಯಲ್ಲಿ ಇಡಲಾಗಿತ್ತು. ವಿಚಾರಣೆ ವೇಳೆ ಆರೋಪಿಗಳು ಹಣದ ಬಗ್ಗೆ ಬಾಯಿಬಿಟ್ಟಿದ್ದಾರೆ. ನಂತರ ಪೊಲೀಸರು ಹಣವನ್ನು ವಶಕ್ಕೆ ಪಡೆದು ತನಿಖೆ ಮುಂದುವರಿಸಿದ್ದಾರೆ.

ನಾನು ಗಂಗಾ ಮಾತೆಯ ದತ್ತು ಪುತ್ರ: ಪ್ರಧಾನಿ ನರೇಂದ್ರ ಮೋದಿ



ಲಖನೌ, ಜೂ.18– ಗಂಗಾ ಮಾತೆಯು ನನ್ನನ್ನು ದತ್ತು ತೆಗೆದುಕೊಂಡಂತೆ ಭಾಸವಾಗುತ್ತಿದೆ. ಕಾಶಿಯ ಜನರು ಅವರ ಸಂಸದನನ್ನು ಮಾತ್ರ ಆಯ್ಕೆ ಮಾಡಿಲ್ಲ, ದೇಶದ ಪ್ರಧಾನಿಯನ್ನೂ ಮೂರನೇ ಬಾರಿಗೆ ಆಯ್ಕೆ ಮಾಡಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಮಂಗಳವಾರ ಹೇಳಿದರು.

ಮೂರನೇ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡ ಬಳಿಕ ಮೊದಲ ಸಲ ತಮ್ಮ ಕ್ಷೇತ್ರ ವಾರಾಣಸಿಗೆ ಭೇಟಿ ನೀಡಿದ ಅವರು, ಪಿಎಂ ಕಿಸಾನ್ ಸಮ್ಮಾನ್ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದರು.

ಬಾಬಾ ವಿಶ್ವನಾಥ, ಗಂಗಾ ಮಾತೆಯರ ಆಶೀರ್ವಾದ ಮತ್ತು ಕಾಶಿ ಜನರ ಅಪರಿಮಿತ ಪ್ರೀತಿಯಿಂದಾಗಿ ಮೂರನೇ ಅವಧಿಗೆ ದೇಶದ 'ಪ್ರಧಾನ ಸೇವಕ'ನಾಗುವ ಅವಕಾಶ ನನಗೆ ಸಿಕ್ಕಿದೆ ಎಂದು ಅವರು ಹೇಳಿದರು. ಗಂಗಾ ಮಾತೆಯು ನನ್ನನ್ನು ಆಕೆಯ ಮಡಿಲಿನಲ್ಲಿ ಇರಿಸಿಕೊಂಡಿದ್ದಾಳೆ. ನಾನು ವಾರಾಣಸಿಯ ಭಾಗವೇ ಆಗಿದ್ದೇನೆ ಎಂದು ಮೋದಿ ಪ್ರತಿಪಾದಿಸಿದರು.

ಐತಿಹಾಸಿಕ ತೀರ್ಪು: ಲೋಕಸಭಾ ಚುನಾವಣೆಯಲ್ಲಿ ದೇಶದ ಜನರು ನಮಗೆ ನೀಡಿರುವ ತೀರ್ಪು ಐತಿಹಾಸಿಕವಾದುದು. 60 ವರ್ಷಗಳ ಬಳಿಕ ಇದೇ ಮೊದಲ ಬಾರಿ ದೇಶದಲ್ಲಿ ಸರ್ಕಾರವೊಂದು (ಬಿಜೆಪಿ) ಸತತ ಮೂರನೇ ಬಾರಿಗೆ ಅಧಿಕಾರಕ್ಕೆ ಬಂದು ಹ್ಯಾಟ್ರಿಕ್ ಸಾಧಿಸಿದೆ. ಯಾವುದೇ ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಸರ್ಕಾರವೊಂದು ಸತತವಾಗಿ ಮೂರನೇ ಬಾರಿಗೆ ಅಧಿಕಾರಕ್ಕೆ ಬರುವುದು ಬಹಳ ಅಪರೂಪ ಎಂದು ಅವರು ಬಣ್ಣಿಸಿದರು.

ದೇಶದಲ್ಲಿ ಪ್ರಜಾಪ್ರಭುತ್ವದ ಬೇರುಗಳು ಎಷ್ಟು ಆಳವಾಗಿ ಹರಡಿವೆ ಎಂಬುದನ್ನು 18ನೇ ಲೋಕಸಭಾ ಚುನಾವಣೆಯು ಜಗತ್ತಿಗೆ ತೋರಿಸಿದೆ. ಈ ಚುನಾವಣೆಯಲ್ಲಿ ಸುಮಾರು 64 ಕೋಟಿ ಜನರು ಮತದಾನ ಮಾಡಿದ್ದಾರೆ. ಜಗತ್ತಿನಲ್ಲಿ ಇದಕ್ಕಿಂತ ದೊಡ್ಡ ಚುನಾವಣೆ ಬೇರೆ ಇಲ್ಲ ಎಂದು ಹೇಳಿದರು.

ದೇಶದಲ್ಲಿರುವ ಮತದಾರರ ಸಂಖ್ಯೆಯು ಎಲ್ಲ ಜಿ–7 ರಾಷ್ಟ್ರಗಳ ಒಟ್ಟು ಮತದಾರರ ಸಂಖ್ಯೆಗಿಂತ ಒಂದೂವರೆ ಪಟ್ಟು ಹೆಚ್ಚು, ಯುರೋಪಿಯನ್ ಒಕ್ಕೂಟದಲ್ಲಿರುವ ಮತದಾರರಿಗಿಂತ ಎರಡೂವರೆ ಪಟ್ಟು ಜಾಸ್ತಿ ಮತದಾರರು ನಮ್ಮ ದೇಶದಲ್ಲಿದ್ದಾರೆ ಎಂದು ಪ್ರಧಾನಿ ತಿಳಿಸಿದರು.

ಉತ್ತರ ಪ್ರದೇಶದ ರಾಜ್ಯಪಾಲರಾದ ಆನಂದಿಬೆನ್ ಪಟೇಲ್, ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಗಂಗಾ ಆರತಿಯಲ್ಲಿ ಭಾಗಿ: ಸಂಜೆ ಪ್ರಧಾನಿಯವರು ದಶಾಶ್ವಮೇಧ ಘಾಟ್‌ಗೆ ಭೇಟಿ ನೀಡಿ, ಗಂಗಾ ಪೂಜೆ ನೆರವೇರಿಸಿ, ಗಂಗಾ ಆರತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

9.26 ಕೋಟಿ ರೈತರಿಗೆ 20 ಸಾವಿರ ಕೋಟಿ ಬಿಡುಗಡೆ: ಪಿಎಂ ಕಿಸಾನ್ ಸಮ್ಮಾನ್ ಯೋಜನೆಯ ಅಡಿಯಲ್ಲಿ ದೇಶದಾದ್ಯಂತ 9.26 ಕೋಟಿಗೂ ಹೆಚ್ಚು ರೈತರಿಗೆ 20 ಸಾವಿರ ಕೋಟಿಯಷ್ಟು ಸಹಾಯಧನವನ್ನು ಪ್ರಧಾನಿ ನರೇಂದ್ರ ಮೋದಿ ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿದರು. ಪಿಎಂ ಕಿಸಾನ್ ಸಮ್ಮಾನ್ ನಿಧಿ ಯೋಜನೆಯು ಫಲಾನುಭವಿಗಳ ಖಾತೆಗಳಿಗೆ ನೇರ ಹಣ ವರ್ಗಾವಣೆ ಮಾಡುವ ಜಗತ್ತಿನ ಅತ್ಯಂತ ದೊಡ್ಡ ಯೋಜನೆ. ಇದುವರೆಗೆ ದೇಶದ ಕೋಟ್ಯಂತರ ರೈತರ ಖಾತೆಗೆ 3.15 ಲಕ್ಷ ಕೋಟಿಯಷ್ಟು ಹಣ ವರ್ಗಾವಣೆ ಮಾಡಲಾಗಿದೆ ಎಂದು ಮೋದಿ ಹೇಳಿದರು. ಇದು ಪಿಎಂ ಕಿಸಾನ್ ಸಮ್ಮಾನ್ ನಿಧಿಯ 17ನೇ ಕಂತಿನ ಹಣವಾಗಿದ್ದು ಮೂರನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ಅವರು ಸಹಿ ಹಾಕಿದ ಮೊದಲ ಕಡತ ಇದಾಗಿದೆ. ಕಾರ್ಯಕ್ರಮದಲ್ಲಿ ಅವರು 30 ಸಾವಿರ ಮಹಿಳೆಯರಿಗೆ 'ಕೃಷಿ ಸಖಿ' ಪ್ರಮಾಣಪತ್ರಗಳನ್ನು ಹಸ್ತಾಂತರಿಸಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ಜಿಲ್ಲೆಯಲ್ಲಿ ಕೋಟೆಗೆ ಕೊನೆ ಸ್ಥಾನ ಹಿನ್ನೆಲೆ

ಕೆಡಿಪಿ ಸಭೆಯಲ್ಲಿ ಬಿಇಓಗೆ ಶಾಸಕ ಅನಿಲ್ ತರಾಟೆ

ತಾಲೂಕಿನ ಅಭಿವೃದ್ಧಿಗೆ ಕೈ ಜೋಡಿಸುವಂತೆ ಅಧಿಕಾರಿಗಳಿಗೆ ಮನವಿ

ಹೆಚ್.ಡಿ.ಕೋಟೆ, ಜೂ.18– ಶಿಕ್ಷಕರು ರಾಜಕೀಯ ಮಾಡುವುದನ್ನು ಬಿಟ್ಟು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಲು ಮುಂದಾಗಿದ್ದರೆ ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ತಾಲೂಕಿಗೆ ಉತ್ತಮ ಫಲಿತಾಂಶ ಬರುತ್ತಿತ್ತು ಎಂದು ಬಿಇಓ ಮಾರಯ್ಯ ಅವರನ್ನು ಶಾಸಕ ಅನಿಲ್ ಚಿಕ್ಕಮಾದು ತರಾಟೆಗೆ ತೆಗೆದುಕೊಂಡರು.



ಹೆಚ್.ಡಿ.ಕೋಟೆ ತಾಪಂ ಸಭಾಂಗಣದಲ್ಲಿ ಶಾಸಕ ಅನಿಲ್ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ ನಡೆಯಿತು.

ಪಟ್ಟಣದ ತಾಪಂ ಸಭಾಂಗಣದಲ್ಲಿ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆಡಿಪಿ) ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಶಿಕ್ಷಕರು ಮಕ್ಕಳಿಗೆ ಪಾಠ ಪ್ರವಚನ ಮಾಡುವ ಬದಲು ರಾಜಕೀಯ ಮಾಡುತ್ತಿದ್ದಾರೆ. ಅಂತಹ ಶಿಕ್ಷಕರನ್ನು ಕರೆದು ಬಿಇಓ ಬುದ್ಧಿವಾದ ಹೇಳಿದ್ದರೆ ಈ ಬಾರಿ ತಾಲೂಕು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯುತ್ತಿತ್ತು. ಆದರೆ ಬಿಇಓ ಅವರಿಗೆ ಶಿಕ್ಷಣದ ಬಗ್ಗೆ ಕಾಳಜಿ ಇಲ್ಲದ ಕಾರಣ ಜಿಲ್ಲೆಯಲ್ಲೇ ತಾಲೂಕು ಕೊನೆ ಸ್ಥಾನಕ್ಕೆ ಹೋಗಿದೆ. ಉತ್ತಮ ಫಲಿತಾಂಶ ಬಾರದ ಕಾರಣ ನೀವು ಬೇರೆಡೆಗೆ ವರ್ಗಾವಣೆಯಾಗುವಂತೆ ಬಿಇಓಗೆ ಸೂಚಿಸಿದರು.

ತಾಲೂಕಿನ ಮಕ್ಕಳ ಶಿಕ್ಷಣಕ್ಕೆ ತೊಂದರೆಯಾಗದಂತೆ ಪೀಠೋಪಕರಣ ಹಾಗೂ ಕೊಠಡಿ ನಿರ್ಮಾಣ ಸೇರಿದಂತೆ ಇನ್ನಿತರ ಕೆಲಸ ಕಾರ್ಯಗಳಿಗೆ ಸುಮಾರು 25 ಕೋಟಿಗೂ ಹೆಚ್ಚು ಅನುದಾನ ನೀಡಿದ್ದೇನೆ. ಆದರೂ ತಾಲೂಕಿನ ಶಿಕ್ಷಣ ಇಲಾಖೆ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ವಿಫಲವಾಗಿದೆ. ಕೆಲ ಶಿಕ್ಷಕರು ರಾಜಕೀಯ ಮಾಡುವುದನ್ನು ಬಿಟ್ಟು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದರು.

ಕ್ಷೇತ್ರದಲ್ಲಿ ಅತೀ ಹೆಚ್ಚು ಬಡ ಕುಟುಂಬದ ವಿದ್ಯಾರ್ಥಿಗಳೇ ಜಾಸ್ತಿ ಇದ್ದು, ಅವರಿಗೆ ಗುಣಮಟ್ಟದ ಶಿಕ್ಷಣ ನೀಡಲು ಸಾಧ್ಯವಾಗದಿದ್ದರೇ ಅಂತಹ ಶಿಕ್ಷರು ವರ್ಗಾವಣೆ ಮಾಡಿಸಿಕೊಂಡು ಹೋಗಬಹುದು ಎಂದರು.

ಕಾಮಗಾರಿಗಳ ಬಗ್ಗೆ ಗಮನ ಹರಿಸಿ: ತಾಲೂಕಿನ ವಿವಿಧ ಇಲಾಖೆಗಳಿಗೆ ಸರ್ಕಾರದಿಂದ ಹೆಚ್ಚಿನ ಅನುದಾನ ಬಿಡುಗಡೆ ಮಾಡಿಸಿದ್ದೇನೆ. ಹೀಗಾಗಿ ಕಾಮಗಾರಿ ಸ್ಥಳದಲ್ಲಿ ಆಯಾ ಇಲಾಖೆಯ ಇಂಜಿನಿಯರ್‌ಗಳು ಹಾಜರಿದ್ದು, ಕಾಮಗಾರಿಗಳ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದು ಆಯಾ ಇಲಾಖೆ ಇಂಜಿಯರ್‌ಗಳಿಗೆ ಕಡಕ್ ಆದೇಶ ನೀಡಿದರು.

ಸ್ವಚ್ಛತೆ ಕಾಪಾಡಿ: ಪಟ್ಟಣದ ಪುರಸಭಾ ವಾರ್ಡ್‌ಗಳಲ್ಲಿ ಅನೈರ್ಮಲ್ಯದ ಬಗ್ಗೆ ವಾರ್ಡ್ ನಿವಾಸಿಗಳಿಂದ ಸಾಕಷ್ಟು ದೂರುಗಳು ಕೇಳಿ ಬರುತ್ತಿದೆ. ಹೀಗಾಗಿ ಪಟ್ಟಣದ ಎಲ್ಲಾ ವಾರ್ಡ್‌ಗಳಲ್ಲೂ ಸ್ವಚ್ಛತೆ ಕಾಪಾಡಬೇಕು. ಅಲ್ಲದೇ ಪಟ್ಟಣದಲ್ಲಿ ವಾಹನ ದಟ್ಟಣೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಸ್ಥಳದಲ್ಲಿ ವಾಹನ ನಿಲುಗಡೆ ಮಾಡಲಾಗುತ್ತಿದೆ. ಅಂತಹ ಸ್ಥಳಗಳಲ್ಲಿ ನೋ ಪಾರ್ಕಿಂಗ್ ಬೋರ್ಡ್ ಅಳವಡಿಸಿ ವಾಹನ ನಿಲುಗಡೆ ತಡೆಗಟ್ಟಬೇಕು ಎಂದು ಪುರಸಭಾ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲೂಕಿನ ಹಾಸ್ಟೆಲ್‌ಗಳಲ್ಲಿ ಸ್ವಚ್ಛತೆ ಇಲ್ಲ. ಆಹಾರದ ಗುಣಮಟ್ಟದ ಕೊರತೆಯಿಂದಾಗಿ ವಿದ್ಯಾರ್ಥಿಗಳು ಹಾಸ್ಟೆಲ್‌ಗೆ ದಾಖಲಾಗುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಆಹಾರ ಮತ್ತು ಸ್ವಚ್ಛತೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಇಲಾಖೆ ಸಹಾಯಕ ನಿರ್ದೇಶಕಿ ಶಶಿಕಲಾ ಅವರಿಗೆ ಸೂಚಿಸಿದರು.

ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ಮಾಡಲು ಬೇಜವಾಬ್ದಾರಿತನ ತೋರುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ತಿಳಿಸಿದ ಅವರು, ಸಭೆಗೆ ಆಗಮಿಸಿದ್ದ ಎಲ್ಲಾ ಇಲಾಖೆ ಅಧಿಕಾರಿಗಳನ್ನು ತಾಲೂಕಿನ ಅಭಿವೃದ್ಧಿಗೆ ಕೈ ಜೋಡಿಸುವಂತೆ ಮನವಿ ಮಾಡಿದರು. ಅಲ್ಲದೇ ಇದೇ ವೇಳೆ ಸಭೆಗೆ ಗೈರಾದ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡುವಂತೆ ಸೂಚಿಸಿದರು.

ಸಭೆಯಲ್ಲಿ ತಹಸೀಲ್ದಾರ್‌ಗಳಾದ ಶ್ರೀನಿವಾಸ್, ರೋಕಿಯ ಬೇಗಂ, ಇಓಗಳಾದ ಧರಣೇಶ್, ಸುಷ್ಮಾ, ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್, ತಾಲೂಕು ಆಡಳಿತ ವೈದ್ಯಾಧಿಕಾರಿ ಡಾ.ಸೋಮಣ್ಣ, ಸಮಾಜ ಕಲ್ಯಾಣ ಅಧಿಕಾರಿ ರಾಮಸ್ವಾಮಿ, ಸಿಡಿಪಿಓ ಆಶಾ, ಪುರಸಭಾ ಮುಖ್ಯಾಧಿಕಾರಿ ಸುರೇಶ್, ರೇಷ್ಮೆ ಇಲಾಖೆ ಅಧಿಕಾರಿ ಮಂಜುನಾಥ್, ಕೃಷಿ ಅಧಿಕಾರಿ ಜಯರಾಮ್, ಆರ್‌ಎಫ್‌ಓ ಅಮೃತೇಶ್, ಪೂಜಾ, ಬೋರಯ್ಯ, ನಾಗರಾಜು, ಮಂಜುನಾಥ್, ಗೋವಿಂದ ನಾಯಕ, ರೇಣುಕಾಸ್ವಾಮಿ, ಚಂದು ಕುಮಾರ್, ಪರಮೇಶ್, ರಮೇಶ್ ಬಾಬು ಇನ್ನಿತರದ್ದರು.

ಅಧಿಕಾರಿಗಳನ್ನು ವಜಾಗೊಳಿಸಿ

ಹೆಚ್.ಡಿ.ಕೋಟೆ ತಾಲೂಕಿನ ಹಂಪಾಪುರದಲ್ಲಿ ಬದುಕಿರುವ ವ್ಯಕ್ತಿಗೆ ಮರಣ ದೃಢೀಕರಣ ಪತ್ರ ನೀಡಿ ಖಾತೆ ಬದಲಾವಣೆ ಮಾಡಿರುವ ಅಧಿಕಾರಿಗಳನ್ನು ತಕ್ಷಣ ಉದ್ಯೋಗದಿಂದ ವಜಾಗೊಳಿಸುವಂತೆ ತಹಸೀಲ್ದಾರ್ ಶ್ರೀನಿವಾಸ್‌ಗೆ ಶಾಸಕ ಅನಿಲ್ ಚಿಕ್ಕಮಾದು ಸೂಚಿಸಿದರು.

ಕುಸುಮ್ ಯೋಜನೆಗೆ ಸ್ಥಳ ಪರಿಶೀಲಿಸಿದ ಡಿಸಿ



ಬೆಟ್ಟದಪುರ, ಜೂ.18– ಸಮೀಪದ ಕೋಮಲಾಪುರದಲ್ಲಿ ಕುಸುಮ್ ಯೋಜನೆ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿ ಕೆ.ವಿ.ರಾಜೇಂದ್ರ ಸರ್ಕಾರದ ಗೋಮಾಳ ಪರಿಶೀಲನೆ ನಡೆಸಿದರು.

ರೈತರ ಆದಾಯ ಹೆಚ್ಚಿಸಲು ಹಾಗೂ ಆಧುನಿಕ ಬೇಸಾಯಕ್ಕೆ ಅನುಕೂಲ ಕಲ್ಪಿಸುವ ದೃಷ್ಟಿಯಿಂದ ದೇಶಾದ್ಯಂತ ಸೌರ ಪಂಪ್‌ಗಳು ಹಾಗೂ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಲು ಸರ್ಕಾರ ಈ ಯೋಜನೆಯನ್ನು ರೈತರಿಗಾಗಿ ಅನುಷ್ಠಾನಗೊಳಿಸಲು ಮುಂದಾಗಿದೆ. ಅದೇ ರೀತಿ ಈ ಯೋಜನೆಗೆ ಗ್ರಾಮದ ಸರ್ವೇ ನಂಬರ್ 105, 106, 107, 108/1, 111/1ರಲ್ಲಿ ಒಟ್ಟು 46 ಎಕರೆ ಪರಿಶೀಲಿಸಲಾಗಿದೆ. ಇದರಿಂದ ರೈತರು ತಮ್ಮ ಕೃಷಿ ಪಂಪ್‌ಗಳನ್ನು ಸೋಲಾರೈಸ್ ಮಾಡುವ ಮೂಲಕ ಬೇಸಾಯಕ್ಕೆ ಅನುಕೂಲ ಕಲ್ಪಿಸಲಾಗುವುದು. ರೈತರು ಇದನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಕೆ.ವಿ ರಾಜೇಂದ್ರ ತಿಳಿಸಿದರು.

ಈ ವೇಳೆ ತಹಸೀಲ್ದಾರ್ ಕುಂಞ ಅಹಮದ್, ಸೆಸ್ಕ್ ಅಧಿಕಾರಿ ಸುನೀಲ್ ಕುಮಾರ್, ಕಂದಾಯ ನಿರೀಕ್ಷಕ ಅಜ್ಮಹಲ್ ಶರೀಫ್ ಸೇರಿದಂತೆ ಅರಣ್ಯ ಅಧಿಕಾರಿ, ಸಿಬ್ಬಂದಿ ಹಾಜರಿದ್ದರು.

ಬೈಕ್‌ಗೆ ಕಾರು ಡಿಕ್ಕಿ; ಸ್ಥಳದಲ್ಲೇ ಸವಾರ ಸಾವು

ಬೆಟ್ಟದಪುರ, ಜೂ.18– ಬೈಕ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಸವಾರ ಸ್ಥಳದಲ್ಲೇ ಸಾವನ್ನಪ್ಪಿರುವ ಘಟನೆ ಸೋಮವಾರ ರಾತ್ರಿ ಹಾಡ್ಯ ಗೇಟ್ ಬಳಿ ನಡೆದಿದೆ.



ಕೆ.ಆರ್.ನಗರ ತಾಲೂಕಿನ ಅಂಕನಹಳ್ಳಿ ಕೊಪ್ಪಲು ಗ್ರಾಮದ ನಿವಾಸಿ ಮೃತ್ಯುಂಜಯ (33) ಸಾವನ್ನಪ್ಪಿದವರು. ಈತ ವಡ್ಡರಹೊಸಹಳ್ಳಿ ಗ್ರಾಮದಲ್ಲಿ ಜಮೀನು ಮಾಡಿಕೊಂಡು ಶುಂಠಿ ಬೇಸಾಯ ಮಾಡುತ್ತಿದ್ದರು. ಜಮೀನಿಗೆ ಹೋಗಿ ಸ್ವಗ್ರಾಮಕ್ಕೆ ವಾಪಸ್ ಬರುವಾಗ ಹಾಡ್ಯ ಗೇಟ್ ಬಳಿ ಕಾರು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ತೀವ್ರ ಗಾಯಗೊಂಡ ಮೃತ್ಯುಂಜಯ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಮೃತನ ಪತ್ನಿ ಶಾಂಭವಿ ಬೆಟ್ಟದಪುರ ಠಾಣೆಗೆ ದೂರು ನೀಡಿದ್ದಾರೆ. ಸ್ಥಳಕ್ಕೆ ಬೆಟ್ಟದಪುರ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲಿಸಿ, ಶವವನ್ನು ಕೆ.ಆರ್.ನಗರ ಠಾಣೆಗೆ ರವಾನಿಸಿ ಮರಣೋತ್ತರ ಪರೀಕ್ಷೆ ಬಳಿಕ ವಾರಸುದಾರರಿಗೆ ಒಪ್ಪಿಸಿದರು. ಈ ಸಂಬಂಧ ಬೆಟ್ಟದಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಖಿನ್ನತೆಯಿಂದ ವ್ಯಕ್ತಿ ಸಾವು



ಹಿರೀಕ್ಯಾತನಹಳ್ಳಿ, ಜೂ.18– ಖಿನ್ನತೆಗೆ ಒಳಗಾಗಿದ್ದ ವ್ಯಕ್ತಿ ಸಾವನ್ನಪ್ಪಿರುವ ಘಟನೆ ಮಂಗಳವಾರ ಹಿರೀಕ್ಯಾತನಹಳ್ಳಿಯಲ್ಲಿ ನಡೆದಿದೆ. ಗ್ರಾಮದ ನಿವಾಸಿ ಸತೀಶ್ ಸಾವನ್ನಪ್ಪಿದವರು.

ಸತೀಶ್ ಅವರ ಪುತ್ರಿ ಧನುಶ್ರೀ ಅನ್ಯ ಕೋಮಿನ ಯುವಕನನ್ನು ಪ್ರೀತಿಸುತ್ತಿದ್ದಳು. ಇದನ್ನು ಗಮನಿಸಿದ ಸತೀಶ್ ಅವರ ಪುತ್ರ ನಿತೀನ್ ಜ.24ರಂದು ತಾಯಿ ಅನಿತಾ ಹಾಗೂ ತಂಗಿ ಧನುಶ್ರೀ ಅವರನ್ನು ಸಮೀಪದ ಮರೂರು ಕೆರೆ ಬಳಿ ಕರೆದೊಯ್ದು ಇಬ್ಬರನ್ನು ನೀರಿನಲ್ಲಿ ಮುಳುಗಿಸಿ ಕೊಲೆ ಮಾಡಿ ಜೈಲು ಪಾಲಾಗಿದ್ದ. ಹೆಂಡತಿ, ಮಗಳ ಸಾವು ಹಾಗೂ ಮಗ ನಿತೀನ್ ಕೆ.ಆರ್.ನಗರ ಉಪ ಕಾರಾಗೃಹದಲ್ಲಿ ಇದ್ದಿದ್ದನ್ನು ಅರಗಿಸಿಕೊಳ್ಳಲು ಸಾಧ್ಯವಾಗದೇ ಒಬ್ಬಂಟಿಯಾಗಿ ಖಿನ್ನತೆಗೆ ಒಳಗಾಗಿದ್ದ ಸತೀಶ್ ಮಂಗಳವಾರ ಅವರ ನಿವಾಸದಲ್ಲಿ ಸಾವನ್ನಪ್ಪಿದ್ದಾರೆ.

ನಾಳೆ ಸುನೀಲ್ ಬೋಸ್, ಡಾ.ಯತೀಂದ್ರಗೆ ಸನ್ಮಾನ

ತಿ.ನರಸೀಪುರ, ಜೂ.18– ಸಂಸದ ಸುನೀಲ್ ಬೋಸ್ ಹಾಗೂ ನೂತನ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ ಸಿದ್ದರಾಮಯ್ಯ ಅವರನ್ನು ಜೂ.20ರಂದು ಪಟ್ಟಣದ ಮಹದೇವಪ್ಪ ಸ್ಮಾರಕ ಭವನದಲ್ಲಿ ಅದ್ಧೂರಿಯಾಗಿ ಸನ್ಮಾನಿಸಲಾಗುವುದು ಎಂದು ಮೈಮುಲ್ ನಿರ್ದೇಶಕ ಆರ್.ಚೆಲುವರಾಜ್ ತಿಳಿಸಿದರು.



ಸಭೆಯಲ್ಲಿ ಮೈಮುಲ್ ನಿರ್ದೇಶಕ ಆರ್.ಚೆಲುವರಾಜ್ ಮಾತನಾಡಿದರು.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದ ಅವರು, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ 1.80 ಲಕ್ಷ ಮತಗಳಿಂದ ಅಭೂತಪೂರ್ವ ಗೆಲುವು ಸಾಧಿಸಿದ ಸಂಸದ ಸುನೀಲ್ ಬೋಸ್ ಹಾಗೂ ಎಂಎಲ್‌ಸಿ ಡಾ.ಯತೀಂದ್ರ ಅವರನ್ನು ಅದ್ಧೂರಿಯಾಗಿ ಸನ್ಮಾನಿಸಲು ನಿರ್ಧರಿಸಿದ್ದು, ಜೂ.20ರಂದು ಪಟ್ಟಣದ ನಂಜನಗೂಡು ರಸ್ತೆಯ ಮಹದೇವಪ್ಪ ಸ್ಮಾರಕ ಭವನದಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ನೂತನ ಸಂಸದ ಸುನೀಲ್ ಬೋಸ್ ಅವರಿಗೆ ಕ್ಷೇತ್ರದ ಜನತೆ ಅತ್ಯಧಿಕ ಮತಗಳನ್ನು ನೀಡಿ ಜಯ ತಂದುಕೊಟ್ಟಿದ್ದಾರೆ. ಬೋಸ್ ಅವರು ಇದೇ ಮೊದಲ ಬಾರಿಗೆ ಲೋಕಸಭೆ ಪ್ರವೇಶಿಸಿದ್ದು, ತಮ್ಮ ತಂದೆ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರಂತೆಯೇ ಹೆಚ್ಚಿನ ಅನುದಾನ ತಂದು ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಅಂದು ನಡೆಯುವ ಅಭಿನಂದನಾ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ತಾಪಂ ಮಾಜಿ ಅಧ್ಯಕ್ಷ ಎಂ.ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, ಅಂದು ಬೆಳಗ್ಗೆ 10 ಗಂಟೆಗೆ ಪಟ್ಟಣಕ್ಕೆ ಆಗಸುವ ಸಂಸದ ಸುನೀಲ್ ಬೋಸ್ ಹಾಗೂ ಎಂಎಲ್‌ಸಿ ಡಾ.ಯತೀಂದ್ರಅವರಿಗೆಪಿಡಬ್ಲ್ಯೂಡಿ ಅತಿಥಿ ಗೃಹದ ಬಳಿ ಅದ್ಧೂರಿ ಸ್ವಾಗತ ನೀಡಲಾಗುತ್ತದೆ. ಅಲ್ಲಿಂದ ತೆರೆದ ಜೀಪಿನ ಮೂಲಕ ಕಾರ್ಯಕ್ರಮ ನಡೆಯುವ ಮಹದೇವಪ್ಪ ಸ್ಮಾರಕ ಭವನಕ್ಕೆ ವಿವಿಧ ಸಾಂಸ್ಕೃತಿಕ ಕಲಾ ತಂಡದೊಂದಿಗೆ ಮೆರವಣಿಗೆ ಮೂಲಕ ಕರೆತಂದು ನೆನಪಿನ ಕಾಣಿಕೆ ನೀಡಿ ಸನ್ಮಾನಿಸಲಾಗುತ್ತದೆ ಎಂದರು.

ಸಭೆಯಲ್ಲಿ ಜಿಪಂ ಮಾಜಿ ಅಧ್ಯಕ್ಷ ಸಿದ್ದಾರ್ಥ, ಸೋಸಲೆ ಪಿಎಸಿಎಸ್ ಅಧ್ಯಕ್ಷ ಪರಶಿವಮೂರ್ತಿ, ಪಿಕಾರ್ಡ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ವಜ್ರೇಗೌಡ, ಪುರಸಭಾ ಮಾಜಿ ಅಧ್ಯಕ್ಷ ಮುನಾವರ್ ಪಾಷ, ಎಸ್ಸಿ, ಎಸ್ಟಿ ಹಿತರಕ್ಷಣಾ ಸಮಿತಿಯ ಸದಸ್ಯ ಮಹದೇವಸ್ವಾಮಿ, ಆಪ್ತ ಸಹಾಯಕ ಬಸವರಾಜು, ಪಾರುಪತ್ತೇದಾರ್ ಸಾಗರ್, ರಾಘವೇಂದ್ರ, ಪುರಸಭಾ ಮಾಜಿ ಅಧ್ಯಕ್ಷ ಕನಕ ಪಾಪು, ಬಸವಣ್ಣ, ತಾಪಂ ಮಾಜಿ ಅಧ್ಯಕ್ಷ ಉಮೇಶ್, ಸದಸ್ಯರಾದ ನರಸಿಂಹ ಮಾದನಾಯ್ಕ, ಗಣೇಶ್, ರಾಮಲಿಂಗಯ್ಯ, ಶಿವಸ್ವಾಮಿ, ಕೆಬ್ಬೆರಂಗಪ್ಪ, ಟೌನ್ ಅಧ್ಯಕ್ಷ ಅಂದಾನಿ, ಗ್ರಾಪಂ ಮಾಜಿ ಅಧ್ಯಕ್ಷ ಶಿವರಾಮು, ಬ್ಲಾಕ್ ಅಧ್ಯಕ್ಷ ಚನ್ನಕೇಶವ, ಗ್ರಾಪಂ ಸದಸ್ಯ ಕಲಿಯೂರು ಶಿವಣ್ಣ, ಕೆಬ್ಬೆಹುಂಡಿ ಮಹೇಶ್ ಮತ್ತಿತರಿದ್ದರು.

ಸಂಸದ, ಶಾಸಕರಿಂದ ರೈಲ್ವೆ ಮೇಲ್ಸೇತುವೆ ಕಾಮಗಾರಿ ವೀಕ್ಷಣೆ

ನಂಜನಗೂಡು, ಜೂ.18– ನಗರದ ಅಪೋಲೊ ವೃತ್ತದ ಬಳಿಯ ರೈಲ್ವೆ ಲೆವೆಲ್ ಕ್ರಾಸಿಂಗ್ (ಗೇಟ್) ಉಳಿಸುವಂತೆ ಚಾಮಲಾಪುರ ಹುಂಡಿ ಗ್ರಾಮಸ್ಥರು ಮನವಿ ಮಾಡಿದ ಮೇರೆಗೆ ಮಂಗಳವಾರ ಸಂಸದ ಸುನೀಲ್ ಬೋಸ್ ಹಾಗೂ ಶಾಸಕ ದರ್ಶನ್ ನೂತನ ಮೇಲ್ಸೇತುವೆ ಕಾಮಗಾರಿ ವೀಕ್ಷಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದ ಸುನೀಲ್ ಬೋಸ್, ನೂತನ ಮೇಲ್ಸೇತುವೆ ಕಾಮಗಾರಿ ಪೂರ್ಣಗೊಂಡಿದ್ದು, ರೈಲ್ವೆ ಇಲಾಖೆ ಲೆವೆಲ್ ಕ್ರಾಸಿಂಗ್ ಅನ್ನು ಮುಚ್ಚಲು ಸಿದ್ಧತೆ ಮಾಡಿಕೊಳ್ಳುತ್ತಿದೆ. ರೈಲ್ವೆ ಲೆವೆಲ್ ಕ್ರಾಸಿಂಗ್ ಮುಚ್ಚಿದರೆ ಹಬ್ಬಗಳ ಸಂದರ್ಭ ಗ್ರಾಮದಿಂದ ಹೊರಡುವ ದೇವರ ಮೆರವಣಿಗೆ ಹಾಗೂ ಗ್ರಾಮದಿಂದ ಪೂರ್ವಕ್ಕೆ ಇರುವ ಸ್ಮಶಾನಕ್ಕೆ ಪಾರ್ಥಿವ ಶರೀರಗಳನ್ನು ಕೊಂಡೊಯ್ಯಲು ತೊಂದರೆ ಉಂಟಾಗುತ್ತದೆ. ಆದ್ದರಿಂದ ರೈಲ್ವೆ ಲೆವೆಲ್ ಕ್ರಾಸಿಂಗ್ ಉಳಿಸಿಕೊಡುವಂತೆ ಚಾಮಲಾಪುರಹುಂಡಿ ಗ್ರಾಮಸ್ಥರು ಮನವಿ ಮಾಡಿದ್ದರು. ಈ ಹಿನ್ನಲೆಯಲ್ಲಿ ಸ್ಥಳ ಪರಿಶೀಲನೆ ನಡೆಸಿದ್ದೇನೆ. ಹಿಂದಿನಿಂದಲೂ ಗ್ರಾಮಸ್ಥರು ದೇವತಾ ಕಾರ್ಯಗಳ ಮೆರವಣಿಗೆ ಹಾಗೂ ಸ್ಮಶಾನಕ್ಕೆ ತೆರಳಲು ಈ ಹಾದಿ ಬಳಸುತ್ತಿದ್ದರು. ಹೀಗಾಗಿ ಗ್ರಾಮಸ್ಥರ ಆಶಯದಂತೆ ರೈಲ್ವೆ ಲೆವೆಲ್ ಕ್ರಾಸಿಂಗ್ ಉಳಿಸಿ ಅನುಕೂಲ ಮಾಡಿಕೊಡುವಂತೆ ರೈಲ್ವೆ ಅಧಿಕಾರಿಗಳಿಗೆ ಮನವಿ ಮಾಡಿದ್ದೇನೆ ಎಂದರು.

ಈ ವೇಳೆ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಸಿ.ಎಂ.ಶಂಕರ್, ಮಹದೇವಪ್ಪ, ಇಂಧನ್ ಬಾಬು, ತಾಪಂ ಮಾಜಿ ಅಧ್ಯಕ್ಷ ತಮ್ಮಣ್ಣೇಗೌಡ, ಜಿಪಂ ಮಾಜಿ ಸದಸ್ಯ ಕೆ.ಬಿ.ಸ್ವಾಮಿ, ಕುರುಬರ ಸಂಘದ ಅಧ್ಯಕ್ಷ ಕೆಂಪಣ್ಣ, ಸಿ.ಆರ್.ಮಹದೇವು ಇನ್ನಿತರರಿದ್ದರು.

ಮುದ್ದಹಳ್ಳಿಯಲ್ಲಿ ಶಾಸಕ ದರ್ಶನ್ ನೇತೃತ್ವದಲ್ಲಿ ಜನಸಂಪರ್ಕ ಸಭೆ

ಅಕ್ರಮ ಮದ್ಯ ಮಾರಾಟ ತಡೆಗಟ್ಟಲು ಆಗ್ರಹ



ಜನಸಂಪರ್ಕ ಸಭೆಯಲ್ಲಿ ಶಾಸಕ ದರ್ಶನ್ ಮಾತನಾಡಿದರು.

ನಂಜನಗೂಡು, ಜೂ.18– ಗ್ರಾಮದ ಕೆಲ ದಿನಸಿ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ವ್ಯಾಪಕವಾಗಿ ನಡೆಯುತ್ತಿದ್ದು, ಅದಕ್ಕೆ ಕಡಿವಾಣ ಹಾಕುವಂತೆ ಮುದ್ದಹಳ್ಳಿ ಮಹಿಳೆಯರು ಶಾಸಕರಿಗೆ ಮನವಿ ಮಾಡಿದರು.

ತಾಲೂಕಿನ ಮುದ್ದಹಳ್ಳಿ ಗ್ರಾಮದಲ್ಲಿ ಮಂಗಳವಾರ ಶಾಸಕ ದರ್ಶನ್ ನೇತೃತ್ವದಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಮಹಿಳೆಯರು ಶಾಸಕರಿಗೆ ಅಹವಾಲು ಸಲ್ಲಿಸಿದರು.

ಗ್ರಾಮದ ನಿವಾಸಿ ಪವಿತ್ರ ಮಾತನಾಡಿ, ಗಂಡಸರು ತಾವು ದುಡಿದ ಹಣವನ್ನು ಕುಡಿತಕ್ಕೆ ಖರ್ಚು ಮಾಡುತ್ತಿದ್ದಾರೆ. ನಿತ್ಯ ಕುಡಿದು ಬಂದು ಹೊಡೆಯುವುದು, ಮನೆಯ ಪದಾರ್ಥಗಳನ್ನು ಒಡೆದು ಹಾಳು ಮಾಡುವುದು ಸಾಮಾನ್ಯವಾಗಿದೆ. ಹೀಗಾಗಿ ದಯಮಾಡಿ ಸರ್ಕಾರ ಪಡಿತರ ಅಕ್ಕಿ, 2 ಸಾವಿರ ಸಹಾಯಧನ ನಿಲ್ಲಿಸಿದರೂ ಪರವಾಗಿಲ್ಲ ಅಕ್ರಮ ಮದ್ಯ ಮಾರಾಟ ತಪ್ಪಿಸಿ ಎಂದು ಮನವಿ ಮಾಡಿದರು. ಇದೇ ವೇಳೆ ಗ್ರಾಮದ ಮಹಿಳೆಯರೆಲ್ಲರೂ ಇದಕ್ಕೆ ದನಿಗೂಡಿಸಿ ಮದ್ಯ ಮಾರಾಟ ತಡೆಗಟ್ಟುವಂತೆ ಆಗ್ರಹಿಸಿದರು.

ಗ್ರಾಮದ ವಿಜಯಲಕ್ಷ್ಮಿ ಮಾತನಾಡಿ, ನಮ್ಮ ತೋಟದ ಸಮೀಪದಲ್ಲಿರುವ ಕ್ರಷರ್‌ನಿಂದ ಸುತ್ತಮುತ್ತಲ 1ಕಿಮೀ ವ್ಯಾಪ್ತಿಯ ಪರಿಸರ ಹಾಳಾಗಿದೆ. ಕ್ರಷರ್‌ನ ಧೂಳು, ಕರ್ಕಶ ಶಬ್ದದಿಂದಾಗಿ ತೋಟದ ಮನೆಯಲ್ಲಿ ವಾಸಿಸಲು ಸಾಧ್ಯವಾಗುತ್ತಿಲ್ಲ. ನಮ್ಮ ತೋಟದಲ್ಲಿ ಬೆಳೆದಿರುವ ತೆಂಗು, ಹಣ್ಣಿನ ಗಿಡಗಳಿಗೆ ಧೂಳಿನಿಂದ ತೊಂದರೆಯಾಗಿದ್ದು, ಇಳುವರಿ ಕಡಿಮೆಯಾಗಿದೆ. ಕ್ರಷರ್ ಅನ್ನು ಸ್ಥಳಾಂತರಿಸಿ ಅನುಕೂಲ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ಗ್ರಾಮಸ್ಥರು ಮಾತನಾಡಿ, ಗ್ರಾಮದ ಪ್ರಬಲ ವ್ಯಕ್ತಿಗಳು 10 ಎಕರೆಗೂ ಹೆಚ್ಚು ಸರ್ಕಾರಿ ಭೂಮಿ ವಶಪಡಿಸಿಕೊಂಡು ಬೇಸಾಯ ಮಾಡುತ್ತಿದ್ದಾರೆ. ಆದರೆ ಗ್ರಾಮದ ಸಣ್ಣ ಹಿಡುವಳಿ ರೈತರು ವ್ಯವಸಾಯ ಮಾಡುತ್ತಿರುವ ಅರ್ಧ ಎಕರೆ ಭೂಮಿಯನ್ನು ಅಕ್ರಮ ಸಾಗುವಳಿ ಎಂದು ತಹಸೀಲ್ದಾರ್ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಿದ್ದಾರೆ. ನಾವು ವ್ಯವಸಾಯ ಮಾಡುತ್ತಿರುವ ಭೂಮಿಯನ್ನು ಉಳಿಸಿಕೊಡಿ ಎಂದು ಮನವಿ ಮಾಡಿದರು.

ನಿವಾಸಿ ಚಿನ್ನಸ್ವಾಮಿ ಮಾತನಾಡಿ, ಮುದ್ದಹಳ್ಳಿ ಹಾಗೂ ಸಿಂಧುವಳ್ಳಿ ಗ್ರಾಮಗಳಲ್ಲಿ ಚಿರತೆ ಕಾಟ ಹೆಚ್ಚಾಗಿದೆ. ನಮ್ಮ ಜಾನುವಾರುಗಳು ಚಿರತೆಗೆ ಬಲಿಯಾಗುತ್ತಿವೆ. ಚಿರತೆ ಕಾಣಿಸಿಕೊಂಡಾಗ ಅರಣ್ಯ ಅಧಿಕಾರಿಗಳಿಗೆ ಕರೆ ಮಾಡಿದರೆ ಸ್ಪಂದಿಸುವುದಿಲ್ಲ ಎಂದು ದೂರಿದರು. ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ತಾಲೂಕು ಕಾಂಗ್ರೆಸ್ ಅಧ್ಯಕ್ಷ ಮಹೇಶ್, ಹುಲ್ಲಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠ ನಾಯಕ, ನವಿಲೂರು ಗ್ರಾಪಂ ಅಧ್ಯಕ್ಷ ರೇವಣ್ಣ, ಮುಖಂಡರಾದ ಶಿವಬಸಪ್ಪ, ಶಿವಪ್ಪ ದೇವರು, ರಾಜೇಶ್, ದೊರೆಸ್ವಾಮಿ ನಾಯಕ, ತಹಸೀಲ್ದಾರ್ ಶಿವಕುಮಾರ್ ಕಾಸ್ನೂರ್ ಉಪಸ್ಥಿತರಿದ್ದರು.

ಎಲ್ಲಾ ಸಮಸ್ಯೆ ಬಗೆಹರಿಸಲು ಕ್ರಮ

ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ತಡೆಯಲು ಕ್ರಮ ವಹಿಸಲಾಗುವುದು. ಗ್ರಾಮದಲ್ಲಿ ಜನಸಂಪರ್ಕ ಸಭೆ ನಡೆಸುತ್ತಿದ್ದರೂ ಹಾಜರಾಗದ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ನೋಟಿಸ್ ಜಾರಿ ಮಾಡಿ ಎಂದು ಶಾಸಕ ದರ್ಶನ್ ತಹಸೀಲ್ದಾರ್‌ಗೆ ಸೂಚಿಸಿದರು.

ಅಕ್ರಮ ಮದ್ಯ ಮಾರಾಟ ತಡೆಯಬೇಕಾದ ಅಬಕಾರಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ಸಮಸ್ಯೆ ಉಂಟಾಗಿದೆ. ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು. ಪೊಲೀಸರು ಅಕ್ರಮ ಮದ್ಯ ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮವಹಿಸಬೇಕು. ಕ್ರಷರ್‌ನಿಂದ ಉಂಟಾಗುತ್ತಿರುವ ತೊಂದರೆ ಬಗ್ಗೆ ಹಲವು ದೂರುಗಳು ಬಂದಿವೆ. ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಕ್ರಮವಹಿಸಬೇಕು. ಈ ಬಗ್ಗೆ ಹಿರಿಯ ಅಧಿಕಾರಿಗಳ ಜೊತೆಗೆ ಮಾತನಾಡಿ ಸಮಸ್ಯೆಗೆ ಪರಿಹಾರ ನೀಡಲಾಗುವುದು. ಮುದ್ದಹಳ್ಳಿ ಹಾಗೂ ಸಿಂಧುವಳ್ಳಿ ಗ್ರಾಮಗಳಲ್ಲಿ ಚಿರತೆ ಹಾವಳಿ ಹೆಚ್ಚಾಗಿದೆ. ಅರಣ್ಯ ಮಂತ್ರಿಗಳಿಗೆ ಮನವಿ ಮಾಡಿ ಹೆಚ್ಚಿನ ಬೋನ್‌ಗಳನ್ನು ತರಿಸಲಾಗಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಗ್ರಾಮಸ್ಥರೊಂದಿಗೆ ಸಹಕರಿಸಬೇಕು. ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಲು ಕ್ರಮ ವಹಿಸಲಾಗುವುದು ಎಂದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಹರೋಂ ಹರ (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಚಂದು ಚಾಂಪಿಯನ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಮಹಾರಾಜ (ತ)	4 ಪ್ರದರ್ಶನಗಳು
ಗಾಯಿತ್ರಿ	
ಜಡ್ಜ್‌ಮೆಂಟ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮಹಾರಾಜ (ತ)	4 ಪ್ರದರ್ಶನಗಳು
ಸಂಗಂ	
ಕೋಟಿ (ಕ)	4 ಪ್ರದರ್ಶನಗಳು
ಲಿಡೋ	
ಕರಟಕ ದಮನಕ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಮಹಾರಾಜ (ತ)	4 ಪ್ರದರ್ಶನಗಳು
ಪ್ರಭಾ	
ಅಮೀನ (ಹಿಂ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ಇನ್‌ಸೈಡ್ ಔಟ್ 2(3ಡಿ) (ಇಂ): ಬೆ.10.15ಕ್ಕೆ, ಮ.12.15ಕ್ಕೆ, ಮ.2.15ಕ್ಕೆ, ಚಂದು ಚಾಂಪಿಯನ್ (ಹಿಂ): ಸಂ.4.15ಕ್ಕೆ, ರಾ.7.05ಕ್ಕೆ, ರಾ.10.05ಕ್ಕೆ.
ಸ್ಕ್ರೀನ್ 2	ಲವ್ ಲಿ (ಕ): ಬೆ.11ಕ್ಕೆ, ರಾ.7ಕ್ಕೆ, ಮುಂಜ್ಯಾ (ಹಿಂ): ಮ.2.15ಕ್ಕೆ, ಶಿವಮ್ಮ ಯರೆಹಂಚಿನಾಳ (ಕ): ಸಂ.4.40ಕ್ಕೆ, ಹರೋಂ ಹರ (ತೆ): ರಾ.10.15ಕ್ಕೆ.
ಸ್ಕ್ರೀನ್ 3	ಮುಂಜ್ಯಾ (ಹಿಂ): ಬೆ.10.40ಕ್ಕೆ, ಮಹಾರಾಜ (ತ): ಮ.1.15ಕ್ಕೆ, ಸಂ.4.20ಕ್ಕೆ, ಚೆಫ್ ಚಿದಂಬರ (ಕ): ರಾ.7.20ಕ್ಕೆ, ಡಿಎನ್‌ಎ (ಮ): ರಾ.9.50ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.10ಕ್ಕೆ, ಮ.1.25ಕ್ಕೆ, ಸಂ.6.45ಕ್ಕೆ, ರಾ.10ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಸಂ.4.40ಕ್ಕೆ.

ಐನಾಕ್ಸ್ ಮೂವೀಸ್

ದೂ : 2533444 / 2433456

ಸ್ಕ್ರೀನ್ 1	ಇನ್‌ಸೈಡ್ ಔಟ್ (3ಡಿ)(ಹಿಂ): ಬೆ.11ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ಮ.1.20ಕ್ಕೆ, ಸಂ.4.20ಕ್ಕೆ, ಸಂ.6.40ಕ್ಕೆ, ಮುಂಜ್ಯಾ (ಹಿಂ): ರಾ.9ಕ್ಕೆ.
ಸ್ಕ್ರೀನ್ 2	ಮುಂಜ್ಯಾ (ಹಿಂ): ಬೆ.10ಕ್ಕೆ, ರಾ.7.35ಕ್ಕೆ, ರಾಕ್‌ಸ್ಟಾರ್ (ಹಿಂ): ಮ.12.45ಕ್ಕೆ, ಕೋಟಿ (ಕ): ಸಂ.4.05ಕ್ಕೆ, ರಾ.10.20ಕ್ಕೆ,
ಸ್ಕ್ರೀನ್ 3	ಚಂದು ಚಾಂಪಿಯನ್ (ಹಿಂ): ಬೆ.9.50ಕ್ಕೆ, ಮ.1ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.05ಕ್ಕೆ, ಮಹಾರಾಜ (ತ): ಮ.1.35ಕ್ಕೆ, ರಾ.7.05ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಸಂ.4.40ಕ್ಕೆ, ಜಿಆರ್‌ಆರ್‌ಆರ್ (ಮ): ರಾ.10.10ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ಚೆಫ್ ಚಿದಂಬರ (ಕ): ಬೆ.11.15ಕ್ಕೆ, ಶಿವಮ್ಮ ಹರೆಹಂಚಿನಾಳ (ಕ): ಮ.1.30ಕ್ಕೆ, ಮ್ಯೂಸಿಕ್ ಶಾಪ್ ಮೂರ್ತಿ (ತೆ): ಮ.3.45ಕ್ಕೆ, ಹರೋಂ ಹರ (ತೆ): ಸಂ.6.15ಕ್ಕೆ, ಮಹಾರಾಜ (ತ): ರಾ.9.15ಕ್ಕೆ.
ಸ್ಕ್ರೀನ್ 2	ಇನ್‌ಸೈಡ್ ಔಟ್ (3ಡಿ)(ಇಂ): ಬೆ.11ಕ್ಕೆ, ಕೋಟಿ (ಕ): ಮ.1ಕ್ಕೆ, ಸಂ.4.15ಕ್ಕೆ, ರಾ.7.30ಕ್ಕೆ.
ಸ್ಕ್ರೀನ್ 3	ಲವ್ ಲಿ (ಕ): ಮ.1ಕ್ಕೆ, ಮಹಾರಾಜ (ತ): ಸಂ.4.05ಕ್ಕೆ, ಸಂ.6.45ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ರಾ.9.30ಕ್ಕೆ.
ಸ್ಕ್ರೀನ್ 4	ಕೋಟಿ (ಕ): ಬೆ.10.40ಕ್ಕೆ, ರಾ.9.20ಕ್ಕೆ, ಚೆಫ್ ಚಿದಂಬರ (ಕ): ಮ.1.55ಕ್ಕೆ, ಲವ್ ಲಿ (ಕ): ಸಂ.4.10ಕ್ಕೆ, ಇನ್‌ಸೈಡ್ ಔಟ್ (3ಡಿ)(ಇಂ): ರಾ.7.20ಕ್ಕೆ

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ವರ್ಗಾವಣೆಗೊಂಡ ಬ್ಯಾಂಕ್ ವ್ಯವಸ್ಥಾಪಕರಿಗೆ ಬೀಳ್ಕೊಡುಗೆ

ತಿ.ನರಸೀಪುರ, ಜೂ.18– ಪಟ್ಟಣದ ಯೂನಿಯನ್ ಬ್ಯಾಂಕ್‌ನಲ್ಲಿ ಕಾರ್ಯ ನಿರ್ವಹಿಸಿ ಮಂಗಳೂರಿನ ಕೊಡಿಯಾಲ ಬೈಲ್ ಶಾಖೆಗೆ ವರ್ಗಾವಣೆಗೊಂಡ ವ್ಯವಸ್ಥಾಪಕ ಮಣಿಕುಮಾರ್ ಅವರನ್ನು ಬ್ಯಾಂಕ್ ಆವರಣದಲ್ಲಿ ಶ್ರೀಮಹರ್ಷಿ ವಾಲ್ಮೀಕಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು.



ಯೂನಿಯನ್ ಬ್ಯಾಂಕ್ ವ್ಯವಸ್ಥಾಪಕ ಮಣಿಕುಮಾರ್ ಅವರನ್ನು ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬ್ಯಾಂಕ್ ವ್ಯವಸ್ಥಾಪಕ ಮಣಿಕುಮಾರ್, ಬ್ಯಾಂಕ್ ಆದೇಶದಂತೆ ತಾವು ಮತ್ತೊಂದು ಕಡೆ ಹೋಗುವುದು ಅನಿವಾರ್ಯ. ಕಳೆದ 4 ವರ್ಷಗಳಿಂದ ಬ್ಯಾಂಕ್‌ನ ಗ್ರಾಹಕರ ಜೊತೆಗೆ ಉತ್ತಮ ಬಾಂಧವ್ಯ ಇಟ್ಟುಕೊಂಡು ಕೆಲಸ ಮಾಡಿದ್ದು ಸಂತಸ ತಂದಿದೆ ಎಂದರು.

ರಾಜ್ಯ ಜೆಡಿಎಸ್ ಮಾಧ್ಯಮ ವಕ್ತಾರ ತಾಯೂರು ಪ್ರಕಾಶ್ ಮಾತನಾಡಿ, ವ್ಯವಸ್ಥಾಪಕ ಮಣಿಕುಮಾರ್ ಅವರು ಕಳೆದ 4 ವರ್ಷಗಳಿಂದ ಗ್ರಾಹಕರಿಗೆ ಉತ್ತಮ ಸೇವೆ ನೀಡುವಲ್ಲಿ ಯಶಸ್ವಿಯಾಗಿದ್ದಾರೆ. ಗ್ರಾಹಕರ ಪ್ರೀತಿ, ವಿಶ್ವಾಸ ಗಳಿಸಿ ಬ್ಯಾಂಕ್ ವ್ಯವಹಾರವನ್ನು ಉತ್ತಮಗೊಳಿಸಿದ್ದಾರೆ. ಅವರು ಇನ್ನೂ ಕೆಲ ವರ್ಷ ಇದೇ ಶಾಖೆಯಲ್ಲೇ ಮುಂದುವರೆಯುವ ಅವಕಾಶ ನೀಡಬೇಕಿತ್ತು. ಆದರೆ ಬ್ಯಾಂಕ್ ಮುಖ್ಯಸ್ಥರ ಆದೇಶದ ಮೇರೆಗೆ ವರ್ಗಾವಣೆಗೊಂಡಿದ್ದಾರೆ. ಅವರು ಹೋದಲ್ಲೆಲ್ಲಾ ಉತ್ತಮ ಕಾರ್ಯ ನಿರ್ವಹಿಸಿ ಹೆಸರುಗಳಿಸಲಿ ಎಂದು ಆಶಿಸಿದರು.

ಈ ವೇಳೆ ಮಹರ್ಷಿ ವಾಲ್ಮೀಕಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷ ಯಡದೊರೆ ಮಹೇಶ್ ನಾಯಕ್, ಓಂ ಗುರು ಶಿವಣ್ಣ, ಸಂತೃಪ್ತಿ ಕುಮಾರ್, ಪೂಜಿತ್ ಮೆಡಿಕಲ್ ಕುಮಾರ್, ಬ್ಯಾಂಕ್ ಸಹಾಯಕ ವ್ಯವಸ್ಥಾಪಕಿ ಶಾಲಿನಿ, ಸಿಬ್ಬಂದಿಗಳಾದ ಅರುಣ, ಮಧುಸೂದನ್, ಪ್ರತಾಪ್ ಹಾಜರಿದ್ದರು.

ಬ್ರೇಕ್ ಫೇಲ್: ಜಮೀನಿಗೆ ನುಗ್ಗಿದ ಸಾರಿಗೆ ಬಸ್



ನಂಜನಗೂಡು, ಜೂ.18– ಬ್ರೇಕ್ ಫೇಲ್ ಆಗಿ ಚಾಲಕನ ನಿಯಂತ್ರಣ ತಪ್ಪಿದ ಕೆಎಸ್‌ಆರ್‌ಟಿಸಿ ಬಸ್ ಜಮೀನಿಗೆ ನುಗ್ಗಿರುವ ಘಟನೆ ತಾಲೂಕಿನ ದೇವರಾಯಶೆಟ್ಟಿ ಗ್ರಾಮದ ಬಳಿ ನಡೆದಿದೆ. ಬೆಳಗ್ಗೆ ನಂಜನಗೂಡಿನ ಕೊತ್ತನಹಳ್ಳಿ ಮಾರ್ಗವಾಗಿ ಹೆಚ್.ಡಿ.ಕೋಟೆಗೆ ತೆರಳುತ್ತಿದ್ದ ಸಾರಿಗೆ ಬಸ್ ಬ್ರೇಕ್ ಫೇಲ್ ಆಗಿ ಜಮೀನಿಗೆ ನುಗ್ಗಿದೆ. ಈ ವೇಳೆ ಚಾಲಕನ ಸಮಯ ಪ್ರಜ್ಞೆಯಿಂದಾಗಿ ಬಸ್‌ನಲ್ಲಿದ್ದ 30ಕ್ಕೂ ಹೆಚ್ಚು ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಶಾಂತ ನಾಗೇಂದ್ರ ಗುಪ್ತ ನಿಧನ



ಹುಣಸೂರು, ಜೂ.18– ನಗರದ ಹಳೆ ಸೇತುವೆ ನಿವಾಸಿ ಗುಪ್ತ ಸೆರಾಮಿಕ್ ಮಾಲೀಕ ಸುಬ್ಬರಾಜು ಅವರ ತಾಯಿ ಶಾಂತ ನಾಗೇಂದ್ರ ಗುಪ್ತ (83) ಸೋಮವಾರ ಸಂಜೆ ನಿಧನರಾದರು. ಮೃತರು ನಾಲ್ವರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ನಗರದ ತಾಲೂಕು ಕಚೇರಿ ಬಳಿಯ ರುದ್ರಭೂಮಿಯಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಜಯಲಕ್ಷ್ಮಿ



ಸರಗೂರು, ಜೂ.18– ಪಟ್ಟಣದ ವಿಜಯ ಕುಮಾರ್ ಲಾರಿ ಟ್ರಾನ್ಸ್‌ಪೋರ್ಟ್ ಮಾಲೀಕ ವಿಜಯ್ ಕುಮಾರ್ ಅವರ ತಾಯಿ ಜಯಲಕ್ಷ್ಮಿ (78) ಸೋಮವಾರ ರಾತ್ರಿ ನಿಧನರಾದರು. ಮೃತರು ಇಬ್ಬರು ಪುತ್ರರು, ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮಂಗಳವಾರ ಸೋಮೇಶ್ವರ ದೇವಾಲಯ ಬಳಿಯ ಕಪಿಲಾ ನದಿ ದಡದಲ್ಲಿ ನಡೆಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಉತ್ತರ ಕ್ರಿಯಾದಿ ಭೂಶಾಂತಿ ಆಹ್ವಾನ ಪತ್ರಿಕೆ



ಶ್ರೀ ಸಿದ್ದಬಸವೇಗೌಡ B.Com., G.D.C.
(ನಿವೃತ್ತ ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್)
(ಮೂಲ ವಿಳಾಸ: ಕಜ್ಜಿಹುಂಡಿ ಗ್ರಾಮ ಕೊಳ್ಳೆಗಾಲ ತಾ||)

ಇವರು ದಿನಾಂಕ 10-06-2024ನೇ ಸೋಮವಾರ ದೈವಾಧೀನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ತತ್ಸಂಬಂಧವಾಗಿ ದಿನಾಂಕ 20-06-2024ನೇ ಗುರುವಾರ ಮಧ್ಯಾಹ್ನ 12-30 ರಿಂದ 1-30 ರವರೆಗೆ ಹಾಲುತುಪ್ಪ ಮತ್ತು ಉತ್ತರ ಕ್ರಿಯಾದಿ ಕಾರ್ಯವನ್ನು ನಮ್ಮ ಸ್ವಗೃಹ ಟಿ.ನರಸೀಪುರ ಟೌನ್, ವಿದ್ಯಾನಗರ, ಹೊಸ ಬಡಾವಣೆ, ಹೌಸಿಂಗ್ ಬೋರ್ಡ್ ಇಲ್ಲಿ ಏರ್ಪಡಿಸಿರುವುದರಿಂದ ಆಹ್ವಾನ ಪತ್ರಿಕೆ ತಲುಪದವರು ಇದನ್ನೇ ಆಹ್ವಾನವೆಂದು ತಿಳಿದು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತರು : ಶ್ರೀಮತಿ ರಾಜಮ್ಮ ಎಸ್. ಮತ್ತು ಮಕ್ಕಳು ಹಾಗೂ ಕುಟುಂಬವರ್ಗದವರು

25ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು



ಶ್ರೀಮತಿ ರಾಣಿ ಎಸ್ ಮತ್ತು ಶ್ರೀ ವಿಜಯಕುಮಾರ್ ಡಿ
ಮಾಜಿ ಗ್ರಾಮ ಪಂಚಾಯಿತಿ ಸದಸ್ಯರು, ಹಿನಕಲ್
ನಿರ್ದೇಶಕರು, ಮಹರ್ಷಿ ವಾಲ್ಮೀಕ ಪತ್ತಿನ ಸಹಕಾರ ಸಂಘ ನಿ., ಮೈಸೂರು, ನಿರ್ದೇಶಕರು, ಶ್ರೀ ಚಾಮುಂಡೇಶ್ವರಿ ವಿವಿದೋದ್ದೇಶ ಸಹಕಾರ ಸಂಘ, ಹಿನಕಲ್
ಶುಭಕೋರುವವರು: ಶ್ರೀನಿವಾಸ ಹೆಚ್.ವಿ
ಶ್ರೀಮತಿ ಗಗನ ವಿ ಮತ್ತು ಶ್ರೀ ಮಂಜುನಾಥ್ ಹಾಗೂ ಕುಟುಂಬವರ್ಗದವರು

Vidyavardhaka Sangha (R)
VIDYAVARDHAKA POLYTECHNIC
Vidyavardhaka Engineering College Campus,
3rd Stage, Gokulam, Mysore-570002 | Telefax: 0821-2419190
Email: vvpmysore@gmail.com | Website: www.vvpolytechnic.ac.in

APPOINTMENT NOTIFICATION Date: 15-06-2024

- **Lecturer in CS, ME & CE :** First Class in BE
- **Lab Instructor :** Diploma in CS with min.1 year experience

Please submit the application addressed to the Principal along with the copies of Certificates, Resume & Passport size photo within 7 days from the date of publication. Salary as per management norms.

Sd/- Principal | Sd/- Hon. President | Sd/- Hon. Secretary

ಕೇಂದ್ರೀಯ रेशम उत्पादन अनुसंधान एवं प्रशिक्षण संस्थान
CENTRAL SERICULTURAL RESEARCH & TRAINING INSTITUTE

[केन्द्रीय रेशम बोर्ड - वस्त्र मंत्रालय - भारत सरकार]
मानंदवाडी रोड, श्रीरामपुर
मैसूर - 570 008

[Central Silk Board - Min. of Textiles - Govt. of India]
Manandavadi Road, Srirampura
Mysore - 570 008

No.CSB/RTI/ES/PA-RCMT/2024-2025 Dated: 18.06.2024

WALK-IN-INTERVIEW FOR THE POST OF PROJECT ASSISTANTS

A Walk-in-Interview will be held on 22.06.2024 at Central Sericultural Research and Training Institute, Srirampura, Mysuru - 570 008 as shown below:

'A' 01 (One) ***Project Assistant*** purely on contract basis for a period of two years up to December 2025 or completion of project whichever is earlier under CSB approved project ***"Identification of a new male component for Pure Mysore replacing CSR2 (PMXCSR2) for better crop stability and silk quality"(SIB01040SIC)*** Qualific ations, B.Sc. in Sericulture with minimum 60% marks (55% for SC/ST candidates) Preference will be given for M.Sc., in Sericulture candidates with prior experience in the silkworm rearing. Walk-in-Interview will be held on ***22.06.2024***, time 10:30 AM (candidates should reach the venue by 09:30 AM for verification of documents).

'B' 01 (One) ***Project Assistant*** purely on contract basis for a period of four years up to March 2028 or completion of project whichever is earlier under CSB approved project ***"Utilization of Japanese Silkworm Genetic resources for the development of productive bivoltine hybrids" (SIB01038MGC).*** Qualifications, B.Sc., in Sericulture with minimum 60% marks (55% for SC/ST candidates). Preference will be given for M.Sc., in Sericulture candidates with prior experience in the silkworm rearing. Walk-in-Interview will be held on ***22.06.2024***, time 12:30 PM (candidates should reach the venue by 09:30 AM for verification of documents).

'C' 01 (One) ***Project Assistant*** purely on contract basis for a period of two years up to Feb 2026 or completion of project whichever is earlier under CSB approved project ***"Validation of SNP markers associated with economic traits in Bombyx mori L"(SIT08015 MIC)***. Qualifications, B.Sc./M.Sc., in Life sciences with minimum 60% marks (55% for SC/ST candidates). Preference will be given candidates with knowledge in silkworm rearing and genetics, Molecular biology experiments, data recording and computer basics. Walk-in-Interview will be held on ***22.06.2024***, time 02:30 PM (candidates should reach the venue by 01:00 PM for verification of documents).

Interested can also visit our website www.cstrimys.res.in for details.

Sd/- DIRECTOR

केन्द्रीय रेशम उत्पादन अनुसंधान एवं प्रशिक्षण संस्थान
CENTRAL SERICULTURAL RESEARCH & TRAINING INSTITUTE

[केन्द्रीय रेशम बोर्ड - वस्त्र मंत्रालय - भारत सरकार]
मानंदवाडी रोड, श्रीरामपुर
मैसूर - 570 008

[Central Silk Board - Min. of Textiles - Govt. of India]
Manandavadi Road, Srirampura
Mysore - 570 008

No.CSB/RTI/ES/PA-RCMT/2024-2025 Dated: 18.06.2024

WALK-IN-INTERVIEW FOR THE POST OF SEMI SKILLED WORKER

A Walk-in-Interview will be held on **20.06.2024** at Central Sericultural Research and Training Institute, Srirampura, Mysuru - 570 008 as shown below:

'A' engaging 01 (one) ***Semi Skilled Worker under the project entitled under the CSB approved project "Mitigating Human Animal Conflicts in Forest Fringe Village: Implementing Mulberry based cropping program for animal repellents" (PIC01044SNC)*** purely on contract basis for the period up to May 2026 or till completion of the project, whichever is earlier Qualifications-SSLC (10th Pass). Candidates experienced in the area of mulberry cultivation and raising saplings etc., will be preferred. Walk- in-Interview will be held on 20.06.2024, time 02:30 PM (candidates should reach the venue by 01:00 PM for verification of documents).

'B' engaging 01 (one) ***Semi Skilled Worker*** under the project entitled under the CSB approved project **"Mitigating Human Animal Conflicts in Forest Fringe Village: Implementing Mulberry based cropping program for animal repellents" (PIC01044SNC)** purely on contract basis for the period up to May 2026 or till completion of the project, whichever is earlier- Qualifications-SSLC (10th Pass). Candidates ready to work at Madahalli farm, Talawadi (T), Erode District, Tamil Nadu and experienced in the area of mulberry cultivation and raising saplings etc., will be preferred. Walk-in-Interview will be held on **20.06.2024,** time 02:30 PM (candidates should reach the venue by 01:00 PM for verification of documents).

Interested can also visit our website **www.cstrimys.res.in** for details.

Sd/- DIRECTOR

केन्द्रीय रेशम उत्पादन अनुसंधान एवं प्रशिक्षण संस्थान
CENTRAL SERICULTURAL RESEARCH & TRAINING INSTITUTE

[केन्द्रीय रेशम बोर्ड - वस्त्र मंत्रालय - भारत सरकार]
मानंदवाडी रोड, श्रीरामपुर
मैसूर - 570 008

[Central Silk Board - Min. of Textiles - Govt. of India]
Manandavadi Road, Srirampura
Mysore - 570 008

No.CSB/RTI/ES/PA-RCMT/2024-2025 Dated: 18.06.2024

WALK-IN-INTERVIEW FOR THE POST OF SEMI SKILLED

A Walk-in-Interview will be held on ***22.06.2024*** at Central Sericultural Research and Training Institute, Srirampura, Mysuru - 570 008 as shown below:

'A' 01 (One) ***Semi Skilled Worker*** purely on contract basis for a period of two years up to December 2025 or completion of project whichever is earlier under CSB approved project ***"Identification of a new male component for Pure Mysore replacing CSR2 (PMxCSR2) for better crop stability and silk quality" (SIB01040SIC)*** - Qualifications, SSLC (10th Pass) experience in the silkworm rearing. Walk-in-Interview will be held on 22.06.2024, time 10:30 AM (candidates should reach the venue by 09:30 AM for verification of documents).

'B' 01 (One) ***Semi Skilled Worker*** purely on contract basis for a period of four years up to March 2028 or completion of project whichever is earlier under CSB approved project ***"Utilization of Japanese Silkworm Genetic resources for the development of productive bivoltine hybrids" (SIB01038MGC).*** - Qualifications, SSLC (10th Pass) experience in the silkworm rearing. Walk-in-Interview will be held on 22.06.2024, time 12:30 PM (candidates should reach the venue by 09:30 AM for verification of documents).

Interested can also visit our website www.cstrimys.res.in for details.

Sd/- DIRECTOR

ಸೋ ಮತ್ತು ರೀಪ್ ಆಗ್ರೋ ಪ್ರೈ.ಲಿ. ಲಿಮಿಟೆಡ್
SOW REAP
ಪ್ಲಾಟ್ ಸಂಖ್ಯೆ 139 a/a, MLA ಕಾಲೋನಿ, ಬಂಜಾರಾ ಹಿಲ್ಸ್, ರಸ್ತೆ ಸಂಖ್ಯೆ 12, ಹೈದರಾಬಾದ್-500034

ಸಾರ್ವಜನಿಕ ಸೂಚನೆ

ಸೋ & ರೀಪ್ ಆಗ್ರೋ ಪ್ರೈವೇಟ್ ಲಿಮಿಟೆಡ್ ರವರು ಕರ್ನಾಟಕದ ಗ್ರಾಮೀಣ ಭಾಗದ ಜಿಲ್ಲೆಗಳಲ್ಲಿರುವ ಅರ್ಹ ಮತ್ತು ಅಗತ್ಯವಿರುವ ಅರ್ಹ ಕುಟುಂಬಗಳಿಗೆ ಬಯೋಗ್ಯಾಸ್ ಅಡುಗೆ ವ್ಯವಸ್ಥೆಯನ್ನು ಒದಗಿಸುತ್ತಿದೆ.

ಆರ್ಥಿಕವಾಗಿ ಹಿಂದುಳಿದ/ಅರ್ಹ ಕುಟುಂಬಗಳಿಗೆ ಜೈವಿಕ ಅನಿಲ ಘಟಕಗಳು ಮತ್ತು ಪರಿಣಾಮಕಾರಿಯಾದ ಅಡುಗೆ ಒಲೆಯನ್ನು ಒದಗಿಸುವುದು ಮತ್ತು ಇದರಿಂದ ಇಂಧನ ಮತ್ತು ಅಡುಗೆ ಸಮಯವನ್ನು ಉಳಿಸಲು ಅವರಿಗೆ ಸಹಾಯ ಮಾಡುವುದು ಮತ್ತು ಸಂಪ್ರದಾಯಿಕ ಅಡುಗೆ ಒಲೆಗಳ ಹೊಗೆಯಿಂದ ಉಂಟಾಗುವ ಉಸಿರಾಟದ ಕಾಯಿಲೆಗಳನ್ನು ತಡೆಯುವುದು ಈ ಕಾರ್ಯಕ್ರಮದ ಉದ್ದೇಶವಾಗಿದೆ.

ಸೋ & ರೀಪ್ ಸಂಸ್ಥೆಯು ಕಾರ್ಯಕ್ರಮದ ಚಟುವಟಿಕೆಯ (ಪಿಓಎ) ಭಾಗವಾಗಿ ಗೋಲ್ಡ್ ಸ್ಟ್ಯಾಂಡರ್ಡ್ ಮ್ಯಾಕ್‌ಸಮ್ ಅಡಿಯಲ್ಲಿ ನೋಂದಣಿಗಾಗಿ ವಿವಿಧ ಅನುಷ್ಠಾನ ಯೋಜನೆಯನ್ನು ಕೈಗೊಳ್ಳುತ್ತಿದೆ. ಈ ಯೋಜನೆಗಳನ್ನು ವಿವಿಧ ಅನುಷ್ಠಾನ ಪಾಲುದಾರರೊಂದಿಗೆ ಜಂಟಿಯಾಗಿ ಕಾರ್ಯ ನಡೆಸಲಾಗುತ್ತದೆ.

ಸೋ & ರೀಪ್ ಸಂಸ್ಥೆಯು ಈ ನಿಟ್ಟಿನಲ್ಲಿ 19.07.2024 ರಂದು ಬೆಳಗ್ಗೆ 11.00 ಗಂಟೆಗೆ, ಸರ್ಕಾರಿ ಪ್ರಾಥಮಿಕ ಶಾಲಾ ಆವರಣ, ಹುನುಗಹಳ್ಳಿ ಗ್ರಾಮ, ಮುತ್ತಿಗೆರೆ ಅಂಚೆ, ಬಸರಾಳು ಹೋಬಳಿ, ಮಂಡ್ಯ ತಾಲ್ಲೂಕು, ಮಂಡ್ಯ ಜಿಲ್ಲೆ 571416, ಇಲ್ಲಿ ಯೋಜನೆಯ "ಸಾಮಾಜಿಕ ಮತ್ತು ಪರಿಸರದ ಪರಿಣಾಮಗಳು ಕುರಿತು" ಅಭಿಪ್ರಾಯ/ ಸಲಹೆಗಳನ್ನು ಪಡೆಯಲು 'ಗ್ರೂಪ್ ಸ್ಟೇಕ್ ಹೋಲ್ಡರ್' (ಸಾರ್ವಜನಿಕ ಸಭೆ) ಸಭೆಯನ್ನು ನಡೆಸುತ್ತಿದೆ.

ವೈಯಕ್ತಿಕವಾಗಿ ಸಭೆಗೆ ಹಾಜರಾಗಲು ಸಾಧ್ಯವಾಗದ ಯಾವುದೇ ಪಾಲುದಾರರು ದಿನಾಂಕ 19.07.2024, ರ ಒಳಗೆ ನಿಮ್ಮ ಪ್ರತಿಕ್ರಿಯೆ ಅಥವಾ ಅನಿಸಿಕೆಗಳನ್ನು ಈ ಕೆಳಗೆ ತಿಳಿಸಿರುವ ಇಮೇಲ್ ವಿಳಾಸದ ಮುಖಾಂತರ ತಿಳಿಸಬಹುದು. ಯೋಜನೆಯ ಚಟುವಟಿಕೆಯ ಕುರಿತು ಯಾವುದೇ ಸ್ಪಷ್ಟೀಕರಣವನ್ನು ಬಯಸಿದ್ದರೆ ದಯವಿಟ್ಟು ಈ ಕೆಳಗೆ ತಿಳಿಸಿರುವ ಪ್ರತಿನಿಧಿಯನ್ನು ಸಂಪರ್ಕಿಸಬೇಕಾಗಿ ವಿನಂತಿಸಿಕೊಳ್ಳುತ್ತೇವೆ.

ಸಂಪರ್ಕ ವಿವರ:
ಹೆಸರು : ಮುರಳೀಧರ ನೂಕಾರಪು
ದೂರವಾಣಿ: +91 9000088898, ಇಮೇಲ್: murali@sowandreap.in

केन्द्रीय रेशम उत्पादन अनुसंधान एवं प्रशिक्षण संस्थान
CENTRAL SERICULTURAL RESEARCH & TRAINING INSTITUTE

[केन्द्रीय रेशम बोर्ड - वस्त्र मंत्रालय - भारत सरकार]
मानंदवाडी रोड, श्रीरामपुर
मैसूर - 570 008

[Central Silk Board - Min. of Textiles - Govt. of India]
Manandavadi Road, Srirampura
Mysore - 570 008

No.CSB/RTI/ES/PA-RCMT/2024-2025 Dated: 18.06.2024

WALK-IN-INTERVIEW FOR THE POST OF PROJECT ASSISTANTS

A Walk-in-Interview wil be held on **20.06.2024** at Central Sericultural Research and Training Institute, Srirampura, Mysuru - 570 008 as shown below:

'A' 01 (One) ***Project Assistant*** purely on contract basis for a period of three years up to February 2027 or completion of project whichever is earlier under CSB approved project **"Synthesis and characterization of nano-fertilizers and their evaluation in mulberry cultivation" (PIN01425NC)** Qualifications, B.Sc. in relevant subject (Agriculture/Life Science/Chemical Science) preference will be given to the candidates having higher qualifications and/or work experience in Soil Science/ Agronomy/ Chemistry /Biochemistry/Sericulture with minimum 60% marks (55% for SC/ST candidates). Walk-in-Interview will be held on **20.06.2024,** time 10:30 AM (candidates should reach the venue by 09:30 AM for verification of documents).

'B' 01 (One) ***Project Assistant*** purely on contract basis for a period of two years up to May 2025 or completion of project whichever is earlier under CSB approved project **"Mitigating Human Animal Conflicts in Forest Fringe Village: Implementing Mulberry based cropping program for animal repellents" (PIC01044SNC).** Qualifications: B.Sc./ B.Sc+PGD with minimum 60% marks (55% for SC/ST candidates). Candidates experienced in the area of mulberry cultivation will be preferrec. Walk-in-Interview will be held on **20.06.2024,** time 12:30 PM (candidates should reach the venue by 09:30 AM for verification of documents).

Interested can also visit our website **www.cstrimys.res.in** for details

Sd/- DIRECTOR

केन्द्रीय रेशम उत्पादन अनुसंधान एवं प्रशिक्षण संस्थान
CENTRAL SERICULTURAL RESEARCH & TRAINING INSTITUTE

[केन्द्रीय रेशम बोर्ड - वस्त्र मंत्रालय - भारत सरकार]
मानंदवाडी रोड, श्रीरामपुर
मैसूर - 570 008

[Central Silk Board - Min. of Textiles - Govt. of India]
Manandavadi Road, Srirampura
Mysore - 570 008

No.CSB/RTI/ES/PA-RCMT/2024-2025 Dated: 18.06.2024

WALK-IN-INTERVIEW FOR THE POST OF JUNIOR RESEARCH FELLOW

A Walk-in-Interview will be held on **20.06.2024** at Central Sericultural Research and Training Institute, Srirampura, Mysuru - 570 008 as shown below:

'A' 01 (One) ***Junior Research Fellow*** purely on contract basis for a period of three years up to February 2027 or completion of project whichever is earlier under CSB approved project ***"Synthesis and characterization of nano-fertilizers and their evaluation in mulberry cultivation" (PIN01425NC)*** Qualifications: M.Sc. in relevant subject (Agriculture/Life Science/Chemical Science) preference will be given to the candidates having higher qualifications and/or work experience in Soil Science/Agronomy/ Nanotechnology/ Chemistry/Biochemistry/Sericulture with minimum 60% marks (55% for SC/ST candidates). Walk-in-Interview will be held on **20.06.2024,** time 10:30 AM (candidates should reach the venue by 9:30 AM for verification of documents).

'B' 01 (One) ***Junior Research Fellow*** purely on contract basis for a period of three years up to February 2027 or completion of project whichever is earlier under CSB approved project ***"Mapping and evaluation of Mulberry rootstock for root rot (Lasiodiploidia theobromae)" (PRP08013MIC)*** Qualifications: M.Sc., (Agri) in Plant Pathology/ M.Sc., in Life Science/M.Sc., in Sericulture, knowledge on isolation, identification molecular and morpho-cultural characterization of fungal pathogens, mass multiplication of inoculums, grafting techniques, rootstock development and conducting field experiments on disease resistance evaluation at hot spot areas. Preference will be given to the candidates with work experence in mulberry root rot disease with minimum 60% marks (55% for SC/ST candidates). Walk-in- Interview will be held on **20.06.2024,** time 12:30 PM (candidates should reach the venue by 09:30 AM for verification of documents).

Interested can also visit our website **www.cstrimys.res.in** for details,

Sd/- DIRECTOR